24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 9 | ನವದೆಹಲಿ | ಬೆಲೆ ₹10 | ಜುಲೈ 5 2026, ಭಾನುವಾರ

## ಒಳಪುಟಗಳಲ್ಲಿ


ಎಸ್‌ಐಆರ್‌ನಲ್ಲಿ ವ್ಯಾಪಕ ಅಕ್ರಮ, ಲೋಪ ವಿಜಯೇಂದ್ರ ನೇತೃತ್ವದ ನಿಯೋಗದಿಂದ ದೂರು - ಪು.2

ಮೆಲ್ಬೋರ್ನ್ ಭೇಟಿಗೂ ಮುನ್ನ ಪ್ರಧಾನಿಗೆ ಪ್ರಾಣ ಬೆದರಿಕೆ - ಪು.3

ಬದರಿನಾಥನ ಹುಂಡಿಗೂ ಕನ್ನ ತನಿಖೆಗೆ ಸರ್ಕಾರ ಆದೇಶ - ಪು.4

# ಜು.20ರಿಂದ ಆ.13ರವರೆಗೆ ಸಂಸತ್ ಮುಂಗಾರು ಅಧಿವೇಶನ

### ನೀಟ್, ಮಹಿಳಾ ಮೀಸಲಾತಿ, ಕ್ಷೇತ್ರ ಪುನರ್ವಿಂಗಡಣೆ ಸೇರಿ ಹಲವು ಮಹತ್ವದ ವಿಷಯಗಳ ಚರ್ಚೆ ಸಾಧ್ಯತೆ



**ನವದೆಹಲಿ, ಜು.4: ಸಂಸತ್ತಿನ ಮುಂಗಾರು ಅಧಿವೇಶನವು ಜುಲೈ 20ರಿಂದ ಆರಂಭವಾಗಿ ಆಗಸ್ಟ್ 13ರವರೆಗೆ ನಡೆಯಲಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಅನುಮೋದನೆಯ ಬಳಿಕ ಈ ಕುರಿತು ಅಧಿಕೃತ ಪ್ರಕಟಣೆ ಹೊರಬಿದ್ದಿದೆ.**

ನಾಲ್ಕು ವಾರಗಳ ಕಾಲ ನಡೆಯಲಿರುವ ಅಧಿವೇಶನದಲ್ಲಿ 19 ಕಲಾಪಗಳು ನಡೆಯುವ ಸಾಧ್ಯತೆ ಇದ್ದು, ಹಲವು ಮಹತ್ವದ ಮಸೂದೆಗಳು ಹಾಗೂ ರಾಷ್ಟ್ರೀಯ ಮಹತ್ವದ ವಿಷಯಗಳ ಕುರಿತು ಚರ್ಚೆ ನಡೆಯುವ ನಿರೀಕ್ಷೆಯಿದೆ. ಈ ಬಾರಿಯ ಅಧಿವೇಶನ ರಾಜಕೀಯವಾಗಿ ತೀವ್ರ ಜಿದ್ದಾಜಿದ್ದಿಗೆ ಸಾಕ್ಷಿಯಾಗುವ ಸಾಧ್ಯತೆ ಇದೆ.

ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಜಾರಿಗೆ ಸಂಬಂಧಿಸಿದ ಸಂವಿಧಾನ ತಿದ್ದುಪಡಿ ಮಸೂದೆ ಹಾಗೂ ಕ್ಷೇತ್ರ ಪುನರ್ವಿಂಗಡಣೆ ಮಸೂದೆಗಳನ್ನು ಕೇಂದ್ರ ಸರ್ಕಾರ ಮತ್ತೊಮ್ಮೆ ಮಂಡಿಸಲು ಸಿದ್ಧತೆ ನಡೆಸಿದೆ. ಈ ಮಸೂದೆಗಳಿಗೆ ಅಗತ್ಯ ಬೆಂಬಲ ಪಡೆಯಲು ಆಡಳಿತಾರೂಢ ಎನ್‌ಡಿಎ ಸರ್ಕಾರ ವಿವಿಧ ರಾಜಕೀಯ ಪಕ್ಷಗಳೊಂದಿಗೆ ಸಮಾಲೋಚನೆ ನಡೆಸುತ್ತಿದೆ.

ಇನ್ನೊಂದೆಡೆ, ಪ್ರತಿಪಕ್ಷಗಳು ಸರ್ಕಾರವನ್ನು ಹಲವು ಜನಪ್ರಿಯ ಹಾಗೂ ವಿವಾದಾತ್ಮಕ ವಿಷಯಗಳ ಕುರಿತು ತರಾಟೆಗೆ ತೆಗೆದುಕೊಳ್ಳಲು ಸಜ್ಜಾಗಿವೆ. ದೇಶಾದ್ಯಂತ ಚರ್ಚೆಗೆ ಕಾರಣವಾಗಿರುವ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ, ಹಣದುಬ್ಬರ, ಇಂಧನ ಬೆಲೆ ಏರಿಕೆ, ನಿರುದ್ಯೋಗ, ಕೃಷಿ ಸಮಸ್ಯೆಗಳು ಹಾಗೂ ಇತರ ವಿಷಯಗಳನ್ನು ಸಂಸತ್ತಿನಲ್ಲಿ ಪ್ರಸ್ತಾಪಿಸಲು ಇಂಡಿಯಾ ಮೈತ್ರಿಕೂಟ ನಿರ್ಧರಿಸಿದೆ.

ಇದರ ಜೊತೆಗೆ ವಿವಿಧ ಪಕ್ಷಗಳ ಸಂಸದರು ಪಕ್ಷಾಂತರ ಮಾಡಿರುವ ಬೆಳವಣಿಗೆಗಳು, ಲೋಕಸಭೆಯಲ್ಲಿ ಅವರ ಮಾನ್ಯತೆ ಮತ್ತು ಆಸನ ವ್ಯವಸ್ಥೆಗೆ ಸಂಬಂಧಿಸಿದ ವಿಷಯಗಳೂ ಅಧಿವೇಶನದಲ್ಲಿ ಚರ್ಚೆಗೆ ಬರಬಹುದು. ಸ್ಪೀಕರ್ ಅವರ ತೀರ್ಮಾನವು ಸದನದ ರಾಜಕೀಯ ಸಮೀಕರಣಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ.

# ಭದ್ರತೆ, ಅಭಿವೃದ್ಧಿ ವಿಷಯದಲ್ಲಿ ಭಾರತದ ದೃಢ ಹೆಜ್ಜೆ: ಪ್ರಧಾನಿ ಮೋದಿ

### ಜೋಧಪುರದಲ್ಲಿ 1.06 ಲಕ್ಷ ಕೋಟಿ ರೂ. ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ



**ನವದೆಹಲಿ, ಜು.4:** ರಾಜಸ್ಥಾನದ ಜೋಧಪುರ ಪ್ರವಾಸದಲ್ಲಿದ್ದ ಪ್ರಧಾನಿ ನರೇಂದ್ರ ಮೋದಿ ಅವರು ಸುಮಾರು 1.06 ಲಕ್ಷ ಕೋಟಿ ರೂ. ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ ಹಾಗೂ ಶಂಕುಸ್ಥಾಪನೆ ನೆರವೇರಿಸಿದರು. ಇದೇ ವೇಳೆ ಜೋಧ್ಪುರ ವಿಮಾನ ನಿಲ್ದಾಣದ ನೂತನ ಟರ್ಮಿನಲ್ ಕಟ್ಟಡವನ್ನು ರಾಷ್ಟ್ರಕ್ಕೆ ಸಮರ್ಪಿಸಿ, ಪರಿಷ್ಕೃತ ಉಡಾನ್ ಯೋಜನೆಗೂ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರಧಾನಿ ಮೋದಿ, ಹೊಸ ಭಾರತ ಎಂದಿಗೂ ಹಿಂದೆ ಸರಿಯುವುದಿಲ್ಲ ದೇಶದ ಭದ್ರತೆ ಮತ್ತು ಅಭಿವೃದ್ಧಿಯ ವಿಷಯದಲ್ಲಿ ಭಾರತ ದೃಢ ಸಂಕಲ್ಪದಿಂದ ಮುನ್ನಡೆಯುತ್ತಿದೆ ಎಂದು ಹೇಳಿದರು. ದೇಶದ ಮೂಲಸೌಕರ್ಯ ಅಭಿವೃದ್ಧಿ, ಕೈಗಾರಿಕಾ ವಿಸ್ತರಣೆ ಮತ್ತು ಪ್ರಾದೇಶಿಕ ಸಂಪರ್ಕ ವೃದ್ಧಿಗೆ ಕೇಂದ್ರ ಸರ್ಕಾರ ಆದ್ಯತೆ ನೀಡುತ್ತಿದೆ ಎಂದು ಅವರು ತಿಳಿಸಿದರು.

ಜೋಧಪುರ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ಲನ್ನು ಸುಮಾರು 480 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗಿದ್ದು, ವರ್ಷಕ್ಕೆ ಸುಮಾರು 20 ಲಕ್ಷ ಪ್ರಯಾಣಿಕರನ್ನು ನಿರ್ವಹಿಸುವ ಸಾಮರ್ಥ್ಯ ಹೊಂದಿದೆ. ರಾಜಸ್ಥಾನದ ಸಾಂಸ್ಕೃತಿಕ ಪರಂಪರೆಯನ್ನು ಪ್ರತಿಬಿಂಬಿಸುವ ವಿನ್ಯಾಸದೊಂದಿಗೆ ಆಧುನಿಕ ಸೌಲಭ್ಯಗಳನ್ನು ಈ ಟರ್ಮಿನಲ್‌ನಲ್ಲಿ ಕಲ್ಪಿಸಲಾಗಿದೆ.

ಪ್ರಧಾನಿ ಮೋದಿ ಇದೇ ಸಂದರ್ಭದಲ್ಲಿ ಪರಿಷ್ಕೃತ ಉಡಾನ್ ಯೋಜನೆಗೆ ಚಾಲನೆ ನೀಡಿದರು. ಮುಂದಿನ ಹತ್ತು ವರ್ಷಗಳಿಗೆ 28,840 ಕೋಟಿ ವೆಚ್ಚದಲ್ಲಿ ಜಾರಿಗೊಳ್ಳಲಿರುವ ಈ ಯೋಜನೆಯ ಮೂಲಕ ದೇಶದ ಪ್ರಾದೇಶಿಕ ವಿಮಾನ ಸಂಪರ್ಕವನ್ನು ಇನ್ನಷ್ಟು ಬಲಪಡಿಸಿ, ಸಾಮಾನ್ಯ ನಾಗರಿಕರಿಗೆ ಕಡಿಮೆ ವೆಚ್ಚದಲ್ಲಿ ವಿಮಾನ ಪ್ರಯಾಣದ ಅವಕಾಶವನ್ನು ವಿಸ್ತರಿಸುವ ಗುರಿ ಹೊಂದಲಾಗಿದೆ.

ಈ ಪ್ರವಾಸದ ವೇಳೆ ರಸ್ತೆ, ರೈಲು, ಇಂಧನ, ವಿದ್ಯುತ್, ವಿಮಾನಯಾನ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಸಂಬಂಧಿಸಿದ ಯೋಜನೆಗಳನ್ನು ಉದ್ಘಾಟಿಸಿ, ಶಂಕುಸ್ಥಾಪನೆ ನೆರವೇರಿಸಲಾಯಿತು. ಜೊತೆಗೆ, ಉದ್ಯೋಗ ಸೃಷ್ಟಿಗೆ ಉತ್ತೇಜನ ನೀಡುವ ಉದ್ದೇಶದಿಂದ 54 ಸಾವಿರಕ್ಕೂ ಹೆಚ್ಚು ನೂತನ ನೇಮಕಾತಿ ಪತ್ರಗಳನ್ನು ಫಲಾನುಭವಿಗಳಿಗೆ ವಿತರಿಸಲಾಯಿತು.

### ರೂ.7,600 ಕೋಟಿ ವೆಚ್ಚದ ಸೆಮಿಕಂಡಕ್ಟರ್ ಸೌಲಭ್ಯಕ್ಕೆ ಪ್ರಧಾನಿ ಚಾಲನೆ

ಪ್ರಧಾನಿ ನರೇಂದ್ರ ಮೋದಿ ಶನಿವಾರ ಗುಜರಾತ್‌ನ ಸನಂದ್‌ನಲ್ಲಿ ಸಿಜಿ ಸೆಮಿ ಔಟ್‌ಸೋರ್ಸ್ಡ್ ಸೆಮಿಕಂಡಕ್ಟರ್ ಅಸೆಂಬ್ಲಿ ಮತ್ತು ಟೆಸ್ಟ್ (ಓಎಸ್‌ಎಟಿ) ಸೌಲಭ್ಯವನ್ನು ಉದ್ಘಾಟಿಸಿದರು, ಇದು ಭಾರತದ ಸೆಮಿಕಂಡಕ್ಟರ್ ಪ್ರಯಾಣದಲ್ಲಿ ಒಂದು ಹೆಗ್ಗುರುತು ಸಾಧನೆ ಮತ್ತು ಚಿಪ್ ತಯಾರಿಕೆಯಲ್ಲಿ ದೇಶದ ತಾಂತ್ರಿಕ ಸ್ವಾವಲಂಬನೆ ಮತ್ತು ಜಾಗತಿಕ ಸ್ಪರ್ಧಾತ್ಮಕತೆಯನ್ನು ಬಲಪಡಿಸುವತ್ತ ಮಹತ್ವದ ಹೆಜ್ಜೆಯಾಗಿದೆ ಎಂದು ಶ್ಲಾಘಿಸಿದರು.

ಈ ಉದ್ಘಾಟನೆಯು ಭಾರತ ಸೆಮಿಕಂಡಕ್ಟರ್ ಮಿಷನ್ (ಐಎಸ್‌ಎಂ) ಅಡಿಯಲ್ಲಿ ಅನುಮೋದಿಸಲಾದ ಮೊದಲ ನಾಲ್ಕು ಯೋಜನೆಗಳಲ್ಲಿ ಒಂದಾದ ವಾಣಿಜ್ಯ ಸೆಮಿಕಂಡಕ್ಟರ್ ತಯಾರಿಕೆಯ ಆರಂಭವನ್ನು ಸೂಚಿಸುತ್ತದೆ, ಇದು ಬಲವಾದ ದೇಶೀಯ ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಮತ್ತು ಭಾರತವನ್ನು ಜಾಗತಿಕ ಎಲೆಕ್ಟ್ರಾನಿಕ್ಸ್ ಪೂರೈಕೆ ಸರಪಳಿಗಳಲ್ಲಿ ಹೆಚ್ಚು ಆಳವಾಗಿ ಸಂಯೋಜಿಸುವ ಗುರಿಯನ್ನು ಹೊಂದಿರುವ ಪ್ರಮುಖ ಉಪಕ್ರಮವಾಗಿದೆ.

ಸಿಜಿ ಪವರ್‌ನ ಅಂಗಸಂಸ್ಥೆ ಸಿಜಿ ಸೆಮಿ ಪ್ರೈವೇಟ್ ಲಿಮಿಟೆಡ್ ಅಭಿವೃದ್ಧಿಪಡಿಸಿದ ಈ ಸೌಲಭ್ಯವನ್ನು ಜಪಾನ್‌ನ ರೆನೆಸಾಸ್ ಎಲೆಕ್ಟ್ರಾನಿಕ್ಸ್ ಕಾರ್ಪೊರೇಷನ್ ಮತ್ತು ಥೈಲ್ಯಾಂಡ್‌ನ ಸ್ಟಾರ್ಸ್ ಮೈಕ್ರೋಎಲೆಕ್ಟ್ರಾನಿಕ್ಸ್‌ನ ಜತೆಗಿನ ಕಾರ್ಯತಂತ್ರದ ಸಹಯೋಗದ ಮೂಲಕ ಐದು ವರ್ಷಗಳಲ್ಲಿ ರೂ.7,600 ಕೋಟಿಗಿಂತ ಹೆಚ್ಚಿನ ಹೂಡಿಕೆಯೊಂದಿಗೆ ನಿರ್ಮಿಸಲಾಗಿದೆ.

ಈ ಯೋಜನೆಯು ಮುಂದಿನ ಐದು ವರ್ಷಗಳಲ್ಲಿ ಸುಮಾರು 5,000 ನೇರ ಮತ್ತು ಪರೋಕ್ಷ ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ ಮತ್ತು ಭಾರತದ ಸೆಮಿಕಂಡಕ್ಟರ್ ಪ್ಯಾಕೇಜಿಂಗ್ ಸಾಮರ್ಥ್ಯಗಳನ್ನು ಗಮನಾರ್ಹವಾಗಿ ವಿಸ್ತರಿಸುತ್ತದೆ ಎಂದು ನರೇಂದ್ರ ಮೋದಿ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಮತ್ತು
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ



ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



ಡಾ. ಜಿ. ಪರಮೇಶ್ವರ
ಸನ್ಮಾನ್ಯ ಉಪಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

ವಿಶ್ವಮಾನವ, ಮಹಾಮಾನವತಾವಾದಿ, ಸಂವಿಧಾನ ಶಿಲ್ಪಿ, ಭಾರತರತ್ನ
ಡಾ. ಬಿ.ಆರ್. ಅಂಬೇಡ್ಕರ್ ರವರ
14 ಅಡಿ ಎತ್ತರದ
ಕಂಚಿನ ಪ್ರತಿಮೆ
ಲೋಕಾರ್ಪಣ ಕಾರ್ಯಕ್ರಮ

ದಿವ್ಯ ಸಾನ್ನಿಧ್ಯ : ಪೂಜ್ಯ ಶ್ರೀ ಮನೋರಕ್ಕಿತ ಬಂತೇಜಿ, ಜೇತವನ ಬುದ್ಧ ವಿಹಾರ, ಕೊಳ್ಳೇಗಾಲ

ದಿನಾಂಕ : 05-07-2026 ಬೆಳಿಗ್ಗೆ 11.00 ಗಂಟೆ
ಸ್ಥಳ : ಜಿಲ್ಲಾಡಳಿತ ಭವನ, ಬೀರಸಂದ್ರ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ



ಡಾ. ಎಂ. ಮಲ್ಲಿಕಾರ್ಜುನ ಖರ್ಗೆ,
ಸನ್ಮಾನ್ಯ ವಿರೋಧ ಪಕ್ಷದ ನಾಯಕರು, ರಾಜ್ಯಸಭೆ
ಇವರನ್ನು ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಸಚಿವರು ಹಾಗೂ
ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ
ಶ್ರೀ ಕೆ.ಹೆಚ್. ಮುನಿಯಪ್ಪ ಅಭಿನಂದನೆ ಸಲ್ಲಿಸಿದರು.

ಉದ್ಘಾಟನೆ
ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಲೋಕಾರ್ಪಣೆ
ಡಾ. ಎಂ. ಮಲ್ಲಿಕಾರ್ಜುನ ಖರ್ಗೆ
ಸನ್ಮಾನ್ಯ ವಿರೋಧ ಪಕ್ಷದ ನಾಯಕರು, ರಾಜ್ಯಸಭೆ

ಘನ ಉಪಸ್ಥಿತಿ
ಡಾ. ಜಿ. ಪರಮೇಶ್ವರ
ಸನ್ಮಾನ್ಯ ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಅಧ್ಯಕ್ಷತೆ
ಶ್ರೀ ಕೆ.ಹೆಚ್. ಮುನಿಯಪ್ಪ
ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರು, ಕರ್ನಾಟಕ ಸರ್ಕಾರ

ವಿಶೇಷ ಆಹ್ವಾನಿತರು
ಶ್ರೀ ಶರತ್ ಬಚ್ಚೇಗೌಡ
ಮಾನ್ಯ ಅಧ್ಯಕ್ಷರು, ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ ಹಾಗೂ ಶಾಸಕರು, ಹೊಸಕೋಟೆ ವಿಧಾನಸಭಾ ಕ್ಷೇತ್ರ

ವಿಶೇಷ ಆಹ್ವಾನಿತರು
ಡಾ. ಕೆ. ಸುಧಾಕರ್
ಮಾನ್ಯ ಸಂಸತ್ ಸದಸ್ಯರು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ

ಮುಖ್ಯ ಅತಿಥಿಗಳು
ಶ್ರೀ ಎನ್. ಶ್ರೀನಿವಾಸ್ — ಮಾನ್ಯ ಶಾಸಕರು, ನೆಲಮಂಗಲ ವಿಧಾನಸಭಾ ಕ್ಷೇತ್ರ
ಶ್ರೀ ಧೀರಜ್ ಮುನಿರಾಜ್ — ಮಾನ್ಯ ಶಾಸಕರು, ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರ
ಶ್ರೀ ಎಸ್. ರವಿ — ಮಾನ್ಯ ವಿಧಾನ ಪರಿಷತ್ ಸದಸ್ಯರು
ಶ್ರೀ ಪುಟ್ಟಣ್ಣ — ಮಾನ್ಯ ವಿಧಾನ ಪರಿಷತ್ ಸದಸ್ಯರು
ಶ್ರೀ ರಾಮೋಜಿಗೌಡ — ಮಾನ್ಯ ವಿಧಾನ ಪರಿಷತ್ ಸದಸ್ಯರು

ಕರ್ನಾಟಕ ಸರ್ಕಾರದ ಮಾನ್ಯ ಸಚಿವ ಸಂಪುಟದ ಸದಸ್ಯರು, ವಿಧಾನಸಭೆ ಹಾಗೂ ವಿಧಾನ ಪರಿಷತ್ ಸದಸ್ಯರು, ಲೋಕಸಭಾ ಸದಸ್ಯರು, ವಿವಿಧ ನಿಗಮ-ಮಂಡಳಿಗಳ ಅಧ್ಯಕ್ಷರುಗಳು, ನಾಮ ನಿರ್ದೇಶಿತ ಸದಸ್ಯರು ಹಾಗೂ ಸ್ಥಳೀಯ ಚುನಾಯಿತ ಜನಪ್ರತಿನಿಧಿಗಳು, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಸಮಾರಂಭದಲ್ಲಿ ಉಪಸ್ಥಿತರಿರುವರು.





ತಮಗೆಲ್ಲರಿಗೂ ಆದರದ ಸ್ವಾಗತ

ಡಾ. ಅನುರಾಧ ಕೆ.ಎನ್. ಭಾ.ಆ.ಸೇ.
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ
ಬೆಂಗಳೂರು ಗ್ರಾಮಾಂತರ ಜಿಲ್ಲೆ

ಡಾ. ವಾಸಂತಿ ಅಮರ್ ಬಿ.ವಿ. ಭಾ.ಆ.ಸೇ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ
ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರ ಜಿಲ್ಲೆ

ಶ್ರೀ ಚಂದ್ರಕಾಂತ್ ಎಂ.ವಿ. ಭಾ.ಪೊ.ಸೇ.
ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು
ಬೆಂಗಳೂರು ಗ್ರಾಮಾಂತರ ಜಿಲ್ಲೆ

## ನಿತ್ಯ ಪಂಚಾಂಗ 5.07.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ – ಜ್ಯೇಷ್ಠ ಮಾಸ

ನಿಜ ಜ್ಯೇಷ್ಠ ಬಹುಳ, ಚೌತಿ, ಧನಿಷ್ಠ ನಕ್ಷತ್ರ, ಮೈಸೂರು ಕೋಟೆ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

# ಎಲೆಕ್ಟ್ರಿಕ್ ದ್ವಿಚಕ್ರ ವಾಹನ ಸಂಬಂಧಿತ ಕೈಗಾರಿಕೆಗಳಿಗೆ ಉತ್ತೇಜನ

## ಉದ್ಯಮಿಗಳ ಜತೆ ಕೇಂದ್ರ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ.ಕುಮಾರಸ್ವಾಮಿ ಸಮಾಲೋಚನೆ

**ಬೆಂಗಳೂರು, ಜು.4:** ದೇಶಿಯವಾಗಿ ವಿದ್ಯುತ್ ದ್ವಿಚಕ್ರ ವಾಹನೋದ್ಯಮಕ್ಕೆ ಉತ್ತೇಜನ ನೀಡುವ ಹಾಗೂ ಅದಕ್ಕೆ ಅತ್ಯಗತ್ಯವಾಗಿ ಬೇಕಿರುವ ಪೂರಕ ವ್ಯವಸ್ಥೆಯ ಭಾಗವಾಗಿರುವ ಕೈಗಾರಿಕೆಗಳಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಉದ್ಯಮದ ಪ್ರಮುಖರ ಜತೆ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಎಚ್.ಡಿ. ಕುಮಾರಸ್ವಾಮಿ ವಿಸ್ತೃತ ಸಮಾಲೋಚನೆ ನಡೆಸಿದರು.

ಎಲೆಕ್ಟ್ರಿಕ್ ವಾಹನಗಳ ದೇಶಿಯ ತಯಾರಿಕೆಯನ್ನು ಹೆಚ್ಚಿಸುವುದು ಮತ್ತು ದೇಶದಲ್ಲಿ ದೃಢವಾದ, ನಾವೀನ್ಯತೆಯಿಂದ ಕೂಡಿದ ಜಾಗತಿಕವಾಗಿ ಸ್ಪರ್ಧಾತ್ಮಕವಾದ ಎಲೆಕ್ಟ್ರಿಕ್ ದ್ವಿಚಕ್ರ ವಾಹನ ಪೂರಕ ವ್ಯವಸ್ಥೆಯನ್ನು ನಿರ್ಮಿಸುವ ಕುರಿತು ಸಚಿವರು ಮಹತ್ವಪೂರ್ಣವಾಗಿ ಚರ್ಚಿಸಿದರು.

ಸಭೆಯಲ್ಲಿ ಭಾಗಿಯಾಗಿದ್ದ ಎಲೆಕ್ಟ್ರಿಕ್ ದ್ವಿಚಕ್ರ ವಾಹನ ತಯಾರಕರು, ದೇಶೀಯ ಚಾರ್ಜಿಂಗ್ ಕೇಂದ್ರಗಳ ನಿರ್ಮಾತೃಗಳು ಮತ್ತು ತಂತ್ರಜ್ಞಾನ ಅಭಿವೃದ್ಧಿಪಡಿಸುವ ಪಾಲುದಾರರು ತಮ್ಮ ಕಾರ್ಯಚಟುವಟಿಕೆಗಳು ಹಾಗೂ ಕೇಂದ್ರದಿಂದ ಆಗಬೇಕಿರುವ ಕೆಲಸಗಳ ಬಗ್ಗೆ ಸಚಿವರ ಗಮನ ಸೆಳೆದರು. ಸ್ಥಳೀಯ ತಂತ್ರಜ್ಞಾನ, ಉತ್ಪನ್ನ ಅಭಿವೃದ್ಧಿ ಮತ್ತು ದೇಶೀಯ ತಯಾರಿಕಾ ಸಾಮರ್ಥ್ಯಗಳ ಮೇಲಿನ ತಮ್ಮ ದೃಢವಾದ ನಿಲುವನ್ನು ಒತ್ತಿ ಹೇಳಿದರು, ಜತೆಗೆ ಭಾರತವನ್ನು ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳ



ಪ್ರಮುಖ ಜಾಗತಿಕ ತಯಾರಿಕಾ ಕೇಂದ್ರವಾಗಿ ಭಾರತವನ್ನು ಬೆಳೆಸುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಹೊಂದಿರುವ ದೃಷ್ಟಿಕೋನದ ಬಗ್ಗೆ ಸಚಿವರು ಉದ್ಯಮದ ಪ್ರಮುಖರಿಗೆ ತಿಳಿಸಿದರು.

ಎಲೆಕ್ಟ್ರಿಕ್ ದ್ವಿಚಕ್ರ ವಾಹನ ಉದ್ಯಮ ಬೆಳೆಯುತ್ತಿರುವ ರೀತಿ, ಆ ಕ್ಷೇತ್ರದ ವಿಕಾಸ, ಅದರ ಆದ್ಯತೆ ಮತ್ತು ಅಗತ್ಯಗಳ ಕುರಿತು ಸಚಿವರು ಆಳವಾದ ಚರ್ಚೆ ನಡೆಸಿದರಲ್ಲದೆ, ದೇಶೀಯವಾಗಿ ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳನ್ನು ಜಾಗತಿಕ ಮಾರುಕಟ್ಟೆಗೆ ಅನುಗುಣವಾಗಿ ತಯಾರಿಸುವುದು ಇವತ್ತಿನ ಅಗತ್ಯವಾಗಿದೆ. ಆರಂಭಿಕ ಮಟ್ಟದಲ್ಲಿಯೇ ಇಂಗಾಲ ಹೊರಸೂಸಿಕೆಯನ್ನು ಶೂನ್ಯಕ್ಕೆ ತರಬೇಕು ಎಂದು ಸಚಿವರು ಹೇಳಿದರು.

ಉದ್ಯಮದ ಪ್ರಮುಖರು ಪಿಎಂ ಇ ಡ್ರೈವ್ ಯೋಜನೆ ಕುರಿತು ತಮ್ಮ ಅಭಿಪ್ರಾಯಗಳನ್ನು ಸಚಿವರೊಂದಿಗೆ ಹಂಚಿಕೊಂಡರಲ್ಲದೆ ಅದರ ವ್ಯಾಪ್ತಿಯನ್ನು ಮತ್ತಷ್ಟು ಹಿಗ್ಗಿಸಬೇಕು. ಜತೆಗೆ ಉದ್ಯಮದ ಬೆಳೆಯುತ್ತಿರುವ ಅಗತ್ಯಗಳಿಗೆ ಅನುಗುಣವಾಗಿ PLI ಆಟೋ ಯೋಜನೆಯನ್ನು ಪರಿಷ್ಕರಿಸುವ ಅಗತ್ಯತೆಯ ಬಗ್ಗೆಯೂ ಚರ್ಚಿಸಿದರು.

ಸ್ಥಳೀಯವಾಗಿ ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳ ತಯಾರಿಕೆಯನ್ನು ವೇಗಗೊಳಿಸಲು, ದೇಶೀಯ ಮೌಲ್ಯವರ್ಧನೆಯನ್ನು ಬಲಪಡಿಸಲು ಮತ್ತು ಭಾರತದ ಎಲೆಕ್ಟ್ರಿಕ್ ವಾಹನ ರಫ್ತು ಸಾಮರ್ಥ್ಯವನ್ನು ದೊಡ್ಡ ಪ್ರಮಾಣದಲ್ಲಿ ವೃದ್ಧಿಸುವ ಅವಕಾಶಗಳ ಕುರಿತು ಉದ್ಯಮದ ನಿಯೋಗವು ಸಚಿವರಿಗೆ ವಿವರಿಸಿತು.

ಆತ್ಮನಿರ್ಭರ ಭಾರತ ಮತ್ತು ವಿಕಸಿತ ಭಾರತ 2047 ದೃಷ್ಟಿಕೋನಕ್ಕೆ ಕೊಡುಗೆ ನೀಡುತ್ತಾ, ಭಾರತೀಯ ತಯಾರಕರು ಜಾಗತಿಕವಾಗಿ ಆವಿಷ್ಕಾರ, ನಾವೀನ್ಯತೆ ಮತ್ತು ಸ್ಪರ್ಧೆಗೆ ಅನುವು ಮಾಡಿಕೊಡುವ ಪೂರಕ ವ್ಯವಸ್ಥೆಯನ್ನು ನಿರ್ಮಿಸಲು ನರೇಂದ್ರ ಮೋದಿ ಅವರ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಸಚಿವರು ಹೇಳಿದರು.

ನಿಯೋಗದಲ್ಲಿ ಎಥೆರ್ ಎನರ್ಜಿಯ ಸಹ ಸಂಸ್ಥಾಪಕ ಮತ್ತು ಸಿಇಓ ತರುಣ್ ಮೆಹ್ತಾ, ಮ್ಯಾಟರ್‌ನ ಸ್ಥಾಪಕ ಮತ್ತು ಸಿಇಓ ಮೋಹಲ್ ಲಾಲ್‌ಭಾಯ್, ರಿವರ್‌ನ ಸಹ ಸಂಸ್ಥಾಪಕ ಮತ್ತು ಸಿಇಓ ಅರವಿಂದ್ ಮಣಿ, ಯೂಲರ್ ಮೋಟಾರ್ಸ್‌ನ ಸಂಸ್ಥಾಪಕ ಮತ್ತು ಸಿಇಓ ಸೌರವ್ ಕುಮಾರ್, ರಾಪ್ಟೀ ಎಚ್‌ವಿಯ ಸಹ ಸಂಸ್ಥಾಪಕ ಮತ್ತು ಸಿಇಓ ದಿನೇಶ್ ಅರ್ಜುನ್ ಅವರು ಸಭೆಯಲ್ಲಿ ಭಾಗಿಯಾಗಿದ್ದರು.

# ಕದ್ದುಮುಚ್ಚಿ ತಮಿಳುನಾಡಿಗೆ ನೀರು ರಾಜ್ಯದ ರೈತರಿಗೆ ಅನ್ಯಾಯ: ಅಶೋಕ್

**ಬೆಂಗಳೂರು, ಜು.4:** ರಾಜ್ಯದಲ್ಲಿ ಮುಂಗಾರು ಮಳೆ ಕೈಕೊಟ್ಟು ಹಲವು ಜಿಲ್ಲೆಗಳಲ್ಲಿ ಬರಗಾಲದ ಛಾಯೆ ಆವರಿಸುತ್ತಿರುವ ಬೆನ್ನಲ್ಲೇ, ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಮುಖ್ಯಮಂತ್ರಿ ವಿರುದ್ಧ ಏಕವಚನದಲ್ಲೇ ವಾಗ್ದಾಳಿ ನಡೆಸಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿ ಒಂದು ತಿಂಗಳು ಕಳೆದಿದೆ. ಆದರೆ ಈ ಒಂದು ತಿಂಗಳ ಆಡಳಿತದಲ್ಲಿ ರಾಜ್ಯದಲ್ಲಿ ಏನು ಬದಲಾವಣೆಯಾಗಿದೆ.



ಕಾಂಗ್ರೆಸ್ ಆಡಳಿತದಲ್ಲಿ ಭ್ರಷ್ಟಾಚಾರ ಮಾತ್ರ ತಾರಕಕ್ಕೇರಿದ್ದು, ಈ ಸರ್ಕಾರ ಹೊಸ ಬಾಟಲಿಗೆ ಹಳೇ ಮದ್ಯ ತುಂಬಿದಂತಿದೆ ಎಂದು ವ್ಯಂಗ್ಯವಾಡಿದ್ದಾರೆ. ಡಿ.ಕೆ.ಶಿವಕುಮಾರ್ ಅಧಿಕಾರಕ್ಕೇರಿದ ಕಾಲ್ಗುಣವೋ ಏನೋ ಅವರು ಸಿಎಂ ಆದ ತಕ್ಷಣವೇ ರಾಜ್ಯದಲ್ಲಿ ಬರಗಾಲದ ಛಾಯೆ ಆವರಿಸಿದೆ. ಬೆಳೆಗಳನ್ನು ಬೆಳೆಯಬೇಡಿ ಎಂಬ ಸಿಎಂ ಹೇಳಿಕೆಗೆ ಆಕ್ರೋಶ ಹೊರಹಾಕಿದ್ದಾರೆ. ಮುಂದುವರಿದು ನಿನಗೆ ನಿಜವಾಗಿಯೂ ಧೈರ್ಯ ಇದ್ದರೆ ಇದೇ ಮಾತನ್ನು ತಮಿಳುನಾಡಿಗೆ ಹೋಗಿ ಹೇಳು ಎಂದು ನೇರ ಸವಾಲು ಹಾಕಿದ್ದಾರೆ.

ಮೇಕೆದಾಟು ಅಣೆಕಟ್ಟು ಯೋಜನೆ ಮಾಡಲು ಯಾವುದೇ ಕಾರಣಕ್ಕೂ ಬಿಡುವುದಿಲ್ಲ ಎಂದು ತಮಿಳುನಾಡು ಮುಖ್ಯಮಂತ್ರಿ ವಿಜಯ್ ಬಹಿರಂಗವಾಗಿ ಹೇಳುತ್ತಿದ್ದಾರೆ. ನಮ್ಮ ಸಿಎಂ ಅಧಿಕಾರಕ್ಕೆ ಬಂದು ತಿಂಗಳಾದರೂ ತಮಿಳುನಾಡಿನ ಈ ದಾರ್ಷ್ಟ್ಯದ ವಿರುದ್ಧ ಪ್ರತಿಯಾಗಿ ಒಂದು ಕಠಿಣ ನಿರ್ಣಯವನ್ನೂ ಕೈಗೊಂಡಿಲ್ಲ. ಬದಲಿಗೆ ತಮಿಳುನಾಡಿಗೆ ಕದ್ದುಮುಚ್ಚಿ ಕಾವೇರಿ ನೀರು ಬಿಡಲಾಗುತ್ತಿದೆ. ರಾಜ್ಯದ ನೀರಾವರಿ ಸಚಿವರು ಬೆಂಗಳೂರು ಬಿಟ್ಟು ಆಚೆಗೇ ಹೋಗುತ್ತಿಲ್ಲ ಎಂದು ಅಶೋಕ್ ಲೇವಡಿ ಮಾಡಿದ್ದಾರೆ. ರಾಜ್ಯದ ಯಾವೊಬ್ಬ ಮಂತ್ರಿಯಾದರೂ ಬರಪೀಡಿತ ಪ್ರದೇಶಗಳ ವೀಕ್ಷಣೆಗೆ ಹೋಗಿದ್ದಾರಾ ಎಂದು ಅಶೋಕ್ ಪ್ರಶ್ನಿಸಿದ್ದಾರೆ. ಮಳೆ ಇಲ್ಲದಿದ್ದಾಗ ಯಾವ ಬೆಳೆ ಬೆಳೆಯಬೇಕು ಎಂಬುದು ರೈತರಿಗೆ ಚೆನ್ನಾಗಿ ಗೊತ್ತಿದೆ, ಮುಖ್ಯಮಂತ್ರಿಗಳಿಗೆ ಇಂತಹ ಕೆಟ್ಟ ಐಡಿಯಾಗಳನ್ನು ಯಾರು ಕೊಡುತ್ತಾರೋ ಗೊತ್ತಿಲ್ಲ ಎಂದರು.

## ಉಚಿತ ಸಲಹೆ ಬೇಡ, ಬೆಳೆ ನಷ್ಟಕ್ಕೆ ಪರಿಹಾರದ ಬಗ್ಗೆ ಸ್ಪಷ್ಟನೆ ನೀಡಿ

ಇತ್ತೀಚೆಗೆ ನಡೆದ ತುಂಗಭದ್ರಾ ಜಲಾಶಯದ ಕ್ರಸ್ಟ್‌ಗೇಟ್ ಉದ್ಘಾಟನಾ ಸಮಾರಂಭಕ್ಕೆ ಪಕ್ಕದ ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸಿದ್ದರು. ಆದರೆ ನಮ್ಮ ರಾಜ್ಯದ ನೀರಾವರಿ ಸಚಿವರಾದ ರಾಮಲಿಂಗಾರೆಡ್ಡಿ ಆ ಮಹತ್ವದ ಕಾರ್ಯಕ್ರಮಕ್ಕೇ ಹೋಗಿಲ್ಲ ಎಂದು ಅಸಮಾಧಾನ ಹೊರಹಾಕಿದ್ದಾರೆ. ಅಧಿಕಾರಕ್ಕೆ ಬರುವಾಗ ಹತ್ತೇ ದಿನಗಳಲ್ಲಿ ಪೂರ್ಣ ಪ್ರಮಾಣದ ಸಚಿವ ಸಂಪುಟ ರಚನೆ ಮಾಡ್ತೀವಿ ಅಂದಿದ್ದರು, ಆದರೆ ಒಂದು ತಿಂಗಳು ಕಳೆದರೂ ಇವರ ಕೈಯಲ್ಲಿ ಸಂಪುಟ ಪೂರ್ಣಗೊಳಿಸಲು ಸಾಧ್ಯವಾಗಿಲ್ಲ. ರೈತರಿಗೆ ಬೆಳೆ ಬೆಳೆಯಬೇಡಿ ಎಂದು ಉಚಿತ ಸಲಹೆ ಕೊಡುವ ಈ ಸರ್ಕಾರ, ಬೆಳೆ ನಷ್ಟ ಮಾಡಿಕೊಂಡಿರುವ ರೈತರಿಗೆ ಏನು ಪರಿಹಾರ ಕೊಡುತ್ತದೆ ಎಂಬುದನ್ನು ಸ್ಪಷ್ಟಪಡಿಸಿಲ್ಲ ಎಂದು ಅಶೋಕ್ ಕಿಡಿಕಾರಿದ್ದಾರೆ.

### ಬೆಂಗಳೂರಿನ ಒಟ್ಟು ರಸ್ತೆ ಜಾಲದ ಶೇ.20 ಭಾಗದಲ್ಲಷ್ಟೇ ಕಾರ್ಯಾಚರಣೆ

# ಸೇಫ್ ಫುಟ್‌ಪಾತ್ ಅಭಿಯಾನದ ಪ್ರಗತಿ ಪರಿಶೀಲಿಸಿದ ಸಚಿವ ಕೃಷ್ಣ ಬೈರೇಗೌಡ

**ಬೆಂಗಳೂರು, ಜು.4:** ಪಾದಚಾರಿಗಳ ಓಡಾಟ ಹೆಚ್ಚಿರುವ ಬೆಂಗಳೂರಿನ ಒಟ್ಟು ರಸ್ತೆ ಜಾಲದ ಕೇವಲ 20 ಶೇ. ಭಾಗದಲ್ಲಿ ಮಾತ್ರ ಈ ಕಾರ್ಯಾಚರಣೆ ನಡೆಸಲಾಗುವುದು. ಉಳಿದ ರಸ್ತೆಗಳಲ್ಲಿ ಕಾನೂನಿನ ಪ್ರಕಾರ ವಾಣಿಜ್ಯ ಚಟುವಟಿಕೆಗಳು ಹಾಗೂ ಬೀದಿಬದಿ ವ್ಯಾಪಾರ ಮುಂದುವರಿಯಬಹುದು ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಹೇಳಿದರು.



ಸೇಫ್ ಫುಟ್‌ಪಾತ್ ಅಭಿಯಾನದ ಪ್ರಗತಿಯನ್ನು ಶನಿವಾರ ಪರಿಶೀಲಿಸಿದ ಅವರು, ಸುಪ್ರೀಂ ಕೋರ್ಟ್‌ನ ನಿರ್ದೇಶನಗಳಿಗೆ ಅನುಗುಣವಾಗಿ ಈ ಕಾರ್ಯಾಚರಣೆಯನ್ನು ಜಾರಿಗೊಳಿಸಲಾಗುತ್ತಿದೆ. ಸರ್ಕಾರದ ಉದ್ದೇಶ ಜೀವನೋಪಾಯಕ್ಕೆ ಧಕ್ಕೆಯುಂಟು ಮಾಡುವುದಲ್ಲ, ಬದಲಿಗೆ ಪಾದಚಾರಿಗಳಿಗೆ ಸುರಕ್ಷಿತ ಹಾಗೂ ಅಡೆತಡೆಯಿಲ್ಲದ ಸಂಚಾರವನ್ನು ಖಚಿತಪಡಿಸುವುದಾಗಿದೆ ಎಂದು ಸ್ಪಷ್ಟಪಡಿಸಿದರು. ಪ್ರತಿಯೊಬ್ಬ ನಾಗರಿಕರು ಸುರಕ್ಷಿತವಾಗಿ ನಡೆಯಲು ಸಾಧ್ಯವಾಗಬೇಕು ಎಂಬುದೇ ನಮ್ಮ ಗುರಿ. ಸಾರ್ವಜನಿಕ ಸುರಕ್ಷತೆ ಮತ್ತು ಸಾರ್ವಜನಿಕರ ಹಕ್ಕುಗಳಿಗೆ ಮೊದಲ ಆದ್ಯತೆ ನೀಡಬೇಕು. ಅಭಿಯಾನಕ್ಕೆ ಎಲ್ಲ ರಾಜಕೀಯ ಪಕ್ಷಗಳ ಶಾಸಕರು ಬೆಂಬಲ ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದರು.

## 4 ದಿನದಲ್ಲಿ 202.7 ಕಿ.ಮೀ. ಪಾದಚಾರಿ ಮಾರ್ಗ ತೆರವು

ಸೇಫ್ ಫುಟ್‌ಪಾತ್ (ಸುರಕ್ಷಿತ ಪಾದಚಾರಿ ಮಾರ್ಗ) ಅಭಿಯಾನವು ಶನಿವಾರಕ್ಕೆ ನಾಲ್ಕು ದಿನ ಪೂರೈಸಿದೆ. ನಗರದಾದ್ಯಂತ ಅತಿಕ್ರಮಣಕ್ಕೊಳಗಾಗಿದ್ದ 202.7 ಕಿ.ಮೀ.ಪಾದಚಾರಿ ಮಾರ್ಗಗಳನ್ನು 4 ದಿನಗಳಲ್ಲಿ ತೆರವುಗೊಳಿಸಿವೆ. ಈ ಕಾರ್ಯಾಚರಣೆಯು ಮುಖ್ಯವಾಗಿ ಪಾದಚಾರಿಗಳ ಓಡಾಟಕ್ಕೆ ಅಡ್ಡಿಯಾಗುವ ಭೌತಿಕ ಅತಿಕ್ರಮಣಗಳನ್ನು ತೆರವುಗೊಳಿಸುವುದರ ಮೇಲೆ ಕೇಂದ್ರೀಕರಿಸಿದ್ದು, ಇದು ಕೇವಲ ಬೀದಿಬದಿ ವ್ಯಾಪಾರಿಗಳನ್ನು ಗುರಿಯಾಗಿಸಿಕೊಂಡ ಅಭಿಯಾನವಲ್ಲ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನ ಐದು ನಗರ ನಿಗಮಗಳ ವ್ಯಾಪ್ತಿಯಲ್ಲಿ ಒಟ್ಟು 61.45 ಕಿ.ಮೀ. ಪಾದಚಾರಿ ಮಾರ್ಗಗಳನ್ನು ತೆರವುಗೊಳಿಸಲಾಗಿದ್ದು, ಅಭಿಯಾನ ಆರಂಭವಾದ ಬಳಿಕ ಇದುವರೆಗೆ ತೆರವುಗೊಳಿಸಿರುವ ಒಟ್ಟು ಅತಿಕ್ರಮಿತ ಪಾದಚಾರಿ ಮಾರ್ಗಗಳ ಉದ್ದ 202 ಕಿ.ಮೀ.ಗಿಂತ ಹೆಚ್ಚಾಗಿದೆ. ಬೆಂಗಳೂರು ನಮ್ಮೆಲ್ಲರಿಗೂ ಬದುಕಲು ಹಾಗೂ ಬೆಳೆಯಲು ಅವಕಾಶ ನೀಡಿದೆ. ಆದ್ದರಿಂದ ನಗರವನ್ನು ಉತ್ತಮಗೊಳಿಸುವುದು ಸರ್ಕಾರ, ಸಂಸ್ಥೆಗಳು ಮತ್ತು ಪ್ರತಿಯೊಬ್ಬ ನಾಗರಿಕರ ಜಂಟಿ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಆದರೆ, ಈ ಕಾರ್ಯಾಚರಣೆ ವೇಳೆ ವಿಶೇಷವಾಗಿ ಹಿರಿಯ ನಾಗರಿಕರು, ಮಹಿಳೆಯರು ಮತ್ತು ಅಂಗವಿಕಲ ಬೀದಿಬದಿ ವ್ಯಾಪಾರಿಗಳ ವಸ್ತುಗಳನ್ನು ವಶಕ್ಕೆ ಪಡೆದಿರುವುದು ಆಕ್ಷೇಪಕ್ಕೆ ಕಾರಣವಾಗಿದೆ.




ಬೆಂಗಳೂರು ಅರಮನೆ ಮೈದಾನದಲ್ಲಿ ಶನಿವಾರ ನಡೆದ ಮಾಜಿ ಸಂಸದ ಎಲ್.ಆರ್ ಶಿವರಾಮೇಗೌಡ ಅವರ ಅಭಿನಂದನಾ ಗ್ರಂಥ "ಶಿವಪಥ"ವನ್ನು ಸಿಎಂ ಡಿ.ಕೆ.ಶಿವಕುಮಾರ್ ಬಿಡುಗಡೆ ಮಾಡಿದರು. ಸ್ಫಟಿಕಪುರಿ ಮಹಾಸಂಸ್ಥಾನದ ನಂಜಾವಧೂತ ಸ್ವಾಮೀಜಿ, ವಿಶ್ವ ಒಕ್ಕಲಿಗರ ಮಹಾಸಂಸ್ಥಾನದ ನಿಶ್ಚಲಾನಂದನಾಥ ಸ್ವಾಮೀಜಿ, ಆದಿಚುಂಚನಗಿರಿ ಶಾಖಾಮಠದ ಸೌಮ್ಯನಾಥ ಸ್ವಾಮೀಜಿ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ನ್ಯಾಯಮೂರ್ತಿ ಚಂದ್ರಶೇಖರಯ್ಯ, ಸಚಿವ ರಾಮಲಿಂಗಾರೆಡ್ಡಿ, ಮಾಜಿ ಸಚಿವ ಸುಧಾಕರ್, ಶಾಸಕರಾದ ರಂಗನಾಥ್, ರಿಜ್ವಾನ್ ಅರ್ಷದ್, ಎಂಎಲ್‌ಸಿ ಪುಟ್ಟಣ್ಣ, ಹಿರಿಯ ಸಾಹಿತಿ ಹಂಪನಾ ಮತ್ತಿತರರು ಹಾಜರಿದ್ದರು.

# ಸಿದ್ದರಾಮಯ್ಯ ಆಶಯದಂತೆ ಜಾತಿಗಣತಿ ಜಾರಿ: ಸಚಿವ ಯತೀಂದ್ರ ಸ್ಪಷ್ಟನೆ

**ದಾವಣಗೆರೆ, ಜು.4:** ಸಿದ್ದರಾಮಯ್ಯ ಅವರು ಇನ್ನೂ ಎರಡು ವರ್ಷ ಮುಖ್ಯಮಂತ್ರಿಯಾಗಿ ಇರುತ್ತಾರೆ ಅಂದುಕೊಂಡಿದ್ದೆವು, ಕಾರಣಾಂತರಗಳಿಂದ ಆ ಸ್ಥಾನದಿಂದ ಕೆಳಗಿಳಿದಿದ್ದಾರೆ. ಆದರೆ, ಅವರ ಕನಸಿನ ಕೂಸು ಜಾತಿಗಣತಿ ಸ್ವೀಕರಿಸಿದ್ದೇವೆ, ಜಾರಿ ಮಾಡುತ್ತೇವೆ ಎಂದು ಸಚಿವ ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ಸಿದ್ದರಾಮಯ್ಯ ಅವರು ಜಾತಿಗಣತಿ ವರದಿಯನ್ನು ಜಾರಿಗೊಳಿಸಬೇಕು ಎಂದುಕೊಂಡಿದ್ದರು, ಅದನ್ನು ನಾವು ಜಾರಿ ಮಾಡುತ್ತೇವೆ. ಅದು ಕ್ಯಾಬಿನೆಟ್ ಮುಂದೆ ಚರ್ಚೆಗೆ ಬರಬೇಕಿದೆ. ನಮ್ಮ ಪಕ್ಷದ ಪ್ರಣಾಳಿಕೆಯಲ್ಲಿ ಜಾತಿಗಣತಿ ಬಿಡುಗಡೆ ಮಾಡುವುದಾಗಿ ಹೇಳಿದ್ದೆವು, ಅದರಂತೆ ಬಿಡುಗಡೆ ಮಾಡುತ್ತೇವೆ ಎಂದರು.

ಮುಖ್ಯಮಂತ್ರಿಗಳು ಹೊಸದಾಗಿ ಪ್ರಜಾಸೇವೆ ಇಲಾಖೆ ಆರಂಭಿಸಿದ್ದಾರೆ. ಭಾರತ್ ಜೋಡೋ ಯುವಕರ ಸಂಘದಿಂದ ಪಕ್ಷ ಸಂಘಟಿಸುವ ನಿರ್ಧಾರ ಮಾಡಲಾಗಿದೆ. ಅಲ್ಲದೇ ಎಸ್‌ಐಆರ್ ಸೇರಿದಂತೆ ಹಲವು ವಿಷಯಗಳ ಬಗ್ಗೆ ಚರ್ಚೆ ನಡೆದವು ಎಂದು ಹೇಳಿದರು. ಸಚಿವ ಸಂಪುಟ ವಿಸ್ತರಣೆ ವಿಚಾರವಾಗಿ ಮಾತನಾಡಿ, ಅದು ಹೈಕಮಾಂಡ್‌ಗೆ ಬಿಟ್ಟ ವಿಚಾರ. ಎರಡು ವಾರದಲ್ಲಿ ಸಂಪುಟ ವಿಸ್ತರಣೆಯಾಗುವ ನಿರೀಕ್ಷೆ ಇದೆ. ಸಂಪುಟದಲ್ಲಿ ಹೊಸಬರು ಹಾಗೂ ಹಳಬರು ಕೂಡ ಇರಬೇಕು. ಎಲ್ಲ ವಿಚಾರವನ್ನು ಹೈಕಮಾಂಡ್ಗೆ ಬಿಟ್ಟಿದ್ದೇವೆ, ಅವರೇ ತೀರ್ಮಾನ ತೆಗೆದುಕೊಳ್ಳುತ್ತಾರೆ. ಸಿಎಂ ಪ್ರಮಾಣವಚನ ಸ್ವೀಕಾರ ಮಾಡಿ ಒಂದು ತಿಂಗಳಾಗಿದೆ. ನೂರು ದಿನಗಳ ಅಜೆಂಡಾ ಇದೆ. ಯಾರು ಬಡವರು, ಅರ್ಹರಿದ್ದಾರೆ ಅವರಿಗೆ ಗ್ಯಾರಂಟಿ ಕೊಡುತ್ತೇವೆ. ಜಾತಿ ಆಧಾರಿತವಾಗಿ ಗ್ಯಾರಂಟಿ ಯೋಜನೆ ನೀಡಿಲ್ಲ. ಯಾವ ಸಮುದಾಯದವರು ಎಷ್ಟು ಫಲಾನುಭವಿಗಳು ಇದ್ದಾರೆ ಅನ್ನೋ ನಿಟ್ಟಿನಲ್ಲಿ ಇರಬೇಕು ಎಂದು ಹೇಳಿದರು.

### ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ದಾಖಲೆ ಹಸ್ತಾಂತರ, ತಕ್ಷಣವೇ ಲೋಪ ಸರಿಪಡಿಸುವಂತೆ ಒತ್ತಾಯ

# ಎಸ್‌ಐಆರ್‌ನಲ್ಲಿ ವ್ಯಾಪಕ ಅಕ್ರಮ, ಲೋಪ ವಿಜಯೇಂದ್ರ ನೇತೃತ್ವದ ನಿಯೋಗದಿಂದ ದೂರು

ಬೆಂಗಳೂರು, ಜು.4: ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ವ್ಯಾಪಕ ಅಕ್ರಮ ಮತ್ತು ಲೋಪ ನಡೆಯುತ್ತಿವೆ ಎಂದು ಆರೋಪಿಸಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದ ಹಿರಿಯ ನಾಯಕರ ನಿಯೋಗವು ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ದೂರು ನೀಡಿದೆ. ಜಯನಗರ ಸೇರಿದಂತೆ ಹಲವೆಡೆ ನಡೆದಿರುವ ಅಕ್ರಮಗಳ ದೃಢೀಕೃತ ದಾಖಲೆಗಳನ್ನು ಆಯೋಗಕ್ಕೆ ಹಸ್ತಾಂತರಿಸಿರುವ ನಿಯೋಗ, ತಕ್ಷಣವೇ ಮಧ್ಯಪ್ರವೇಶಿಸಿ ಲೋಪಗಳನ್ನು ಸರಿಪಡಿಸುವಂತೆ ಒತ್ತಾಯಿಸಿದೆ.



ಬಿಜೆಪಿ ನಿಯೋಗದಲ್ಲಿ ಶಾಸಕರುಗಳಾದ ಎಸ್. ಸುರೇಶ್ ಕುಮಾರ್, ಸಿ.ಕೆ. ರಾಮಮೂರ್ತಿ ಹಾಗೂ ಪಕ್ಷದ ಪ್ರಧಾನ ಕಾರ್ಯದರ್ಶಿ ನಂದೀಶ್ ರೆಡ್ಡಿ ಸೇರಿದಂತೆ ಹಲವು ಪ್ರಮುಖರು ಉಪಸ್ಥಿತರಿದ್ದರು.

ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ ವಿಜಯೇಂದ್ರ, ಕೇಂದ್ರ ಚುನಾವಣಾ ಆಯೋಗವು ಸದುದ್ದೇಶ ಇಟ್ಟುಕೊಂಡು ಎಸ್‌ಐಆರ್ ಪ್ರಕ್ರಿಯೆ ಜಾರಿಗೆ ತಂದಿದೆ. ನಿಯಮಾವಳಿಗಳ ಪ್ರಕಾರ ಬೂತ್ ಮಟ್ಟದ ಅಧಿಕಾರಿಗಳು ಮನೆಮನೆಗೆ ಭೇಟಿ ನೀಡಿ ಫಾರ್ಮ್‌ಗಳನ್ನು ವಿತರಿಸಿ, ಮಾಹಿತಿ ಸಂಗ್ರಹಿಸಬೇಕು. ಆದರೆ, ರಾಜ್ಯ ಕಾಂಗ್ರೆಸ್ ಸರ್ಕಾರದ ಕುಮ್ಮಕ್ಕಿನಿಂದಾಗಿ ಅಧಿಕಾರಿಗಳು ಕಲ್ಯಾಣ ಮಂಟಪಗಳು ಮತ್ತು ಮಸೀದಿಗಳ ಒಳಗೆ ಕುಳಿತುಕೊಂಡು ಸಾಮೂಹಿಕವಾಗಿ ಅರ್ಜಿಗಳನ್ನು ತುಂಬುತ್ತಿದ್ದಾರೆ. ಮಸೀದಿಯೊಳಗೆ ಬಿಎಲ್‌ಓಗಳು ಕುಳಿತುಕೊಂಡರೆ ನಮ್ಮ ಪಕ್ಷದ ಬಿಎಲ್‌ಎಗಳು ಅಲ್ಲಿಗೆ ಹೋಗಿ ಪರಿಶೀಲನೆ ನಡೆಸಲು ಹೇಗೆ ಸಾಧ್ಯ ಎಂದು ನಿಯೋಗ ಪ್ರಶ್ನಿಸಿದೆ.

ಕಾಂಗ್ರೆಸ್ ಕಾರ್ಯಕರ್ತರು ಅಧಿಕಾರಿಗಳನ್ನು ಮನಸೋಇಚ್ಛೆ ಬಳಸಿಕೊಳ್ಳುತ್ತಿದ್ದಾರೆ ಮತ್ತು ಸಾರ್ವಜನಿಕರಿಂದ ಬಲವಂತವಾಗಿ ಎನ್ಯುಮರೇಷನ್ ಫಾರ್ಮ್‌ಗಳನ್ನು ಬರೆಸಿಕೊಳ್ಳುತ್ತಿದ್ದಾರೆ. ರಾಜ್ಯ ಸರ್ಕಾರ ಇಡೀ ಪ್ರಕ್ರಿಯೆಗೆ ತಣ್ಣೀರೆರಚುವ ಕೆಲಸ ಮಾಡುತ್ತಿದೆ. ಎಲ್ಲೆಲ್ಲಿ ಏರುಪೇರು... ಎಲ್ಲೆಲ್ಲಿ ಯಡವಟ್ಟುಗಳಾಗಿದೆಯೋ, ಅಲ್ಲೆಲ್ಲಾ ಎರಡನೇ ಬಾರಿ (ಮರು ಪರಿಶೀಲನೆ) ಎಸ್‌ಐಆರ್ ನಡೆಸಬೇಕು, ಎಂದು ಆಗ್ರಹಿಸಿದೆ.

ಜಯನಗರ ಕ್ಷೇತ್ರದ ಬಿಜೆಪಿ ಶಾಸಕ ಸಿ.ಕೆ. ರಾಮಮೂರ್ತಿ ಮಾತನಾಡಿ, ತಮ್ಮ ಕ್ಷೇತ್ರದಲ್ಲಿ ವ್ಯವಸ್ಥಿತವಾಗಿ ಅಕ್ರಮ ನಡೆಯುತ್ತಿದೆ ಎಂದು ಆರೋಪ ಮಾಡಿದರು. ನಮ್ಮ ಜಯನಗರ ಕ್ಷೇತ್ರದಲ್ಲಿ ನಿಯಮಗಳನ್ನು ಸಂಪೂರ್ಣವಾಗಿ ಗಾಳಿಗೆ ತೂರಲಾಗಿದೆ. ಅಲ್ಲಿ ಹಂಚಲಾಗುತ್ತಿರುವ ಎನ್ಯುಮರೇಷನ್ ಫಾರ್ಮ್‌ಗಳಲ್ಲಿ ಕಾಂಗ್ರೆಸ್ ನಾಯಕರ ಫೋಟೋಗಳನ್ನು ಮುದ್ರಿಸಿ ವಿತರಿಸಲಾಗುತ್ತಿದೆ. ನಿನ್ನೆ ಹಿರಿಯ ಅಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಎಚ್ಚರಿಕೆ ನೀಡಿದ್ದರೂ, ಇಂದು ಕೂಡ ಅದೇ ಅಕ್ರಮ ಮುಂದುವರಿದಿದೆ. ಈ ಬಗ್ಗೆ ಬಿಬಿಎಂಪಿ ಆಯುಕ್ತರು ಸರಿಪಡಿಸುವುದಾಗಿ ಹೇಳಿದ್ದಾರಾದರೂ, ಪ್ರಾಯೋಗಿಕವಾಗಿ ಯಾವುದೇ ಕ್ರಮವಾಗಿಲ್ಲ, ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕ್ಷೇತ್ರದಲ್ಲಿ ನಡೆಯುತ್ತಿರುವ ಅಕ್ರಮಗಳಿಗೆ ಆಯಾ ಭಾಗದ ಸಹಾಯಕ ಮತದಾರರ ನೋಂದಣಾಧಿಕಾರಿಗಳೇ ನೇರ ಕಾರಣ. ದೂರು ನೀಡಿದರೂ ದಕ್ಷಿಣ ಆಯುಕ್ತ ರಮೇಶ್ ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಆದ್ದರಿಂದ ತಕ್ಷಣವೇ ಕರ್ತವ್ಯ ಲೋಪ ಎಸಗಿರುವ ಎಆರ್‌ಓಗಳನ್ನು ಅಮಾನತು ಮಾಡಬೇಕು. ಎಲ್ಲೆಲ್ಲಿ ಇಂತಹ ಫೋಟೋ ಇರುವ ಅರ್ಜಿಗಳನ್ನು ಹಂಚಲಾಗಿದೆಯೋ ಮತ್ತು ಅಕ್ರಮಗಳು ನಡೆದಿವೆಯೋ, ಆ ಎಲ್ಲಾ ಕಡೆಗಳಲ್ಲಿ ತಕ್ಷಣವೇ ಅಧಿಕಾರಿಗಳನ್ನು ಬದಲಾಯಿಸಿ ರೀ-ವೆರಿಫಿಕೇಷನ್ (ಮರು ಪರಿಶೀಲನೆ) ನಡೆಸಬೇಕು ಎಂದು ನಾವು ಚುನಾವಣಾ ಆಯೋಗವನ್ನು ಒತ್ತಾಯಿಸಿದ್ದೇವೆ, ಎಂದು ಶಾಸಕ ಸಿ.ಕೆ. ರಾಮಮೂರ್ತಿ ತಿಳಿಸಿದರು.


## ಕಾಂಗ್ರೆಸ್‌ನ ಕೆಲವರಿಂದ ಚುನಾವಣಾ ವ್ಯವಸ್ಥೆಗೆ ಧಕ್ಕೆ

ಚುನಾವಣಾ ಆಯೋಗದ ವಿರುದ್ಧ ಗೃಹ ಸಚಿವ ಪ್ರಿಯಾಂಕ್ ಖರ್ಗೆ ನೀಡಿದ್ದ ಹೇಳಿಕೆಗೆ ತಿರುಗೇಟು ನೀಡಿದ ವಿಜಯೇಂದ್ರ, ಕೇಂದ್ರ ಚುನಾವಣಾ ಆಯೋಗ ತನ್ನ ಕೆಲಸವನ್ನು ಅತ್ಯಂತ ಪಾರದರ್ಶಕವಾಗಿ ಮಾಡುತ್ತಿದೆ. ಆದರೆ, ಕಾಂಗ್ರೆಸ್‌ನಲ್ಲಿ ಕೆಲವು ಕತ್ತೆಗಳಿವೆ. ಆ ಕತ್ತೆಗಳೇ ಇಡೀ ಚುನಾವಣಾ ವ್ಯವಸ್ಥೆಯನ್ನು ಹಾಳು ಮಾಡಲು ಹೊರಟಿವೆ ಎಂದು ಚಾಟಿ ಬೀಸಿದರು. ಪಶ್ಚಿಮ ಬಂಗಾಳದಲ್ಲಿ ಆಡಳಿತ ಪಕ್ಷದ ಪ್ರಭಾವದಿಂದ ಮತದಾರರ ಪಟ್ಟಿಯಲ್ಲಿ ನಡೆದ ದ್ವೇಷದ ರಾಜಕಾರಣ ಮತ್ತು ಅಕ್ರಮಗಳನ್ನು, ಕರ್ನಾಟಕದಲ್ಲಿ ಯಾವುದೇ ಕಾರಣಕ್ಕೂ ಮಾಡಲು ನಾವು ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

# 3395 ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗೆ ಆನ್‌ಲೈನ್ ಅರ್ಜಿ ಸಲ್ಲಿಕೆಗೆ ಜು.8ರವರೆಗೆ ಅವಕಾಶ: ಸಚಿವ ಖರ್ಗೆ

**ಬೆಂಗಳೂರು, ಜು.4:** ರಾಜ್ಯದ ಕಾನೂನು ಸುವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಗೃಹ ಇಲಾಖೆಯಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಮುಂದಾಗಿದ್ದು, 3,395 ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿಗೆ ಈಗಾಗಲೇ ಅಧಿಸೂಚನೆ ಹೊರಡಿಸಲಾಗಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ನೇಮಕಾತಿಗೆ ಆನ್‌ಲೈನ್ ಅರ್ಜಿ ಸಲ್ಲಿಕೆ ಪ್ರಕ್ರಿಯೆ ನಡೆಯುತ್ತಿದೆ. ಈ ಹಿಂದೆ ಜುಲೈ 3 ಅನ್ನು ಅರ್ಜಿ ಸಲ್ಲಿಕೆಗೆ ಹಾಗೂ ಜುಲೈ 4 ಅನ್ನು ಅರ್ಜಿ ಶುಲ್ಕ ಪಾವತಿಗೆ ಕೊನೆಯ ದಿನಾಂಕವಾಗಿ ನಿಗದಿಪಡಿಸಲಾಗಿತ್ತು ಎಂದು ತಿಳಿಸಿದ್ದಾರೆ.



ಆದರೆ, ತಾಂತ್ರಿಕ ಸಮಸ್ಯೆಗಳು, ಅಗತ್ಯ ಪ್ರಮಾಣಪತ್ರಗಳನ್ನು ಪಡೆಯುವಲ್ಲಿ ವಿಳಂಬ ಹಾಗೂ ಇತರೆ ಕಾರಣಗಳಿಂದ ನಿಗದಿತ ಅವಧಿಯಲ್ಲಿ ಅರ್ಜಿ ಸಲ್ಲಿಸಲು ಸಾಧ್ಯವಾಗಿಲ್ಲ. ಈಗಾಗಲೇ ಸಲ್ಲಿಸಿರುವ ಅರ್ಜಿಗಳಲ್ಲಿನ ಮಾಹಿತಿಯನ್ನು ತಿದ್ದುಪಡಿ ಮಾಡಲು ಅವಕಾಶ ನೀಡುವಂತೆ ಅಭ್ಯರ್ಥಿಗಳು ಮನವಿ ಸಲ್ಲಿಸಿದ್ದರು.ಈ ಮನವಿಗಳನ್ನು ಪರಿಗಣಿಸಿದ ಸರ್ಕಾರ, ಎಲ್ಲ ಅರ್ಹ ಅಭ್ಯರ್ಥಿಗಳಿಗೆ ಸಮಾನ ಅವಕಾಶ ಕಲ್ಪಿಸುವ ಉದ್ದೇಶದಿಂದ ಅರ್ಜಿ ಸಲ್ಲಿಕೆ ಹಾಗೂ ತಿದ್ದುಪಡಿ ವೇಳಾಪಟ್ಟಿಯನ್ನು ವಿಸ್ತರಿಸಿದೆ. ಪರಿಷ್ಕೃತ ವೇಳಾಪಟ್ಟಿಯಂತೆ, ಆನ್‌ಲೈನ್ ಅರ್ಜಿ ಸಲ್ಲಿಕೆ ಮತ್ತು ಅರ್ಜಿ ಶುಲ್ಕ ಪಾವತಿಗೆ ಜುಲೈ 8, 2026 ಸಂಜೆ 4 ಗಂಟೆಯವರೆಗೆ ಅವಕಾಶ ನೀಡಲಾಗಿದೆ. ಈಗಾಗಲೇ ಸಲ್ಲಿಸಿರುವ ಅರ್ಜಿಗಳಲ್ಲಿನ ವಿವರಗಳನ್ನು ಜುಲೈ 12, 2026ರವರೆಗೆ ತಿದ್ದುಪಡಿ ಮಾಡಿಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಎಸ್‌ಐಆರ್: ಕಾನೂನು ಮೀರಿ ಏನೂ ಮಾಡಲು ಆಗಲ್ಲ

ಕಾನೂನು ಮೀರಿ ಯಾರು ಏನು ಮಾಡಲು ಆಗುವುದಿಲ್ಲ. ಚುನಾವಣಾ ಆಯೋಗದ ವೀಕ್ಷಕರು ಇರುತ್ತಾರೆ. ಲೋಪ ಆಗಿದ್ದರೆ ಕ್ರಮ ತೆಗೆದುಕೊಳ್ಳಬಹುದು ಎಂದು ಪ್ರತಿಪಕ್ಷಗಳ ಆರೋಪಕ್ಕೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯಿಸಿದ್ದಾರೆ. ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಅವರು, ಸರ್ಕಾರ ಯಾರಿಗೂ ಒತ್ತಾಯ ಮಾಡಿ ಎಸ್‌ಐಆರ್ ಮಾಡಿಸುತ್ತಿಲ್ಲ. ಸಮುದಾಯ ಭವನ ಕಚೇರಿಯಲ್ಲಿ ಎಸ್‌ಐಆರ್ ಮಾಡಿ ಅಂತಾ ಹೇಳಿಲ್ಲ. ಎಸ್‌ಐಆರ್ ಬಗ್ಗೆ ಜನರಲ್ಲಿ ಆತಂಕ ಇರೋದು ನಿಜ. ಅದಕ್ಕೆ 12 ಪ್ರಶ್ನೆ ಕೇಳಿದ್ದೇವೆ ಚುನಾವಣಾ ಆಯೋಗ ಉತ್ತರಿಸಿಲ್ಲ. ಎಸ್‌ಐಆರ್ ಪ್ರಕ್ರಿಯೆ ಬಗ್ಗೆ ಜನರಿಗೆ ಆತಂಕ ಸಂಶಯ ಇದೆ. ರೂಲ್ಸ್ ಮಾಡೋದು ನಾವಲ್ಲ. ಆಯೋಗ ಉತ್ತರ ಕೊಡಬೇಕು ಎಂದರು. ಎಸ್‌ಐಆರ್‌ನಲ್ಲಿನ ತಾರ್ಕಿಕ ವೈರುಧ್ಯಗಳ ಕುರಿತು ನಮ್ಮ ಪ್ರಶ್ನೆಗಳಿಗೆ ಚುನಾವಣಾ ಆಯೋಗ ಉತ್ತರಿಸುತ್ತಿಲ್ಲ; ನ್ಯಾಯಸಮ್ಮತ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಅಗತ್ಯ ಎಂದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,‘A’/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಕರ್ನಾಟಕದಲ್ಲಿನ ಎಸ್‌ಐಆರ್ ಪ್ರಕ್ರಿಯೆ ರದ್ದುಗೊಳಿಸಿ



**ಕೇಂದ್ರ ಚುನಾವಣಾ ಆಯೋಗಕ್ಕೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆಗ್ರಹ**

**ಬೆಂಗಳೂರು, ಜು.4:** ಕರ್ನಾಟಕದಲ್ಲಿ ಇದುವರೆಗೂ ನಡೆದಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ(ಎಸ್‌ಐಆರ್)ಯನ್ನು ರದ್ದುಗೊಳಿಸಬೇಕು ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಭಾರತೀಯ ಚುನಾವಣಾ ಆಯೋಗವನ್ನು ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಈಗಾಗಲೇ ನಡೆದಿರುವ ಎಸ್‌ಐಆರ್‌ಗೆ ಯಾವುದೇ ಅರ್ಥವಿಲ್ಲ. ಕೆಲವೆಡೆ ಮನೆಮನೆಗೆ ತೆರಳಿ ಎಸ್‌ಐಆರ್ ಪ್ರಕ್ರಿಯೆ ಕೈಗೊಳ್ಳುವ ಬದಲು ಕಲ್ಯಾಣ ಮಂಟಪದಲ್ಲಿ ಗಣತಿ ನಮೂನೆಯನ್ನು ನೀಡಲಾಗುತ್ತಿದೆ. ಈ ಸಂಬಂಧ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳಿಗೆ ಜೆಡಿಎಸ್ ವತಿಯಿಂದ ದೂರು ಸಲ್ಲಿಸಲಾಗಿದೆ. ಆದರೆ ಅವರು ಚುನಾವಣಾ ಆಯೋಗಕ್ಕೆ ಕಳುಹಿಸಿಕೊಟ್ಟಿದ್ದು, ಅವರ ನಿರ್ದೇಶನದಂತೆ ಕ್ರಮ ಕೈಗೊಳ್ಳುವುದಾಗಿ ಹೇಳಿದ್ದಾರೆ.

ಸೋಮವಾರ ದೆಹಲಿಗೆ ತೆರಳಿ ಭಾರತೀಯ ಚುನಾವಣಾ ಆಯೋಗದ ಆಯುಕ್ತರನ್ನು ಭೇಟಿ ಮಾಡಿ ಕರ್ನಾಟಕದಲ್ಲಿ ಎಸ್‌ಐಆರ್‌ಗೆ ಸಂಬಂಧಿಸಿದಂತೆ ನಡೆದಿರುವ ಘಟನೆಗಳ ಸಂಪೂರ್ಣ ವಿವರಗಳನ್ನು ನೀಡಿ ಈಗಾಗಲೇ ನಡೆದಿರುವ ಪ್ರಕ್ರಿಯೆಯನ್ನು ರದ್ದುಗೊಳಿಸುಂತೆ ಒತ್ತಾಯಿಸಲಾಗುವುದು ಎಂದರು.

ಪಾರದರ್ಶಕವಾಗಿ ಎಸ್‌ಐಆರ್ ಪ್ರಕ್ರಿಯೆಯನ್ನು ನಡೆಸುವಂತೆ ಮನವಿ ಮಾಡಲಾಗುವುದು ಎಂದ ಅವರು, ಪ್ರತಿನಿತ್ಯ ಹೇಳಿಕೆ ನೀಡುತ್ತಿದ್ದ ಕೆಪಿಸಿಸಿ ಅಧ್ಯಕ್ಷರು, ಗೃಹ ಸಚಿವರು ಕಲ್ಯಾಣ ಮಂಟಪಗಳಲ್ಲಿ ಎಸ್‌ಐಆರ್‌ಗೆ ಸಂಬಂಧಿಸಿದ ಗಣತಿ ನಮೂನೆಗಳನ್ನು ವಿತರಿಸುತ್ತಿರುವ ಬಗ್ಗೆ ಏನು ಹೇಳುತ್ತಾರೆ ಎಂದು ಪ್ರಶ್ನಿಸಿದರು.

ಸರ್ಕಾರಿ ಅಧಿಕಾರಿಗಳು ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗಿಯಾಗಿದ್ದು, ಆಯೋಗದ ಮಾರ್ಗಸೂಚಿಯನ್ನು ಪಾಲಿಸುತ್ತಿಲ್ಲ. ಹಾದಿಬೀದಿಯಲ್ಲಿ ಎಸ್‌ಐಆರ್ ಪ್ರಕ್ರಿಯೆ ನಡೆಸಲಾಗುತ್ತಿದೆ ಎಂದು ಆರೋಪಿಸಿದ ಅವರು, ಕೆಪಿಸಿಸಿ ಅಧ್ಯಕ್ಷರು ಹಾಗೂ ಗೃಹಸಚಿವರು ಈಗ ಎಲ್ಲಿ ಹೋಗಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

**ಬೀದಿಬದಿ ವ್ಯಾಪಾರಿಗಳಿಗೆ ಪರ್ಯಾಯ ವ್ಯವಸ್ಥೆಯೇನು?**

**ಸುಪ್ರೀಂಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ಲಕ್ಷಾಂತರ ಬೀದಿಬದಿ ವ್ಯಾಪಾರಿಗಳನ್ನು ತೆರವುಗೊಳಿಸುತ್ತಿದ್ದಾರೆ. ಆದರೆ ಅವರಿಗೆ ಪರ್ಯಾಯ ವ್ಯವಸ್ಥೆ ಏನು ಕಲ್ಪಿಸಿದ್ದಾರೆ ಎಂದು ಎಚ್.ಡಿ. ಕುಮಾರಸ್ವಾಮಿ ಪ್ರಶ್ನಿಸಿದರು. ಕಾನೂನು ಬಗ್ಗೆ ಮಾತನಾಡುವ ಸರ್ಕಾರದವರು ಬೀದಿಬದಿ ವ್ಯಾಪಾರಿಗಳ ಬದುಕಿನ ಬಗ್ಗೆಯೂ ಚರ್ಚೆ ಮಾಡಬೇಕಲ್ಲವೇ. ಅವರಿಗೆ ಪರ್ಯಾಯದ ವ್ಯವಸ್ಥೆ ಹಾಗೂ ಪರಿಹಾರವನ್ನು ನೀಡಬೇಕಾದುದು ಸರ್ಕಾರದ ಜವಾಬ್ದಾರಿಯಲ್ಲವೇ. ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್‌ರವರು ಒಂದು ತಿಂಗಳು ಪೂರ್ಣಗೊಳಿಸಿದ್ದಾರೆ. ಈ ಅವಧಿಯಲ್ಲಿ ಘೋಷಣೆ ಮಾಡುವುದನ್ನು ಬಿಟ್ಟರೆ ಏನೂ ಸಾಧನೆ ಮಾಡಿಲ್ಲ ಎಂದರು.**

# ಎಸ್‌ಐಆರ್‌ನಲ್ಲಿ ಲೋಪ: ವೀಕ್ಷಕರಾಗಿ ಹೊರರಾಜ್ಯದ ಅಧಿಕಾರಿಗಳ ನೇಮಕ

**ಪಶ್ಚಿಮ ಬಂಗಾಳ ಮಾದರಿ ಅನುಸರಿಸಲು ಕೇಂದ್ರ ಚುನಾವಣಾ ಆಯೋಗ ಚಿಂತನೆ**

**ಬೆಂಗಳೂರು, ಜು.4:** ರಾಜ್ಯದಲ್ಲಿ ನಡೆದಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್)ನಲ್ಲಿ ಸಾಕಷ್ಟು ಲೋಪಗಳು ಕಂಡು ಬರುತ್ತಿರುವ ಹಿನ್ನೆಲೆಯಲ್ಲಿ ಹೊರ ರಾಜ್ಯದ ಅಧಿಕಾರಿಗಳನ್ನು ವೀಕ್ಷಕರನ್ನಾಗಿ ನೇಮಿಸಲು ಕೇಂದ್ರ ಚುನಾವಣಾ ಆಯೋಗ ಚಿಂತನೆ ನಡೆಸಿದೆ.

ಈ ಹಿಂದೆ ಪಶ್ಚಿಮ ಬಂಗಳಾದಲ್ಲೂ ಎಸ್‌ಐಆರ್ ನಡೆಸುವಾಗ ಸಾಕಷ್ಟು ಲೋಪಗಳು ಕಂಡು ಬಂದಿದ್ದವು. ಆಗ ಕೇಂದ್ರ ಚುನಾವಣಾ ಆಯೋಗ ಹೊರರಾಜ್ಯದ ಅಧಿಕಾರಿಗಳನ್ನು ವೀಕ್ಷಕರನ್ನಾಗಿ ನೇಮಿಸಿ ಎಸ್‌ಐಆರ್‌ನ್ನು ಸಮರ್ಪಕವಾಗಿ ನಡೆಯುವಂತೆ ನೋಡಿಕೊಂಡಿತ್ತು. ಅದೇ ಮಾದರಿಯಲ್ಲಿ ಈಗ ಕರ್ನಾಟಕಕ್ಕೂ ವಿಶೇಷ ವೀಕ್ಷಕರನ್ನು ನೇಮಕ ಮಾಡಲು ಆಯೋಗ ಚಿಂತನೆ ನಡೆಸಿದೆ.

ಹೊರರಾಜ್ಯದ ವೀಕ್ಷಕರನ್ನು ನೇಮಕ ಮಾಡುವ ಆಯೋಗದ ತೀರ್ಮಾನದ ವಿರುದ್ಧ ಆಗಿನ ಪಶ್ಚಿಮ ಬಂಗಾಳ ಸರ್ಕಾರ ಸುಪ್ರೀಂಕೋರ್ಟ್‌ಗೆ ಮೊರೆಹೋಗಿತ್ತು. ಸುಪ್ರೀಂಕೋರ್ಟ್ ಆಯೋಗದ ತೀರ್ಮಾನವನ್ನು ಎತ್ತಿ ಹಿಡಿದಿತ್ತು. ಹಾಗಾಗಿ ಕರ್ನಾಟಕದಲ್ಲೂ ಹೊರ ರಾಜ್ಯದ ಅಧಿಕಾರಿಗಳನ್ನು ಎಸ್‌ಐಆರ್ ವೀಕ್ಷಕರನ್ನಾಗಿ ನೇಮಿಸಿ ಅವರ ಮೇಲುಸ್ತುವಾರಿಯಲ್ಲಿ ಎಸ್‌ಐಆರ್ ಪ್ರಕ್ರಿಯೆನ್ನು ಅತ್ಯಂತ ಪಾರದರ್ಶಕವಾಗಿ ನಡೆಸಲು ಚುನಾವಣಾ ಆಯೋಗ ಚಿಂತನೆ ನಡೆಸಿದೆ ಎಂದು ಮೂಲಗಳು ಹೇಳಿವೆ.

ರಾಜ್ಯದಲ್ಲಿ ಬಿಎಲ್‌ಓಗಳನ್ನುದುರುಪಯೋಗಪಡಿಸಿಕೊಂಡು ಸಾಮೂಹಿಕವಾಗಿ ಎಸ್‌ಐಆರ್ ನಡೆಸಲಾಗುತ್ತಿದೆ. ಮನೆ ಮನೆಗೆ ಬಿಎಲ್‌ಓಗಳು ಹೋಗಬೇಕು. ಆದರೆ ಕಲ್ಯಾಣ ಮಂಟಪ, ಛತ್ರದಲ್ಲಿ ಜನರನ್ನು ಸೇರಿಸಿ ಎಸ್‌ಐಆರ್ ಮಾಡಲಾಗುತ್ತಿದೆ ಎಂದು ಬಿಜೆಪಿ ಮತ್ತು ಜೆಡಿಎಸ್ ನಾಯಕರು ಚುನಾವಣಾ ಆಯೋಗಕ್ಕೆ ದೂರು ನೀಡಿದ್ದಾರೆ. ಈ ದೂರನ್ನು ಗಂಭೀರವಾಗಿ ಪರಿಗಣಿಸಿರುವ ಕೇಂದ್ರ ಚುನಾವಣಾ ಆಯೋಗ ಹೊರ ರಾಜ್ಯದ ಅಧಿಕಾರಿಗಳನ್ನು ವೀಕ್ಷಕರನ್ನಾಗಿ ನೇಮಿಸಲು ಮುಂದಾಗಿದೆ ಎಂದು ಹೇಳಲಾಗಿದೆ.

ಮನೆಮನೆಗೆ ಭೇಟಿ ನೀಡದ ಸ್ಥಳೀಯ ನಾಯಕರ ಒತ್ತಡಕ್ಕೆ ಮಣಿದು ಕಲ್ಯಾಣ ಮಂಟಪ, ಛತ್ರಗಳಲ್ಲಿ ಎಸ್‌ಐಆರ್ ನಡೆಸಿದ ಬಿಎಲ್‌ಓಗಳ ವಿರುಧ ಕಠಿಣ ಕ್ರಮಕೈಗೊಳ್ಳಲು ಚರ್ಚೆ ನಡೆಸಿದೆ ಎಂದು ಹೇಳಲಾಗಿದೆ.

# ಚುನಾವಣೆಯಲ್ಲಿ ಸೋತಿರಬಹುದು, ಸತ್ತಿಲ್ಲ



**ಟಿಎಂಸಿ ತೊರೆದವರ ವಿರುದ್ಧ ಮಮತಾ ಬ್ಯಾನರ್ಜಿ ಕಿಡಿ**

**ಕೋಲ್ಕತ್ತ, ಜು.4:** ಪಶ್ಚಿಮ ಬಂಗಾಳದಲ್ಲಿ ಇತ್ತೀಚಿನ ರಾಜಕೀಯ ಕ್ರಾಂತಿಯ ನಂತರ, ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಶನಿವಾರ ಪಕ್ಷದ ಬಂಡಾಯ ನಾಯಕರ ಮೇಲೆ ತೀವ್ರ ದಾಳಿ ನಡೆಸಿದರು. ಪಕ್ಷದ ತೊರೆದವರನ್ನು ದೇಶ ದ್ರೋಹಿಗಳು ಎಂದು ಕರೆದಿದ್ದು ಅವರೆಲ್ಲಾ ಭಾರತೀಯ ಜನತಾ ಪಕ್ಷದ ಆದೇಶದ ಮೇರೆಗೆ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಮಮತಾ ಬ್ಯಾನರ್ಜಿ, 2026ರ ವಿಧಾನಸಭಾ ಚುನಾವಣೆಯಲ್ಲಿ ತೃಣಮೂಲ ಕಾಂಗ್ರೆಸ್ ಟಿಕೆಟ್‌ನಲ್ಲಿ ಸ್ಪರ್ಧಿಸಿದ ಬಂಡಾಯ ನಾಯಕರು ಕೆಲವೇ ತಿಂಗಳುಗಳಲ್ಲಿ ಪಕ್ಷದ ವಿರುದ್ಧ ಹೇಗೆ ತಿರುಗಬಹುದು ಎಂದು ಪ್ರಶ್ನಿಸಿದರು. ನಾನು ಚುನಾವಣೆಯಲ್ಲಿ ಸೋತಿರಬಹುದು ಆದರೆ ಸತ್ತಿಲ್ಲ ಎಂದು ಹೇಳಿದ್ದಾರೆ.

ಪಕ್ಷದೊಂದಿಗೆ ಉಳಿದಿರುವ ಪಕ್ಷದ ಸದಸ್ಯರಿಗೆ ನಾನು ನನ್ನ ಬೆಂಬಲ ಮತ್ತು ಕೃತಜ್ಞತೆಯನ್ನು ವ್ಯಕ್ತಪಡಿಸುತ್ತೇನೆ. ಕಳೆದ ಕೆಲವು ದಿನಗಳಿಂದ, ನನ್ನ ಸಹೋದ್ಯೋಗಿಗಳು ಮತ್ತು ಪಕ್ಷದ ವಕ್ತಾರರು ಸಾರ್ವಜನಿಕ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಆದರೆ ನಾನು ಮೌನವಾಗಿದ್ದೇನೆ. ಕೆಲವೊಮ್ಮೆ ಮೌನವು ಮಾತುಗಳಿಗಿಂತ ಜೋರಾಗಿ ಮಾತನಾಡುತ್ತದೆ. ಚುನಾವಣಾ ದುಷ್ಕೃತ್ಯಗಳ ಬಗ್ಗೆ ಬಿಜೆಪಿಯನ್ನು ಆರೋಪಿಸಿದ ಬ್ಯಾನರ್ಜಿ, ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಸಮಯದಲ್ಲಿ ಆಡಳಿತ ಪಕ್ಷವು ಮತಗಳನ್ನು ಕದ್ದಿದೆ ಎಂದು ಆರೋಪಿಸಿದರು. ಜನರಿಗಾಗಿ ಕೆಲಸ ಮಾಡುವ ಬದಲು, ಅವರು ತೊಂದರೆ ಮತ್ತು ಭೀತಿಯನ್ನು ಸೃಷ್ಟಿಸುತ್ತಿದ್ದಾರೆ. ನಮ್ಮ ಕಾರ್ಯಕರ್ತರ ವಿರುದ್ಧ ಸುಳ್ಳು ಮತ್ತು ಆಧಾರರಹಿತ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ ಎಂದು ಅವರು ಆರೋಪಿಸಿದರು.

ಪಕ್ಷದ ಚುನಾವಣಾ ಚಿಹ್ನೆಯನ್ನು ಒದಗಿಸಿದವಳು ನಾನು. 2026ರ ಚುನಾವಣೆಗೆ ನಿಮ್ಮ ನಾಮಪತ್ರಗಳಿಗೆ ಸಹಿ ಹಾಕಿದವಳು ನಾನು. ಚುನಾವಣೆಯ ಎರಡು ತಿಂಗಳೊಳಗೆ ನೀವು ಹೇಗೆ ದೇಶದ್ರೋಹಿಗಳಾದಿರಿ? ಇದಕ್ಕೆ ಒಂದು ಮಿತಿ ಇದೆ ಎಂದು ಹೇಳಿದರು. ಬಂಡಾಯ ನಾಯಕರು ಬಿಜೆಪಿಯ ಹಿತಾಸಕ್ತಿಗಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದ ಬ್ಯಾನರ್ಜಿ, ಆ ದೇಶದ್ರೋಹಿಗಳು ಬಿಜೆಪಿಯ ಇಚ್ಛೆಯಂತೆ ಕೆಲಸ ಮಾಡುತ್ತಿದ್ದಾರೆ. ನಾನು ಅವರಿಗೆ ನೇರವಾಗಿ ಬಿಜೆಪಿಗೆ ಹೋಗಿ ಸೇರಲು ಹೇಳುತ್ತೇನೆ. ಟಿಎಂಸಿಯ ಸಿದ್ಧಾಂತ ಬಿಜೆಪಿ ವಿರೋಧಿಯಾಗಿದೆ ಎಂದು ಅವರು ಹೇಳಿದರು. ನೆನಪಿಡಿ, ನಾನು ಇನ್ನೂ ಜೀವಂತವಾಗಿದ್ದೇನೆ ಎಂದು ಅವರು ಹೇಳಿದರು.

# ಪಾಕ್‌ನ 23 ಮಂದಿ ಕಾರ್ಯಕರ್ತರು ಉಗ್ರರು: ಭಾರತ ಸರ್ಕಾರ ಘೋಷಣೆ

**ನವದೆಹಲಿ, ಜು.4:** ಜೈಶ್–ಎ–ಮೊಹಮ್ಮದ್, ಲಷ್ಕರ್–ಎ–ತೊಯ್ಬಾ ಹಾಗೂ ಇತರ ಉಗ್ರ ಸಂಘಟನೆಗಳಿಗೆ ಸೇರಿದ 24 ಭಯೋತ್ಪಾಕರ ಕಾರ್ಯಕರ್ತರನ್ನು ಕಾನೂನುಬಾಹಿರ ಚಟುವಟಿಕೆಗಳ (ತಡೆ) ಕಾಯ್ದೆ (ಯುಎಪಿಎ) ಅಡಿಯಲ್ಲಿ "ಭಯೋತ್ಪಾದಕರು" ಎಂದು ಕೇಂದ್ರ ಸರ್ಕಾರ ಅಧಿಕೃತ ಆದೇಶದ ಮೂಲಕ ಘೋಷಿಸಿದೆ.

ಯುಎಪಿಎ ಕಾಯ್ದೆಯಡಿ, ಯಾವುದೇ ವ್ಯಕ್ತಿ ಭಯೋತ್ಪಾದಕ ಚಟುವಟಿಕೆಗಳಲ್ಲಿ ತೊಡಗಿದ್ದಾನೆ ಎಂದು ಕೇಂದ್ರ ಸರ್ಕಾರಕ್ಕೆ ನಂಬಿಕೆ ಬಂದರೆ, ಆತನನ್ನು ಭಯೋತ್ಪಾದಕ ಎಂದು ಘೋಷಿಸುವ ಅಧಿಕಾರವಿದೆ. ಈ ಘೋಷಣೆಯ ಬಳಿಕ ರಾಷ್ಟ್ರೀಯ ತನಿಖಾ ಸಂಸ್ಥೆ (ಓಐಂ) ಸೇರಿದಂತೆ ತನಿಖಾ ಸಂಸ್ಥೆಗಳು ಅವರ ಆಸ್ತಿಗಳನ್ನು ಸ್ಥಗಿತಗೊಳಿಸುವುದು, ಹಣಕಾಸಿನ ಮೂಲಗಳನ್ನು ನಿರ್ಬಂಧಿಸುವುದು, ಶಸ್ತ್ರಾಸ್ತ್ರಗಳಿಗೆ ಪ್ರವೇಶವನ್ನು ತಡೆಯುವುದು ಹಾಗೂ ಅವರಿಗೆ ಸಂಬಂಧಿಸಿದ ಆಸ್ತಿಗಳನ್ನು ವಶಪಡಿಸಿಕೊಳ್ಳುವ ಕ್ರಮ ಕೈಗೊಳ್ಳಬಹುದು.

ವ್ಯಕ್ತಿಗಳನ್ನು ಭಯೋತ್ಪಾದಕರ ಪಟ್ಟಿಗೆ ಸೇರಿಸುವ ಅವಕಾಶವನ್ನು 2019ರಲ್ಲಿ ಯುಎಪಿಎಗೆ ಮಾಡಲಾದ ತಿದ್ದುಪಡಿಯ ಮೂಲಕ ಸೇರಿಸಲಾಗಿತ್ತು. ಅದಕ್ಕೂ ಮೊದಲು ಕೇವಲ ಸಂಘಟನೆಗಳನ್ನು ಮಾತ್ರ ಭಯೋತ್ಪಾದಕ ಸಂಘಟನೆಗಳೆಂದು ಘೋಷಿಸಲು ಅವಕಾಶವಿತ್ತು.

ಈ ಹೊಸ ಸೇರ್ಪಡೆಯೊಂದಿಗೆ, ದೇಶದಲ್ಲಿ ಭಯೋತ್ಪಾದಕರೆಂದು ಘೋಷಿಸಲಾದ ವ್ಯಕ್ತಿಗಳ ಸಂಖ್ಯೆ 80ಕ್ಕೆ ಏರಿಕೆಯಾಗಿದೆ. ಭಯೋತ್ಪಾದಕರ ಪಟ್ಟಿಗೆ ಸೇರಿಸಲಾದವರಲ್ಲಿ ಜೈಶ್–ಎ–ಮೊಹಮ್ಮದ್ ಸಂಘಟನೆಗೆ ಸಂಬಂಧಿಸಿದ ಮಸೂದ್ ಇಲ್ಯಾಸ್ ಕಾಶ್ಮೀರಿ, ಮೊಹಮ್ಮದ್ ಮುಸ್ಸಾದಿಕ್ ಅಲಿಯಾಸ್ ಡಾಕ್ಟರ್, ಮುಫ್ತಿ ಮುಹಮ್ಮದ್ ಅಸ್ಗರ್ ಖಾನ್ ಅಲಿಯಾಸ್ ಅಬು ಸಾದ್, ಹಫೀಜ್ ಅಬ್ದುಲ್ ಶಕೂರ್ ಅಲಿಯಾಸ್ ಖಾರಿ ಜರ್‍ರಾರ್, ಅಬ್ದುಲ್ಲಾ ಜೆಹಾದಿ, ಗುಲಾಂ ಫರೀದ್, ಮೌಲಾನಾ ಇಮ್ದಾದ್ ಉಲ್ಲಾ ಮಕ್ಕಿ ಹಾಗೂ ವಸೀಂ ನೂರ್ ಜಾಟ್ ಸೇರಿದ್ದಾರೆ.

# ಒಂದು ವಾರ ಮಳೆ ಮುಂದುವರಿದರೆ ರೈತರ ಆತಂಕ ದೂರವಾಗಲಿದೆ



**ಜಲಾಶಯಗಳಿಗೆ ಒಳಹರಿವು ಹೆಚ್ಚಳ: ಸಚಿವ ಸತೀಶ್ ಜಾರಕಿಹೊಳಿ**

**ಬೆಳಗಾವಿ, ಜು.4:** ಜಿಲ್ಲೆಯಲ್ಲಿ ಕಳೆದ ಮೂರು ದಿನಗಳಿಂದ ಸುರಿಯುತ್ತಿದ್ದು, ಹೀಗೆ ಒಂದು ವಾರ ಮುಂದುವರಿದರೆ ಜನರು ಹಾಗೂ ರೈತರ ಆತಂಕ ದೂರವಾಗಲಿದೆ ಜತೆಗೆ ನಾಲ್ಕೈದು ತಿಂಗಳಿಗೆ ಬೇಕಾಗುವಷ್ಟು ನೀರು ಜಲಾಶಯಗಳಲ್ಲಿ ಸಂಗ್ರಹವಾಗಲಿದೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದ್ದಾರೆ.

ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕುಡಿಯುವ ಉದ್ದೇಶಕ್ಕಾಗಿ ಈಗಾಗಲೇ ಜಲಾಶಯಗಳಲ್ಲಿ ನೀರು ಸಂಗ್ರಹಿಸಿ ಇರಿಸಿದ್ದೆವು. ಆದರೆ, ಶುಕ್ರವಾರದಿಂದ ಜಲಾಶಯಗಳಿಗೆ ಹೊಸ ನೀರು ಬರಲು ಆರಂಭವಾಗಿದೆ. ಭಾನುವಾರ, ಸೋಮವಾರವೂ ಡ್ಯಾಂಗಳಿಗೆ ಹರಿದುಬರುವ ನೀರಿನ ಪ್ರಮಾಣ ಹೆಚ್ಚಲಿದೆ. ಇನ್ನೂ 3–4 ದಿನ ಉತ್ತಮ ಮಳೆಯಾಗಬಹುದೆಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇಷ್ಟು ಮಳೆಯಾದರೆ ಸಮಸ್ಯೆಯಿಂದ ಹೊರಬರುತ್ತೇವೆ ಎಂದರು.

ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ವಾಡಿಕೆಗಿಂತ ಶೇ.29ರಷ್ಟು ಮಳೆ ಕೊರತೆಯಾಗಿದ್ದು, ಆತಂಕಪಡುವ ಪರಿಸ್ಥಿತಿ ಇಲ್ಲ' ಎಂದು ತಿಳಿಸಿದರು.

ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆಯಾಗುತ್ತಿರುವುದರಿಂದ ರಕ್ಕಸಕೊಪ್ಪ ಜಲಾಶಯಕ್ಕೂ ಒಳಹರಿವು ಆರಂಭವಾಗಿದೆ. ವರುಣ ಕೈಹಿಡಿದರೆ ಒಂದು ವಾರದಲ್ಲಿ ಅದು ಭರ್ತಿಯಾಗುವ ಸಾಧ್ಯತೆ ಇದೆ. ಇದರಿಂದ ಬೆಳಗಾವಿಗರ ಕುಡಿಯುವ ನೀರಿಗೆ ಪರದಾಡುವುದು ತಪ್ಪಲಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಶೇ.80ರಷ್ಟು ಬಿತ್ತನೆ ಪ್ರಕ್ರಿಯೆ ನಡೆದಿದೆ. ಈಗ ಸುರಿಯುತ್ತಿರುವ ಮಳೆಯಿಂದ ಕೃಷಿ ಬೆಳೆಗಳಿಗೆ ಅನುಕೂಲವಾಗಲಿದೆ. ರಾಮದುರ್ಗ, ಸವದತ್ತಿಯಲ್ಲಿ ಮಳೆಯಾಗದೆ ಬೆಳೆ ಒಣಗುತ್ತಿವೆ ಎಂಬ ಸುದ್ದಿಗಾರರ ಮಾತಿಗೆ ಉತ್ತರಿಸಿದ ಜಾರಕಿಹೊಳಿ, ಈ ವಾರ ಆ ಭಾಗದಲ್ಲೂ ಉತ್ತಮ ಮಳೆಯಾಗಬಹುದು ಎಂದು ನಿರೀಕ್ಷಿಸಿದ್ದೇವೆ. ಒಂದುವೇಳೆ ಮಳೆಯೇ ಆಗದಿದ್ದರೆ ಸರ್ಕಾರದ ಹಂತದಲ್ಲಿ ಚರ್ಚಿಸಿ, ಸರ್ವೆಗೆ ಕ್ರಮ ವಹಿಸುತ್ತೇವೆ. ಆದರೆ, ಈಗಲೇ ಸರ್ವೆ ಮಾಡುವ ಸ್ಥಿತಿ ಇಲ್ಲ ಎಂದರು.

ಹಾವೇರಿಯಲ್ಲಿ ಶಾಸಕ ಪ್ರಕಾಶ ಕೋಳಿವಾಡ ಅವರು, ಮೋಡ ಬಿತ್ತನೆಗೆ ತಯಾರಿ ನಡೆಸಿದ್ದಾರೆ. ಆದರೆ, ಬೆಳಗಾವಿ ಜಿಲ್ಲೆಯಲ್ಲಿ ಉತ್ತಮ ಮಳೆ ಸುರಿಯುತ್ತಿದೆ. ಹಾವೇರಿಯಂಥ ಪರಿಸ್ಥಿತಿ ಇಲ್ಲಿ ಎದುರಾದರೆ ಮಾತ್ರ, ಮೋಡ ಬಿತ್ತನೆ ಬಗ್ಗೆ ಯೋಜಿಸುತ್ತೇವೆ' ಎಂದು ಹೇಳಿದರು.'ಶೀಘ್ರ ಸಂಪುಟ ವಿಸ್ತರಣೆ ಆಗುತ್ತದೆ. ಜಿಲ್ಲೆಯ ಯಾವ ಶಾಸಕರಿಗೆ ಮಂತ್ರಿ ಸ್ಥಾನ ಕೊಡಬೇಕು ಎಂಬುದು ಪಕ್ಷದ ಹೈಕಮಾಂಡ್ಗೆ ಬಿಟ್ಟ ವಿಚಾರ. ಸಂಪುಟದಲ್ಲಿ 20 ಸ್ಥಾನ ಖಾಲಿ ಇವೆ. ವಿವಿಧ ಇಲಾಖೆಗಳಿಗೆ ಸಚಿವರ ಅವಶ್ಯಕತೆ ಇದೆ' ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.'ಸುಪ್ರೀಂ ಕೋರ್ಟ್ ನಿರ್ದೇಶನದಂತೆ, ಬೆಳಗಾವಿಯ ಫುಟ್ಪಾತ್ ಅತಿಕ್ರಮಣ ತೆರವು ಪ್ರಕ್ರಿಯೆ ನಡೆದಿದೆ. ತೆರವಿಗೆ ಮುನ್ನ ಸಂಬಂಧಿತರಿಗೆ ನೋಟಿಸು ಕೊಡುವಂತೆ ಅಧಿಕಾರಿಗಳಿಗೆ ತಿಳಿಸುತ್ತೇವೆ' ಎಂದು ಜಾರಕಿಹೊಳಿ ತಿಳಿಸಿದರು.

# ಮೆಲ್ಬೋರ್ನ್ ಭೇಟಿಗೂ ಮುನ್ನ ಪ್ರಧಾನಿ ಮೋದಿಗೆ ಪ್ರಾಣ ಬೆದರಿಕೆ



- **ಆಸ್ಟ್ರೇಲಿಯಾ ಪೊಲೀಸರಿಂದ ತನಿಖೆ**
- **ಬೆದರಿಕೆ ಹಾಕಿದ ಆರೋಪಿಯ ಐಪಿ ವಿಳಾಸ ಪತ್ತೆ**

**ನವದೆಹಲಿ, ಜು.4:** ಮೆಲ್ಬೋರ್ನ್ ಭೇಟಿಗೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಆನ್‌ಲೈನ್ ಮೂಲಕ ಕೊಲೆ ಬೆದರಿಕೆ ಹಾಕಲಾಗಿದ್ದು, ಈ ಸಂಬಂಧ ಆಸ್ಟ್ರೇಲಿಯಾ ಪೊಲೀಸರು ತನಿಖೆ ನಡೆಸುತ್ತಿದ್ದಾರೆ ಎಂದು ಶನಿವಾರ ವರದಿಯಾಗಿದೆ.

ವರದಿ ಪ್ರಕಾರ ಜುಲೈ 9 ರಂದು ಮಾರ್ವೆಲ್ ಕ್ರೀಡಾಂಗಣದಲ್ಲಿ ನಡೆಯಲಿರುವ "ಮೆಲ್ಬೋರ್ನ್ ನೀಡ್ಸ್ ಮೋದಿ" ಎಂಬ ಕಾರ್ಯಕ್ರಮವನ್ನು ಪ್ರಚಾರ ಮಾಡುವ ಫೇಸ್‌ಬುಕ್ ಪೋಸ್ಟ್‌ನ ಪ್ರತಿಕ್ರಿಯೆಗಳ ವಿಭಾಗದಲ್ಲಿ ಮೋದಿಗೆ ಕೊಲೆ ಬೆದರಿಕೆಯ ಪೋಸ್ಟ್ ಮಾಡಲಾಗಿದೆ. ಈ ಕಾಮೆಂಟ್ ಅನ್ನು ಅಬು ಮುಸ್ತಫಾ ಎಂಬ ಹೆಸರಿನ ಖಾತೆಯಿಂದ ಪೋಸ್ಟ್ ಮಾಡಲಾಗಿದೆ.

ಆರೋಪಿ ತನ್ನ ಪ್ರತಿಕ್ರಿಯೆಯಲ್ಲಿ ಈ ಕಾರ್ಯಕ್ರಮದ ಸಮಯದಲ್ಲಿ ಕ್ರೀಡಾಂಗಣದ ಛಾವಣಿ ಮುಚ್ಚುವುದು ಉತ್ತಮ, ಇಲ್ಲದಿದ್ದರೆ ಮೋದಿ ಅವರು ಸಾಯುವುದಕ್ಕಾಗಿಯೇ ಆಸ್ಟ್ರೇಲಿಯಾಗೆ ಬಂದಂತಾಗುತ್ತದೆ ಎಂದು ಎಚ್ಚರಿಸಿದ್ದಾನೆ. ತಕ್ಷಣ ಎಚ್ಚೆತ್ತ ಕಾರ್ಯಕ್ರಮದ ಸಂಘಟಕರು ಕಮೆಂಟ್ ಬಗ್ಗೆ ಆಸ್ಟ್ರೇಲಿಯನ್ ಫೆಡರಲ್ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಅಧಿಕಾರಿಗಳು ಕೊಲೆ ಬೆದರಿಕೆ ಪ್ರತಿಕ್ರಿಯೆ ಹಾಕಿದ ಆರೋಪಿಯ ಸಾಮಾಜಿಕ ಐಪಿ ವಿಳಾಸವನ್ನು ಪತ್ತೆಹಚ್ಚಿದ್ದಾರೆ ಎಂದು ವರದಿಗಳು ತಿಳಿಸಿವೆ.

ಇನ್ನೂ ತನಿಖೆಯ ಬಗ್ಗೆ ಆಸ್ಟ್ರೇಲಿಯಾದ ಫೆಡರಲ್ ಪೊಲೀಸರು ಸಾರ್ವಜನಿಕವಾಗಿ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಆರೋಪಿಗೆ ಸಂಬಂಧಿಸಿದ ಐಪಿ ವಿಳಾಸವನ್ನು ಗುರುತಿಸಿದ್ದಾರೆ. ಮತ್ತು ಸಂದೇಶದ ಸುತ್ತಲಿನ ಸಂದರ್ಭಗಳನ್ನು ಪರಿಶೀಲಿಸುತ್ತಿದ್ದಾರೆ ಎನ್ನಲಾಗಿದೆ.

# ಬಹುತೇಕ ಜುಲೈ 10ರಂದು ಸಚಿವ ಸಂಪುಟ ವಿಸ್ತರಣೆ ಸಾಧ್ಯತೆ?

- **ವಿದೇಶ ಪ್ರವಾಸದಿಂದ ಜು.6ರಂದು ರಾಹುಲ್ ವಾಪಸ್**

**ಬೆಂಗಳೂರು, ಜು.4:** ಬಹುನಿರೀಕ್ಷಿತ ಸಚಿವ ಸಂಪುಟ ವಿಸ್ತರಣೆ ಅಷಾಢ ಮಾಸಕ್ಕೂ ಮುನ್ನ ಅಂದರೆ ಬಹುತೇಕ ಜುಲೈ 10ರಂದು ನಡೆಯುವ ಸಾಧ್ಯತೆಯಿದ್ದು, ಇದಕ್ಕಾಗಿ ಲಾಬಿ ತೀವ್ರಗೊಂಡಿದೆ. ಮತ್ತೊಂದೆಡೆ ಸಂಪುಟಕ್ಕೆ ಯಾರನ್ನು ಸೇರ್ಪಡೆ ಮಾಡಿಕೊಳ್ಳಬೇಕೆನ್ನುವ ಕುರಿತ ಪ್ರಕ್ರಿಯೆಗಳು ಚುರುಕುಗೊಂಡಿವೆ.

ಜುಲೈ 14ರಿಂದ ಆಗಸ್ಟ್ 12ರ ವರೆಗೆ ಆಷಾಢ ಮಾಸವಾಗಿದ್ದು, ಅದಕ್ಕೂ ಮುನ್ನ ಈ ಪ್ರಕ್ರಿಯೆ ನಡೆಯುವ ನಿರೀಕ್ಷೆಯಿದೆ. ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಅಂಗವಾಗಿ ಬಿಎಲ್‌ಓ ಮತ್ತು ಬಿಎಲ್‌ಎಗಳು ಈ ತಿಂಗಳ ಅಂತ್ಯದವರೆಗೂ ಮನೆ ಮನೆಗೆ ಭೇಟಿ ನೀಡಲಿದ್ದಾರೆ. ಅದಕ್ಕಾಗಿ ಎಲ್ಲಾ ಸಚಿವರು, ಶಾಸಕರು ತಮ ಕ್ಷೇತ್ರಗಳಲ್ಲೇ ಇರಬೇಕು ಎಂದು ಸೂಚನೆ ನೀಡಲಾಗಿದೆ. ಎಸ್‌ಐಆರ್ ಕಾರಣಕ್ಕಾಗಿ ವಿಧಾನಮಂಡಲದ ಅಧಿವೇಶನವನ್ನು ಮುಂದೂಡಲಾಗಿದೆ. ಚುನಾವಣಾ ಆಯೋಗ ಆಗಸ್ಟ್ 5ರಂದು ಮತದಾರರ ಕರಡು ಪಟ್ಟಿಯನ್ನು ಪ್ರಕಟಿಸಲಿದೆ. ಅನಂತರ ಮಳೆಗಾಲದ ವಿಧಾನಮಂಡಲ ಅಧಿವೇಶನ ಸಮಾವೇಶಗೊಳ್ಳುವ ಸಾಧ್ಯತೆ ಇದೆ.

ಅಧಿವೇಶನಕ್ಕೂ ಮುನ್ನವೇ ಪರಿಪೂರ್ಣ ಸಂಪುಟ ರಚನೆಯಾಗಬೇಕಿದೆ. ಆಗಸ್ಟ್ 15ಕ್ಕೆ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಎಲ್ಲಾ ಜಿಲ್ಲೆಗಳಲ್ಲಿಯೂ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಬೇಕಿದೆ. ಅದಕ್ಕೂ ಮುನ್ನವೇ ಸಂಪುಟ ಪುನರ್ ರಚನೆಯಾಗುವ ಅನಿವಾರ್ಯತೆ ಇದೆ.

ಸಂಪುಟ ವಿಸ್ತರಣೆಯಾಗಲಿದೆ ಎಂಬ ಸುಳಿವು ದೊರೆಯುತ್ತಿದ್ದಂತೆ ಆಕಾಂಕ್ಷಿಗಳು ಲಾಬಿ ತೀವ್ರಗೊಳಿಸಿದ್ದಾರೆ. ನಿನ್ನೆ ಸಚಿವ ಸ್ಥಾನದ ಆಕಾಂಕ್ಷಿಗಳಾಗಿರುವ ಪಿ.ಎಂ. ಅಶೋಕ್, ಎ.ಎಸ್. ಪೊನ್ನಣ್ಣ, ಕೆ.ಎನ್.ರಾಜಣ್ಣ, ಎಂ.ಆರ್. ಸೀತಾರಾಮ್ ಮತ್ತಿತರರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಮಾಡಿ ತಮಗೆ ಸಂಪುಟದಲ್ಲಿ ಸ್ಥಾನ ದೊರಕಿಸಿಕೊಡುವಂತೆ ಒತ್ತಡ ಹೇರಿದ್ದಾರೆ.

ಇತ್ತ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದ್ದಾರೆ. ಒಂದೆಡೆ ಮುಖಂಡರು ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆಗೆ ತಯಾರಿ ಮಾಡಿಕೊಳ್ಳುತ್ತಿದ್ದರೆ, ಮತ್ತೊಂದು ಕಡೆ ಆಕಾಂಕ್ಷಿಗಳು ಹಿರಿಯ ನಾಯಕರ ಬೆನ್ನಿಗೆ ಬಿದ್ದು ಅವಕಾಶಕ್ಕಾಗಿ ಒತ್ತಡ ಹೇರುತ್ತಿದ್ದಾರೆ.

ಲೋಕಸಭೆಯ ವಿರೋಧ ಪಕ್ಷ ನಾಯಕ ರಾಹುಲ್ ಗಾಂಧಿ, ಜುಲೈ 6ರಂದು ಐರ್ಲೆಂಡ್ ಪ್ರವಾಸದಿಂದ ಮರಳುವ ಸಾಧ್ಯತೆ ಇದೆ. ಜುಲೈ 7 ಅಥವಾ 8ರಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ದೆಹಲಿಗೆ ತೆರಳುವ ಸಾಧ್ಯತೆಯಿದ್ದು, ಸಂಪುಟ ವಿಸ್ತರಣೆ ಬಗ್ಗೆ ಚರ್ಚೆ ನಡೆಸಲಿದ್ದಾರೆ ಎಂದು ಹೇಳಲಾಗಿದೆ.

ಹೈಕಮಾಂಡ್ ಸಮ್ಮತಿ ನೀಡಿದರೆ ಜುಲೈ 12ರ ರೊಳಗೆ ಸಂಪುಟ ವಿಸ್ತರಣೆಯಾಗುವುದು ಬಹುತೇಕ ಖಚಿತವಾಗಿದೆ. ಮೂಲಗಳ ಪ್ರಕಾರ ಜುಲೈ 10 ರಂದು ಶುಕ್ರವಾರ ಸಂಪುಟ ವಿಸ್ತರಣೆಗೆ ಮುಹೂರ್ತ ನಿಗದಿಯಾಗಿದೆ ಎನ್ನಲಾಗಿದೆ.

# ಸಚಿವ ಸಂಪುಟ ವಿಸ್ತರಣೆ: ಸೂಕ್ತ ಸಮಯದಲ್ಲಿ ಹೈಕಮಾಂಡ್ ನಿರ್ಧಾರ



**ಕಾರವಾರ, ಜು.4:** ಸಚಿವ ಸಂಪುಟ ವಿಸ್ತರಣೆಯಕಸರತ್ತಿನ ನಡುವೆಯೇ, ಪ್ರಸ್ತುತ ಸನ್ನಿವೇಶದ ಕುರಿತು ಆರೋಗ್ಯ ಸಚಿವರಾದ ಯು.ಟಿ.ಖಾದರ್ ಪ್ರತಿಕ್ರಿಯೆ ನೀಡಿದ್ದಾರೆ. ಕಾರವಾರದಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಮತ್ತು ಕಾಂಗ್ರೆಸ್ ಹೈಕಮಾಂಡ್ ನಾಯಕರು ಸಚಿವ ಸಂಪುಟ ವಿಸ್ತರಣೆ ಕುರಿತು ಸೂಕ್ತ ಸಮಯದಲ್ಲಿ ಅಂತಿಮ ತೀರ್ಮಾನ ಕೈಗೊಳ್ಳಲಿದ್ದಾರೆ ಎಂದು ಸ್ಪಷ್ಟಪಡಿಸಿದರು. ಸದ್ಯ ರಾಜ್ಯದಲ್ಲಿ ಖಾಲಿ ಇರುವ ಸ್ಥಾನಗಳ ಕಾರಣ ದಿಂದಾಗಿ ಕೇವಲ 14 ಸಚಿವರೇ ಒಟ್ಟು 34 ಸಚಿವರು ಮಾಡಬೇಕಾದ ಕೆಲಸವನ್ನು ಜವಾಬ್ದಾರಿ ಯಿಂದ ನಿಭಾಯಿಸುತ್ತಿದ್ದಾರೆ. ಹೀಗಾಗಿ ಸಂಪುಟ ವಿಸ್ತರಣೆ ಪ್ರಕ್ರಿಯೆ ಕೊಂಚ ತಡವಾಗು ತ್ತಿರುವುದಕ್ಕೆ ತಮಗಾಗಲಿ ಅಥವಾ ಪಕ್ಷಕ್ಕಾಗಲಿ ಬೇಸರವಿಲ್ಲ ಎಂದು ತಿಳಿಸಿದರು.

ರಾಜ್ಯ ಕಾಂಗ್ರೆಸ್‌ನಲ್ಲಿ ಭಿನ್ನಮತವಿದೆ ಎಂಬ ವದಂತಿಗಳನ್ನು ತಳ್ಳಿಹಾಕಿದ ಖಾದರ್, ಪಕ್ಷದ ಎಲ್ಲಾ ಶಾಸಕರು ಒಗ್ಗಟ್ಟಾಗಿದ್ದಾರೆ ಎಂದರು. ಒಂದು ಸರ್ಕಾರದಲ್ಲಿ ಇರುವ ಎಲ್ಲಾ ಶಾಸಕರನ್ನೂ ಸಚಿವರನ್ನಾಗಿ ಮಾಡಲು ಯಾವುದೇ ಕಾರಣಕ್ಕೂ ಸಾಧ್ಯವಾಗುವುದಿಲ್ಲ. ಪಕ್ಷದ ಹಿರಿಯರು ಜಾತಿ ಮತ್ತು ಪ್ರಾದೇಶಿಕ ಪ್ರಾತಿನಿಧ್ಯವನ್ನು (ಪ್ರದೇಶವಾರು) ಅತ್ಯಂತ ಸೂಕ್ಷ್ಮವಾಗಿ ಗಮನಿಸಿ, ಅದಕ್ಕೆ ತಕ್ಕಂತೆ ಅರ್ಹರನ್ನು ಸಚಿವರನ್ನಾಗಿ ಆಯ್ಕೆ ಮಾಡಲಿದ್ದಾರೆ ಎಂದರು.

ಮುಂಬರುವ ಎರಡು ವರ್ಷಗಳ ಕಾಲ ಮುಖ್ಯಮಂತ್ರಿಗಳ ಸಮರ್ಥ ನೇತೃತ್ವದಲ್ಲೇ ನಾವೆಲ್ಲರೂ ಒಟ್ಟಾಗಿ ರಾಜ್ಯದ ಜನತೆಗೆ ಅತ್ಯಂತ ಉತ್ತಮ ಹಾಗೂ ಜನಪರ ಆಡಳಿತವನ್ನು ನೀಡಲಿದ್ದೇವೆ ಎಂದು ಯು.ಟಿ.ಖಾದರ್ ಅವರು ವಿಶ್ವಾಸ ವ್ಯಕ್ತಪಡಿಸಿದರು.

# ಎಥೆನಾಲ್ ಮಿಶ್ರಿತ ಪೆಟ್ರೋಲ್‌ನಿಂದ ವಾಹನದ ಕಾರ್ಯಕ್ಷಮತೆ, ಮೈಲೇಜ್, ಬಾಳಿಕೆ ಮೇಲೆ ಪರಿಣಾಮ

**ಕೇಂದ್ರ ಸರ್ಕಾರದ ನಡೆ ಪ್ರಶ್ನಿಸಿದ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್**



**ನವದೆಹಲಿ, ಜು.4:** ಶೇ.20ರಷ್ಟು ಎಥೆನಾಲ್ ಮಿಶ್ರಿತ ಪೆಟ್ರೋಲ್ ಪರಿಚಯಿಸುವ ಬಗ್ಗೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದ್ದಾರೆ. ಇದು ವಾಹನ ಸ್ಥಗಿತಕ್ಕೆ ಕಾರಣವಾಗುತ್ತಿದೆ, ಮೈಲೇಜ್ ಕಡಿಮೆ ಮಾಡುತ್ತಿದೆ ಮತ್ತು ಗ್ರಾಹಕರಿಗೆ ನಿರ್ವಹಣಾ ವೆಚ್ಚವನ್ನು ಹೆಚ್ಚಿಸುತ್ತಿದೆ ಎಂದಿದ್ದಾರೆ.

ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಅವರು, ಇ20 ಇಂಧನ ಬಿಡುಗಡೆಯಾದ ನಂತರ ದೇಶದಾದ್ಯಂತ ವಾಹನ ಚಾಲಕರು ವ್ಯಾಪಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಶೇ.20ರಷ್ಟು ಎಥೆನಾಲ್ ಮಿಶ್ರಿತ ಪೆಟ್ರೋಲ್ ಪರಿಚಯಿಸಿದ ನಂತರ ವಾಹನಗಳು ಹಾಳಾಗುತ್ತಿವೆ ಮತ್ತು ಮೈಲೇಜ್‌ನಲ್ಲಿ ತೀವ್ರ ಕುಸಿತವಾಗಿದೆ ಎಂಬ ವ್ಯಾಪಕ ವರದಿಗಳು ಲೆಕ್ಕವಿಲ್ಲದಷ್ಟು ವಾಹನ ಮಾಲೀಕರನ್ನು ನಿರಾಶೆಗೊಳಿಸುತ್ತಿವೆ ಮತ್ತು ಹೆಚ್ಚಿನ ನಿರ್ವಹಣಾ ವೆಚ್ಚದ ಹೊರೆಯನ್ನು ಎದುರಿಸುತ್ತಿವೆ' ಎಂದಿದ್ದಾರೆ.

ಇಂಧನ ಬೆಲೆಗಳನ್ನು ಕಡಿಮೆ ಮಾಡುವ ಬದಲು, ನರೇಂದ್ರ ಮೋದಿ ಸರ್ಕಾರವು ಎಥೆನಾಲ್ ಮಿಶ್ರಣವನ್ನು ಹೆಚ್ಚಿಸಿ, ಅದರ ವೆಚ್ಚದ ಹೊರೆಯನ್ನು ಸಾಮಾನ್ಯ ನಾಗರಿಕರ ಮೇಲೆ ಹೊರಿಸಿದೆ. ಕಡಿಮೆ ಮೈಲೇಜ್ ಮತ್ತು ದುರಸ್ತಿ ವೆಚ್ಚಗಳ ಹೊರತಾಗಿಯೂ ಜನರು ಇಂಧನಕ್ಕಾಗಿ ಅದೇ ಅಥವಾ ಅದಕ್ಕಿಂತ ಹೆಚ್ಚಿನ ಬೆಲೆಯನ್ನು ಪಾವತಿಸುತ್ತಿದ್ದಾರೆ. ಈ ಗಂಭೀರ ಪ್ರಶ್ನೆಗಳಿಗೆ ಉತ್ತರ ಸಿಗಲೇಬೇಕು. ಇದೊಂದು ಹಗರಣ' ಎಂದು ಹರಿಪ್ರಸಾದ್ ಆರೋಪಿಸಿದರು.




ಎಥೆನಾಲ್ ಮಿಶ್ರಣ ಮಾಡುವ ಈ ಪ್ರಯೋಗವು ಪಾರದರ್ಶಕತೆ, ವೈಜ್ಞಾನಿಕ ಪುರಾವೆಗಳು ಮತ್ತು ಗ್ರಾಹಕ ರಕ್ಷಣೆಯ ಬೆಂಬಲದೊಂದಿಗೆ ನಡೆಯಬೇಕು. ಬದಲಿಗೆ ಲಕ್ಷಾಂತರ ವಾಹನ ಚಾಲಕರ ವೆಚ್ಚದಲ್ಲಿ ಅಲ್ಲ. ಶೇ 20ರಷ್ಟು ಎಥೆನಾಲ್ ಮಿಶ್ರಣವಾಗಿದ್ದರೂ, ಇಂಧನ ಬೆಲೆಗಳು ಏಕೆ ಕಡಿಮೆಯಾಗಿಲ್ಲ ಎಂಬುದನ್ನು ಬಿಜೆಪಿ ಸರ್ಕಾರ ವಿವರಿಸಬೇಕು ಮತ್ತು ವಾಹನ ಬಳಕೆದಾರರ ಹೆಚ್ಚುತ್ತಿರುವ ಕಳವಳಗಳನ್ನು ಪರಿಹರಿಸಬೇಕು' ಎಂದು ಅವರು ಹೇಳಿದರು.

**ಇ20 ಬಲವಂತ ಹೇರಿಕೆ: ಕೇಜ್ರಿವಾಲ್ ವಾಗ್ದಾಳಿ**

ಇದಕ್ಕೂ ಮೊದಲು, ಆಮ್ ಆದ್ಮಿ ಪಕ್ಷದ (ಎಎಪಿ) ರಾಷ್ಟ್ರೀಯ ಸಂಚಾಲಕ ಅರವಿಂದ ಕೇಜ್ರಿವಾಲ್ ಕೂಡ, ಕೇಂದ್ರವು ಜನರ ಮೇಲೆ ಬಲವಂತವಾಗಿ ಇ20 ಪೆಟ್ರೋಲ್ ಹೇರುತ್ತಿದೆ. ಇದು ವಾಹನಗಳಿಗೆ ಹಾನಿಯನ್ನುಂಟುಮಾಡುತ್ತಿದೆ ಮತ್ತು ಇಂಧನ ದಕ್ಷತೆಯನ್ನು ಕಡಿಮೆ ಮಾಡುತ್ತಿದೆ ಎಂದು ದೂರಿದ್ದರು. ತಮ್ಮ ಎಕ್ಸ್‌ನಲ್ಲಿ ವಿಡಿಯೋ ಪೋಸ್ಟ್ ಹಂಚಿಕೊಂಡ ಕೇಜ್ರಿವಾಲ್, 'ಇಡೀ ದೇಶವು ಮೋದಿ ಸರ್ಕಾರಕ್ಕೆ ಪ್ರಾಯೋಗಿಕ ಪ್ರಯೋಗಾಲಯವಾಗಿದೆ. ಎಥೆನಾಲ್‌ನಿಂದಾಗಿ ಜನರ ವಾಹನಗಳು ಕೆಟ್ಟುಹೋಗುತ್ತಿವೆ, ಬಿಡಿಭಾಗಗಳು ಹಾನಿಗೊಳಗಾಗುತ್ತಿವೆ ಮತ್ತು ಮೈಲೇಜ್ ಕುಸಿಯುತ್ತಿದೆ. ಜನರು ತೀವ್ರವಾಗಿ ಕೋಪಗೊಂಡಿದ್ದಾರೆ ಎಂದಿದ್ದಾರೆ. ಜನರು ಇದನ್ನು ವಿರೋಧಿಸುತ್ತಿರುವಾಗ, ನೀವು ಏಕೆ ಅವರ ಮೇಲೆ ಇದನ್ನು ಹೇರುತ್ತಿದ್ದೀರಿ? ಇದನ್ನು ಏಕೆ ಹಿಂಪಡೆಯುತ್ತಿಲ್ಲ? ನಿಮಗೆ ಮತ ನೀಡಿದವರು ಜನರೇ. ಅವರ ಮತವನ್ನು ಗೌರವಿಸುವುದು ಮತ್ತು ಅವರ ಮಾತನ್ನು ಆಲಿಸುವುದು ನಿಮ್ಮ ಕರ್ತವ್ಯ' ಎಂದಿದ್ದಾರೆ.



# ಕೇಂದ್ರ ಸರ್ಕಾರದಿಂದ ಸಾಂವಿಧಾನಿಕ ಸಂಸ್ಥೆಗಳನ್ನು ದುರ್ಬಲಗೊಳಿಸುವ ಯತ್ನ



■ ಸೇಡಿನ ರಾಜಕೀಯ ಎಂದು ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ವಾಗ್ದಾಳಿ

**ನವದೆಹಲಿ, ಜು.4:** ಸಂಸತ್ತಿನ ಮುಂಗಾರು ಅಧಿವೇಶನಕ್ಕೂ ಮುನ್ನ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ಮೇಲೆ ಕಾಂಗ್ರೆಸ್ ಶನಿವಾರ ತೀವ್ರ ದಾಳಿ ನಡೆಸಿದ್ದು, ಅದು "ಸೇಡಿನ ರಾಜಕೀಯ "ವನ್ನು ಅನುಸರಿಸುತ್ತಿದೆ, ಸಾಂವಿಧಾನಿಕ ಸಂಸ್ಥೆ ಗಳನ್ನು ದುರ್ಬಲ ಗೊಳಿಸುತ್ತಿದೆ ಮತ್ತು ಸಂವಿಧಾನವನ್ನು ಬದಲಾಯಿಸಲು ಮೂರನೇ ಎರಡರಷ್ಟು ಬಹುಮತವನ್ನು ಪಡೆಯಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದೆ.

ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕಾಂಗ್ರೆಸ್ ಸಂವಹನ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, ಆಡಳಿತ ಪಕ್ಷದ ರಾಜಕೀಯ ತಂತ್ರವು ಸಾಂವಿಧಾನಿಕ ತಿದ್ದುಪಡಿಗಳಿಗೆ ಅಗತ್ಯವಾದ ಸಂಖ್ಯೆಗಳನ್ನು ಪಡೆಯಲು ಅಸಮರ್ಥತೆಯಿಂದ ನಡೆಸಲ್ಪಟ್ಟಿದೆ ಎಂದು ಆರೋಪಿಸಿದರು.

ಕ್ಷೇತ್ರ ಮರುವಿಂಗಡಣೆ ಮಸೂದೆಯ ಬಗ್ಗೆ ಪ್ರಧಾನಿ ತುಂಬಾ ಕೋಪಗೊಂಡಿದ್ದರು. ಅವರ ಮುಖದಲ್ಲಿ ಕೋಪವು ಗೋಚರಿಸಿತು. ಗೃಹ ಸಚಿವರು ಸಹ ಕೋಪಗೊಂಡಿದ್ದರು. ಅನೇಕ ಪ್ರಯತ್ನಗಳ ಹೊರತಾಗಿಯೂ, ಅವರಿಗೆ ಮೂರನೇ ಎರಡರಷ್ಟು ಬಹುಮತ ಸಿಗಲಿಲ್ಲ, ಮತ್ತು ಅವರು ಈಗ ಸೇಡು ತೀರಿಸಿಕೊಳ್ಳುತ್ತಿದ್ದಾರೆ. ಇದು ಸೇಡಿನ ರಾಜಕೀಯ. ಅವರು ಪಕ್ಷಗಳನ್ನು ವಿಭಜಿಸುತ್ತಿದ್ದಾರೆ, ಆದರೆ ಅವರಿಗೆ ಮೂರನೇ ಎರಡರಷ್ಟು ಬಹುಮತ ಸಿಗುವುದಿಲ್ಲ" ಎಂದು ರಮೇಶ್ ಹೇಳಿದರು. ಸಂವಿಧಾನವನ್ನು ತಿದ್ದುಪಡಿ ಮಾಡುವುದು ಬಿಜೆಪಿಯ ಉದ್ದೇಶ ಎಂದು ಹೇಳಿಕೊಂಡ ಅವರು, "ಭಾರತದ ಸಂವಿಧಾನವನ್ನು ಬದಲಾಯಿಸುವುದು ಅವರ ನಿಜವಾದ ಉದ್ದೇಶ. 400 ದಾಟುವ ಉದ್ದೇಶ ಸಂವಿಧಾನವನ್ನು ಬದಲಾಯಿಸುವ ಸ್ಥಿತಿಯಲ್ಲಿರುವುದಾಗಿತ್ತು. ಮತದಾರರ ಪಟ್ಟಿಯಿಂದ ಲಕ್ಷಾಂತರ ಹೆಸರುಗಳನ್ನು ತೆಗೆದುಹಾಕಲಾಗುತ್ತಿದೆ ಎಂದು ರಮೇಶ್ ಹೇಳಿದರು ಮತ್ತು ಫಲಿತಾಂಶಗಳು ಪೂರ್ವ ನಿರ್ಧರಿತ ಎಂದು ಭಾವಿಸಿದರೆ ಚುನಾವಣೆಗಳ ವಿಶ್ವಾಸಾರ್ಹತೆಯನ್ನು ಪ್ರಶ್ನಿಸಿದರು. ಸುಪ್ರೀಂ ಕೋರ್ಟ್ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಲು ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡುತ್ತದೆ ಎಂದು ಅವರು ಆಶಿಸಿದರು. ಚುನಾವಣಾ ಆಯೋಗವು ಕೇಂದ್ರ ಸರ್ಕಾರದ ಪ್ರಭಾವದಡಿಯಲ್ಲಿ ಕಾರ್ಯ ನಿರ್ವಹಿಸುತ್ತಿದೆ ಎಂದು ಆರೋಪಿಸಿ ರಮೇಶ್ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಗುರಿಯಾಗಿಸಿಕೊಂಡರು. "ಪಶ್ಚಿಮ ಬಂಗಾಳ, ಬಿಹಾರ, ಮಹಾರಾಷ್ಟ್ರ ಮತ್ತು ಹರಿಯಾಣದಲ್ಲಿ ಅವರ ನಡವಳಿಕೆಯು ಚುನಾವಣಾ ಆಯೋಗವು ಗೃಹ ಸಚಿವರು ಮತ್ತು ಪ್ರಧಾನ ಮಂತ್ರಿಗಳಿಂದ ಆದೇಶಗಳನ್ನು ತೆಗೆದುಕೊಳ್ಳುತ್ತದೆ ಎಂದು ಸೂಚಿಸುತ್ತದೆ" ಎಂದು ಅವರು ಆರೋಪಿಸಿದರು. ಮುಂಬರುವ ಮಳೆಗಾಲದ ಅಧಿವೇಶನದ ಕುರಿತು ಪ್ರತಿಕ್ರಿಯಿಸಿದ ರಮೇಶ್, ಸಂಸತ್ತಿನ ಮುಂದೆ ಕರೆಯಲಾದ ಸಾಂಪ್ರದಾಯಿಕ ಸರ್ವಪಕ್ಷ ಸಭೆಯನ್ನು "ಔಪಚಾರಿಕತೆ" ಎಂದು ಬಣ್ಣಿಸಿದರು. "ರಕ್ಷಣಾ ಸಚಿವರು ಹಾಜರಾಗುತ್ತಾರೆ, ಭಾಷಣ ಮಾಡುತ್ತಾರೆ, ಆಲಿಸುತ್ತಾರೆ ಮತ್ತು ನಂತರ ಲೋಕಸಭೆ ಮತ್ತು ರಾಜ್ಯಸಭೆಯ ಕಾರ್ಯಸೂಚಿಯನ್ನು ಪ್ರಧಾನ ಮಂತ್ರಿ ಕಚೇರಿ ಮತ್ತು ಗೃಹ ಸಚಿವರ ಕಚೇರಿ ನಿರ್ಧರಿಸುತ್ತದೆ." ಈ ಸರ್ವಪಕ್ಷ ಸಭೆಗೆ ಯಾವುದೇ ಅರ್ಥವಿಲ್ಲ" ಎಂದು ಅವರು ಹೇಳಿದರು. ಸರ್ಕಾರವು ಕ್ಷೇತ್ರ ಪುನರ್ವಿಂಗಡಣೆ ಮಸೂದೆಯನ್ನು ಮತ್ತೆ ಪರಿಚಯಿಸಬಹುದು ಮತ್ತು ಅಧಿವೇಶನದ ಸಮಯದಲ್ಲಿ "ಒಂದು ರಾಷ್ಟ್ರ, ಒಂದು ಚುನಾವಣೆ"ಯ ಪ್ರಸ್ತಾಪವನ್ನು ಪುನರುಜ್ಜೀವನ ಗೊಳಿಸಬಹುದು ಎಂದು ಅವರು ಹೇಳಿದ್ದಾರೆ.

ದೇವಾಲಯ ದೇಣಿಗೆಗಳಿಗೆ ಸಂಬಂಧಿಸಿದ ಹಣಕಾಸಿನ ಅಕ್ರಮಗಳ ಆರೋಪಗಳನ್ನು ಕಾಂಗ್ರೆಸ್ ನಾಯಕರು ಎತ್ತಿದರು, ಅಯೋಧ್ಯೆ, ಕೇದಾರನಾಥ ಮತ್ತು ಬದರಿನಾಥದಲ್ಲಿನ ಧಾರ್ಮಿಕ ಟ್ರಸ್ಟ್‌ಗಳಿಗೆ ಸಂಬಂಧಿಸಿದ ದೇಣಿಗೆಗಳನ್ನು ದುರುಪಯೋಗಪಡಿಸಿಕೊಳ್ಳಲಾಗಿದೆ ಎಂದು ಹೇಳಿಕೊಂಡರು. ಸಂಸತ್ತಿನ ಮಳೆಗಾಲದ ಅಧಿವೇಶನವು ಸರ್ಕಾರ ಮತ್ತು ವಿರೋಧ ಪಕ್ಷದ ನಡುವೆ ತೀವ್ರ ವಾಗ್ವಾದಕ್ಕೆ ಸಾಕ್ಷಿಯಾಗುವ ನಿರೀಕ್ಷೆಯಿದೆ, ಕಾಂಗ್ರೆಸ್ ಮತ್ತು ಅದರ ಭಾರತ ಬಣದ ಮಿತ್ರಪಕ್ಷಗಳು ಚುನಾವಣಾ ಪ್ರಕ್ರಿಯೆಗಳು, ಸಾಂವಿಧಾನಿಕ ಸಂಸ್ಥೆಗಳು, ವಿದೇಶಾಂಗ ನೀತಿ ಮತ್ತು ಭ್ರಷ್ಟಾಚಾರಕ್ಕೆ ಸಂಬಂಧಿಸಿದ ವಿಷಯಗಳು ಅವರ ಕಾಳಜಿ ಸೇರಿವೆ ಎಂದು ಸೂಚಿಸುತ್ತವೆ.

# ಬದರೀನಾಥನ ಹುಂಡಿಗೂ ಕನ್ನ ತನಿಖೆಗೆ ಸರ್ಕಾರ ಆದೇಶ

**ಡೆಹ್ರಾಡೂನ್, ಜು.4:** ಅಯೋಧ್ಯೆಯ ರಾಮ ಮಂದಿರ ಹಗರಣದ ನಂತರ ಇದೀಗ ಉತ್ತರಾಖಂಡದ ಪ್ರಸಿದ್ಧ ಪುಣ್ಯಕ್ಷೇತ್ರವಾದ ಬದರೀನಾಥ ದೇವಾಲಯದಲ್ಲಿ ಭಕ್ತರು ನೀಡಿದ ದೇಣಿಗೆ ಹಣ ಕಳುವಾಗಿದೆ ಎಂಬ ಅತಿ ಗಂಭೀರ ಆರೋಪಗಳು ಕೇಳಿಬಂದಿವೆ. ಈ ಕುರಿತು ಡೆಹ್ರಾಡೂನ್ ಮೂಲದ ಭೈರವ ಸಮಿತಿ ನೀಡಿದ ಅಧಿಕೃತ ದೂರಿನ ಹಿನ್ನೆಲೆಯಲ್ಲಿ, ಬದರೀ ನಾಥ ಮತ್ತು ಕೇದಾರನಾಥ ದೇವಾಲಯ ಸಮಿತಿಯು ಇದೀಗ ಈ ಕಳವಿನ ಕುರಿತಾಗಿ ಒಂದು ಸಮಗ್ರ ತನಿಖೆಗೆ ಅಧಿಕೃತವಾಗಿ ಆದೇಶಿಸಿದೆ.



ಪ್ರತಿನಿತ್ಯ ದೇಶದ ಮೂಲೆ ಮೂಲೆಗಳಿಂದ ಆಗಮಿಸಿ ಸಾವಿರಾರು ಸಂಖ್ಯೆಯಲ್ಲಿ ಭೇಟಿ ನೀಡುವ ಅಪಾರ ಭಕ್ತರು ಪುಣ್ಯಕ್ಷೇತ್ರದ ಈ ಪ್ರಸಿದ್ಧ ದೇವಾಲಯಕ್ಕೆ ಅತ್ಯಂತ ಶ್ರದ್ಧೆ ಮತ್ತು ಭಕ್ತಿಯಿಂದ ಸಮರ್ಪಿಸುವ ಕಾಣಿಕೆಯಾಗಿ ನೀಡುವ ದೇಣಿಗೆ ನಿಧಿಯಲ್ಲಿ ಕಳೆದ ಕೆಲವು ದಿನಗಳಿಂದ ಭಾರಿ ಪ್ರಮಾಣದ ಹಣಕಾಸು ದುರ್ಬಳಕೆ ಹಾಗೂ ಕಳವು ನಿರಂತರವಾಗಿ ನಡೆದಿದೆ ಎಂದು ಡೆಹ್ರಾಡೂನ್ ನಗರದ ಈ ಭೈರವ ಸಮಿತಿಯು ತನ್ನ ದೂರಿನಲ್ಲಿ ಕಳವಳ ವ್ಯಕ್ತಪಡಿಸಿ ನೇರವಾಗಿ ಆರೋಪಿಸಿತ್ತು.

ಬದರೀನಾಥ ಪುಣ್ಯಕ್ಷೇತ್ರದ ಐತಿಹಾಸಿಕ ಪಾವಿತ್ರ್ಯತೆ ಹಾಗೂ ಕೋಟ್ಯಂತರ ಹಿಂದೂ ಭಕ್ತರ ಧಾರ್ಮಿಕ ನಂಬಿಕೆಗೆ ಯಾವುದೇ ರೀತಿಯ ಧಕ್ಕೆಯಾಗದಂತೆ ಎಚ್ಚರವಹಿಸಿರುವ ಬದರೀನಾಥ ಮತ್ತು ಕೇದಾರನಾಥ ದೇವಾಲಯ ಆಡಳಿತ ಸಮಿತಿಯು, ಈ ಮಹತ್ವದ ದೂರನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ತಕ್ಷಣವೇ ಉನ್ನತ ಮಟ್ಟದ ತನಿಖೆಗೆ ಮುಂದಾಗಿದೆ. ದೇವಾಲಯದ ಉನ್ನತ ಆಡಳಿತ ಮಂಡಳಿಯು ಈ ಸೂಕ್ಷ್ಮ ವಿಷಯದ ಬಗ್ಗೆ ವಿಳಂಬ ಮಾಡದೆ ಸಂಪೂರ್ಣ ಪಾರದರ್ಶಕ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಿ ಸತ್ಯಾಸತ್ಯತೆ ಬಹಿರಂಗ ಪಡಿಸುವುದಾಗಿ ಭಕ್ತರಿಗೆ ಭರವಸೆ ನೀಡಿದೆ.

ಪ್ರಸ್ತುತ ನಡೆಯುತ್ತಿರುವ ಈ ತನಿಖೆಯ ವೇಳೆ ದೇವಾಲಯದ ಯಾವುದೇ ಹಿರಿಯ ಅಥವಾ ಕಿರಿಯ ಸಿಬ್ಬಂದಿ ಅಥವಾ ಬೇರೆ ಯಾವುದೇ ಹೊರಗಿನ ಪ್ರಭಾವಿ ವ್ಯಕ್ತಿಗಳು ಈ ಭಾರಿ ದೇಣಿಗೆ ಹಣದ ಕಳವಿನಲ್ಲಿ ನೇರವಾಗಿ ಭಾಗಿಯಾಗಿರುವುದು ಸಾಕ್ಷ್ಯಾಧಾರಗಳ ಸಮೇತ ಅಧಿಕೃತವಾಗಿ ಸಾಬೀತಾದರೆ, ಅಂತವರ ವಿರುದ್ಧ ಯಾವುದೇ ರೀತಿಯ ಮುಲಾಜಿಲ್ಲದೆ ಅತ್ಯಂತ ನಿರ್ದಾಕ್ಷಿಣ್ಯವಾಗಿ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಆಡಳಿತ ಮಂಡಳಿ ಕಟ್ಟುನಿಟ್ಟಾಗಿ ಎಚ್ಚರಿಸಿದೆ. ತಪ್ಪು ಮಾಡಿದವರಿಗೆ ತಕ್ಕ ಶಿಕ್ಷೆ ಖಚಿತ ಎಂದು ಸಮಿತಿ ಸ್ಪಷ್ಟಪಡಿಸಿದೆ.

ಸದ್ಯ ದೇವಾಲಯದ ಆವರಣದಲ್ಲಿ ತನಿಖಾ ಪ್ರಕ್ರಿಯೆಗಳು ಈಗಾಗಲೇ ಚುರುಕಾಗಿ ಆರಂಭವಾಗಿದ್ದು, ಒಟ್ಟಾರೆ ಎಷ್ಟು ಮೊತ್ತದ ದೇಣಿಗೆ ದುರ್ಬಳಕೆಯಾಗಿದೆ ಹಾಗೂ ಈ ಕೃತ್ಯದ ಹಿಂದಿರುವವರು ಯಾರು ಎಂಬ ನಿಖರವಾದ ಮಾಹಿತಿಯು ತನಿಖೆಯ ಸಂಪೂರ್ಣ ವರದಿ ಅಧಿಕೃತವಾಗಿ ಹೊರಬಂದ ಬಳಿಕವಷ್ಟೇ ಎಲ್ಲರಿಗೂ ಸ್ಪಷ್ಟವಾಗಲಿದೆ.

# ಸಿನಿಮಾ, ವೆಬ್‌ಸರಣಿ ಪೈರಸಿ ತಡೆಯಲು ವಿಫಲ: ಟೆಲಿಗ್ರಾಂಗೆ ನೋಟಿಸ್

## ಕೈಗೊಂಡಿರುವ ಕ್ರಮಗಳ ಕುರಿತು 15 ದಿನಗಳೊಳಗೆ ವರದಿ ಸಲ್ಲಿಸುವಂತೆ ಕೇಂದ್ರ ಸರ್ಕಾರ ಸೂಚನೆ

**ನವದೆಹಲಿ, ಜು.4:** ಚಲನಚಿತ್ರ, ವೆಬ್ ಸರಣಿ ಹಾಗೂ ಇತರ ಓಟಿಟಿ ವಿಷಯಗಳ ಕಾನೂನುಬಾಹಿರ (ಪೈರಸಿ) ಪ್ರಸಾರವನ್ನು ತಡೆಯುವಲ್ಲಿ ವಿಫಲವಾಗಿರುವ ಆರೋಪದ ಹಿನ್ನೆಲೆಯಲ್ಲಿ ಮೆಸೇಜಿಂಗ್ ವೇದಿಕೆ ಟೆಲಿಗ್ರಾಂಗೆ ಕೇಂದ್ರ ಸರ್ಕಾರ ನೋಟಿಸ್ ಜಾರಿಗೊಳಿಸಿದೆ. ಈ ಕುರಿತು 15 ದಿನಗಳೊಳಗೆ ಕೈಗೊಂಡಿರುವ ಕ್ರಮಗಳ ವಿವರವಾದ ವರದಿಯನ್ನು ಸಲ್ಲಿಸುವಂತೆ ಸೂಚಿಸಿದೆ.

ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಈ ನೋಟಿಸ್ ನೀಡಿದ್ದು, ಟೆಲಿಗ್ರಾಂನ ವಿವಿಧ ಚಾನೆಲ್‌ಗಳು ಮತ್ತು ಗುಂಪುಗಳ ಮೂಲಕ ಹೊಸ ಚಲನಚಿತ್ರಗಳು, ಒಟಿಟಿ ವೇದಿಕೆಗಳ ವಿಷಯಗಳು ಹಾಗೂ ಇತರೆ ಆಡಿಯೋ-ವಿಜುವಲ್ ಕೃತಿಗಳು ಅನಧಿಕೃತವಾಗಿ ಹಂಚಲಾಗುತ್ತಿರುವ ಬಗ್ಗೆ ಹಲವು ದೂರುಗಳು ಬಂದಿರುವ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಮೂಲಗಳು ತಿಳಿಸಿವೆ.

ಸರ್ಕಾರವು ಈ ಬಾರಿ ಕೇವಲ ಪ್ರತ್ಯೇಕ ಪೈರಸಿ ಲಿಂಕ್‌ಗಳು ಅಥವಾ ಚಾನೆಲ್‌ಗಳನ್ನು ತೆಗೆದುಹಾಕುವ ಕ್ರಮಕ್ಕೆ ಸೀಮಿತವಾಗದೆ, ಸಂಪೂರ್ಣ ವೇದಿಕೆಯ ಜವಾಬ್ದಾರಿಯನ್ನು ನಿಗದಿಪಡಿಸುವತ್ತ ಗಮನ ಹರಿಸಿದೆ. ಪೈರಸಿ ತಡೆಗೆ ಟೆಲಿಗ್ರಾಂ ಯಾವ ಕ್ರಮಗಳನ್ನು ಕೈಗೊಂಡಿದೆ ಮತ್ತು ಮುಂದಿನ ದಿನಗಳಲ್ಲಿ ಇಂತಹ ಕಾನೂನುಬಾಹಿರ ಚಟುವಟಿಕೆಗಳನ್ನು ತಡೆಯಲು ಯಾವ ವ್ಯವಸ್ಥೆ ರೂಪಿಸಲಿದೆ ಎಂಬುದನ್ನು 15 ದಿನಗಳೊಳಗೆ ವಿವರಿಸಬೇಕಾಗಿದೆ.

ಓಟಿಟಿ ಸಂಸ್ಥೆಗಳು ಮತ್ತು ಚಿತ್ರರಂಗದ ಪ್ರತಿನಿಧಿಗಳು, ಹೊಸ ಸಿನಿಮಾಗಳು ಬಿಡುಗಡೆಯಾದ ಕೆಲವೇ ಗಂಟೆಗಳಲ್ಲಿ ಟೆಲಿಗ್ರಾಂ ಮೂಲಕ ಪೈರಸಿ ಪ್ರತಿಗಳು ವ್ಯಾಪಕವಾಗಿ ಹರಡುತ್ತಿರುವುದರಿಂದ ಭಾರೀ ಆರ್ಥಿಕ ನಷ್ಟ ಉಂಟಾಗುತ್ತಿದೆ ಎಂದು ಸರ್ಕಾರದ ಗಮನಕ್ಕೆ ತಂದಿದ್ದರು. ಈ ಹಿನ್ನೆಲೆಯಲ್ಲಿ ಸರ್ಕಾರ ಡಿಜಿಟಲ್ ವೇದಿಕೆಗಳ ಹೊಣೆಗಾರಿಕೆಯನ್ನು ಹೆಚ್ಚಿಸುವ ಉದ್ದೇಶದಿಂದ ಈ ಕ್ರಮಕ್ಕೆ ಮುಂದಾಗಿದೆ.


### ಮೆಟಾಗೂ ನೋಟಿಸ್ ನೀಡಿದ್ದ ಸರ್ಕಾರ

ಇತ್ತೀಚೆಗೆ ಕೇಂದ್ರ ಸರ್ಕಾರ ಮೆಟಾ ವಿರುದ್ಧವೂ ನಿಯಂತ್ರಣ ಕ್ರಮಗಳನ್ನು ಆರಂಭಿಸಿದ ಕೆಲವೇ ದಿನಗಳಲ್ಲಿ ಈ ನೋಟಿಸ್ ಹೊರಬಿದ್ದಿದೆ. ಕಳೆದ ಬುಧವಾರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ, ವಾಟ್ಸ್‌ಆಪ್‌ನ ಪ್ರಸ್ತಾವಿತ ಯೂಸರ್‌ನೇಮ್ ವೈಶಿಷ್ಟ್ಯದ ಕುರಿತು ಮೆಟಾಗೆ ನೋಟಿಸ್ ನೀಡಿತ್ತು. ಬಳಿಕ, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯಕ್ಕೆ ಸಂಬಂಧಿಸಿದ ವಿಷಯಗಳನ್ನು ಉತ್ತೇಜಿಸುವ ಜಾಹೀರಾತುಗಳು ಇನ್‌ಸ್ಟಾಗ್ರಾಂನಲ್ಲಿ ಕಾಣಿಸಿಕೊಂಡಿರುವ ಆರೋಪದ ಹಿನ್ನೆಲೆಯಲ್ಲಿ ಮೆಟಾ ಅಧಿಕಾರಿಗಳನ್ನು ಹಾಜರಾಗುವಂತೆ ಸಮನ್ಸ್ ನೀಡಲು ನಿರ್ಧರಿಸಿತ್ತು. ಇದರ ಜೊತೆಗೆ, ಸಿನಿಮಾ ನಿರ್ಮಾಪಕರು, ಓಟಿಟಿ ವೇದಿಕೆಗಳು ಹಾಗೂ ಕಾನೂನು ಜಾರಿ ಸಂಸ್ಥೆಗಳಿಗಾಗಿ ಟೆಲಿಗ್ರಾಂ ಹೊಂದಿರುವ ಕುಂದು-ಕೊರತೆ ನಿವಾರಣಾ ವ್ಯವಸ್ಥೆ ಕುರಿತು ವಿವರಗಳನ್ನು ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಕೇಳಿದೆ.

ನಿಗದಿತ ಅವಧಿಯಲ್ಲಿ ಟೆಲಿಗ್ರಾಂ ಸಮರ್ಪಕ ಉತ್ತರ ನೀಡದಿದ್ದರೆ ಅಥವಾ ಅಗತ್ಯ ಕ್ರಮಗಳನ್ನು ಕೈಗೊಳ್ಳದಿದ್ದರೆ, ಮಾಹಿತಿ ತಂತ್ರಜ್ಞಾನ ಮತ್ತು ಪ್ರಸಾರಕ್ಕೆ ಸಂಬಂಧಿಸಿದ ಅನ್ವಯಿಸುವ ಕಾನೂನುಗಳ ಅಡಿಯಲ್ಲಿ ಮುಂದಿನ ಕ್ರಮಗಳನ್ನು ಪರಿಗಣಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ."ಪೈರಸಿ ಮಾಡಲಾದ ವಿಷಯಗಳು ನಿರಂತರವಾಗಿ ಲಭ್ಯವಾಗುವುದು, ಸಮರ್ಪಕ ಪಾಲನೆ ಇಲ್ಲದಿರುವುದು ಅಥವಾ ಅಪೂರ್ಣ ಉತ್ತರ ನೀಡುವುದು ಮುಂದಿನ ಕಾನೂನು ಪರಿಶೀಲನೆ ಹಾಗೂ ಕ್ರಮಕ್ಕೆ ಕಾರಣವಾಗಬಹುದು. ಭಾರತದ ಸೃಜನಾತ್ಮಕ ಆರ್ಥಿಕತೆ, ಸಿನಿಮಾ ಉದ್ಯಮ, ಪ್ರಸಾರ ಸಂಸ್ಥೆಗಳು, ಒಟಿಟಿ ವೇದಿಕೆಗಳು, ನಿರ್ಮಾಪಕರು ಹಾಗೂ ವಿತರಕರ ಹಿತಾಸಕ್ತಿ ರಕ್ಷಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ" ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಮೂಡುಶೆಡ್ಡೆಯ ಶೆಡ್ಡೆ ಶ್ರೀವಿಷ್ಣುಮೂರ್ತಿ ದೇವಸ್ಥಾನ ದೇವಸ್ಥಾನಕ್ಕೆ ಶಿಲಾನ್ಯಾಸ

# ಪಾವನ ಕ್ಷೇತ್ರಗಳ ಜೀರ್ಣೋದ್ಧಾರ ಅಗತ್ಯ: ಸಂಸದ ಶ್ರೀಕಾಂತ್ ಶಿಂಧೆ ಅಭಿಮತ




**ಮುಂಬಯಿ, ಜೂ.4:** ಇವತ್ತಿನ ದಿನ ನನ್ನ ಜೀವನದ ಸೌಭಾಗ್ಯದಿನವಾಗಿದೆ. ನನ್ನ ಹಸ್ತಗಳಿಂದ ಪಾವಿತ್ರ್ಯತೆಯ ದೇವನಸ್ಥಾಕ್ಕೆ ಶಿಲಾನ್ಯಾಸ ನಡೆಸಿದ್ದು ನನ್ನ ಪುಣ್ಯ ಎಂದೆಣಿಸಿದ್ದೇನೆ. ಸನಾತನ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಕೈಗೊಪ್ಪಿಸಲು ಇಂತಹ ಪಾವನ ಕ್ಷೇತ್ರಗಳ ಜೀರ್ಣೋದ್ಧಾರದ ಕಾರ್ಯಗಳು ಅಗತ್ಯವಾಗಿವೆ. ನನಗೆ ಇಲ್ಲಿ ಭಗವಂತನೂ, ಭ್ರಮರಾಂಭಿಕೆಯೇ ಕರೆದು ತಂದಂತಿದೆ. ಕಾರಣ ಶ್ರೀ ಕ್ಷೇತ್ರ ಕಟೀಲು ಭೇಟಿ ನೀಡಿ ದರ್ಶನ ಪಡೆದಿದ್ದೇನೆ. ನಾವೂ ಧರ್ಮವನ್ನು ರಕ್ಷಿಸಿದರೆ, ಧರ್ಮ ನಮ್ಮನ್ನು ರಕ್ಷಿಸುತ್ತದೆ. ಧರ್ಮವನ್ನು ಉಳಿಸಲು ಮಠ-ಮಂದಿರಗಳಿಂದ ಮಾತ್ರ ಸಾಧ್ಯ. ಆದ್ದರಿಂದ ಈ ಕ್ಷೇತ್ರದ ಬ್ರಹ್ಮಕಲಶೋತ್ಸವ ಸಂದರ್ಭ ನನ್ನ ತಂದೆಯೂ ಮಹಾರಾಷ್ಟ್ರ ಸರ್ಕಾರದ ಮಾಜಿ ಮುಖ್ಯಮಂತ್ರಿ (ಹಾಲಿ ಉಪಮುಖ್ಯಮಂತ್ರಿ) ಏಕನಾಥ್ ಶಿಂಧೆ ಅವರನ್ನು ಕರೆ ತರುವ ಪ್ರಯತ್ನ ಮಾಡುತ್ತೇನೆ ಎಂದು ಮಹಾರಾಷ್ಟ್ರ ರಾಜ್ಯದ ಕಲ್ಯಾಣ್ ಲೋಕಸಭಾ ಸಂಸದ ಡಾ| ಶ್ರೀಕಾಂತ್ ಏಕನಾಥ ಶಿಂಧೆ ನುಡಿದರು.

ಕಳೆದ ಗುರುವಾರ (ಜು.02) ಮಂಗಳೂರು ಮೂಡುಶೆಡ್ಡೆ ಅಲ್ಲಿನ ಶೆಡ್ಡೆ ಶ್ರೀ ವಿಷ್ಣುಮೂರ್ತಿ ದೇವಸ್ಥಾನದ ನೂತನ ಮಂದಿರ ನಿರ್ಮಾಣದ ಶಿಲಾನ್ಯಾಸ ಕಾರ್ಯಕ್ರಮ ನೆರವೇರಿದ್ದು, ಸಂಸದ ಡಾ| ಶ್ರೀಕಾಂತ್ ಶಿಂಧೆ ದೇವಾಲಯದ ಕರಪತ್ರ (ಬ್ರೋಶರ್) ಬಿಡುಗಡೆ ಗೊಳಿಸಿ ಮಾತನಾಡಿ ಶುಭಾರೈಸಿದರು.

ಕ್ಷೇತ್ರ ಕಟೀಲು ದುರ್ಗಾ ಪರಮೇಶ್ವರಿ ಮಂದಿರದ ವಂಶಪಾರಂಪರಿಕ ಧರ್ಮದರ್ಶಿ ಕೆ.ಹರಿನಾರಾಯಣ ಅಸ್ರಣ್ಣ, ಶ್ರೀಧಾಮ ಮಾಣಿಲ ಶ್ರೀ ಮಹಾಲಕ್ಷ್ಮೀ ಕ್ಷೇತ್ರದ ಶ್ರೀ ಮೋಹನದಾಸ್ ಪರಮಹಂಸ ಸ್ವಾಮೀಜಿ, ಶ್ರೀ ಗುರು ರಾಮಾಂಜನೇಯ ಮಠ (ವಜ್ರದೇಹಿ ಧರ್ಮಕ್ಷೇತ್ರ ಗುರುಪುರ) ಇದರ ಶ್ರೀ ರಾಜಶೇಖರಾನಂದ ಸ್ವಾಮೀಜಿ ಅವರು ದೀಪ ಪ್ರಜ್ವಲನೆಗೈದು ಸಮಾರಂಭಕ್ಕೆ ಚಾಲನೆಯನ್ನಿೀಡಿ ಅನುಗ್ರಹಿಸಿದರು. ಕುಡುಪು ಶ್ರೀ ನರಸಿಂಹ ತಂತ್ರಿ, ಕುಡುಪು ಶ್ರೀ ಕೃಷ್ಣರಾಜ ತಂತ್ರಿ, ಶ್ರೀನಿವಾಸ ಉಡುಪ, ರಾಮಚಂದ್ರ ಉಡುಪ ಅವರು ನೂತನ ದೇವಸ್ಥಾನದ ಶಿಲಾನ್ಯಾಸ ನೆರವೇರಿಸಿ ಹರಸಿದರು. ಮೂಡುಶೆಡ್ಡೆ ಅಲ್ಲಿನ ಹೊಸಲಕ್ಕೆ ಶ್ರೀ ದುರ್ಗಾ ಪರಮೇಶ್ವರಿ ಕೃಪಾ ನಿವಾಸಿ, ಶೆಡ್ಡೆ ಶ್ರೀ ವಿಷ್ಣುಮೂರ್ತಿ ದೇವಸ್ಥಾನ ಮೂಡುಶೆಡ್ಡೆ ಇದರ ಮುಂಬಯಿ ಸಮಿತಿ ಅಧ್ಯಕ್ಷ ಮೂಡುಶೆಡ್ಡೆ ವಿಶ್ವನಾಥ ಎಸ್.ಶೆಟ್ಟಿ ಮುಂದಾಳುತ್ವ ಹಾಗೂ ಎಂಆರ್‌ಜಿ ಗ್ರೂಪ್ ಕಾರ್ಯಾಧ್ಯಕ್ಷ ಡಾ| ಕೆ.ಪ್ರಕಾಶ್ ಶೆಟ್ಟಿ ಅವರ ಸಭಾಧ್ಯಕ್ಷತೆಯಲ್ಲಿ ಜರುಗಿದ ಸಭಾ ಕಾರ್ಯಾಕ್ರಮದಲ್ಲಿ ಮಂಗಳೂರು ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ, ಮೂಡುಬಿದಿರೆ ಶಾಸಕ ಉಮಾನಾಥ ಕೋಟ್ಯಾನ್, ಮಂಗಳೂರು ಉತ್ತರ ಶಾಸಕ ಭರತ್ ವೈ.ಶೆಟ್ಟಿ, ಮಾಜಿ ಸಂಸದ ಆನಂದ ವಾರಂಜಾಪೆ, ಮಹಾರಾಷ್ಟ್ರದ ಕಲ್ಯಾಣ್ ಕ್ಷೇತ್ರದ ಶಾಸಕ ರಾಜೇಶ್ ಜೆ.ಮೋರೆ, ಕಲ್ಯಾಣ್ ಜಿಲ್ಲಾ ಶಿವಸೇನಾ ಪ್ರಮುಖ ಗೋಪಾಲ್ ಆರ್.ಲಾಡ್ಗೆ, ಕೆಡಿಎಂಸಿ ಮಾಜಿ ನಗರ ಸೇವಕ ಪ್ರಭುನಾಥ ಆತ್ಮಾರಾಮ್ ಭೋಯಿರ್, ಸೋನಿ ಸ್ಟೀಲ್ಸ್ ಇಂಡಸ್ಟ್ರೀಸ್ ಪ್ರೈವೇಟ್ ಲಿಮಿಟೆಡ್‌ನ ಕಾರ್ಯಾಧ್ಯಕ್ಷ ಪಾಂಡುರಂಗ ಎಸ್.ಶೆಟ್ಟಿ, ನಿರ್ದೇಶಕಿ ವನಿತಾ ಪಾಂಡುರಂಗ ಶೆಟ್ಟಿ, ಮಾಜಿ ಸಚಿವ ಕೆ.ನಾಗರಾಜ ಶೆಟ್ಟಿ, ಬಂಟರ ಯಾನೆ ನಾಡವರ ಮಾತೃ ಸಂಘದ ಅಧ್ಯಕ್ಷ ಅಜಿತ್ ಕುಮಾರ್ ರೈ, ಮಾಲಾಡಿ, ಕುದ್ರೋಳಿ ದೇವಸ್ಥಾನದ ಕೋಶಾಧಿಕಾರಿ ನ್ಯಾಯವಾದಿ ಆರ್.ಪದ್ಮರಾಜ್, ದ.ಕ ಅಪಾರ, ಜಿಲ್ಲಾಡಾಳಿತಾಧಿಕಾರಿ ರಾಜು ಕೆ.ಎಸ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮಿಥುನ್ ಎಂ.ರೈ, ಭಿವಂಡಿ ಬಿಜೆಪಿ ಅಧ್ಯಕ್ಷ ಸಂತೋಷ್ ಎಂ.ಶೆಟ್ಟಿ ಮೂಡುಬೆಳ್ಳೆ, ಉದ್ಯಮಿಗಳಾದ ರವಿರಾಜ ಶೆಟ್ಟಿ ನಿಟ್ಟೆಗುಡ್ಡೆ, ಭುವನೇಶ್ ಪಚ್ಚಿನಡ್ಕ, ಕ್ಯಾ| ಮನೋಜ್ ಶೆಟ್ಟಿ, ಮಲ್ಲಿಕಾ ಪಕ್ಕಳ, ಡಾ| ಅಭಿಲಾಷ್ ಪಿ.ವಿ., ಸುಧಾಕರ ಶೆಟ್ಟಿ, ಶಂಕರ ರಾವ್ ಪುಣೆ, ಎ.ಮಂಜುನಾಥ ಭಂಡಾರಿ, ಶೆಡ್ಡೆ, ಸುಜೀತ್ ಆಳ್ವ, ಉರ್ಮಿಳಾ ರಮೇಶ್ ಕುಮಾರ್ ಮತ್ತಿತರ ಗಣ್ಯರು ವೇದಿಕೆಯನ್ನು ಅಲಂಕರಿಸಿದ್ದರು. ಡಾ| ಪ್ರಕಾಶ್ ಶೆಟ್ಟಿ ಅಧ್ಯಕ್ಷೀಯ ಭಾಷಣಗೈದು ನಾನು ಹಲವು ಶಿಲಾನ್ಯಾಸಗಳಲ್ಲಿ ಭಾಗವಹಿಸಿದ್ದೇನೆ, ಆದರೆ ಇಂತಹ ಸಭೆ, ವೇದಿಕೆ, ಚಾವಡಿ ಎಲ್ಲೂ ಕಂಡಿಲ್ಲ. ಈ ದೇವಸ್ಥಾನದ ಮೇಲೆ ಯಾರಿಗೆ ಭಕ್ತಿ, ವಾತ್ಸಲ್ಯವಿದೆ ಅವರೆಲ್ಲ ನಿಶಬ್ಧರಾಗಿ ಕೂತಿದ್ದಾರೆ. ನನ್ನ ಆರಾಧ್ಯ ದೇವರು, ನನ್ನ ಗ್ರಾಮದ ದೇವರೂ ವಿಷ್ಣುಮೂರ್ತಿ. ನನ್ನ ಮತ್ತು ನನ್ನ ಗ್ರಾಮದೇವರ ಸಂಬಂಧ, ಅಂತೆಯೇ ಮೂಡುಶೆಡ್ಡೆ ಭಕ್ತರ ಸಂಬಂಧ ಅನ್ಯೋನತೆಯ ಬೆಸುಗೆಯಾಗಿದೆ. ದೇವಸ್ಥಾನದ ಕೆಲಸ ಬೇಗ ಆರಂಭಿಸುವ ಸಂಕಲ್ಪಕೈಗೊಳ್ಳಿರಿ. ಆವಾಗ ಮಾತ್ರ ದೇವಸ್ಥಾನದ ಕೆಲಸ ಸಮಯೋಚಿತವಾಗಿ ಮುಗಿಯುತ್ತದೆ. ಒಂದು ವರ್ಷದ ಒಳಗೆ ದೇವಸ್ಥಾನದ ಬ್ರಹ್ಮಕಲಶ ಸಮಾರಂಭ ನೇರವೇರಲಿದೆ ಎಂದು ಹಾರೈಸಿದರು. ಮುಂಬಯಿ ಸಮಿತಿಯ ಪ್ರಧಾನ ಕಾರ್ಯದರ್ಶಿ ದಿವಾಕರ್ ರೈ, ಮುಂಬಯಿ ಸಮಿತಿಯ ಅನುಪಮ ಶೆಟ್ಟಿ, ಶರ್ಮಿಳಾ ಡಿ.ರೈ, ಸುಭಾಷ್ ಶೆಟ್ಟಿ ಇನ್ನಂಜೆ, ಅನುಪಮ ಶೆಟ್ಟಿ ಸೇರಿದಂತೆ ನೂರಾರು ಭಕ್ತಾದಿಗಳು ಉಪಸ್ಥಿತರಿ ದ್ದರು. ಶರಣ್ ಶೆಟ್ಟಿ ಹೊಸಲಕ್ಕೆ ಪ್ರಾರ್ಥನೆಗೈದರು. ಜೀರ್ಣೋದ್ಧಾರ ಸಮಿತಿ ಅಧ್ಯಕ್ಷ ಚಂದ್ರಹಾಸ ಡಿ.ಶೆಟ್ಟಿ (ತುಳು-ಕನ್ನಡ) ಮತ್ತು ಮುಂಬಯಿ ಸಮಿತಿ ಅಧ್ಯಕ್ಷ ಮೂಡುಶೆಡ್ಡೆ ವಿಶ್ವನಾಥ ಶೆಟ್ಟಿ (ಹಿಂದಿ-ಮರಾಠಿ ಭಾಷೆಯಲ್ಲಿ) ಸ್ವಾಗತಿಸಿದರು. ಆಡಳಿತ ಸಮಿತಿ ಅಧ್ಯಕ್ಷ ಎಸ್. ಶಿವರಾಮ ಮಲ್ಲಿ ಅರ್ಬಿ ಪ್ರಸ್ತಾವನೆಗೈದರು. ದೇವಸ್ಥಾನದ ಜೀರ್ಣೋದ್ಧಾರ ಸಮಿತಿಯ ಕಾರ್ಯನಿರ್ವಹಣಾ ಕಾರ್ಯಾಧ್ಯಕ್ಷ ಗಿರಿಧರ್ ಶೆಟ್ಟಿ ಜೀರ್ಣೋದ್ಧಾರದ ಬಗ್ಗೆ ಮಾಹಿತಿ ನೀಡಿದರು. ನಿತೇಶ್ ಎಕ್ಕಾರು ಕಾರ್ಯಕ್ರಮ ನಿರೂಪಿಸಿದರು. ಸಂಘಟನಾ ಕಾರ್ಯದರ್ಶಿ ಹರೀಶ್ ಕೆ. ಧನ್ಯವಾದಗೈದರು.

# ಅದಾನಿ ಕಂಪೆನಿಗಾಗಿ ಭೂಸ್ವಾಧೀನ ವಿರೋಧಿಸಿದ ರೈತರಿಗೆ ಜಯ

## ಪ್ರತಿಭಟನೆಗೆ ಮಣಿದ ಗುಜರಾತ್ ಸರ್ಕಾರ ಪ್ರಮುಖ ಬೇಡಿಕೆಗಳ ಈಡೇರಿಕೆಗೆ ಒಪ್ಪಿಗೆ

**ಅಹಮದಾಬಾದ್, ಜು.4:** ಗುಜರಾತ್‌ನ ಮೋರ್ಬಿ ಜಿಲ್ಲೆಯ ಜೆತ್ಪರ್ ಗ್ರಾಮದಲ್ಲಿ ಅದಾನಿ ಎನರ್ಜಿ ಸೊಲ್ಯೂಷನ್ಸ್ ಕಂಪನಿಯು ಕೈಗೆತ್ತಿಕೊಂಡಿರುವ ಬೃಹತ್ ವಿದ್ಯುತ್ ಪ್ರಸರಣ ಮೂಲಸೌಕರ್ಯ ಯೋಜನೆಗೆ ಸಂಬಂಧಿಸಿದಂತೆ ರೈತರು ನಡೆಸುತ್ತಿದ್ದ ಸುದೀರ್ಘ ಪ್ರತಿಭಟನೆಗೆ ಕೊನೆಗೂ ಗುಜರಾತ್ ಬಿಜೆಪಿ ಸರ್ಕಾರ ಮಣಿದಿದೆ. ರೈತರ ಪ್ರಮುಖ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಒಪ್ಪಿಗೆ ಸೂಚಿಸಿದೆ.

ಜೂನ್ 9 ರಿಂದ ಮೋರ್ಬಿಯ ರೈತರು ನಿರಂತರವಾಗಿ ಹೋರಾಟ ನಡೆಸುತ್ತಿದ್ದಾರೆ. ಜೂನ್ 17ರಿಂದ ಆರಂಭವಾಗಿದ್ದ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಆರಂಭಿಸಿದ್ದಾರೆ. ಇದೀಗ ಗುಜರಾತ್ ಸರ್ಕಾರ ರೈತರ ಪ್ರಮುಖ ಬೇಡಿಕೆಗಳನ್ನು ಈಡೇರಿಸುವ ಭರವಸೆ ನೀಡಿದೆ. ಗುಜರಾತ್‌ನ ಕಚ್ ಜಿಲ್ಲೆಯ ಖಾವ್ಡಾ ಎಂಬಲ್ಲಿ ವಿಶ್ವದ ಅತಿ ದೊಡ್ಡ ನವೀಕರಿಸಬಹುದಾದ ಇಂಧನ ಪಾರ್ಕ್ ನಿರ್ಮಾಣವಾಗುತ್ತಿದೆ. ಇಲ್ಲಿ ಉತ್ಪಾದನೆಯಾಗುವ ಸೌರ ಮತ್ತು ಪವನ ವಿದ್ಯುತ್ ಅನ್ನು ದೇಶದ ಇತರ ಭಾಗಗಳಿಗೆ ಸಾಗಿಸಲು ಬೃಹತ್ ವಿದ್ಯುತ್ ಕಾರಿಡಾರ್‌ಗಳನ್ನು ನಿರ್ಮಿಸಲಾಗುತ್ತಿದೆ.

ಅದಾನಿ ಗ್ರೂಪ್‌ನ ಅಂಗಸಂಸ್ಥೆಯಾದ ಅದಾನಿ ಎನರ್ಜಿ ಸೊಲ್ಯೂಷನ್ಸ್ ಅಡಿಯಲ್ಲಿ ಬರುವ ಹಲ್ವಾಡ್ ಟ್ರಾನ್ಸ್‌ಮಿಷನ್ ಸಂಸ್ಥೆ ಈ ಕಾಮಗಾರಿ ನಡೆಸುತ್ತಿದೆ. ಕಛ್‌ನಿಂದ ಮೋರ್ಬಿ ಜಿಲ್ಲೆಯ ಹಲ್ವಾಡ್‌ವರೆಗೆ 246 ಕಿಲೋಮೀಟರ್ ಉದ್ದದ 765 ಕೆವಿ ಸಾಮರ್ಥ್ಯದ ಹೈ-ವೋಲ್ಟೇಜ್ ವಿದ್ಯುತ್ ಪ್ರಸರಣ ಮಾರ್ಗ ಇದಾಗಿದೆ. ಇದು ಗುಜರಾತ್‌ನ 20 ಜಿಲ್ಲೆಗಳ 400ಕ್ಕೂ ಹೆಚ್ಚು ಹಳ್ಳಿಗಳ ಮೂಲಕ ಹಾದುಹೋಗುತ್ತವೆ. ಇದರಲ್ಲಿ ಮೋರ್ಬಿ ಜಿಲ್ಲೆಯ ಜೆತ್ಪರ್ ಗ್ರಾಮವು ಈ ಯೋಜನೆಯಿಂದ ಅತ್ಯಂತ ತೀವ್ರವಾಗಿ ಸಂತ್ರಸ್ತಗೊಂಡಿರುವ ಕೇಂದ್ರಬಿಂದುವಾಗಿದೆ. ಮೊರ್ಬಿಯ ರೈತರು ಕೇವಲ ನಮಗೆ ಹಣ ಸಾಲದು ಎಂಬ ಕಾರಣಕ್ಕೆ ಮಾತ್ರ ಪ್ರತಿಭಟಿಸುತ್ತಿಲ್ಲ. ಅವರ ಆಕ್ರೋಶದ ಹಿಂದೆ ತಲೆಮಾರುಗಳ ಕೃಷಿ ಭವಿಷ್ಯದ ಆತಂಕಗಳಿವೆ.

ಮೋರ್ಬಿ ಭಾಗದ ಬಹುತೇಕ ರೈತರು ಕಡಲೇಕಾಯಿ, ಹತ್ತಿಯಂತಹ ವಾಣಿಜ್ಯ ಬೆಳೆಗಳನ್ನು ಬೆಳೆಯುವ ಪಾಟೀದಾರ್ ಸಮುದಾಯಕ್ಕೆ ಸೇರಿದವರಾಗಿದ್ದಾರೆ. ಜಮೀನಿನ ಮಧ್ಯೆ ಬೃಹತ್ ವಿದ್ಯುತ್ ಗೋಪುರಗಳನ್ನು ಸ್ಥಾಪಿಸಿ ಹೈಟೆನ್ಷನ್ ತಂತಿಗಳನ್ನು ಎಳೆಯುವುದರಿಂದ ಆ ಭೂಮಿಯ ಮೌಲ್ಯ ಶೂನ್ಯವಾಗುತ್ತದೆ. ಆ ಜಾಗವನ್ನು ಬೇರೆ ಯಾರಿಗೂ ಮಾರಾಟ ಮಾಡಲು ಸಾಧ್ಯವಾಗುವುದಿಲ್ಲ. ಒಮ್ಮೆ ಜಮೀನಿನ ಮೇಲೆ ಹೈವೋಲ್ಟೇಜ್ ತಂತಿಗಳು ಹಾದುಹೋದರೆ, ಸುರಕ್ಷತೆಯ ದೃಷ್ಟಿಯಿಂದ ಆ ಭಾಗದಲ್ಲಿ ಟ್ರ್ಯಾಕ್ಟರ್‌ಗಳು, ಬೆಳೆ ಕೊಯ್ಲು ಯಂತ್ರ ಅಥವಾ ದೊಡ್ಡ ಜೆಸಿಬಿಗಳನ್ನು ಬಳಸಲು ಸಾಧ್ಯವಾಗುವುದಿಲ್ಲ. ಕೃಷಿ ಕಾರ್ಯಾಚರಣೆಗಳು ಅತ್ಯಂತ ಅಪಾಯಕಾರಿಯಾಗುತ್ತವೆ. ಅಷ್ಟು ಮಾತ್ರವಲ್ಲದೆ ಈವರೆಗೆ ಸರ್ಕಾರ ಮತ್ತು ಅದಾನಿ ಕಂಪನಿಯು ಸರ್ಕಾರ ನಿಗದಿಪಡಿಸಿದ ಭೂಮಿಯ ಕನಿಷ್ಠ ಮೌಲ್ಯ ಆಧಾರದ ಮೇಲೆ ಪರಿಹಾರ ನೀಡಲು ಮುಂದಾಗಿದ್ದವು. ಆದರೆ, ಮೋರ್ಬಿಯಲ್ಲಿ ಜಮೀನುಗಳ ನಿಜವಾದ ಮಾರುಕಟ್ಟೆ ಬೆಲೆ ಈ ಜಂತರಿ ದರಕ್ಕಿಂತ ಐದರಿಂದ ಹತ್ತು ಪಟ್ಟು ಹೆಚ್ಚಾಗಿದೆ. ಸರ್ಕಾರಿ ದರದ ಲೆಕ್ಕದಲ್ಲಿ ಕೆಲವೇ ಲಕ್ಷ ರೂ.ಗಳನ್ನು ನೀಡಿ ಭೂಮಿ ವಶಪಡಿಸಿಕೊಳ್ಳಲಾಗುತ್ತಿತ್ತು. ಇದು ರೈತರ ಆಕ್ರೋಶಕ್ಕೆ ಕಾರಣವಾಗಿತ್ತು.

ಅದಾನಿಯಂತಹ ಖಾಸಗಿ ಕಂಪನಿಗಳು ರೈತರ ಭೂಮಿಯಲ್ಲಿ ಮೂಲಸೌಕರ್ಯ ನಿರ್ಮಿಸಿ, ದಶಕಗಳ ಕಾಲ ಕೋಟ್ಯಂತರ ರೂಪಾಯಿ ವಿದ್ಯುತ್ ವ್ಯವಹಾರ ನಡೆಸಿ ಲಾಭ ಗಳಿಸುತ್ತವೆ. ಆದರೆ ಭೂಮಿ ಕಳೆದುಕೊಳ್ಳುವ ರೈತನಿಗೆ ಕೇವಲ ಒಂದು ಬಾರಿ ಅತ್ಯಂತ ಕಡಿಮೆ ಪರಿಹಾರ ನೀಡಿ ಕೈತೊಳೆದುಕೊಳ್ಳಲಾಗುತ್ತದೆ. ಇದು ಅನ್ಯಾಯ ಎಂಬುದು ರೈತರ ಆಕ್ಷೇಪ.

ಇದೀಗ ಕೊನೆಗೂ ರೈತರ ಹೋರಾಟಕ್ಕೆ ಮಣಿದ ಬಿಜೆಪಿ ಸರ್ಕಾರ, ಮಾರುಕಟ್ಟೆ ದರದ ದುಪ್ಪಟ್ಟು ಹಣ ನೀಡಲು ಮತ್ತು ರೈತರನ್ನೊಳಗೊಂಡ ಸಮಿತಿ ರಚಿಸಲು ಒಪ್ಪಿಕೊಂಡಿದೆ. ಸರ್ಕಾರದ ಘೋಷಣೆಯನ್ನು ಸ್ವಾಗತಿಸಿದ್ದರೂ, ಅಧಿಕೃತವಾಗಿ ಸರ್ಕಾರಿ ಆದೇಶ ಹೊರಬೀಳುವವರೆಗೂ ಹಾಗೂ ತಮ್ಮ ಇತರ ಕೆಲವು ತಾಂತ್ರಿಕ ಬೇಡಿಕೆಗಳು ಈಡೇರುವವರೆಗೂ ಜೆತ್‌ಪರ್‌ನಲ್ಲಿ ಹೋರಾಟ ಮತ್ತು ಧರಣಿಯನ್ನು ಮುಂದುವರಿಸುವುದಾಗಿ ರೈತ ಮುಖಂಡರು ತಿಳಿಸಿದ್ದಾರೆ.

# ದೇಣಿಗೆ ಪ್ರಕರಣ: ಆರೋಪಿ ಅನುಕಲ್ಪ್ ಮಿಶ್ರಾ ಆಸ್ತಿ ಜಾಡು ಪತ್ತೆ

**ಲಖನೌ, ಜು.4:** ಅಯೋಧ್ಯೆಯ ಶ್ರೀರಾಮ ಮಂದಿರ ದೇಣಿಗೆ ಕಳವು ಪ್ರಕರಣದ ತನಿಖೆ ಮತ್ತಷ್ಟು ತೀವ್ರಗೊಂಡಿದ್ದು, ಪ್ರಮುಖ ಆರೋಪಿ ಅನುಕಲ್ಪ್ ಮಿಶ್ರಾ ಹಾಗೂ ಆತನ ಬಾವ (ಸೋದರಿಯ ಪತಿ) ಲವಕುಶ್ ಮಿಶ್ರಾ ಹೆಸರಲ್ಲಿ ಕೋಟ್ಯಂತರ ರೂಪಾಯಿ ಮೌಲ್ಯದ ಆಸ್ತಿಗಳು ಪತ್ತೆಯಾಗಿವೆ. ಈ ಆಸ್ತಿಗಳನ್ನು ದೇಣಿಗೆ ಹಣ ದುರ್ಬಳಕೆ ಮೂಲಕ ಖರೀದಿಸಿರುವ ಶಂಕೆಯ ಮೇಲೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ವಿಶೇಷ ತನಿಖಾ ತಂಡ ಇದುವರೆಗೆ ಇಬ್ಬರ ಹೆಸರಿಗೆ ಸಂಬಂಧಿಸಿದಂತೆ ಅರ್ಧ ಡಜನ್‌ಗಿಂತ ಹೆಚ್ಚು ಜಮೀನು, ಮನೆ ಹಾಗೂ ಇತರ ಸ್ಥಿರಾಸ್ತಿಗಳನ್ನು ಪತ್ತೆಹಚ್ಚಿದೆ. ಈ ಆಸ್ತಿಗಳ ಖರೀದಿ ಮೂಲ, ಹಣಕಾಸು ವ್ಯವಹಾರಗಳು ಹಾಗೂ ಬ್ಯಾಂಕ್ ಖಾತೆಗಳ ವಿವರಗಳನ್ನು ಪರಿಶೀಲಿಸಲಾಗುತ್ತಿದೆ. ಆದಾಯ ತೆರಿಗೆ ಇಲಾಖೆಯ ಸಹಕಾರದೊಂದಿಗೆ ಆರ್ಥಿಕ ವಹಿವಾಟಿನ ಸಂಪೂರ್ಣ ತನಿಖೆ ನಡೆಯುತ್ತಿದೆ.

ತನಿಖಾಧಿಕಾರಿಗಳ ಪ್ರಕಾರ, ರಾಮಮಂದಿರದ ದೇಣಿಗೆ ಹಣ ಎಣಿಕೆಯ ಕಾರ್ಯದಲ್ಲಿ ತೊಡಗಿದ್ದ ಕೆಲ ಸಿಬ್ಬಂದಿ ಸಂಘಟಿತ ಜಾಲ ರಚಿಸಿ ದೇಣಿಗೆ ಹಣವನ್ನು ವ್ಯವಸ್ಥಿತವಾಗಿ ದುರುಪಯೋಗಪಡಿಸಿ ಕೊಂಡಿದ್ದಾರೆ. ಈ ಜಾಲದಲ್ಲಿ ಅನುಕಲ್ಪ್ ಮಿಶ್ರಾ ಪ್ರಮುಖ ಪಾತ್ರವಹಿಸಿದ್ದಾನೆ ಎಂಬ ಆರೋಪವಿದ್ದು, ದೇಣಿಗೆಯಿಂದ ಕಳವಾದ ಹಣವನ್ನು ಆಸ್ತಿ ಖರೀದಿಗೆ ಬಳಸಿರುವ ಸಾಧ್ಯತೆಯನ್ನು ತನಿಖೆ ಪರಿಶೀಲಿಸುತ್ತಿದೆ.



### ದೇಣಿಗೆ ಎಣಿಕೆ ವ್ಯವಸ್ಥೆಯಲ್ಲಿ ಬದಲಾವಣೆ

ಹಗರಣದ ನಂತರ ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ದೇಣಿಗೆ ಎಣಿಕೆ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆಗಳನ್ನು ಜಾರಿಗೆ ತಂದಿದೆ. ಹಣ ಎಣಿಸುವ ಸಿಬ್ಬಂದಿಗೆ ಜೇಬುಗಳಿಲ್ಲದ ಕಡು ನೀಲಿಬಣ್ಣದ ಸಮವಸ್ತ್ರ ಕಡ್ಡಾಯಗೊಳಿಸಲಾಗಿದೆ. ಎಣಿಕೆ ಕೇಂದ್ರಕ್ಕೆ ಪ್ರವೇಶಿಸುವ ಮುನ್ನ ಸಿಬ್ಬಂದಿಯನ್ನು ಎರಡು ಹಂತಗಳಲ್ಲಿ ತಪಾಸಣೆ ನಡೆಸಲಾಗುತ್ತದೆ. ಇನ್ನು ಮುಂದೆ ಹಣ ಎಣಿಕೆಯನ್ನು ಮೇಜು-ಕುರ್ಚಿಗಳ ಮೇಲೆ ಕುಳಿತು ನಡೆಸುವುದಕ್ಕೆ ಅವಕಾಶ ಇರುವುದಿಲ್ಲ. ಸಿಬ್ಬಂದಿ ನೆಲದ ಮೇಲೆ ಕುಳಿತು ಹಣ ಎಣಿಸಬೇಕು. ಎಣಿಕೆ ಕೇಂದ್ರದೊಳಗೆ ಮೊಬೈಲ್ ಫೋನ್, ಕ್ಯಾಮರಾ, ಬ್ಯಾಗ್ ಸೇರಿದಂತೆ ಯಾವುದೇ ವೈಯಕ್ತಿಕ ವಸ್ತುಗಳನ್ನು ಕೊಂಡೊಯ್ಯುವುದನ್ನು ನಿಷೇಧಿಸಲಾಗಿದೆ. ಅಲ್ಲದೆ ಶೂ ಅಥವಾ ಚಪ್ಪಲಿ ಧರಿಸಿ ಪ್ರವೇಶಿಸುವುದಕ್ಕೂ ಅವಕಾಶವಿಲ್ಲ.

### ಪ್ರತಿದಿನ 6-8 ಲಕ್ಷ ರೂ. ಲೂಟಿ ಶಂಕೆ

ತನಿಖೆಯ ವೇಳೆ ಹಲವು ಮಹತ್ವದ ಅಂಶಗಳು ಬೆಳಕಿಗೆ ಬಂದಿವೆ. ಬ್ಯಾಂಕ್ ಸಿಬ್ಬಂದಿಯಿಂದ ಪಡೆದ ಮಾಹಿತಿಯ ಆಧಾರದಲ್ಲಿ ಪ್ರತಿದಿನ ಸುಮಾರು 6 ರಿಂದ 8 ಲಕ್ಷದವರೆಗೆ ದೇಣಿಗೆ ಹಣವನ್ನು ಲೂಟಿ ಮಾಡಲಾಗುತ್ತಿತ್ತು ಎಂಬ ಪ್ರಾಥಮಿಕ ಅಂದಾಜಿಗೆ ತನಿಖಾಧಿಕಾರಿಗಳು ಬಂದಿದ್ದಾರೆ.ಎಸ್‌ಐಟಿ ವಿಚಾರಣೆ ವೇಳೆ ಬ್ಯಾಂಕ್ ಸಿಬ್ಬಂದಿ ನೀಡಿದ ಮಾಹಿತಿಯ ಪ್ರಕಾರ, ಹಗರಣ ಬಯಲಾಗುವ ಮೊದಲು ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ನ ಖಾತೆಗೆ ಪ್ರತಿದಿನ ಸರಾಸರಿ 16ರಿಂದ 18 ಲಕ್ಷ ರೂ. ದೇಣಿಗೆ ಜಮೆಯಾಗುತ್ತಿತ್ತು. ಆದರೆ ಪ್ರಕರಣ ಬಹಿರಂಗವಾದ ನಂತರ ಅದೇ ಮೊತ್ತ 24ರಿಂದ 26 ಲಕ್ಷ ರೂ.ಗಳಿಗೆ ಏರಿಕೆಯಾಗಿದೆ. ಈ ವ್ಯತ್ಯಾಸವನ್ನು ಆಧರಿಸಿ ಪ್ರತಿದಿನ 6ರಿಂದ 8 ಲಕ್ಷ ರೂ. ದುರುಪಯೋಗವಾಗಿರಬಹುದ ಎಂದು ತನಿಖಾಧಿಕಾರಿಗಳು ಶಂಕಿಸಿದ್ದಾರೆ.

# ಟಿಎಂಸಿ ಬಂಗಾಳ ರಾಜ್ಯಾಧ್ಯಕ್ಷೆ ರಾಜೀನಾಮೆ

**ಕೋಲ್ಕತ್ತಾ, ಜು.4:** ತೃಣಮೂಲ ಕಾಂಗ್ರೆಸ್‌ನ ಮಮತಾ ಬ್ಯಾನರ್ಜಿ ಬಣಕ್ಕೆ ಮತ್ತೊಂದು ಹಿನ್ನಡೆಯಾಗಿದ್ದು, ಪಕ್ಷದ ಬಂಗಾಳ ರಾಜ್ಯ ಘಟಕದ ಅಧ್ಯಕ್ಷೆ ಚಂದ್ರಿಮಾ ಭಟ್ಟಾಚಾರ್ಯ ಅವರು ಶನಿವಾರ ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ. ವಿಧಾನಸಭಾ ಚುನಾವಣೆಯಲ್ಲಿ ಪಕ್ಷವು ಹೀನಾಯ ಸೋಲನ್ನು ಅನುಭವಿಸಿದ ನಂತರ, ಅವರಿಗೆ ಪ್ರಮುಖ ಸಾಂಸ್ಥಿಕ ಜವಾಬ್ದಾರಿಯನ್ನು ವಹಿಸಿಕೊಟ್ಟ ಒಂದು ತಿಂಗಳಲ್ಲೇ ಅವರು ಈ ನಿರ್ಧಾರ ಕೈಗೊಂಡಿದ್ದಾರೆ.ತೃಣಮೂಲ ಕಾಂಗ್ರೆಸ್ ಅಧ್ಯಕ್ಷರಿಗೆ ಬರೆದ ಪತ್ರದಲ್ಲಿ ಭಟ್ಟಾಚಾರ್ಯ ಅವರು, ಪಕ್ಷದಲ್ಲಿ ತಾವು ಹೊಂದಿದ್ದ ಇತರ ಎಲ್ಲ ಹುದ್ದೆಗಳಿಗೂ ರಾಜೀನಾಮೆ ನೀಡಿದ್ದಾರೆ.



ಇದು ಅವರು ಪಕ್ಷದೊಂದಿಗಿನ ತಮ್ಮ ಸಂಬಂಧವನ್ನು ಕಡಿದುಕೊಂಡಿದ್ದಾರೆಯೇ ಎಂಬ ಊಹಾಪೋಹಗಳಿಗೆ ಎಡೆಮಾಡಿಕೊಟ್ಟಿದೆ. ಮಮತಾ ಬ್ಯಾನರ್ಜಿ ಸರ್ಕಾರದಲ್ಲಿ ಹಣಕಾಸು ಮತ್ತು ಆರೋಗ್ಯದಂತಹ ಪ್ರಮುಖ ಇಲಾಖೆಗಳ ಸಚಿವೆಯಾಗಿದ್ದ ಹಾಗೂ ಪಕ್ಷದ ಮಹಿಳಾ ವಿಭಾಗವನ್ನು ಮುನ್ನಡೆಸಿದ ಭಟ್ಟಾಚಾರ್ಯ ಅವರು, ವಿವಿಧ ಬ್ಯಾಂಕ್‌ಗಳಲ್ಲಿರುವ ಪಕ್ಷದ ಖಾತೆಗಳಿಗೆ ಸಂಬಂಧಿಸಿದ ಅಧಿಕೃತ ಸಹಿದಾರರಾಗಿ ಹಾಗೂ ಚುನಾವಣಾ ಆಯೋಗದ ಮುಂದೆ ಹಾಜರಾಗಲು ಮಮತಾ ಬ್ಯಾನರ್ಜಿ ಅವರ ಅಧಿಕೃತ ಪ್ರತಿನಿಧಿಯಾಗಿ ಕಾರ್ಯನಿರ್ವಹಿಸುವ ಜವಾಬ್ದಾರಿಯಿಂದಲೂ ಹಿಂದೆ ಸರಿದಿದ್ದಾರೆ.

# ಸೈಬರ್ ಅಪರಾಧ ದೊಡ್ಡ ಸವಾಲು, ಪರಿಣಾಮಕಾರಿ ಯೋಜನೆ ರೂಪಿಸಬೇಕಿದೆ: ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್



**ಬೆಂಗಳೂರು, ಜು.4:** ದೇಶದಲ್ಲಿ ಸೈಬರ್ ಅಪರಾಧ ದೊಡ್ಡ ಸವಾಲಾಗಿದ್ದು, ಇದನ್ನು ತಡೆಯುವುದಕ್ಕೆ ಇನ್ನಷ್ಟು ಪರಿಣಾಮಕಾರಿ ಯೋಜನೆಗಳನ್ನು ರೂಪಿಸಬೇಕಾಗಿದೆ ಎಂದು ಉಪ ಮುಖ್ಯಮಂತ್ರಿ ಡಾ.ಜಿ ಪರಮೇಶ್ವರ್ ಹೇಳಿದ್ದಾರೆ.

ಸಂವಿಧಾನದ ಪೂರ್ವಪೀಠಿಕೆಯಲ್ಲಿ ಸಮಾನತೆಗೆ ಮಹತ್ವ ನೀಡಲಾಗಿದ್ದರೂ, ಕಾನೂನು ಮತ್ತು ಸಮಾಜದ ದೃಷ್ಟಿಯಲ್ಲಿ ಅದು ಎಷ್ಟರ ಮಟ್ಟಿಗೆ ಜಾರಿಯಾಗಿದೆ ಎಂಬ ಬಗ್ಗೆ ಗಂಭೀರ ವಿಶ್ಲೇಷಣೆ ಅಗತ್ಯವಿದೆ ಎಂದೂ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಅವರು ಹೇಳಿದ್ದಾರೆ.

ತುಮಕೂರಿನ ಶೆಟ್ಟಿಹಳ್ಳಿಯ ಸುಫಿಯಾ ಕಾನೂನು ಮಹಾವಿದ್ಯಾಲಯದಲ್ಲಿ ನಡೆದ ಪದವಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಕಾನೂನು ಪದವೀಧರರು ನಿರಂತರ ಅಧ್ಯಯನದ ಮೂಲಕ ಪರಿಣತ ನ್ಯಾಯವಾದಿಗಳಾಗಿ ಬೆಳೆಯಬೇಕು ಎಂದು ಸಲಹೆ ನೀಡಿದರು. ಸುಪ್ರೀಂ ಕೋರ್ಟ್ ಹಾಗೂ ಹೈಕೋರ್ಟ್‌ಗಳಲ್ಲಿ ಕೆಲವೇ ನ್ಯಾಯವಾದಿಗಳನ್ನು ಹೆಚ್ಚು ಮಂದಿ ಆಯ್ಕೆ ಮಾಡಿಕೊಳ್ಳುತ್ತಾರೆ. ಕಾನೂನಿನ ಆಳವಾದ ಜ್ಞಾನ ಮತ್ತು ಸಮರ್ಥವಾದ ಮಂಡನೆಯಿಂದ ಅವರು ವಿಶ್ವಾಸ ಗಳಿಸಿದ್ದಾರೆ. ಹೊಸ ತಲೆಮಾರಿನ ವಕೀಲರೂ ಅದೇ ಮಟ್ಟದ ಪರಿಣತಿ ಸಾಧಿಸಬೇಕು ಎಂದು ಹೇಳಿದರು.

ದೇಶದಲ್ಲಿ 1,500ಕ್ಕೂ ಹೆಚ್ಚು ಕಾನೂನು ಕಾಲೇಜುಗಳಿದ್ದು, ಪ್ರತಿವರ್ಷ ಸಾವಿರಾರು ಕಾನೂನು ಪದವೀಧರರು ಹೊರಬರುತ್ತಿದ್ದಾರೆ. ಆದರೂ ನ್ಯಾಯಾಲಯಗಳಲ್ಲಿ ಸಾವಿರಾರು ಪ್ರಕರಣಗಳು ಬಾಕಿ ಉಳಿದಿರುವುದು ಕಳವಳಕಾರಿ. ಪ್ರಕರಣಗಳ ತ್ವರಿತ ವಿಲೇವಾರಿಗೆ ನ್ಯಾಯಾಂಗದಲ್ಲಿ ಇನ್ನಷ್ಟು ಸುಧಾರಣೆ ಅಗತ್ಯವಿದೆ. ಭಾರತ ಇಂದು ಅಂತರರಾಷ್ಟ್ರೀಯ ಮಟ್ಟದಲ್ಲಿ ಕಾನೂನು ಕ್ಷೇತ್ರದಲ್ಲಿ ತನ್ನ ಪ್ರಭಾವವನ್ನು ವಿಸ್ತರಿಸುತ್ತಿದ್ದು, ಭಾರತೀಯ ಕಾನೂನು ತಜ್ಞರು ಜಾಗತಿಕ ವೇದಿಕೆಯಲ್ಲಿ ದೇಶವನ್ನು ಪ್ರತಿನಿಧಿಸುತ್ತಿದ್ದಾರೆ.

ಇದೇ ವೇಳೆ, ದೇಶದಲ್ಲಿ ಸೈಬರ್ ಅಪರಾಧ ದೊಡ್ಡ ಸವಾಲಾಗಿದ್ದು, ಅದನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಕಾನೂನುಗಳನ್ನು ಮತ್ತಷ್ಟು ಬಲಪಡಿಸಬೇಕಾಗಿದೆ ಎಂದು ಹೇಳಿದರು.

ಸ್ವಾತಂತ್ರ್ಯದ ಸಮಯದಲ್ಲಿ ದೇಶದ ಸಾಕ್ಷರತೆ ಪ್ರಮಾಣ ಕೇವಲ 12 ಶೇಕಡಾ ಇದ್ದರೆ, ಈಗ ಅದು ಸುಮಾರು ಶೇ. 80ಕ್ಕೆ ಏರಿಕೆಯಾಗಿದೆ. ಕಾನೂನು ಪದವಿ ಪಡೆದವರು ಕೇವಲ ವೃತ್ತಿ ದೃಷ್ಟಿಯಿಂದಲ್ಲ, ಕಾನೂನಿನ ರಕ್ಷಣೆ ಮತ್ತು ನ್ಯಾಯ ಸೇವೆಯ ಹೊಣೆಗಾರಿಕೆಯನ್ನು ಅರಿತು ಕಾರ್ಯನಿರ್ವಹಿಸಬೇಕು. ಭಾರತಕ್ಕೆ ಡಾ. ಬಿ.ಆರ್. ಅಂಬೇಡ್ಕರ್ ಬಲಿಷ್ಠ ಸಂವಿಧಾನವನ್ನು ನೀಡಿದ್ದು, ದೇಶದ ಪ್ರಜಾಪ್ರಭುತ್ವದ ಉಳಿವಿಗೆ ಸಂವಿಧಾನವೇ ಮೂಲ ಅಡಿಪಾಯವಾಗಿದೆ. ಸಂವಿಧಾನ ದುರ್ಬಲಗೊಂಡರೆ ಪ್ರಜಾಪ್ರಭುತ್ವ ವ್ಯವಸ್ಥೆಯೂ ದುರ್ಬಲವಾಗುತ್ತದೆ. ಆದ್ದರಿಂದ ಸಂವಿಧಾನದ ಮೌಲ್ಯಗಳನ್ನು ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು. ಸಂವಿಧಾನದ ವಿಧಿ 51(ಎ) ಹಾಗೂ ವಿಧಿ 12 ರಿಂದ 35ರವರೆಗೆ ನಾಗರಿಕರ ಕರ್ತವ್ಯಗಳು ಹಾಗೂ ಮೂಲಭೂತ ಹಕ್ಕುಗಳ ಬಗ್ಗೆ ಸ್ಪಷ್ಟವಾಗಿ ಉಲ್ಲೇಖಿಸಲಾಗಿದೆ. ಪ್ರತಿಯೊಬ್ಬರೂ ತಮ್ಮ ಕರ್ತವ್ಯಗಳು ಮತ್ತು ಹಕ್ಕುಗಳನ್ನು ಸರಿಯಾಗಿ ಅರ್ಥಮಾಡಿಕೊಂಡಾಗ ಮಾತ್ರ ಪ್ರಜಾಪ್ರಭುತ್ವದ ಆಶಯಗಳನ್ನು ಪರಿಣಾಮಕಾರಿಯಾಗಿ ಎತ್ತಿಹಿಡಿಯಲು ಸಾಧ್ಯ ಎಂದು ಪರಮೇಶ್ವರ್ ಹೇಳಿದರು.



ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ (ಎಚ್‌ಡಿಎಂಸಿ) 25ನೇ ಮೇಯರ್ ಮತ್ತು ಉಪಮೇಯರ್ ಆಗಿ ಆಯ್ಕೆಯಾದ ಬಿಜೆಪಿಯ ದುರ್ಗಮ್ಮ ಶಶಿಕಾಂತ್ ಬಿಜವಾಡ ಮತ್ತು ರತ್ನಾಬಾಯಿ ಏಕನಾಥ್ ನಜರೆ ಅವರನ್ನು ಕೇಂದ್ರ ಸಚಿವ ಪ್ರಲ್ಹಾದ್ ಜೋಶ್ ಶನಿವಾರ ಅಭಿನಂದಿಸಿದರು.

# ಕನಿಷ್ಠ ವೇತನದ ಅಂತಿಮ ಅಧಿಸೂಚನೆ ಮರುಪರಿಶೀಲನೆ ಬೇಡ: ಮುಖ್ಯಮಂತ್ರಿಗೆ ಜೆಸಿಟಿಯು ಮನವಿ

**ಬೆಂಗಳೂರು, ಜು.04:** "ರಾಜ್ಯದಲ್ಲಿ ಕನಿಷ್ಠ ವೇತನದ ಅಂತಿಮ ಅಧಿಸೂಚನೆಯನ್ನು ಮರುಪರಿಶೀಲಿಸಬಾರದು" ಎಂದು ಕಾರ್ಮಿಕ ಸಂಘದ ಜಂಟಿ ಸಮಿತಿ ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಅವರಿಗೆ ಶನಿವಾರ ಮನವಿ ಪತ್ರ ಸಲ್ಲಿಸಿದರು.

ಕನಿಷ್ಠ ವೇತನದ ಅಂತಿಮ ಅಧಿಸೂಚನೆಯನ್ನು ಮರುಪರಿಶೀಲಿಸುವ ಅಥವಾ ಹಿಂಪಡೆಯುವ ಯಾವುದೇ ಕ್ರಮವನ್ನು ನಿಲ್ಲಿಸಿ ಕಾರ್ಮಿಕರ ಪರವಾಗಿ ಸರ್ಕಾರ ನಿಲ್ಲಬೇಕು? ಎಂದು ಮುಖ್ಯಮಂತ್ರಿಗಳಿಗೆ ನೀಡಿರುವ ಮನವಿ ಪತ್ರದಲ್ಲಿ ಕೋರಲಾಗಿದೆ.

**ದಶಕದ ಬಳಿಕ ಪರಿಷ್ಕರಣೆ:** 'ರಾಜ್ಯದಲ್ಲಿ 2017–18 ರಿಂದಲೇ ಕನಿಷ್ಠ ವೇತನ ಪರಿಷ್ಕರಣೆಯು ಬಾಕಿ ಉಳಿದಿತ್ತು. ದೀರ್ಘಕಾಲದ ಬಳಿಕ 39 ನಿಗದಿಪಡಿತ ಉದ್ಯೋಗಗಳ ವೇತನವನ್ನು ಸುಮಾರು 8 ವರ್ಷಗಳ ನಂತರ ಪರಿಷ್ಕರಿಸಲಾಗಿದೆ. ಈ ವಿಳಂಬವು ಕನಿಷ್ಠ ವೇತನ ಕಾಯ್ದೆ ಮತ್ತು ಸುಪ್ರೀಂ ಕೋರ್ಟ್ ನಿರ್ದೇಶನಗಳ ಉಲ್ಲಂಘನೆಯಾಗಿದೆ. ಅಲ್ಲದೆ, ಮಾಲೀಕರು ವಾದಿಸುತ್ತಿರುವಂತೆ ವೇತನದ ಹೆಚ್ಚಳವು ಶೇ. 60 ರಷ್ಟಿಲ್ಲ, ಬದಲಿಗೆ ಕೇವಲ ಶೇ.40 ರಷ್ಟಿದೆ' ಎಂದು ಪತ್ರದಲ್ಲಿ ಸ್ಪಷ್ಟಪಡಿಸಲಾಗಿದೆ.

**ವೈಜ್ಞಾನಿಕ ಮತ್ತು ಕಾನೂನುಬದ್ಧ ಪ್ರಕ್ರಿಯೆ:** 'ಈ ವೇತನ ಪರಿಷ್ಕರಣೆಯನ್ನು ಅತ್ಯಂತ ವೈಜ್ಞಾನಿಕವಾಗಿ ಮಾಡಲಾಗಿದೆ ಎಂದು ಸಂಘಟನೆಗಳು ತಿಳಿಸಿವೆ. ಏಪ್ರಿಲ್ 2025ರಲ್ಲಿ ಕರಡು ಅಧಿಸೂಚನೆ ಹೊರಡಿಸಿ (ಪ್ರಸ್ತಾವಿತ ದರಗಳು: ರೂ. 19,300 ರಿಂದ ರೂ. 31,114) ಆಕ್ಷೇಪಣೆಗಳಿಗೆ ಅವಕಾಶ ನೀಡಲಾಗಿತ್ತು. 15ನೇ ಭಾರತೀಯ ಕಾರ್ಮಿಕ ಸಮ್ಮೇಳನದ (1956) ಮಾನದಂಡಗಳ ಆಧಾರದ ಮೇಲೆ ಬೆಲೆಗಳನ್ನು ಲೆಕ್ಕಹಾಕಲಾಗಿದ್ದು, ಇದಕ್ಕೆ ಸುಪ್ರೀಂ ಕೋರ್ಟ್ ಹಾಗೂ ಹೈಕೋರ್ಟ್‌ನ ಮಾನ್ಯತೆಯೂ ಇದೆ. ವೇತನ ಸಂಹಿತೆ 2019 ರ ಸೆಕ್ಷನ್ 69 ರ ಅಡಿಯಲ್ಲಿ ಇದನ್ನು ಕಾನೂನು ಬದ್ಧವಾಗಿ ಜಾರಿಗೊಳಿಸಲಾಗಿದೆ' ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ.

**1 ಕೋಟಿಗೂ ಹೆಚ್ಚು ಕುಟುಂಬಗಳಿಗೆ ಅನುಕೂಲ:** 'ಈ ಪರಿಷ್ಕರಣೆಯಿಂದಾಗಿ ಕೆಪಿಟಿಸಿಎಲ್‌ನಂತಹ ಪ್ರಮುಖ ಸಂಸ್ಥೆಗಳು, ಮಂಡಳಿಗಳು ಹಾಗೂ ಖಾಸಗಿ ಉದ್ಯೋಗದಾತರು ಈಗಾಗಲೇ ಹೊಸ ದರಗಳನ್ನು ಜಾರಿಗೆ ತಂದಿದ್ದಾರೆ. ಇದರಿಂದಾಗಿ ರಾಜ್ಯದ 1 ಕೋಟಿಗೂ ಹೆಚ್ಚು ಶ್ರಮಿಕ ವರ್ಗದ ಕುಟುಂಬಗಳ ಆದಾಯ ನೇರವಾಗಿ ಹೆಚ್ಚಲಿದ್ದು, ಜನರ ಖರೀದಿ ಸಾಮರ್ಥ್ಯ ಹಾಗೂ ಆರ್ಥಿಕತೆ ಸುಧಾರಿಸಲಿದೆ. ಸುಮಾರು 3.8 ಲಕ್ಷ ಗುತ್ತಿಗೆ/ಹೊರಗುತ್ತಿಗೆ ನೌಕರರಿಗೆ ವಾರ್ಷಿಕ ರೂ. 3,200 ಕೋಟಿ ವೆಚ್ಚವಾಗಲಿದ್ದು, ಇದು ರಾಜ್ಯದ ಬಜೆಟ್‌ಗೆ ಹೋಲಿಸಿದರೆ ಅತ್ಯಂತ ಅಲ್ಪ ಭಾಗವಾಗಿದೆ' ಎಂದು ಸಮಿತಿ ವಿವರಿಸಿದೆ.

# ಸನ್ನಡತೆ ಆಧಾರದಲ್ಲಿ 24 ಬಂಧಿಗಳಿಗೆ ಜೈಲಿನಿಂದ ಮುಕ್ತಿ



**ಬೆಂಗಳೂರು, ಜು.4:** ಅಪರಾಧ ಕೃತ್ಯ ಎಸಗಿ ಜೈಲು ಸೇರಿದ್ದರೂ, ಅಲ್ಲಿಯೇ ಮನಪರಿವರ್ತನೆಗೊಂಡು ಸನ್ನಡತೆ ಕಾಯ್ದುಕೊಂಡಿದ್ದ 24 ಜೀವಾವಧಿ ಶಿಕ್ಷೆಯ ಬಂಧಿಗಳಿಗೆ ಕೊನೆಗೂ ಜೈಲಿನಿಂದ ಮುಕ್ತಿ ಸಿಕ್ಕಿದೆ. ಬೆಂಗಳೂರಿನ ಪರಪ್ಪನ ಅಗ್ರಹಾರ ಸೇರಿ ರಾಜ್ಯದ ವಿವಿಧ ಕೇಂದ್ರ ಕಾರಾಗೃಹಗಳಲ್ಲಿ ಸುದೀರ್ಘ ಕಾಲ ಶಿಕ್ಷೆ ಅನುಭವಿಸುತ್ತಿದ್ದ 24 ಕೈದಿಗಳನ್ನು ಸನ್ನಡತೆಯ ಆಧಾರದ ಮೇಲೆ ಶನಿವಾರ ಅವಧಿ ಪೂರ್ವವಾಗಿ ಬಿಡುಗಡೆಗೊಳಿಸಲಾಗಿದೆ.

ರಾಜ್ಯಪಾಲರ ಅಧಿಕೃತ ಆದೇಶದನ್ವಯ ಈ ಜೀವಾವಧಿ ಸಜಾ ಬಂಧಿಗಳಿಗೆ ಬಿಡುಗಡೆ ಭಾಗ್ಯ ದೊರೆತಿದ್ದು, ಇದಕ್ಕಾಗಿ ಕಾರಾಗೃಹ ಇಲಾಖೆಯು ವಿಶೇಷ ಕಾರ್ಯಕ್ರಮ ಆಯೋಜಿಸಿತ್ತು.

ಈ ಮಹತ್ವದ ಬಿಡುಗಡೆ ಕಾರ್ಯಕ್ರಮದಲ್ಲಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಮುಖ್ಯ ಅತಿಥಿಯಾಗಿ ಭಾಗವಹಿಸಿ, ಮುಕ್ತರಾದ ಕೈದಿಗಳಿಗೆ ಶುಭ ಹಾರೈಸಿದರು.ಕಾರ್ಯಕ್ರಮದಲ್ಲಿ ಕಾರಾಗೃಹ ಇಲಾಖೆಯ ಎಡಿಜಿಪಿ ಅಲೋಕ್ ಕುಮಾರ್, ಜೈಲಿನ ಮುಖ್ಯ ಸೂಪರಿಂಟೆಂಡೆಂಟ್ ಅಂಶು ಕುಮಾರ್ ಸೇರಿದಂತೆ ಕಾರಾಗೃಹ ಇಲಾಖೆಯ ಉನ್ನತ ಅಧಿಕಾರಿ ವರ್ಗದವರು ಉಪಸ್ಥಿತರಿದ್ದರು.

## ಪ್ರವಾಸೋದ್ಯಮ ಇಲಾಖೆ ಹಾಗೂ ಇಟಲಿ ಕೌನ್ಸಲೇಟ್ ಜನರಲ್ ಸಹಯೋಗ

# ಒನ್ ಮದರ್, ಮೆನಿ ಮದರ್ ಟಂಗ್ಸ್ ಅಂತರರಾಷ್ಟ್ರೀಯ ಕಲಾ ಪ್ರದರ್ಶನ



**ಬೆಂಗಳೂರು, ಜು.4:** ಬೆಂಗಳೂರು ನಗರವನ್ನು ಜಾಗತಿಕ ಸಾಂಸ್ಕೃತಿಕ ಮತ್ತು ಕಲಾ ಪ್ರವಾಸೋದ್ಯಮದ ಪ್ರಮುಖ ತಾಣವನ್ನಾಗಿ ರೂಪಿಸುವ ನಿಟ್ಟಿನಲ್ಲಿ, ಕರ್ನಾಟಕ ಪ್ರವಾಸೋದ್ಯಮ ಇಲಾಖೆ ಹಾಗೂ ಇಟಲಿ ದೇಶದ ಕಾನ್ಸುಲೇಟ್ ಜನರಲ್ ಸಹಯೋಗದಲ್ಲಿ ವಿಶ್ವಪ್ರಸಿದ್ಧ ಒನ್ ಮದರ್, ಮೆನಿ ಮದರ್ ಟಂಗ್ಸ್' ಅಂತರರಾಷ್ಟ್ರೀಯ ಕಲಾ ಪ್ರದರ್ಶನವನ್ನು ಆಯೋಜಿಸಲು ಸಿದ್ಧತೆ ನಡೆಸಿದೆ ಎಂದು ಪ್ರವಾಸೋದ್ಯಮ ಇಲಾಖೆ ಆಯುಕ್ತರಾದ ಡಾ. ವಿ. ರಾಮ್‌ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ಈ ಸಂಬಂಧ ಇಟಲಿ ದೇಶದ ಕಾನ್ಸುಲೇಟ್ ಜನರಲ್ ಗಿಂಡೊಮೆನಿಕೊ ಮಿಲನೋ ಅವರನ್ನು ಭೇಟಿಮಾಡಿ, ಪ್ರದರ್ಶನದ ಆಯೋಜನೆ ಹಾಗೂ ಭಾರತ–ಇಟಲಿ ನಡುವಿನ ಸಾಂಸ್ಕೃತಿಕ ಸಹಕಾರ ವಿಸ್ತರಣೆಗೆ ಸಂಬಂಧಿಸಿದಂತೆ ಮಹತ್ವದ ಚರ್ಚೆ ನಡೆಸಿದರು.

ಭಾರತ ಮತ್ತು ಇಟಲಿ ನಡುವೆ ಹಲವು ದಶಕಗಳಿಂದ ಸಾಂಸ್ಕೃತಿಕ, ಆರ್ಥಿಕ ಹಾಗೂ ರಾಜತಾಂತ್ರಿಕ ಸಂಬಂಧಗಳು ಉತ್ತಮವಾಗಿ ಬೆಳೆದು ಬಂದಿವೆ. ಈ ಸ್ನೇಹವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಉಭಯ ದೇಶಗಳು 2027ನೇ ವರ್ಷವನ್ನು ಇಂಡಿಯಾ ಇಟಲಿ ಪ್ರವಾಸೋದ್ಯಮ ಮತ್ತು ಸಾಂಸ್ಕೃತಿಕ ವರ್ಷ ಎಂದು ಘೋಷಿಸಿವೆ. ಅದರ ಅಂಗವಾಗಿ ಈ ಅಂತರರಾಷ್ಟ್ರೀಯ ಕಲಾ ಪ್ರದರ್ಶನವನ್ನು ಬೆಂಗಳೂರಿನಲ್ಲಿ ಆಯೋಜಿಸಲಾಗುತ್ತಿದೆ.

ವಿಶ್ವವಿಖ್ಯಾತ ಇಟಾಲಿಯನ್ ಪುನರುಜ್ಜೀವನ ಯುಗದ ಕಲಾವಿದ ಅಲೆಸ್ಸಂಡ್ರೊ ಬೊಟ್ಟಿಸೆಲ್ಲಿ ಅವರ ಅಮೂಲ್ಯ ಮಡೋನ ಕಾನ್ ಕಾಂಬಿನೋ ಸೇರಿದಂತೆ, ಸುಮಾರು 100 ಮಿಲಿಯನ್ ಯೂರೋ ಮೌಲ್ಯದ ಅಪರೂಪದ ಕಲಾಕೃತಿಗಳು ಈ ಪ್ರದರ್ಶನದಲ್ಲಿ ಅನಾವರಣಗೊಳ್ಳಲಿವೆ. ವಿಶ್ವದ ಪ್ರಮುಖ ಕಲಾ ಸಂಗ್ರಹಗಳಲ್ಲಿ ಸ್ಥಾನ ಪಡೆದಿರುವ ಇಂತಹ ಕಲಾಕೃತಿಗಳು ಬೆಂಗಳೂರಿಗೆ ಆಗಮಿಸುತ್ತಿರುವುದು ನಗರದ ಸಾಂಸ್ಕೃತಿಕ ಇತಿಹಾಸದಲ್ಲೇ ಮಹತ್ವದ ಬೆಳವಣಿಗೆಯಾಗಿದೆ. 2026ರ ಆಗಸ್ಟ್ 19ರಿಂದ ಸೆಪ್ಟೆಂಬರ್ 29ರವರೆಗೆ ನಗರದ ನ್ಯಾಷನಲ್ ಗ್ಯಾಲರಿ ಆಫ್ ಮಾಡರ್ನ್ ಆರ್ಟ್ ನಲ್ಲಿ ನಡೆಯಲಿರುವ ಈ ಪ್ರದರ್ಶನವು ದಕ್ಷಿಣ ಭಾರತದಲ್ಲೇ ಬೆಂಗಳೂರಿನಲ್ಲಿ ಮಾತ್ರ ಆಯೋಜನೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಪ್ರವಾಸೋದ್ಯಮ ಇಲಾಖೆ ರಾಜ್ಯದ ಜೊತೆಗೆ ತಮಿಳುನಾಡು, ಕೇರಳ, ಆಂಧ್ರಪ್ರದೇಶ, ತೆಲಂಗಾಣ ಹಾಗೂ ಇತರ ರಾಜ್ಯಗಳ ಕಲಾಸಕ್ತರು, ಪ್ರವಾಸಿಗರು ಮತ್ತು ವಿದ್ಯಾರ್ಥಿಗಳನ್ನು ಆಕರ್ಷಿಸಲು ವಿಶೇಷ ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದೆ.

ಈ ಪ್ರದರ್ಶನದ ಮೂಲಕ ಕರ್ನಾಟಕಕ್ಕೆ ಹೆಚ್ಚಿನ ವಿದೇಶಿ ಪ್ರವಾಸಿಗರನ್ನು ಸೆಳೆಯುವುದರ ಜೊತೆಗೆ, ಜಾಗತಿಕ ಮಟ್ಟದ ಕಲಾ ಪ್ರದರ್ಶನಗಳನ್ನು ಆಯೋಜಿಸಬಲ್ಲ ಸಾಂಸ್ಕೃತಿಕ ನಗರವಾಗಿ ಬೆಂಗಳೂರಿನ ಸ್ಥಾನ ಮಾನವನ್ನು ಮತ್ತಷ್ಟು ಬಲಪಡಿಸುವ ಗುರಿ ಯನ್ನು ಪ್ರವಾಸೋದ್ಯಮ ಇಲಾಖೆ ಹೊಂದಿದೆ ಎಂದು ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದರು.



**"ವಿಶ್ವದ ಅತ್ಯಂತ ಪ್ರತಿಷ್ಠಿತ ಇಟಾಲಿಯನ್ ಕಲಾಕೃತಿಗಳನ್ನು ಬೆಂಗಳೂರಿಗೆ ತರುವ ಮೂಲಕ ಕರ್ನಾಟಕವನ್ನು ಜಾಗತಿಕ ಸಾಂಸ್ಕೃತಿಕ ಪ್ರವಾಸೋದ್ಯಮ ನಕ್ಷೆಯಲ್ಲಿ ಮತ್ತಷ್ಟು ಬಲವಾಗಿ ಗುರುತಿಸುವ ಉದ್ದೇಶ ನಮ್ಮದು. ಈ ಪ್ರದರ್ಶನವು ಕೇವಲ ಕಲಾ ಪ್ರದರ್ಶನವಲ್ಲ; ಭಾರತ ಮತ್ತು ಇಟಲಿ ನಡುವಿನ ಸಾಂಸ್ಕೃತಿಕ ಬಾಂಧವ್ಯವನ್ನು ಇನ್ನಷ್ಟು ಗಟ್ಟಿಗೊಳಿಸುವ ಮಹತ್ವದ ವೇದಿಕೆಯಾಗಿದೆ. ಇಂತಹ ಅಂತರರಾಷ್ಟ್ರೀಯ ಕಾರ್ಯಕ್ರಮಗಳು ಹೆಚ್ಚಿನ ವಿದೇಶಿ ಪ್ರವಾಸಿಗರನ್ನು ಆಕರ್ಷಿಸುವುದರ ಜೊತೆಗೆ, ಬೆಂಗಳೂರನ್ನು ಜಾಗತಿಕ ಸಾಂಸ್ಕೃತಿಕ ರಾಜಧಾನಿಯಾಗಿ ರೂಪಿಸುವ ನಮ್ಮ ದೃಷ್ಟಿಗೆ ಹೊಸ ಚೈತನ್ಯ ನೀಡಲಿವೆ."**

**– ಕೆ.ಜೆ. ಜಾರ್ಜ್, ಇಂಧನ ಮತ್ತು ಪ್ರವಾಸೋದ್ಯಮ ಸಚಿವ**

# ಅಹಿಂದ ಕೋಟಾದಲ್ಲಿ ಜಮೀರ್ ಅಹ್ಮದ್‌ಗೆ ಸಚಿವ ಸ್ಥಾನ ನೀಡುವಂತೆ ಮುಖವಾಡ ಧರಿಸಿ ವಿನೂತನ ಸುದ್ದಿಗೋಷ್ಠಿ

**ಬೆಂಗಳೂರು, ಜು.4:** ಮಾಜಿ ಸಚಿವ ಹಾಗೂ ಚಾಮರಾಜಪೇಟೆ ಶಾಸಕ ಜಮೀರ್ ಅಹಮದ್ ಖಾನ್ ಅವರಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಚಿವ ಸಂಪುಟದಲ್ಲಿ ಅಹಿಂದ ಕೋಟಾದಡಿ ಸಚಿವ ಸ್ಥಾನ ನೀಡಬೇಕೆಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಮುಖಂಡರು ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಜಮೀರ್ ಅವರ ಮುಖವಾಡ ಧರಿಸಿ ದಲಿತ ನಾಯಕರು ಗಮನ ಸೆಳೆದರು. ಪ್ರೆಸ್ ಕ್ಲಬ್ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಎನ್. ಶಂಕರ್, ಜಿ ಮದಿಯರಸನ್ ಹಾಗೂ ದಲಿತ ಸಮುದಾಯದ ಮುಖಂಡರು ಜಮೀರ್ ಖಾನ್ ಅವರಿಗೆ ಅಖಂಡ ಬೆಂಬಲ ವ್ಯಕ್ತಪಡಿಸಿದರು.

ರಾಜ್ಯ ಸಂಚಾಲಕ ಎನ್. ಶಂಕರ್ ಮಾತನಾಡಿ, ಶಾಸಕ ಬಿ.ಜೆ. ಜಮೀರ್ ಅಹಮದ್ ಖಾನ್ ಬಡವರ ಪರವಾಗಿ ನಿರಂತರವಾಗಿ ಕೆಲಸ ಮಾಡಿರುವ ಜನನಾಯಕರು. ಜಾತಿ, ಧರ್ಮ ಭೇದವಿಲ್ಲದೇ, ಹಿಂದೂ, ಮುಸ್ಲಿಂ, ಕ್ರೈಸ್ತ ಸೇರಿದಂತೆ ಎಲ್ಲ ಸಮುದಾಯಗಳ ಜನರ ವಿಶ್ವಾಸ ಹಾಗೂ ಪ್ರೀತಿಯನ್ನು ಅವರು ಗಳಿಸಿಕೊಂಡಿದ್ದಾರೆ ಎಂದು ತಿಳಿಸಿದರು.

ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರ್ಕಾರದಲ್ಲಿ ವಸತಿ ಸಚಿವರಾಗಿ ಕಾರ್ಯನಿರ್ವಹಿಸಿದ ವೇಳೆ ಸಹಸ್ರಾರು ಬಡ ಕುಟುಂಬಗಳಿಗೆ ಸೂರು ಕಲ್ಪಿಸುವ ಮೂಲಕ ಜನಪರ ಆಡಳಿತ ನೀಡಿದ್ದರು. ಅವರ ಅನುಭವ ಹಾಗೂ ಜನಸೇವೆಯನ್ನು ಪರಿಗಣಿಸಿ ಮತ್ತೆ ಸಚಿವ ಸಂಪುಟದಲ್ಲಿ ಅವಕಾಶ ನೀಡಬೇಕು ಎಂದು ಅವರು ಆಗ್ರಹಿಸಿದರು.

ಈ ಹಿನ್ನೆಲೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಹಿರಿಯ ನಾಯಕಿ ಸೋನಿಯಾ ಗಾಂಧಿ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರಿಗೆ ಮನವಿ ಸಲ್ಲಿಸಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಅಹಿಂದ ವರ್ಗದ ಜನಸಂಖ್ಯೆ ಗಣನೀಯ ಪ್ರಮಾಣದಲ್ಲಿದ್ದು, ಜಮೀರ್ ಅಹಮದ್ ಖಾನ್ ಅವರಿಗೆ ಸಚಿವ ಸ್ಥಾನ ನೀಡುವುದರಿಂದ ಅಹಿಂದ ಸಮುದಾಯಕ್ಕೆ ಮತ್ತಷ್ಟು ಬಲ ದೊರೆಯಲಿದೆ. ಜೊತೆಗೆ ಪ್ರಾತಿನಿಧ್ಯ ದೊರೆಯುವುದರ ಜೊತೆಗೆ ಕಾಂಗ್ರೆಸ್ ಪಕ್ಷಕ್ಕೂ ರಾಜಕೀಯವಾಗಿ ಅನುಕೂಲವಾಗಲಿದೆ ಎಂದು ಸಮಿತಿಯ ಮುಖಂಡರು ಅಭಿಪ್ರಾಯ ವ್ಯಕ್ತಪಡಿಸಿದರು.

# ಪಾರ್ಟಿ ನೆಪದಲ್ಲಿ ಅತ್ಯಾಚಾರ: ಐವರ ಬಂಧನ

**ಬೆಂಗಳೂರು, ಜು.4:** ಪಾರ್ಟಿ ಮಾಡುವ ಆಮಿಷವೊಡ್ಡಿ ಯುವತಿಯೊಬ್ಬಳನ್ನು ಕರೆಸಿಕೊಂಡು ಅತ್ಯಾಚಾರ ಎಸಗಿರುವ ಹೇಯ ಕೃತ್ಯವೊಂದು ಬೆಂಗಳೂರಿನ ತಲಘಟ್ಟಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬೆಳಕಿಗೆ ಬಂದಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಐವರು ಆರೋಪಿಗಳನ್ನು ಬಂಧಿಸಲಾಗಿದೆ.

ಬಂಧಿತರಾದ ಐವರ ಪೈಕಿ ಇಬ್ಬರು ಸಂತ್ರಸ್ತ ಯುವತಿಯ ಪರಿಚಯಸ್ಥರು ಎನ್ನಲಾಗಿದೆ. ಆರೋಪಿಗಳ ಪೈಕಿ ಸೋಮಶೇಖರ್ ಎಂಬಾತ, ಕಲಬುರಗಿಯಿಯಿಂದ ಸ್ನೇಹಿತರು ಬಂದಿದ್ದಾರೆ, ಪಾರ್ಟಿ ಮಾಡೋಣ ಬಾರಾ ಎಂದು ಯುವತಿಯನ್ನು ನಂಬಿಸಿ ಪಾರ್ಟಿ ನಡೆಯುತ್ತಿದ್ದ ಸ್ಥಳಕ್ಕೆ ಕರೆಸಿಕೊಂಡಿದ್ದಾನೆ. ದೇವನಹಳ್ಳಿ ಮೂಲದ ಯುವತಿಯು ಸ್ನೇಹಿತನ ಮಾತು ನಂಬಿ ಅಲ್ಲಿಗೆ ತೆರಳಿದ್ದಾಳೆ. ಅಲ್ಲಿ ಪಾರ್ಟಿ ನಡೆಯುತ್ತಿದ್ದ ಸಂದರ್ಭದಲ್ಲಿ, ಆರೋಪಿಗಳಲ್ಲೊಬ್ಬನಾದ ಅಂಬರೀಶ ಎಂಬಾತ ಯುವತಿಯ ಮೇಲೆ ಅತ್ಯಾಚಾರ ಎಸಗಿದ್ದಾನೆ ಎಂದು ದೂರಲಾಗಿದೆ.

ಆರೋಪಿಗಳ ಗುಂಪಿನಿಂದ ಹೇಗೋ ಬಚಾವಾದ ಸಂತ್ರಸ್ತ ಯುವತಿ, ತನ್ನ ಪ್ರಾಣ ರಕ್ಷಿಸಿಕೊಳ್ಳಲು ಅಲ್ಲಿಂದ ತಪ್ಪಿಸಿಕೊಂಡು ಓಡಿ ಬಂದಿದ್ದಾಳೆ. ಆತಂಕದ ನಡುವೆಯೂ ಎದೆಗುಂದದ ಆಕೆ, ತಕ್ಷಣವೇ 112 ತುರ್ತು ಸಹಾಯವಾಣಿಗೆ ಕರೆ ಮಾಡಿ ತನಗಾದ ದೌರ್ಜನ್ಯದ ಬಗ್ಗೆ ಪೊಲೀಸರಿಗೆ ದೂರು ನೀಡಿದ್ದಾಳೆ. ಸಂತ್ರಸ್ತೆಯ ಕರೆ ಸ್ವೀಕರಿಸಿ ಎಚ್ಚೆತ್ತ ತಲಘಟ್ಟಪುರ ಪೊಲೀಸರು, ಕೂಡಲೇ ಸ್ಥಳಕ್ಕೆ ದೌಡಾಯಿಸಿ ಸಂತ್ರಸ್ತೆಯನ್ನು ರಕ್ಷಿಸಿದ್ದಾರೆ.

# ಬೆಂಗಳೂರಿನ ರೌಡಿಶೀಟರ್‌ಗಳ ಮೇಲೆ ಸಿಸಿಬಿ ಪೊಲೀಸರ ದಾಳಿ, ಮಾರಕಾಸ್ತ್ರ ವಶ

**ಬೆಂಗಳೂರು, ಜು.4:** ನಗರದ ಪೂರ್ವವಲಯದ ಐದು ವಿಭಾಗಗಳಲ್ಲಿನ 30ಕ್ಕೂ ಹೆಚ್ಚು ರೌಡಿಗಳ ಮನೆಗಳು ಹಾಗೂ ವಾಹನಗಳ ಮೇಲೆ ಏಕಕಾಲಕ್ಕೆ ಸಿಸಿಬಿ ಪೊಲೀಸರು ದಾಳಿ ಮಾಡಿ ಮಾರಕಾಸ್ತ್ರಗಳನ್ನು ವಶಪಡಿಸಿಕೊಂಡಿದ್ದಾರೆ.

ಸಿಸಿಬಿ ಡಿಸಿಪಿ ಹರಿಬಾಬು ಅವರ ನೇತೃತ್ವದಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಇಂದು ಮುಂಜಾನೆಯಿಂದಲೇ ಮಿಂಚಿನ ಕಾರ್ಯಾಚರಣೆ ನಡೆಸಿ ರೌಡಿಗಳ ಮನೆಯನ್ನು ಶೋಧ ಕಾರ್ಯ ನಡೆಸಿದ್ದಾರೆ.ದಾಳಿ ಸಂದರ್ಭದಲ್ಲಿ ಇಂದಿರಾ ನಗರದ ರೌಡಿ ಪ್ರಭಾಕರ್ ಎಂಬಾತನ ಮನೆಯಲ್ಲಿ ಅಪಾರ ಮಾರಕಾಸ್ತ್ರಗಳು ಕಂಡು ಬಂದಿದ್ದು, ಪೊಲೀಸರು ಅವುಗಳನ್ನು ವಶಪಡಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ. ವಾಹನಗಳನ್ನು ಪರಿಶೀಲಿಸಿದಾಗ ಅವುಗಳಲ್ಲಿ ಮಾರಕಾಸ್ತ್ರಗಳು ಇರುವುದು ಕಂಡು ಬಂದ ಹಿನ್ನಲೆಯಲ್ಲಿ ವಾಹನಗಳನ್ನೂ ಸಹ ಪರಿಶೀಲಿಸಿದ್ದಾರೆ.ಕಠಿಣ ಎಚ್ಚರಿಕೆ:ಸಮಾಜದ ಸ್ವಾಸ್ಥ್ಯವನ್ನು ಕೆಡಿಸುವ ಯಾವುದೇ ಅಪರಾಧ ಚಟುವಟಿಕೆಗಳಲ್ಲಿ ಮತ್ತೆ ಭಾಗಿಯಾದರೆ ಅಂತಹವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಡಿಸಿಪಿ ಹರಿಬಾಬು ಎಚ್ಚರಿಕೆ ನೀಡಿದ್ದಾರೆ.

## ಮಸೀದಿ, ಹಜ್ ಭವನದ ಎದುರು ರಾಜಾರೋಷವಾಗಿ ನಡೆಯುತ್ತಿದೆ ಪ್ರಕ್ರಿಯೆ

# ಮತದಾರರ ಪಟ್ಟಿಗೆ ಬಾಂಗ್ಲಾ ಅಕ್ರಮವಾಸಿಗಳ ಹೆಸರು ಸೇರ್ಪಡೆ: ಅಶೋಕ್ ಆಕ್ರೋಶ



**ಬೆಂಗಳೂರು, ಜು.4:** ದೇಶದ ಭದ್ರತೆಯ ದೃಷ್ಟಿಯಿಂದ ಚುನಾವಣಾ ಆಯೋಗ ಎಸ್‌ಐಆರ್ ಮಾಡುತ್ತಿದೆ. ಇದು ಕೇಂದ್ರ ಸರ್ಕಾರದ ಉದ್ದೇಶ ಕೂಡ ಹೌದು. ಆದರೆ ಕಾಂಗ್ರೆಸ್ ಸರ್ಕಾರ ಬಾಂಗ್ಲಾ ಜನರ ಪಾಲಿಗೆ ಸ್ವರ್ಗವಾಗಿದೆ. ಬೆಂಗಳೂರು, ಕೊಡಗು, ಚಿಕ್ಕಮಗಳೂರು ಸೇರಿ ಸುಮಾರು 20 ಲಕ್ಷ ಬಾಂಗ್ಲಾ ದೇಶಿಗಳು ರಾಜ್ಯದಲ್ಲಿದ್ದಾರೆ. 2002ರ ಮತದಾರರ ಪಟ್ಟಿಯಲ್ಲಿ ಇವರ ಹೆಸರಿಲ್ಲ. ಆದ್ದರಿಂದ ಬಾಂಗ್ಲಾ ನಿವಾಸಿಗಳಿಗೆ ಹೆದ್ದಾರಿ ನಿರ್ಮಿಸಿ ಕೊಟ್ಟಿದ್ದು, ಹಜ್ ಭವನ, ಮಸೀದಿಗಳ ಮುಂದೆ ರಾಜಾರೋಷವಾಗಿ ಮತದಾರರ ಪಟ್ಟಿಗೆ ಹೆಸರು ಸೇರಿಸಲಾಗುತ್ತಿದೆ. ಎಂದು ವಿಪಕ್ಷ ನಾಯಕ ಆರ್.ಅಶೋಕ್ ಕಿಡಿ ಕಾರಿದ್ದಾರೆ. ಮಹದೇವಪುರ, ಬ್ಯಾಟರಾಯನಪುರದಲ್ಲಿ ಮಸೀದಿಗಳ ಮುಂದೆ ಗುಂಪು ಗುಂಪಾಗಿ ಕುಳಿತು ಎಸ್‌ಐಆರ್ ಪ್ರಕ್ರಿಯೆ ನಡೆಸಲಾಗುತ್ತಿದೆ. ಬಿಎಲ್‌ಒಗಳು ಪ್ರತಿ ಮನೆಗೆ ಹೋಗಿ ಸಮೀಕ್ಷೆ ಮಾಡಬೇಕಿದ್ದರೂ ಪ್ರಸಾದ ಹಂಚಿದಂತೆ ಬೀದಿಯಲ್ಲಿ ಕುಳಿತು ಅರ್ಜಿಗಳನ್ನು ಹಂಚುತ್ತಿದ್ದಾರೆ. ಅಧಿಕಾರಿಗಳು ಮನೆ ಗುರುತು ಮಾಡಿ ಅರ್ಜಿ ತುಂಬಿಸಿ, ಮರಳಿ ಅರ್ಜಿಯನ್ನು ಪಡೆಯಬೇಕು. ಆದರೆ ಕಾಂಗ್ರೆಸ್ ಮತಕ್ಕಾಗಿ ಬಾಂಗ್ಲಾ ಜನರನ್ನು ಪಟ್ಟಿಗೆ ಸೇರಿಸುವ ಷಡ್ಯಂತ್ರ ಮಾಡುತ್ತಿದೆ ಎಂದು ಆರ್.ಅಶೋಕ್ ದೂರಿದರು.

## ಐಟಿ ಕಂಪನಿ ಡೇಕೇರ್‌ನಲ್ಲಿ ಮಕ್ಕಳ ಮೇಲೆ ದೌರ್ಜನ್ಯ


# ರಾಷ್ಟ್ರೀಯ ಮಾನವಹಕ್ಕು ಆಯೋಗದಿಂದ ಮುಖ್ಯ ಕಾರ್ಯದರ್ಶಿ, ಪೊಲೀಸ್ ಮಹಾನಿರ್ದೇಶಕರಿಗೆ ನೋಟಿಸ್

**ಬೆಂಗಳೂರು,ಜು.4:** ಬೆಂಗಳೂರಿನ ಐಟಿ ಕಂಪನಿಯೊಂದರ ಶಿಶು ವಿಹಾರದಲ್ಲಿ ದಾದಿಯೋರ್ವರು ಪುಟ್ಟ ಮಕ್ಕಳನ್ನು ಅಮಾನವೀಯವಾಗಿ ನಡೆಸಿಕೊಂಡ ಪ್ರಕರಣ ಸಂಬಂಧ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ, ಕರ್ನಾಟಕದ ಮುಖ್ಯ ಕಾರ್ಯದರ್ಶಿ ಹಾಗೂ ಪೊಲೀಸ್ ಮಹಾನಿರ್ದೇಶಕರಿಗೆ ನೋಟಿಸ್ ಜಾರಿ ಮಾಡಿದೆ.

ಮಾಧ್ಯಮ ವರದಿಯನ್ನು ಸ್ವಯಂ ಪ್ರೇರಿತವಾಗಿ ಸ್ವೀಕರಿಸಿದ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ, ಎರಡು ವಾರಗಳೊಳಗೆ ಪ್ರಕರಣದ ಸಂಪೂರ್ಣ ವರದಿಯನ್ನು ಕೇಳಿದೆ. ಐಟಿ ಕಂಪನಿಯ ಸಿಬ್ಬಂದಿ ಕರ್ತವ್ಯ ಅವಧಿಯಲ್ಲಿ ತಮ್ಮ ಮಕ್ಕಳನ್ನು ಬಿಡುತ್ತಿದ್ದ ಶಿಶುವಿಹಾರದಲ್ಲಿ ಮಕ್ಕಳ ಮೇಲೆ ನಡೆಯುತ್ತಿದ್ದ ದೌರ್ಜನ್ಯವನ್ನು ಬಿಂಬಿಸುವ ವಿಡಿಯೋ ಚಿತ್ರೀಕರಣ ಮಕ್ಕಳ ಸಹಾಯವಾಣಿಗೆ ದೊರಕಿದ ಬಳಿಕ ಪ್ರಕರಣ ಬೆಳಕಿಗೆ ಬಂದಿದೆ.

## ಎಸ್‌ಐಆರ್ ಪ್ರಕ್ರಿಯೆಯಲ್ಲಿ ಗೊಂದಲ-ಆತಂಕ

# ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯುವುದನ್ನು ತಪ್ಪಿಸಲು ಚುನಾವಣಾ ಆಯೋಗದ ಸ್ಪಷ್ಟನೆ ನೀಡುವಂತೆ ನನ್ನ ಮತ ನನ್ನ ಹಕ್ಕು ನಾಗರಿಕ ವೇದಿಕೆ ಮನವಿ




**ಬೆಂಗಳೂರು, ಜು.4:** ರಾಜ್ಯದಲ್ಲಿ ಪ್ರಸ್ತುತ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಶೀಲನೆ ಹಾಗೂ ಗಣತಿ ಪ್ರಕ್ರಿಯೆಯು ಸಾರ್ವಜನಿಕರಲ್ಲಿ ತೀವ್ರ ಗೊಂದಲ ಮತ್ತು ಆತಂಕವನ್ನು ಸೃಷ್ಟಿಸಿದೆ. ಈ ಹಿನ್ನೆಲೆಯಲ್ಲಿ, ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯುವುದನ್ನು ತಪ್ಪಿಸಲು ಚುನಾವಣಾ ಆಯೋಗವು ತಕ್ಷಣವೇ ಲಿಖಿತ ಸ್ಪಷ್ಟೀಕರಣಗಳನ್ನು ನೀಡಬೇಕು ಎಂದು ಒತ್ತಾಯಿಸಿ ನನ್ನ ಮತ ನನ್ನ ಹಕ್ಕು ನಾಗರಿಕ ವೇದಿಕೆಯು ರಾಜ್ಯದ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್ ಅವರಿಗೆ ಮನವಿ ಸಲ್ಲಿಸಿದೆ.

ಮಾಧ್ಯಮಗಳ ಮೂಲಕ ಪ್ರಕ್ರಿಯೆಯನ್ನು ವಿವರಿಸುವ ಆಯೋಗದ ಶ್ರಮವನ್ನು ಶ್ಲಾಘಿಸಿರುವ ಸಂಘಟನೆಯು, ಯಾವುದೇ ಅಧಿಕೃತ ಸುತ್ತೋಲೆ ಅಥವಾ ಪತ್ರಿಕಾ ಪ್ರಕಟಣೆ ಹೊರಬೀಳದ ಕಾರಣ ಹಲವು ಮತದಾರರು ಎದುರಿಸುತ್ತಿರುವ ಹತ್ತಾರು ಗಂಭೀರ ಪ್ರಶ್ನೆಗಳನ್ನು ಆಯೋಗದ ಮುಂದಿಟ್ಟಿದೆ.

ಆಯೋಗದ ನಿಯಮಾವಳಿಗಳ ಪ್ರಕಾರ ಬೂತ್ ಮಟ್ಟದ ಅಧಿಕಾರಿಗಳು ಮನೆಗಳಿಗೆ ತೆರಳಿ ಗಣತಿ ನಮೂನೆಗಳನ್ನು ನೀಡಿ, ನಂತರ ಭರ್ತಿ ಮಾಡಿದ ಫಾರ್ಮ್‌ಗಳನ್ನು ಸಂಗ್ರಹಿಸಬೇಕು. ಆದರೆ, ಹಲವೆಡೆ ತಕ್ಷಣವೇ ಸ್ಥಳದಲ್ಲೇ ಫಾರ್ಮ್ ಭರ್ತಿ ಮಾಡಿಕೊಡುವಂತೆ ಬಿಎಲ್‌ಒಗಳು ಒತ್ತಾಯಿಸುತ್ತಿದ್ದಾರೆ. ಮತದಾರರಿಗೆ ನಮೂನೆ ಭರ್ತಿ ಮಾಡಲು ಅಧಿಕೃತವಾಗಿ ಎಷ್ಟು ದಿನಗಳ ಕಾಲಾವಕಾಶ ನೀಡಲಾಗಿದೆ ಎಂಬುದನ್ನು ಆಯೋಗ ಸ್ಪಷ್ಟಪಡಿಸಬೇಕು ಎಂದು ಸಂಘಟನೆ ತಿಳಿಸಿದೆ.

ಹಾಗೆಯೇ, ಕಳೆದ 2025ರ ನವೆಂಬರ್‌ನಿಂದ ಜೂನ್ 20ರವರೆಗೆ ರಾಜ್ಯದ ಶೇ. 91.3ರಷ್ಟು ಮತದಾರರ ಪೂರ್ವ ಎಸ್.ಐ.ಆರ್ ಮ್ಯಾಪಿಂಗ್ ಪೂರ್ಣಗೊಂಡಿದೆ. ಈ ಮ್ಯಾಪಿಂಗ್ ಮಾಹಿತಿಯನ್ನು ಈಗಿನ ಗಣತಿ ಪ್ರಕ್ರಿಯೆಗೆ ಏಕೆ ಬಳಸುತ್ತಿಲ್ಲ ಮತದಾರರು ಮತ್ತೆ 2002ರ ಹಳೆಯ ಮತದಾರರ ಪಟ್ಟಿಯಿಂದ ತಮ್ಮ ವಿವರಗಳನ್ನು ಹುಡುಕುವಂತೆ ಮಾಡುವ ಬದಲು, ಮ್ಯಾಪಿಂಗ್ ದತ್ತಾಂಶವನ್ನೇ ಬಳಸಿ ಬಿಎಲ್‌ಒಗಳು ಮತದಾರರಿಗೆ ನೆರವಾಗಬೇಕು ಎಂದು ಸಂಘಟನೆ ಆಗ್ರಹಿಸಿದೆ.

ಇತ್ತೀಚಿನ ಜಂಟಿ ಮುಖ್ಯ ಚುನಾವಣಾಧಿಕಾರಿಗಳ ಹೇಳಿಕೆ ಪ್ರಕಾರ, ತಂದೆ–ತಾಯಿಯ ವಂಶದ ಇತರ ಸಂಬಂಧಿಕರೊಂದಿಗೂ ಮ್ಯಾಪಿಂಗ್ ಮಾಡಬಹುದೇ ಎಂಬ ಗೊಂದಲಕ್ಕೆ ಅಧಿಕೃತ ಮುದ್ರೆ ಬೇಕಾಗಿದೆ. ಬಿಎಲ್‌ಒ ಆಪ್‌ನಲ್ಲಿ 40 ವರ್ಷ ಮೇಲ್ಪಟ್ಟವರಿಗೆ ಸಂತತಿ ಆಧಾರಿತ ಮ್ಯಾಪಿಂಗ್‌ಗೆ ನಿರ್ಬಂಧ ಹೇರಲಾಗಿದ್ದು, ಅವರು ಕಡ್ಡಾಯವಾಗಿ 2002ರ ಪಟ್ಟಿಯ ವಿವರ ನೀಡಬೇಕೆನ್ನಲಾಗುತ್ತಿದೆ. ಸ್ವಯಂ ಅಥವಾ ಸಂತತಿ ಮ್ಯಾಪಿಂಗ್‌ಗೆ ವಯೋಮಿತಿ ಇದೆಯೇ ಎಂದು ಸಂಘಟನೆ ಪ್ರಶ್ನಿಸಿದೆ.

ಆನ್‌ಲೈನ್‌ನಲ್ಲಿ ಫಾರ್ಮ್ ಭರ್ತಿ ಮಾಡಲು ವೋಟರ್ ಐಡಿ ಮತ್ತು ಆಧಾರ್ ಕಾರ್ಡ್ ವಿವರಗಳು ಅಕ್ಷರಶಃ ಹೊಂದಾಣಿಕೆಯಾಗಬೇಕು ಹಾಗೂ ಮೊಬೈಲ್ ಲಿಂಕ್ ಕಡ್ಡಾಯಗೊಳಿಸಲಾಗಿದೆ. ಆದರೆ ಹಳೆಯ ಐಡಿ ಹೊಂದಿರುವವರಿಗೆ ಇದು ತೀವ್ರ ಕಷ್ಟಕರವಾಗಿದ್ದು, ಈ ನಿಯಮ ಸಡಿಲಿಸಲು ಸಂಘಟನೆ ಕೋರಿದೆ.

ಹಾಗೆಯೇ 2002ರ ಪಟ್ಟಿಯಲ್ಲಿರುವ ಹೆಸರು ಅಥವಾ ಸಂಬಂಧಿಕರ ಹೆಸರಿನ ಕಾಗುಣಿತ ವ್ಯತ್ಯಾಸವಿದ್ದರೆ, ಹಳೆಯದನ್ನೇ ಬರೆಯಬೇಕೇ ಅಥವಾ ಸರಿಪಡಿಸಬೇಕೇ ಎಂಬ ಗೊಂದಲವಿದೆ. ಈ ಬಗ್ಗೆ ಸ್ಪಷ್ಟನೆ ನೀಡಲು ಸಂಘಟನೆ ಮುಖ್ಯ ಚುನಾವಣಾಧಿಕಾರಿ ಅವರನ್ನು ಒತ್ತಾಯಿಸಿದೆ.

ಹಗಲು ವೇಳೆ ಜನ ಉದ್ಯೋಗ'ಕ್ಕಾಗಿ ಹೊರಹೋಗುವುದ ರಿಂದ ಅವರನ್ನು ಗೈರು ಎಂದು ಗುರುತಿಸುವ ಅಪಾಯವಿದೆ. ಇದಕ್ಕಾಗಿ ಪ್ರತಿ ಮತಗಟ್ಟೆಯಲ್ಲಿ ಪ್ರತಿದಿನ ಸಂಜೆ 6ರಿಂದ ರಾತ್ರಿ 9.30ರವರೆಗೆ ಗಣತಿ ಶಿಬಿರ ನಡೆಸುವಂತೆ ಸಂಘಟನೆ ಸಲಹೆ ನೀಡಲಾಗಿದೆ. ಈಗಾಗಲೇ 12.7 ಲಕ್ಷ ಮತದಾರರನ್ನು ಇತರೆ ಎಂದು ವರ್ಗೀಕರಿಸಿ, ಅನುಮಾನಾಸ್ಪದ ಅಕ್ರಮ ವಲಸಿಗರು? ಎಂದು ಪರಿಗಣಿಸಲಾಗುತ್ತಿದೆ ಎಂಬ ವರದಿಗಳಿದ್ದು, ಒಬ್ಬ ಮತದಾರನನ್ನು ಇತರೆ, ಮೃತ, ಸ್ಥಳಾಂತರ ಅಥವಾ ನಕಲು ಎಂದು ಗುರುತಿಸಲು ಇರುವ ನಿಖರ ಮಾನದಂಡಗಳನ್ನು ಬಹಿರಂಗಪಡಿಸುವಂತೆ ಮನವಿಯಲ್ಲಿ ಕೋರಲಾಗಿದೆ.

ಕೈಬರಹದ ನಮೂನೆಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡುವಾಗ ಬಳಸಲಾಗುವ ಕೃತಕ ಬುದ್ಧಿಮತ್ತೆ ಅಥವಾ ಡಿಜಿಟಲ್ ತಂತ್ರಾಂಶವು ಕನ್ನಡ ಲಿಪಿಯನ್ನು ಸರಿಯಾಗಿ ಗುರುತಿಸುತ್ತದೆಯೇ ಹಾಗೂ ಗಣತಿ ನಮೂನೆಗಳನ್ನು ಕೇವಲ ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಮಾತ್ರ ಭರ್ತಿ ಮಾಡಬೇಕೇ ಎಂಬ ಪ್ರಶ್ನೆಗಳನ್ನು ಸಂಘಟನೆ ಎತ್ತಿದೆ.

2026ರ ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿ ಪ್ರಕಟವಾದಾಗ, ಅದರಿಂದ ಹೊರಗುಳಿದ ಅಥವಾ ತಾರ್ಕಿಕ ವ್ಯತ್ಯಾಸಗಳು ಎಂದು ಗುರುತಿಸಲ್ಪಟ್ಟ ಮತದಾರರಿಗೆ ಹೆಚ್ಚುವರಿ ದಾಖಲೆ ಸಲ್ಲಿಸಲು ನೋಟಿಸ್ ನೀಡಲಾಗುತ್ತದೆಯೇ ರಾಜ್ಯದ ಲಕ್ಷಾಂತರ ಬಡ ಮತದಾರರ ಬಳಿ ಎಸ್.ಐ.ಆರ್ ಅಡಿಯಲ್ಲಿ ಸೂಚಿಸಲಾದ 11 ದಾಖಲೆಗಳಿಲ್ಲದ ಕಾರಣ, ಅವರು ಮತದಾನದ ಹಕ್ಕಿನಿಂದ ವಂಚಿತರಾಗುವ ಭೀತಿ ಎದುರಾಗಿದೆ ಎಂದು ಸಂಘಟನೆ ತಿಳಿಸಿದೆ.

ರಾಜ್ಯದಲ್ಲಿ ಯಾವುದೇ ಅರ್ಹ ನಾಗರಿಕನ ಮತದಾನದ ಹಕ್ಕಿಗೆ ಧಕ್ಕೆಯಾಗದಂತೆ ತಡೆಯಲು, ಚುನಾವಣಾ ಆಯೋಗವು ಈ ಎಲ್ಲಾ 13 ಪ್ರಮುಖ ಅಂಶಗಳಿಗೆ ತಕ್ಷಣವೇ ಅಧಿಕೃತ ಲಿಖಿತ ಸ್ಪಷ್ಟೀಕರಣ ನೀಡುವ ಮೂಲಕ ಸಾರ್ವಜನಿಕರ ಆತಂಕ ನಿವಾರಿಸಬೇಕೆಂದು ನನ್ನ ಮತ ನನ್ನ ಹಕ್ಕು ವೇದಿಕೆ ಮುಖ್ಯ ಚುನಾವಣಾಧಿಕಾರಿಗಳಿಗೆ ತುರ್ತು ಮನವಿ ಮಾಡಿದೆ.



ಜಿಬಿಎಯ ಪಾದಚಾರಿ ಮಾರ್ಗ ತೆರವು ಅಭಿಯಾನದ ವಿರುದ್ಧ ಸಿಐಟಿಯು ಬೆಂಬಲದೊಂದಿಗೆ ಬೀದಿ ವ್ಯಾಪಾರಿಗಳು ಶನಿವಾರ ಬೆಂಗಳೂರಿನಲ್ಲಿ ಪ್ರತಿಭಟನೆ ನಡೆಸಿದರು.

# ಹೊಸ ಮುಖ್ಯಮಂತ್ರಿಯಿಂದ ಅಭಿವೃದ್ಧಿಯ ಭರವಸೆ: ಬಿಜೆಪಿ ಎಂಎಲ್‌ಸಿ ವಿಶ್ವನಾಥ್ ಶ್ಲಾಘನೆ

**ಮೈಸೂರು, ಜು.4:** ಮುಖ್ಯಮಂತ್ರಿಯಾಗಿ ತಿಂಗಳು ಪೂರೈಸಿರುವ ಡಿ.ಕೆ. ಶಿವಕುಮಾರ್ ಅವರು ರಾಜ್ಯದಲ್ಲಿ ಅಭಿವೃದ್ಧಿಯ ಭರವಸೆ ಮೂಡಿಸಿದ್ದಾರೆ ಎಂದು ಬಿಜೆಪಿ ವಿಧಾನಪರಿಷತ್ ಸದಸ್ಯ ಎ.ಎಚ್. ವಿಶ್ವನಾಥ್ ಶ್ಲಾಘಿಸಿದರು.

ಈ ಸರ್ಕಾರದಲ್ಲಿ ಹಿಂದಿನ ಮೂರು ವರ್ಷಗಳಲ್ಲಿ ಅಭಿವೃದ್ಧಿ ಕಾರ್ಯ ನಡೆದಿರಲಿಲ್ಲ. ಚಾಲನೆಯನ್ನೂ ಪಡೆದುಕೊಂಡಿರಲಿಲ್ಲ. ಕೇಂದ್ರ ಸರ್ಕಾರವನ್ನು ಬೈದುಕೊಂಡು ಓಡಾಡುತ್ತಿದ್ದರು. ಶಿವಕುಮಾರ್ ಬಂದ ಮೇಲೆ ಕೇಂದ್ರವನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ಕೆಲಸ ಮಾಡಿದ್ದಾರೆ. ಗಣರಾಜ್ಯ ವ್ಯವಸ್ಥೆ ಗೌರವಿಸುತ್ತಿದ್ದಾರೆ. ವಿಬಿಜಿರಾಮ್ಜಿ ಯೋಜನೆ ಅನುಷ್ಠಾನಕ್ಕೆ ಕ್ರಮ ಕೈಗೊಂಡಿದ್ದಾರೆ. ಇದೆಲ್ಲದ



ಮೂಲಕ ನಂಬಬಹುದಾದ ವಿಶ್ವಾಸವನ್ನು ಮೂಡಿಸಿದ್ದಾರೆ' ಎಂದು ಇಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಹೇಳಿದರು.

'ಉಚಿತ ಬಸ್ ಪಾಸ್ ಕೊಡುತ್ತಿರುವುದು ಒಳ್ಳೆಯದೇ. ಎಲ್ಲರಿಗೂ ಉಚಿತ ಶಿಕ್ಷಣ ಹಾಗೂ ಉಚಿತ ಆರೋಗ್ಯ ಕೊಡುವ ಕೆಲಸವನ್ನು ಅವರು ಮಾಡಬೇಕು' ಎಂದು ಒತ್ತಾಯಿಸಿದರು.

# ಬಿಎಲ್‌ಓಗಳಿಗೆ ದುಡ್ಡು ಕೊಟ್ಟು ಕಾರ್ಯಕರ್ತರಿಂದಲೇ ಎಸ್‌ಐಆರ್ ಅರ್ಜಿ ಭರ್ತಿ: ಸಾ.ರಾ. ಮಹೇಶ್ ಆರೋಪ

## ಪ್ರಕ್ರಿಯೆ ಸಮರ್ಥಿಸಿಕೊಂಡ ಗೃಹಸಚಿವರ ಹೇಳಿಕೆಗೆ ಗರಂ

**ಮೈಸೂರು, ಜು.4:** ಅರ್ಜಿ 50 ರೂ. ಕೊಟ್ಟು ಬಿಎಲ್‌ಓಗಳಿಂದಮೈಸೂರು: ರಾಜ್ಯಾದ್ಯಂತ ಎಸ್‌ಐಆರ್ ಪ್ರಕ್ರಿಯೆ ಚುರುಕುಗೊಂಡಿದ್ದು, ಹಲವೆಡೆ ಅಧಿಕಾರಿಗಳ ಕರ್ತವ್ಯ ಲೋಪ ಕಂಡುಬರುತ್ತಿದೆ. ಬಿಎಲ್‌ಒಗಳೇ ಒಂದು ಅರ್ಜಿಗೆ 50 ರೂಪಾಯಿ ಕೊಟ್ಟು ಕೆಲ ಕಾರ್ಯಕರ್ತರಿಂದ ಅರ್ಜಿ ಭರ್ತಿ ಮಾಡಿಸುತ್ತಿದ್ದಾರೆ ಎಂದು ಮಾಜಿ ಸಚಿವ ಸಾ.ರಾ.ಮಹೇಶ್ ಗಂಭೀರ ಆರೋಪ ಮಾಡಿದ್ದಾರೆ.

ಮೈಸೂರು ಜಿಲ್ಲೆಯ ಕೆ.ಆರ್. ನಗರದ ಮೂರು ವಾರ್ಡ್‌ಗಳಲ್ಲಿ ಯಾರದೋ ಎಸ್‌ಐಆರ್ ಅರ್ಜಿಗಳನ್ನು ಇನ್ಯಾರೋ ಭರ್ತಿ ಮಾಡ್ತಿದ್ದಾರೆ. ಬಿಎಲ್‌ಒಗಳೇ ಒಂದು ಅರ್ಜಿಗೆ



50 ರೂಪಾಯಿ ಕೊಟ್ಟು ಕೆಲ ಕಾರ್ಯಕರ್ತರಿಂದ ಅರ್ಜಿ ಭರ್ತಿ ಮಾಡಿಸುತ್ತಿದ್ದಾರೆ. ಬಿಎಲ್‌ಒಗಳು ಬಿಸಿಲಲ್ಲಿ ಪ್ರತಿ ಮನೆಗೆ ಹೋಗಲು ಆಗಲ್ಲ ಅಂತ ತಾವೇ ಹಣ ಕೊಟ್ಟು ಬೇರೆಯವರಿಂದ ಕೆಲಸ ಮಾಡಿಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಸಾಮೂಹಿಕವಾಗಿ ಮತದಾರರ ಪಟ್ಟಿ ಪರಿಷ್ಕರಣೆ ಸಮರ್ಥಿಸಿಕೊಂಡ ಗೃಹ ಸಚಿವರ ಹೇಳಿಕೆಗೆ ಸಾ.ರಾ ಮಹೇಶ್ ಗರಂ ಆಗಿದ್ದಾರೆ. ಗೃಹ ಸಚಿವರಿಗೆ ಕಾನೂನಿನ ಅರಿವಿಲ್ಲ. ಕಾನೂನಿನ ಅರಿವು ಇದ್ದವರು ಮಾತಾಡುವ ರೀತಿ ಗೃಹ ಸಚಿವರು ಮಾತಾಡಿಲ್ಲ. ಬೇರೆ ಯಾವ ಸಚಿವರು ಈ ಬಗ್ಗೆ ಮಾತಾಡುತ್ತಿಲ್ಲ. ಗೃಹ ಸಚಿವರು ಯಾಕೆ ಕಾನೂನು ಬಾಹಿರವಾದದ್ದನ್ನು ಸಮರ್ಥನೆ ಮಾಡುತ್ತಿದ್ದಾರೆ. ಎಸ್‌ಐಆರ್ ಅಂದ ತಕ್ಷಣ ಗೃಹ ಸಚಿವರಿಗೆ ಯಾಕೆ ಭಯ ಎಂದು ಪ್ರಶ್ನಿಸಿದ್ದಾರೆ.

ಇದೇ ವೇಳೆ ಲೋಕಾಯುಕ್ತದವರು ಐಪಿಎಸ್, ಐಎಎಸ್ ಅಧಿಕಾರಿಗಳ ಮನೆ ಮೇಲೆ ಯಾಕೆ ದಾಳಿ ಮಾಡ್ತಿಲ್ಲ. ಐಪಿಎಸ್, ಐಎಎಸ್‌ನಲ್ಲಿ ಭ್ರಷ್ಟರೇ ಇಲ್ವಾ. ಅವರು ಲಂಚವೇ ಪಡೆದಿಲ್ವ. ಲೋಕಾಯುಕ್ತ ಕಾನೂನಿನಿಂದ ಐಪಿಎಸ್, ಐಎಎಸ್ ಅಧಿಕಾರಿಗಳು ಹೊರಗಿದ್ದಾರಾ. ಭ್ರಷ್ಟರು ಅಂದ್ಮೇಲೆ ಎಲ್ಲಾ ಇಲಾಖೆಯಲ್ಲೂ ಇರ್ತಾರೆ. ಲೋಕಾಯುಕ್ತದವರು ಐಎಎಸ್, ಐಪಿಎಸ್ ಬಿಟ್ಟು ಬೇರೆಯವರ ಮನೆ ಮೇಲೆ ಯಾಕೆ ದಾಳಿ ಮಾಡ್ತಿದ್ದಾರೆ ಎಂದು ಪ್ರಶ್ನಿಸಿದ್ದಾರೆ.

## ಯೋಜನೆ ಪರವಾಗಿರುವ ರೈತರ ಸಮಸ್ಯೆಗಳನ್ನೂ ಆಲಿಸಿ

# ಮುಖಾಮುಖಿ ಚರ್ಚೆ: ಎಚ್‌ಡಿಕೆಗೆ ರೈತರ ಆಹ್ವಾನ

**ರಾಮನಗರ, ಜು.4:** ಬಿಡದಿ ಟೌನ್‌ಶಿಪ್ ಯೋಜನೆಯ ಪರ–ವಿರೋಧದ ಚರ್ಚೆಗಳು ರಾಜ್ಯ ರಾಜಕಾರಣದಲ್ಲಿ ಭಾರಿ ಬಿರುಗಾಳಿ ಎಬ್ಬಿಸಿರುವ ಬೆನ್ನಲ್ಲೇ, ಇದೀಗ ಯೋಜನೆ ಪರವಾಗಿರುವ ಬಿಡದಿಯ ಕೆಲ ರೈತರು ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರಿಗೆ ನೇರ ಸವಾಲು ಹಾಕಿದ್ದಾರೆ.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಈ ವಿಷಯದಲ್ಲಿ ರಾಜಕೀಯ ಮಾಡುವುದನ್ನು ಬಿಟ್ಟು, ಮೊದಲು ಯೋಜನೆ ಪರವಾಗಿರುವ ರೈತರ ಅಸಲಿ ಸಮಸ್ಯೆಗಳನ್ನು ಆಲಿಸಲಿ ಎಂದು ಗುಡುಗಿದ್ದಾರೆ.

ಇದಕ್ಕಾಗಿ ಕಿಡಿಕಾರುತ್ತಲೇ ರಾಮನಗರ ತಾಲೂಕಿನ ಭೈರಮಂಗಲ ಗ್ರಾಮದಲ್ಲಿ ಬೃಹತ್ ಮುಕ್ತ ವೇದಿಕೆಯೊಂದನ್ನು ನಿರ್ಮಾಣ ಮಾಡಿರುವ ರೈತರು, ಈ ವೇದಿಕೆಗೆ ಬಂದು ಮುಖಾಮುಖಿ ಚರ್ಚೆ ನಡೆಸುವಂತೆ ಕುಮಾರಸ್ವಾಮಿ ಹಾಗೂ ಸ್ಥಳೀಯ ಶಾಸಕ ಮಂಜುನಾಥ್‌ಗೆ ಬಹಿರಂಗ ಸವಾಲು ಹಾಕಿ ಆಹ್ವಾನ ನೀಡಿದ್ದಾರೆ. ಹಾಗೂ ಕುಮಾರಸ್ವಾಮಿ ಅವರು ಕೇವಲ ಒಂದು ಕಡೆಯ



ಮಾತನ್ನಷ್ಟೇ ಕೇಳದೆ ಯೋಜನೆ ಪರವಾಗಿರುವ ರೈತರ ಸಂಕಷ್ಟವನ್ನೂ ಆಲಿಸಬೇಕು ಎಂದು ಒತ್ತಾಯಿಸಿದ್ದಾರೆ.

ಈ ಭಾಗದ ರೈತರ ಜಮೀನುಗಳು ಕಳೆದ 20 ವರ್ಷಗಳಿಂದ ರೆಡ್ ಜೋನ್‌ಗೆ ಸೇರಿದ್ದು, ಯಾವುದೇ ಅಭಿವೃದ್ಧಿ ಕೆಲಸಗಳನ್ನು ಮಾಡಲು ಸಾಧ್ಯವಾಗದೆ ರೈತರು ದಶಕಗಳಿಂದ ರೆಡ್‌ಜೋನ್ ಭೂತದಿಂದ ವನವಾಸ ಅನುಭವಿಸುತ್ತಿದ್ದಾರೆ. ಹತ್ತಾರು ವರ್ಷಗಳಿಂದ ಭೂಮಿ ನನೆಗುದಿಗೆ ಬಿದ್ದಿರುವುದರಿಂದ, ಟೌನ್‌ಶಿಪ್ ಯೋಜನೆ ಬಂದರೆ ತಮಗೆ ನ್ಯಾಯಯುತ ಪರಿಹಾರ ಹಾಗೂ ಬದುಕಿಗೆ ಒಂದು ಆಸರೆ ಸಿಗುತ್ತದೆ ಎಂಬ ನಿರೀಕ್ಷೆಯಲ್ಲಿ ಈ ಭಾಗದ ರೈತರು ಯೋಜನೆಗೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸುತ್ತಿದ್ದಾರೆ. ಹೀಗಿದ್ದೂ ಕುಮಾರಸ್ವಾಮಿ ಅವರು ರಾಜಕೀಯ ಮಾಡುತ್ತಿದ್ದಾರೆ ಎಂದು ಆಕ್ರೋಶ ಹೊರಹಾಕಿದ್ದಾರೆ.

ಪ್ರತಿಭಟನೆಯ ಭಾಗವಾಗಿ ರೈತರು ಬಿಡದಿ ಹಾಗೂ ಹಾರೋಹಳ್ಳಿ ಮುಖ್ಯ ರಸ್ತೆಯನ್ನು ಸಂಪೂರ್ಣವಾಗಿ ತಡೆದು ಆಕ್ರೋಶ ಹೊರಹಾಕಿದ್ದರಿಂದ ಸ್ಥಳದಲ್ಲಿ ಕೆಲಕಾಲ ಭಾರಿ ಸಂಚಾರ ದಟ್ಟಣೆ ಉಂಟಾಯಿತು. ಈ ವೇಳೆ ಸ್ಥಳಕ್ಕೆ ಧಾವಿಸಿದ ಪೊಲೀಸರು ಪರಿಸ್ಥಿತಿಯನ್ನು ಹತೋಟಿಗೆ ತರಲು ಹರಸಾಹಸ ಪಡಬೇಕಾಯಿತು.ಶೀಘ್ರವಾಗಿ ಇನ್ನುಳಿದ 6 ಕಂದಾಯ ಗ್ರಾಮಗಳ ಅಂತಿಮ ಅಧಿಸೂಚನೆಯನ್ನು ಹೊರಡಿಸಬೇಕು ಮತ್ತು ಸರ್ಕಾರವು ಕೂಡಲೇ ಬಿಡದಿ ಟೌನ್‌ಶಿಪ್ ಯೋಜನೆಯನ್ನು ಯಶಸ್ವಿಯಾಗಿ ಮುಗಿಸಿ ತಮ್ಮ ಜಮೀನುಗಳ ಮೇಲಿರುವ ರೆಡ್ ಜೋನ್ ಕಂಟಕವನ್ನು ಕಡ್ಡಾಯವಾಗಿ ತೆರವು ಮಾಡಬೇಕು ಎಂದು ರೈತರು ಕಟ್ಟುನಿಟ್ಟಾಗಿ ಆಗ್ರಹಿಸಿದ್ದಾರೆ.ರಾಜಕೀಯ ಲಾಭಕ್ಕಾಗಿ ಬಡ ರೈತರ ಬದುಕಿನೊಂದಿಗೆ ಆಟವಾಡದಂತೆ ಎಚ್ಚರಿಸಿರುವ ಭೈರಮಂಗಲ ಭಾಗದ ರೈತರು ಸಿದ್ಧಪಡಿಸಿರುವ ಈ ಮುಕ್ತ ವೇದಿಕೆಗೆ ಹೆಚ್ಡಿಕೆ ಆಗಮಿಸುತ್ತಾರಾ ಎಂಬುದನ್ನು ಕಾದುನೋಡಬೇಕಿದೆ.

## ಆಳಂದ ರಾಘವ ಚೈತನ್ಯ ಶಿವಲಿಂಗ ಪೂಜೆ ವೇಳೆ ಕಲ್ಲುತೂರಾಟ

# ಪ್ರಕರಣ ರದ್ದತಿಗೆ ಹೈಕೋರ್ಟ್ ಮಧ್ಯಂತರ ತಡೆ: ಸರ್ಕಾರಕ್ಕೆ ಭಾರಿ ಮುಖಭಂಗ

**ಕಲಬುರಗಿ, ಜು. 4:** ಜಿಲ್ಲೆಯ ಆಳಂದ ಪಟ್ಟಣದಲ್ಲಿನ ವಿವಾದಾತ್ಮಕ ಲಾಡ್ಲೆ ಮಶಾಕ್ ದರ್ಗಾ ಆವರಣದಲ್ಲಿನ ರಾಘವ ಚೈತನ್ಯರ ಶಿವಲಿಂಗಕ್ಕೆ ಮಹಾಶಿವರಾತ್ರಿಯ ದಿನದಂದು ನಡೆದ ಪೂಜೆ ಸಂದರ್ಭದಲ್ಲಿ ಜಿಲ್ಲಾಧಿಕರಿ, ಎಸ್‌ಪಿ ಮತ್ತು ಕೇಂದ್ರ ಸಚಿವರ ಕಾರಿನ ಮೇಲೆ ಕಲ್ಲುತೂರಾಟ ನಡೆಸಿ, ಗಲಭೆ ಉಂಟು ಮಾಡಿರುವ ಪ್ರಕರಣವನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ಹಿಂಪಡೆದುಕೊಂಡಿದ್ದಕ್ಕೆ ರಾಜ್ಯದ ಉಚ್ಚ ನ್ಯಾಯಾಲಯವು ಮಧ್ಯಂತರ ತಡೆಯಾಜ್ಞೆ ನೀಡಿದೆ.

ನ್ಯಾಯಾಲಯದ ಕ್ರಮದಿಂದ ಕರ್ನಾಟಕ ಸರ್ಕಾರಕ್ಕೆ ದೊಡ್ಡ ಹಿನ್ನಡೆಯಾಗಿರುವ ಬೆಳವಣಿಗೆಯೊಂದರಲ್ಲಿ, 52 ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯುವ ಸರ್ಕಾರದ ನಿರ್ಧಾರಕ್ಕೆ ಕರ್ನಾಟಕ ಹೈಕೋರ್ಟ್ ಮಧ್ಯಂತರ ತಡೆ ನೀಡಿದೆ. ಇದೇ ರೀತಿಯ ಅಧಿಸೂಚನೆಯೊಂದನ್ನು ಈ ಹಿಂದೆ ರದ್ದುಗೊಳಿಸಿದ್ದ ಹೈಕೋರ್ಟ್ ತೀರ್ಪಿಗೆ ಸರ್ಕಾರದ ಈ ಆದೇಶವು ಮೇಲ್ನೋಟಕ್ಕೆ ವಿರುದ್ಧವಾಗಿದೆ ಎಂದು ವಿಭಾಗೀಯ ಪೀಠ ಅಭಿಪ್ರಾಯಪಟ್ಟಿದೆ.

ಹಿಂಪಡೆಯಲು ಉದ್ದೇಶಿಸಲಾಗಿದ್ದ ಪ್ರಕರಣಗಳಲ್ಲಿ ಆಳಂದದ ಲಾಡ್ಲೆ ಮಶಾಕ್ ದರ್ಗಾ ಗಲಭೆ ಪ್ರಕರಣ ಮತ್ತು ಜಿಲ್ಲೆಯ ಹಲವು ಕೋಮು ಗಲಭೆ ಪ್ರಕರಣಗಳು ಸೇರಿವೆ. ಹಿಂದಿನ ವಿಧಾನಸಭಾ ಅಧ್ಯಕ್ಷ ಯು.ಟಿ. ಖಾದರ್ ಅವರ ಶಿಫಾರಸ್ಸುಗಳ ಆಧಾರದ ಮೇಲೆ ಕಳೆದ ಮೇ 27ರಂದು ಹೊರಡಿಸಲಾದ ಸರ್ಕಾರದ ಆದೇಶದ ಮೂಲಕ ಈ ಪ್ರಕರಣಗಳನ್ನು ಹಿಂಪಡೆಯುವ ನಿರ್ಧಾರವನ್ನು ಕೈಗೊಳ್ಳಲಾಗಿತ್ತು.

ಮುಖ್ಯ ನ್ಯಾಯಮೂರ್ತಿ ವಿಬು ಬಖ್ರು ಮತ್ತು ನ್ಯಾಯಮೂರ್ತಿ ಕೆ.ಎಸ್. ಹೇಮಲೇಖಾ ಅವರನ್ನೊಳಗೊಂಡ ವಿಭಾಗೀಯ ಪೀಠವು ಸರ್ಕಾರದ ನಿರ್ಧಾರಕ್ಕೆ ತಡೆ ನೀಡಿ, ಗೃಹ ಇಲಾಖೆ ಮತ್ತು ಪ್ರಾಸಿಕ್ಯೂಷನ್ ನಿರ್ದೇಶನಾಲಯಕ್ಕೆ ನೋಟಿಸ್ ಜಾರಿ ಮಾಡಿ, ಎರಡು ವಾರಗಳಲ್ಲಿ ಉತ್ತರಗಳನ್ನು ಸಲ್ಲಿಸುವಂತೆ ನಿರ್ದೇಶಿಸಿದೆ. ಆದಾಗ್ಯೂ, ಅರ್ಜಿಯಲ್ಲಿ ಹಿಂದಿನ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಅವರ ವಿರುದ್ಧ ಮಾಡಲಾದ ಆರೋಪಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯವು ಅವರಿಗೆ ನೋಟಿಸ್ ಜಾರಿ ಮಾಡಲಿಲ್ಲ.

ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸರ್ಕಾರದ ನಿರ್ಧಾರವನ್ನು ಪ್ರಶ್ನಿಸುತ್ತದೆ. ಗಿರೀಶ್ ಭಾರದ್ವಾಜ್ ಅವರು ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ (ಪಿಐಎಲ್) ವಿಚಾರಣೆಯ ಸಂದರ್ಭದಲ್ಲಿ ಮಧ್ಯಂತರ ಆದೇಶ ಬಂದಿದೆ. ಅರ್ಜಿದಾರರ ಪರವಾಗಿ ಹಾಜರಾದ ನ್ಯಾಯವಾದಿ ವೆಂಕಟೇಶ್ ಪಿ. ದಳವಾಯಿ ಅವರು 1973ರ ಕ್ರಿಮಿನಲ್ ಪ್ರಕ್ರಿಯಾ ಸಂಹಿತೆಯ ಸೆಕ್ಷನ್ 321ರ ಅಡಿಯಲ್ಲಿ ಸಾರ್ವಜನಿಕ ಅಭಿಯೋಜಕರಿಗೆ ನೀಡಲಾದ ಸ್ವತಂತ್ರ ವಿವೇಚನೆಯನ್ನು ಕಾರ್ಯಾಂಗವು ಅನುಚಿತವಾಗಿ ವಹಿಸಿಕೊಂಡಿದೆ ಎಂದು ವಾದಿಸಿದರು. ಪ್ರಕರಣಗಳನ್ನು ಹಿಂತೆಗೆದುಕೊಳ್ಳುವ ನಿರ್ಧಾರವು ಯಾವುದೇ ನಿಜವಾದ ಸಾರ್ವಜನಿಕ ಹಿತಾಸಕ್ತಿ ಯನ್ನು ಆಧರಿಸಿಲ್ಲ ಎಂದು ಅವರು ವಾದಿಸಿದರು.

ರಾಜ್ಯದ ಮೂವರು ಹಿರಿಯ ಸಚಿವರ ನೇರ ಶಿಫಾರಸಿನ ಮೇರೆಗೆ ನಿಯಮಗಳನ್ನು ಗಾಳಿಗೆ ತೂರಿ ಈ ಪ್ರಕರಣಗಳನ್ನು ಕೈಬಿಡಲಾಗಿದೆ. ಹೂಡಲಾಗಿದ್ದ ಕ್ರಿಮಿನಲ್ ಪ್ರಕರಣಗಳನ್ನು ಪ್ರಾಸಿಕ್ಯೂಷನ್ನಿಂದ ಹಿಂಪಡೆಯುವ ಸರ್ಕಾರದ ಈ ನಿಲುವು, ಇದೇ ವಿಷಯಕ್ಕೆ ಸಂಬಂಧಿಸಿದಂತೆ 2025ರಲ್ಲಿ ಹೈಕೋರ್ಟ್ ನೀಡಿದ್ದ ಕಟ್ಟುನಿಟ್ಟಿನ ಆದೇಶಕ್ಕೆ ಸಂಪೂರ್ಣ ತದ್ವಿರುದ್ಧವಾಗಿದೆ. ಇದು ಕೇವಲ ರಾಜಕೀಯ ದುರುದ್ದೇಶದಿಂದ ಕೂಡಿದ ತೀರ್ಮಾನ ಎಂದು ಸಹ ವಾದಿಸಿದರು.

**ಗೃಹ ಸಚಿವ ಖರ್ಗೆ ಪ್ರತಿಕ್ರಿಯೆ:** ಈ ಘಟನೆಗೆ ಸಂಬಂಧಿಸಿದಂತೆ ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಪ್ರತಿಕ್ರಿಯಿಸಿ, ಸರ್ಕಾರವು ಈ ಕುರಿತು ಅಭಿಪ್ರಾಯ ವ್ಯಕ್ತಪಡಿಸುವುದಕ್ಕೆ ಮೊದಲು ಆದೇಶವನ್ನು ಅಧ್ಯಯನ ಮಾಡುತ್ತದೆ. ನ್ಯಾಯಾಲಯದ ಆದೇಶದ ಪ್ರತಿಯನ್ನು ಪಡೆದ ನಂತರ ನಾವು ಈ ವಿಷಯದ ಬಗ್ಗೆ ಚರ್ಚಿಸುತ್ತೇವೆ. ಈ ಪಟ್ಟಿಯಲ್ಲಿ ಬಿಜೆಪಿ ನಾಯಕರಿಗೆ ಸಂಬಂಧಿಸಿದ ಪ್ರಕರಣಗಳೂ ಸೇರಿವೆ. ಕಾನೂನಿನ ವ್ಯಾಪ್ತಿಯನ್ನು ಮೀರಿ ನಾವು ಯಾವುದೇ ಆದೇಶವನ್ನು ಹೊರಡಿಸಿಲ್ಲ. ಕಾನೂನು ಚೌಕಟ್ಟಿನೊಳಗೆ ಸಚಿವ ಸಂಪುಟವು ಈ ನಿರ್ಧಾರವನ್ನು ಕೈಗೊಂಡಿದೆ.

ಹಿಂದಿನ ಸರ್ಕಾರಗಳ ರೀತಿಯಲ್ಲಿಯೇ ರಾಜ್ಯ ಸರ್ಕಾರವೂ ಸಹ ಕಾನೂನಿನ ಅಡಿಯಲ್ಲಿಯೇ ಕ್ರಮ ಕೈಗೊಂಡಿದೆ ಎಂದು ಅವರು ಹೇಳಿದರು.

ರಾಜ್ಯ ಸರ್ಕಾರದ ನಿರ್ಧಾರದ ವಿರುದ್ಧದ ಕಾನೂನು ಹೋರಾಟದಲ್ಲಿ ಇದೊಂದು ಮಹತ್ವದ ಬೆಳವಣಿಗೆಯಾಗಿದ್ದು, ಹೈಕೋರ್ಟ್‌ನ ಮಧ್ಯಂತರ ತಡೆಯಾಜ್ಞೆಯು ಮುಂದಿನ ವಿಚಾರಣೆ ನಡೆಯುವವರೆಗೆ ಒಟ್ಟು 52 ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯುವ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದೆ.

**ಹಿಂದೂ ಮುಖಂಡರ ಹರ್ಷ:**

**ಆಳಂದ್ ಪಟ್ಟಣದ ಲಾಡ್ಲೆ ಮಶಾಕ್ ದರ್ಗಾ ಗಲಭೆ ಪ್ರಕರಣ ಸೇರಿದಂತೆ 52 ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯುವ ಸರ್ಕಾರದ ನಿರ್ಧಾರಕ್ಕೆ ಕರ್ನಾಟಕ ಹೈಕೋರ್ಟ್ ಮಧ್ಯಂತರ ತಡೆ ನೀಡಿದ್ದನ್ನು ಶ್ರೀರಾಮ್ ಸೇನೆ ರಾಜ್ಯಾಧ್ಯಕ್ಷ ಸಿದ್ದಲಿಂಗ ಸ್ವಾಮೀಜಿ ಹಾಗೂ ಬಿಜೆಪಿ ಮುಖಂಡರೂ ಆಗಿರುವ ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಹರ್ಷಾನಂದ್ ಗುತ್ತೇದಾರ್ ಅವರೂ ಸೇರಿದಂತೆ ಅನೇಕರು ಸ್ವಾಗತಿಸಿದ್ದಾರೆ. ಈ ಕುರಿತು ಗಿರೀಶ್ ಭಾರದ್ವಾಜ್ ಅವರಿಗೆ ಅವರು ಅಭಿನಂದಿಸಿದ್ದಾರೆ.**

## ಕಾಫಿ ವ್ಯವಹಾರಕ್ಕೆ ಮೈಸೂರು ರಾಜವಂಶ ಪ್ರವೇಶ

# ಭೇರುಂಡ ಬ್ರ್ಯಾಂಡ್ ಅನಾವರಣ, ಕಾಫಿ ಪ್ರಭೇದಗಳಿಗೆ ಅರಮನೆ ಆನೆಗಳ ಹೆಸರು




**ಮೈಸೂರು, ಜು.4:** ಮೈಸೂರು ರಾಜಮನೆತನವು ಕಾಫಿ ವ್ಯವಹಾರಕ್ಕೆ ಪ್ರವೇಶ ನೀಡಿದ್ದು, ಬೇರುಂಡ ಕಾಫಿ ಎಂಬ ಬ್ರಾಂಡ್ ಅನಾವರಣಗೊಳಿಸಿದೆ. ಗಂಡಭೇರುಂಡ ಎಂಬುದು ಪೌರಾಣಿಕ ಪಕ್ಷಿಯಾಗಿದ್ದು, ಇದು ಒಡೆಯರ್ ರಾಜವಂಶದ ರಾಜಲಾಂಛನವಾಗಿತ್ತು. ಕಾಫಿ ಪ್ರಭೇದಗಳಿಗೆ ಅರಮನೆಯ ಆನೆಗಳ ಹೆಸರನ್ನು ಇಡಲಾಗಿದೆ – ದ್ರೋಣ ಮತ್ತು ಅರ್ಜುನ ಮತ್ತು ಗಜೇಂದ್ರ ಎಂಬ ಅರಮನೆಯ ಆನೆಗಳ ಹೆಸರನ್ನು ಈ ಕಾಫಿಗಳಿಗೆ ಇಡಲಾಗಿದೆ. ಮೂರೂ ಎಎ–ದರ್ಜೆಯ, ಚಿಕೋರಿ ಮುಕ್ತ, ಹುರಿದು ಪುಡಿ ಮಾಡಿರುವ ಕಾಫಿಯಾಗಿದೆ.

ಚಿಕ್ಕಮಗಳೂರು, ಬಿಳಿಗಿರಿರಂಗನ ಬೆಟ್ಟಗಳು ಮತ್ತು ಕೊಡಗಿನಿಂದ ಕಾಫಿ ಬೀಜಗಳನ್ನು ಪಡೆಯಲಾಗಿದೆ. ಜಯಚಾಮರಾಜ ಒಡೆಯರ್ ಅವರ ಮೊಮ್ಮಗಳು ರಾಜಕುಮಾರಿ ಜಯಪಾಲಶ್ರೀ ಅನಿಲ್ ಮಾತನಾಡಿ, ಮುಂದಿನ ದಿನಗಳಲ್ಲಿ ಇನ್ನಷ್ಟು ಹೊಸ ಕಾಫಿ ಸಂಗ್ರಹಗಳನ್ನು ಪರಿಚಯಿಸುವುದು, ನೆರಳು ಆಧಾರಿತ ಕಾಫಿ ಬೆಳೆ ಹಾಗೂ ಸನ್‌ಡ್ರೈಡ್ ಪ್ರಕ್ರಿಯೆಯಂತಹ ಸುಸ್ಥಿರ ಕೃಷಿ ಪದ್ಧತಿಗಳಿಗೆ ಆದ್ಯತೆ ನೀಡುವುದು ಮತ್ತು ಕಾಫಿ ಉದ್ಯಮದ ವಿವಿಧ ಹಂತಗಳಲ್ಲಿ ಮಹಿಳೆಯರ ಹೆಚ್ಚಿನ ಪಾಲ್ಗೊಳ್ಳುವಿಕೆಯನ್ನು ಖಚಿತಪಡಿಸುವುದು ಸಂಸ್ಥೆಯ ಪ್ರಮುಖ ಗುರಿಗಳಾಗಿವೆ ಎಂದು ತಿಳಿಸಿದರು.

ನನ್ನ ತಾಯಿ ತಮ್ಮ ಬಾಲ್ಯದ ದಿನಗಳಲ್ಲಿ ಬೆಳಗಿನ ಜಾವ ಹೊಸದಾಗಿ ತಯಾರಿಸಿದ ಕಾಫಿಯ ಪರಿಮಳದೊಂದಿಗೆ ದಿನ ಆರಂಭವಾಗುತ್ತಿದ್ದ ನೆನಪುಗಳನ್ನು ಹಂಚಿಕೊಳ್ಳುತ್ತಿದ್ದರು. ನಮ್ಮ ಕುಟುಂಬದಲ್ಲಿ ಕಾಫಿ ಎಂದರೆ ಕೇವಲ ಪಾನೀಯವಲ್ಲ, ಅದು ತಲೆಮಾರುಗಳನ್ನು ಜೋಡಿಸುವ ಭಾವನಾತ್ಮಕ ಬಾಂಧವ್ಯ. ಆದ್ದರಿಂದ ಇಂದು ನಾವು ಕೇವಲ ಒಂದು ಬ್ರ್ಯಾಂಡ್ ಆಗಿ ಪರಿಚಯಿಸುತ್ತಿಲ್ಲ; ನಮ್ಮ ಕುಟುಂಬದ ಪರಂಪರೆಯ ಒಂದು ಹೊಸ ಅಧ್ಯಾಯವನ್ನು ಆರಂಭಿಸುತ್ತಿದ್ದೇವೆ ಎಂದರು.

## ಮೈಸೂರು ದಸರಾದಲ್ಲಿ ಕಂಬಳ ಆಯೋಜನೆಗೆ ಸ್ಥಳೀಯರ ವಿರೋಧ

# ಹೆಚ್ಚು ಹಣ ಖರ್ಚುಮಾಡಿ ಕಂಬಳ ಆಯೋಜಿಸುವ ಅಗತ್ಯ ಇದೆಯೇ...?

**ಮೈಸೂರು, ಜು.4:** ಕರಾವಳಿಯ ಪ್ರಸಿದ್ಧ ಹಾಗೂ ಆಕರ್ಷಣೆಯಾಗಿರುವ ಕಂಬಳವನ್ನು ಮೈಸೂರಿನಲ್ಲಿ ನಡೆಸುವುದಕ್ಕೆ ವಿರೋಧ ವ್ಯಕ್ತವಾಗು ತ್ತಿದೆ. ಮೈಸೂರು ದಸರಾ ಮಹೋತ್ಸವದಲ್ಲಿ ಇದೇ ಮೊದಲ ಬಾರಿಗೆ ಕಂಬಳ ಉತ್ಸವವನ್ನು ಆಯೋಜಿಸಲು ಸರ್ಕಾರ ಮುಂದಾಗಿದೆ.

ಎನ್ನುವ ಉದ್ದೇಶದಿಂದ ಮೈಸೂರಿನಲ್ಲಿ ಕಂಬಳ ಆಯೋಜಿಸಲಾಗುತ್ತಿದೆ ಎಂದು ಸರ್ಕಾರ ಹೇಳಿಕೊಂಡಿದೆ. ಆದರೆ, ಇದಕ್ಕೆ ಸ್ಥಳೀಯವಾಗಿ ತೀವ್ರ ವಿರೋಧ ವ್ಯಕ್ತವಾಗುತ್ತಿದೆ.

ಇನ್ನು ಈ ಬಾರಿಯ ದಸರಾ ಮಹೋತ್ಸವದಲ್ಲಿ ಕಂಬಳ ಆಯೋಜನೆಗೆ ಕೋಟ್ಯಂತರ ರೂಪಾಯಿ



ಕರಾವಳಿ ಭಾಗದ ಸಾಂಪ್ರದಾಯಿಕ ಕ್ರೀಡೆಯಾದ ಕಂಬಳ ವಿಶ್ವ ಪ್ರಸಿದ್ಧಿ ಗಳಿಸಿದೆ. ಇದೀಗ ಇದನ್ನು ಮೈಸೂರಿನ ಜನರಿಗೆ ಪರಿಚಯಿಸಬೇಕು ಹಾಗೂ ಇನ್ನಷ್ಟು ಜನರಿಗೆ ತಲುಪಿಸಬೇಕು ಖರ್ಚು ಮಾಡಲಾಗುತ್ತಿದೆ.

ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸೂಚನೆ ಮೇರೆಗೆ ಸುಮಾರು 7 ರಿಂದ 8 ಕೋಟಿ ರೂ. ವೆಚ್ಚದಲ್ಲಿ ಎರಡು ದಿನಗಳ ಕಾಲ ಈ ಕಂಬಳ ಉತ್ಸವ ನಡೆಯಲಿದೆ. ಮೈಸೂರಿನ ವಿಜಯನಗರ – ಸಾತಗಳ್ಳಿ ರಿಂಗ್ ರಸ್ತೆಯ ಹತ್ತಿರ ಕಂಬಳಕ್ಕಾಗಿ ಸ್ಥಳವನ್ನು ಗುರುತಿಸಲಾಗಿದೆ. ಈ ಸಾಂಸ್ಕೃತಿಕ ಆಚರಣೆಯಲ್ಲಿ ಕರಾವಳಿ ಭಾಗದಿಂದ 120 ಜೋಡಿ ಕೋಣಗಳನ್ನು ಕರೆದುಕೊಂಡು ಬರುವ ಸಾಧ್ಯತೆ ಇದೆ. ಆದರೆ ಇಷ್ಟೊಂದು ಹಣ ವೆಚ್ಚ ಮಾಡಿ ಮೈಸೂರಿನ ದಸರಾದಲ್ಲಿ ಮತ್ತೊಂದು ಪ್ರಾದೇಶಿಕ ವಿಶೇಷವಾಗಿರುವ ಕಂಬಳ ಆಯೋಜನೆ ಮಾಡುವ ಅವಶ್ಯಕತೆ ಏನಿದೆ ಎಂದು ಜನ ಪ್ರಶ್ನೆ ಮಾಡುತ್ತಿದ್ದಾರೆ.

## ಸಂಸದರಿಂದಲೂ ಆಕ್ಷೇಪ

ಮೈಸೂರು ದಸರಾದಲ್ಲಿ ಕಂಬಳ ಆಯೋಜನೆ ಮಾಡುತ್ತಿರುವುದಕ್ಕೆ ಸಂಸದ ಯದುವೀರ್ ಒಡೆಯರ್ ಅವರು ಸಹ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿರುವ ಅವರು, ಮೈಸೂರು ದಸರಾ ಮಹೋತ್ಸವದಲ್ಲಿ ಕಂಬಳವನ್ನು ಅಳವಡಿಸಿಕೊಳ್ಳುವ ಕುರಿತು ನಡೆಯುತ್ತಿರುವ ಚರ್ಚೆಗಳು ಅತ್ಯಂತ ಆಳವಾದ ಮರುಚಿಂತನೆಯನ್ನು ಬೇಡುತ್ತವೆ. ಕಂಬಳವು ಕರಾವಳಿ ಕರ್ನಾಟಕದ ಮಣ್ಣು, ಸಂಸ್ಕೃತಿ ಮತ್ತು ಜನಜೀವನದೊಂದಿಗೆ ಹಾಸುಹೊಕ್ಕಾಗಿರುವ ಶತಮಾನಗಳ ಇತಿಹಾಸವಿರುವ ಅತ್ಯಂತ ಪವಿತ್ರವಾದ ಪರಂಪರೆ. ಇದು ತನ್ನದೇ ಆದ ಆಳವಾದ ಸಾಂಪ್ರದಾಯಿಕ ಮತ್ತು ಧಾರ್ಮಿಕ ಮೌಲ್ಯವನ್ನು ಹೊಂದಿದ್ದು, ಇದನ್ನು ಕೇವಲ ವಾಣಿಜ್ಯೀಕರಣ ಅಥವಾ ಮನರಂಜನೆಯ ದೃಷ್ಟಿಕೋನದಿಂದ ನೋಡಿ ಇದರ ಘನತೆಯನ್ನು ಕುಂದಿಸಬಾರದು. ನಿರ್ದಿಷ್ಟ ಪರಿಸರ ಮತ್ತು ಪ್ರಾದೇಶಿಕ ನಂಬಿಕೆಗೆ ಸೀಮಿತವಾಗಿರುವ ಇಂತಹ ವಿಶಿಷ್ಟ ಆಚರಣೆಯನ್ನು ಅದರ ಮೂಲ ನೆಲದಿಂದ ಬೇರ್ಪಡಿಸುವುದು ಅದರ ಆಂತರಿಕ ಪವಿತ್ರತೆಗೆ ಧಕ್ಕೆ ತರುವ ಅಪಾಯವನ್ನು ಹೊಂದಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಇದೇ ಸಂದರ್ಭದಲ್ಲಿ, ನಮ್ಮ ತಕ್ಷಣದ ಮತ್ತು ಸಾಮೂಹಿಕ ಗಮನವು ಮೈಸೂರು ದಸರಾದ ಮೂಲ ಸ್ವರೂಪವನ್ನು ಮತ್ತಷ್ಟು ಬಲಪಡಿಸುವುದರ ಕಡೆಗೆ ಇರಬೇಕಾಗಿದೆ. ಪ್ರಸ್ತುತ ದಸರಾ ಮಹೋತ್ಸವದ ಸಂಘಟನೆಯಲ್ಲಿ ಇನ್ನೂ ಹಲವು ಆಡಳಿತಾತ್ಮಕ ಲೋಪದೋಷಗಳು, ಮೂಲಸೌಕರ್ಯಗಳ ಕೊರತೆ ಹಾಗೂ ವ್ಯವಸ್ಥಿತ ಸವಾಲುಗಳು ಎದುರಾಗುತ್ತಿವೆ. ಸರ್ಕಾರ ಮತ್ತು ದಸರಾ ಉನ್ನತ ಮಟ್ಟದ ಸಮಿತಿಯು ಮೊದಲು ಈ ಆಂತರಿಕ ಸವಾಲುಗಳನ್ನು ಬಗೆಹರಿಸಲು ಹೆಚ್ಚಿನ ಆದ್ಯತೆ ನೀಡಬೇಕಾಗಿದೆ ಎಂದು ಹೇಳಿದ್ದಾರೆ

# ಓಬಳಾಪುರಂ ಗಣಿಗುತ್ತಿಗೆ ಅತಿಕ್ರಮಣ ವಿರುದ್ಧದ ಕ್ರಮದ ವರದಿ ಕೇಳಿದ ಕೇಂದ್ರ ಪರಿಸರ, ಅರಣ್ಯ ಇಲಾಖೆ

**ಬಳ್ಳಾರಿ, ಜು.4:** ಕರ್ನಾಟಕ–ಆಂಧ್ರ ಪ್ರದೇಶದ ಅಂತರರಾಜ್ಯ ಗಡಿಯಲ್ಲಿ ಓಬಳಾಪುರಂ ಮೈನಿಂಗ್ ಕಂಪನಿಯ ಗಣಿ ಗುತ್ತಿಗೆಯ ಅತಿಕ್ರಮಣದ ಮೇಲೆ ತೆಗೆದುಕೊಂಡ ಕ್ರಮದ ವರದಿ ಸಲ್ಲಿಸುವಂತೆ ಕೇಂದ್ರ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯವು ಕರ್ನಾಟಕ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ನಿರ್ದೇಶಕರಿಗೆ ಪತ್ರ ಬರೆದು ಕೇಳಿದೆ ಎಂದು ಗಣಿ ಹೋರಾಟಗಾರ ಟಪಾಲ್ ಗಣೇಶ್ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಓಎಂಸಿ ಕಂಪನಿಯ 68.5 ಹೆಕ್ಟೇರ್ ಮೀಸಲು ಅರಣ್ಯ ಭೂಮಿಗೆ ಸಂಬಂಧಿಸಿದಂತೆ . ಬಳ್ಳಾರಿ ಜಿಲ್ಲೆ, ಸಂಡೂರು ತಾಲೂಕು, ತುಮ್ಟಿ ಗ್ರಾಮದ ಸರ್ವೆ ಸಂಖ್ಯೆ 106 ರೊಳಗೆ ಅತಿಕ್ರಮಿಸಿದೆ ಎಂಬುದು ಮನವಿಯ ಪ್ರಮುಖ ವಿಷಯವಾಗಿದೆ.ಆಂಧ್ರಪ್ರದೇಶ ಸರ್ಕಾರದ ಸರ್ವೇ ಇಲಾಖೆಯು 07.12.2025 ರಂದು ತಯಾರಿಸಿದ ಸೂಪರ್‌ಇಂಪೋಸ್ಡ್ ಸ್ಕೆಚ್ ಪ್ರಕಾರ, ಓಎಂಸಿ ಗುತ್ತಿಗೆ ಪ್ರದೇಶವು ಕರ್ನಾಟಕದ ಪ್ರಾದೇಶಿಕ ವ್ಯಾಪ್ತಿಗೆ ವಿಸ್ತರಿಸಿದೆ ಎಂದು ತಿಳಿದುಬಂದಿದೆ.

ಅರಣ್ಯ ಭೂಮಿಯ ಬದಲಾವಣೆ: ಪ್ರಶ್ನಿತ ಪ್ರದೇಶವು 1896 ರ ಬಳ್ಳಾರಿ ಮೀಸಲು ಅರಣ್ಯ ನಕ್ಷೆಯ ಪ್ರಕಾರ ಅಧಿಸೂಚಿತ ಮೀಸಲು ಅರಣ್ಯವಾಗಿದೆ. ಕೇಂದ್ರ ಸರ್ಕಾರದ ಪೂರ್ವಾನುಮತಿಯನ್ನು ಪಡೆಯದೆ ಅರಣ್ಯ ಭೂಮಿಯನ್ನು ಗಣಿಗಾರಿಕೆ ಉದ್ದೇಶಕ್ಕೆ ಬಳಸಿರುವುದು ಅರಣ್ಯ (ಸಂರಕ್ಷಣಾ) ಕಾಯ್ದೆ, 1980 ರ ಸೆಕ್ಷನ್ 2(ii)(ಬಿ) ರ ಉಲ್ಲಂಘನೆಯಾಗಿದೆ. ಅಂತರರಾಜ್ಯ ಗಡಿ ವಿಚಲನ: 12.07.2004 ರ ಆಂಧ್ರಪ್ರದೇಶ ಗೆಜೆಟ್‌ನಲ್ಲಿ ಅಧಿಸೂಚಿಸಿದ ಪ್ರದೇಶಕ್ಕೆ ಹೊರತಾಗಿ ಗುತ್ತಿಗೆಯನ್ನು ಮಂಜೂರು ಮಾಡಲಾಗಿದೆ. ತಪ್ಪಾದ ಟೋಪೋಶೀಟ್ ಆಧಾರದ ಮೇಲೆ ಅಂತರರಾಜ್ಯ ಗಡಿಯನ್ನು ಗುರುತಿಸಿರುವುದರಿಂದ ಕರ್ನಾಟಕ ಪ್ರದೇಶಕ್ಕೆ ಮತ್ತು ನಾರಾಯಣ ರೆಡ್ಡಿ ಅವರ ಗಣಿ ಗುತ್ತಿಗೆ ಸಂಖ್ಯೆ 2527ಕ್ಕೆ ಅತಿಕ್ರಮಣವಾಗಿದೆ ಎಂದು ಆರೋಪಿಸಲಾಗಿದೆ.

ಹೈದರಾಬಾದ್‌ನ ಸಿಬಿಐ Iನ್ಯಾಯಾಲಯವು 06.05.2025 ರಂದು ನೀಡಿದ ತೀರ್ಪಿನಲ್ಲಿ, ಓಎಂಸಿ ಮತ್ತು ಅದರ ನಿರ್ದೇಶಕರು 29 ಲಕ್ಷ ಮೆಟ್ರಿಕ್ ಟನ್ ಕಬ್ಬಿಣದ ಅದಿರನ್ನು ಅಕ್ರಮವಾಗಿ ಗಣಿಗಾರಿಕೆ ಮಾಡಿ ಸರ್ಕಾರಿ ಬೊಕ್ಕಸಕ್ಕೆ ರೂ.884 ಕೋಟಿ ನಷ್ಟ ಉಂಟು ಮಾಡಿದ್ದಾರೆ ಎಂದು ದೋಷಿಗಳೆಂದು ಘೋಷಿಸಿದೆ.

# ಗೃಹಜ್ಯೋತಿ ಯೋಜನೆ ಅರ್ಹರಿಗೆ ಮಾತ್ರ: ಪ್ರವೀಣ್ ಪಾಟೀಲ್

**ಕಲಬುರಗಿ, ಜು. 4:** ರಾಜ್ಯ ಸರ್ಕಾರವಾಗಲಿ ಅಥವಾ ಜೆಸ್ಕಾಂ ಸಂಸ್ಥೆಯಾಗಲಿ ಗೃಹಜ್ಯೋತಿ ಯೋಜನೆಯನ್ನು ಯಾವುದೇ ಕಾರಣಕ್ಕೂ ನಿಲ್ಲಿಸುತ್ತಿಲ್ಲ. ಯೋಜನೆಯನ್ನು ಮತ್ತಷ್ಟು ಪಾರದರ್ಶಕಗೊಳಿಸಿ, ಕೇವಲ ನಮ್ಮ ಕರ್ನಾಟಕ ರಾಜ್ಯದ ಅರ್ಹ ತೆರಿಗೆದಾರರಿಗೆ ಮತ್ತು ಸಾರ್ವಜನಿಕರಿಗೆ ಮಾತ್ರ ಇದರ ಸಂಪೂರ್ಣ ಲಾಭ ತಲುಪಿಸುವುದೇ ನಮ್ಮ ಮುಖ್ಯ ಉದ್ದೇಶವಾಗಿದೆ ಎಂದು ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ್ ಅವರು ಹೇಳಿದರು.



ಜೆಸ್ಕಾಂ ವತಿಯಿಂದ ಮನೆ, ಮನೆಗೆ ಭೇಟಿ ನೀಡಿ ಪರಿಶೀಲಿಸಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಇತರ ರಾಜ್ಯಗಳ ಜನರೂ ಸಹ ಈ ಯೋಜನೆಯ ದುರುಪಯೋಗ ಪಡೆದುಕೊಳ್ಳುತ್ತಿರುವುದು ಗಮನಕ್ಕೆ ಬಂದ ಹಿನ್ನೆಲೆಯಲ್ಲಿ, ನಮ್ಮ ಮುಖ್ಯಮಂತ್ರಿಗಳ ಆಶಯದಂತೆ ಕೇವಲ ನಮ್ಮ ರಾಜ್ಯದ ಜನರಿಗೆ ಮಾತ್ರ ಯೋಜನೆಯ ಲಾಭ ಸಿಗುವಂತೆ ಮಾಡಲು ಈ ನಿಯಮಿತ ಭೌತಿಕ ಪರಿಶೀಲನೆ ಮತ್ತು ಮರು–ನೋಂದಣಿ ಪ್ರಕ್ರಿಯೆಯನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಗ್ರಾಹಕರ ಮನೆ ಬಾಗಿಲಿಗೆ ಬರಲಿದ್ದಾರೆ ಜೆಸ್ಕಾಂ ಮೀಟರ್ ರೀಡರ್ಗಳು: ಗ್ರಾಹಕರು ಯಾವುದೇ ಗೊಂದಲಕ್ಕೊಳಗಾಗುವ ಅಗತ್ಯವಿಲ್ಲ. ನಮ್ಮ ಜೆಸ್ಕಾಂ ಮೀಟರ್ ರೀಡರ್‌ಗಳೇ ಸ್ವತಃ ನಿಮ್ಮ ಮನೆಬಾಗಿಲಿಗೆ ಬಂದು, ಅಗತ್ಯ ದಾಖಲೆಗಳನ್ನು ಪಡೆದು ತಮ್ಮ ಮೊಬೈಲ್ ಆಪ್ ಮೂಲಕವೇ ಉಚಿತವಾಗಿ ಮರು–ನೋಂದಣಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಿದ್ದಾರೆ ಎಂದು ಅವರು ಹೇಳಿದರು.

ಸಾರ್ವಜನಿಕರಲ್ಲಿ ಮೂಡಿರುವ ಮತ್ತೊಂದು ಪ್ರಮುಖ ಗೊಂದಲವೆಂದರೆ ಜಾತಿ ಪ್ರಮಾಣ ಪತ್ರದ ಸಲ್ಲಿಕೆ. ಇಲ್ಲಿ ಯಾವುದೇ ಅಧಿಕೃತ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸುವ ಅಗತ್ಯವಿರುವುದಿಲ್ಲ. ಯೋಜನೆಯ ಲಾಭವು ಯಾವ ಯಾವ ವರ್ಗದ ಜನರಿಗೆ ಎಷ್ಟರ ಮಟ್ಟಿಗೆ ತಲುಪುತ್ತಿದೆ ಎಂಬ ಕೇವಲ ಅಂಕಿ–ಅಂಶಗಳ ಲೆಕ್ಕಾಚಾರ ಕ್ಕಾಗಿ ಜಾತಿಯ ವಿವರವನ್ನು ಮಾತ್ರ ಕೇಳಲಾಗುತ್ತಿದೆಯೇ ವಿನಃ ಯಾವುದೇ ಕಡ್ಡಾಯ ಪ್ರಮಾಣಪತ್ರದ ಅಗತ್ಯವಿಲ್ಲ ಎಂದು ಅವರು ತಿಳಿಸಿದರು.

ನಮ್ಮ ಸಿಬ್ಬಂದಿ ಮನೆಗೆ ಭೇಟಿ ನೀಡಿದಾಗ ಗ್ರಾಹಕರು ಆಧಾರ್ ಕಾರ್ಡ್, ವೋಟರ್ ಐಡಿ, ರೇಷನ್ ಕಾರ್ಡ್, ಪ್ಯಾನ್ ಕಾರ್ಡ್, ಜಾತಿ ವಿವರ (ಪ್ರಮಾಣ ಪತ್ರ ಕಡ್ಡಾಯವಲ್ಲ) ಮುಂತಾದ ದಾಖಲಾತಿಗಳನ್ನು ಸಿದ್ಧಪಡಿಸಿಕೊಳ್ಳಬೇಕು ಎಂದು ಅವರು ಕೋರಿದರು.

# ಬರ ಪರಿಸ್ಥಿತಿಯಲ್ಲಿ ಸಾರ್ವಜನಿಕರು ಆಸ್ಪತ್ರೆಗಳಲ್ಲೇ ಉಚಿತ ಆರೋಗ್ಯ ಸೇವೆ ಪಡೆಯಲು ಡಾ.ಯಲ್ಲಾ ರಮೇಶ್ ಬಾಬು ಕರೆ

**ಬಳ್ಳಾರಿ,ಜು.04.** ಬರದಂತಹ ಕಠಿಣ ಪರಿಸ್ಥಿತಿಯಲ್ಲಿ ರೈತರು ಮತ್ತು ಸಾರ್ವಜನಿಕರು ಆರ್ಥಿಕ ಸಂಕಷ್ಟದ ಜೊತೆಗೆ ಮಾನಸಿಕ ಹಾಗೂ ದೈಹಿಕ ಆರೋಗ್ಯದ ಸಮಸ್ಯೆಗಳನ್ನು ಎದುರಿಸುತ್ತಾರೆ. ಈ ಸಮಯದಲ್ಲಿ ಸಾರ್ವಜನಿಕರು ವಿನಾಕಾರಣ ಖರ್ಚು–ವೆಚ್ಚ ಮಾಡದೆ, ತಮಗೆ ಲಭ್ಯವಿರುವ ಸರ್ಕಾರಿ ಆಸ್ಪತ್ರೆಗಳ ಉಚಿತ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಜನರ ಆಸರೆಗಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಗ್ರಾಮ ಮಟ್ಟದಲ್ಲಿ ಹಲವು ವಿಶೇಷ ಮತ್ತು ಉಚಿತ ಆರೋಗ್ಯ ಸೇವೆಗಳನ್ನು ಹಮ್ಮಿಕೊಂಡಿದ್ದು, ಸಾರ್ವಜನಿಕರು ನಗರ ಪ್ರದೇಶಗಳಿಗೆ ಅಲೆಯುವ ಅಗತ್ಯವಿಲ್ಲ ಎಂದು ಅವರು ತಿಳಿಸಿದ್ದಾರೆ.

# ರಾಮಮಂದಿರ ಹುಂಡಿ ತನಿಖೆ ವಿರೋಧಿಸಲ್ಲ: ವಕ್ಫ್ ಆಸ್ತಿಗಳ ಬಗ್ಗೆಯೂ ಸರ್ಕಾರ ಉತ್ತರಿಸಲಿ–ರವಿಕುಮಾರ್ ಸವಾಲು

**ಕಲಬುರಗಿ, ಜು. 4:** ರಾಮಮಂದಿರ ಹುಂಡಿ ಕಳ್ಳತನ ಕುರಿತು ನಾವೆಲ್ಲೂ ತನಿಖೆ ಆಗಬಾರದೆಂದು ಹೇಳಿಲ್ಲ. ಹೇಳುವುದೂ ಇಲ್ಲ. ತನಿಖೆಯಾಗಲಿ. ಉಪ್ಪು ತಿಂದವರು ನೀರು ಕುಡಿಯಲೇಬೇಕು. ಇದರ ಜೊತೆಗೆ ರಾಜ್ಯದಲ್ಲಿ ವಕ್ಫ್ ಬೋರ್ಡ್ ಎಷ್ಟು ಜನ ರೈತರ ಭೂಮಿ ಕಬಳಿಸಿದೆ ಎಂಬುದರ ಕುರಿತು ಸರ್ಕಾರ ವರದಿ ನೀಡಿದೆಯಾ? ಹತ್ತು ವರ್ಷಗಳ ಹಿಂದೆ ವಕ್ಫ್ ಆಸ್ತಿ ಎಷ್ಟಿತ್ತು? ಈಗ ಎಷ್ಟಟಿದೆ? ಎಲ್ಲಿಂದ ಬಂತು? ಯಾರು ಕೊಟ್ಟರು ಎಂಬೆಲ್ಲ ವಿಷಯಗಳ ಕುರಿತೂ ಸರ್ಕಾರ ಮಾತನಾಡಲಿ ಎಂದು ವಿಧಾನ ಪರಿಷತ್ ಮುಖ್ಯ ಸಚೇತಕ ಎನ್.ರವಿಕುಮಾರ ಆಗ್ರಹಿಸಿದರು.

ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಮಮಂದಿರ ಒಂದೇ ಅಲ್ಲ, ಇಡೀ ದೇಶದಾದ್ಯಂತ ಎಷ್ಟು ಮಸೀದಿಗಳು ಸಾರ್ವಜನಿಕ ಆಸ್ತಿ ಕಬಳಿಸಿವೆ. ದೇಶದಾದ್ಯಂತ ವಕ್ಫ್ ಆಸ್ತಿ ಎಷ್ಟು ಹೆಚ್ಚಾಗಿದೆ? ಇದರ ಬಗ್ಗೆಯೂ ಕೂಡ ನಮ್ಮ ಬುದ್ಧಿವಂತ, ಮುತ್ಸದ್ದಿ ಮತ್ತು ನಮ್ಮ ಪ್ರಬುದ್ಧ ಗೃಹಸಚಿವ ಪ್ರಿಯಾಂಕ್ ಖರ್ಗೆ ಅವರು ಬೆಳಕು ಚೆಲ್ಲುವ ಕೆಲಸ ಮಾಡಬೇಕೆಂದರು.

ಗೃಹ ಸಚಿವರ ತವರು ಕ್ಷೇತ್ರದಲ್ಲಿ ಪೊಲೀಸರಿಗೆ ಚಳ್ಳೆಹಣ್ಣು ತಿನ್ನಿಸಿ ರಾತ್ತೋರಾತ್ರಿ ಪೋಕ್ಸೋ ಪ್ರಕರಣದ ಆರೋಪಿ ಪರಾರಿಯಾಗುತ್ತಾನೆ ಅಂದ್ರೆ ಏನರ್ಥ? ಈ ಬಗ್ಗೆ



ಕಲಬುರಗಿ ಐವಾನ್ ಶಾಹಿ ಅತಿಥಿ ಗೃಹದಲ್ಲಿ ವಿಧಾನ ಪರಿಷತ್ ಮುಖ್ಯ ಸಚೇತಕ ಎನ್.ರವಿಕುಮಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಉಸ್ತುವಾರಿ ಸಚಿವರು ಯಾಕೆ ಮೌನ ವಹಿಸಿದ್ದಾರೆ. ವಿಶ್ವದ ಆಗುಹೋಗುಗಳ ಬಗ್ಗೆ ಮತ್ತು ದೇಶದ ಪ್ರಧಾನಿ ಬಗ್ಗೆ ಮಾತನಾಡುವ ಗೃಹ ಸಚಿವರಿಗೆ ಅವರದ್ದೇ ಸ್ವಂತ ಊರಿನಲ್ಲಿ ಆರೋಪಿಯೊಬ್ಬ ಪರಾರಿಯಾಗಿದ್ದು ಗೊತ್ತಾಗಲಿಲ್ಲವೇ? ಕೂಡಲೇ ಠಾಣೆಯ ಸಿಪಿಐ ಅವರನ್ನು ಅಮಾನತುಗೊಳಿಸಬೇಕು. ಅವರು ಏನುಬೇಕಾದರೂ ಮಾಡಿದರೂ ನಡೆಯುತ್ತದೆ ಎಂಬ ಭಾವನೆಯಿಂದ ಹೊರಬರುವಂತೆ ಕ್ರಮ ಕೈಕೊಳ್ಳಬೇಕೆಂದು ಒತ್ತಾಯಿಸಿದರು.

ರಾಜ್ಯಾದ್ಯಂತ ರಸ್ತೆಗಳಲ್ಲಿ ಗುಂಡಿಗಳಿವೆಯೋ ಅತವಾ ಗುಂಡಿಗಳಲ್ಲೇ ರಾಜ್ಯವಿದೆಯೋ ಗೊತ್ತಿಲ್ಲ ಎಂಬ ಸ್ಥಿತಿ ನಿರ್ಮಾಣವಾಗಿದೆ. ಮೂರು ವರ್ಷಗಳಿಂದ ಒಂದೇ ಒಂದುಕಿಮೀ ರಸ್ತೆಯನ್ನು ಮಾಡಿರುವದಿಲ್ಲ. ಇರುವ ರಸ್ತೆಗಳು ಗುಂಡಿಗಳಿಂದ ಹಾಳಾಗಿ ಹೋಗಿವೆ. ಯಾವ ಶಾಸಕರಿಗೂ ಕ್ಷೇತ್ರ ಅಭಿವೃದ್ಧಿಯ ಅನುದಾನ ನಿಡುತ್ತಿಲ್ಲ. ಇನ್ನೂ 20 ಶಾಸಕರು ಯಾವಾಗ ಸಚಿವರಾಗುತ್ತಾರೋ ಗೊತ್ತಿಲ್ಲ.ಕೆ ಶಿವಕುಮಾರ ಸಿಎಂ ಆಗಿ ತಿಂಗಳು ಕಳೆದಿದ್ದರು ಸಚಿವರ ನೇಮಕಾತಿ ಆಗುತ್ತಿಲ್ಲ. ಸಚಿವರ ನೇಮಕದಿಂದ ಇನ್ನೇನು ಸಮಸ್ಯೆಯಾಗಲಿದೆಯೋ ಎಂಬ ಚಿಂತೆ ಅವರಿಗೆ ಕಾಡುತ್ತಿರಬಹುದು ಎಂದು ವ್ಯಂಗ್ಯವಾಡಿದರು.

ಇತ್ತೀಚೆಗೆ ರಾಜ್ಯ ಸರ್ಕಾರ ಸಚಿವ ಸಂಪುಟ ಸಭೆಯಲ್ಲಿ ಕಲಬುರಗಿ ಜಿಲ್ಲೆಯ ಆಳಂದ ಪಟ್ಟಣದಲ್ಲಿ ಮಹಾಶಿವರಾತ್ರಿಯ ದಿನದಂದು ರಾಘವ ಚೈತನ್ಯ ಶಿವಲಿಂಗದ ಪೂಜೆ ಸಂದರ್ಭದಲ್ಲಿ ಕಲ್ಲುತೂರಾಟ ನಡೆಸಿದವರ ಮೇಲಿನ ಕೇಸ್ ವಾಪಸು ಪಡೆದಿರುವ ನಿರ್ಣಯಕ್ಕೆ ಹೈಕೋರ್ಟ್ ಕಪಾಳಮೋಕ್ಷ ಮಾಡಿ, ಕೇಸ್ ರದ್ದುಪಡಿಸುವ ನಿರ್ಣಯಕ್ಕೆ ಮಧ್ಯಂತರ ತಡೆ ನೀಡಿದೆ. ಈಗಲಾದರೂ ಸರ್ಕಾರ ಎಚ್ಚೆತ್ತುಕೊಳ್ಳಬೇಕು. ರಾಜ್ಯ ಸರ್ಕಾರಿಂದ ಒಂದು ವರ್ಗದ ನಿರಂತರ ತುಷ್ಠೀಕರಣ ನೀತಿಯನ್ನು ಬದಲಾಯಿಸಿಕೊಳ್ಳಬೇಕು.

## ಬರಗಾಲ ಚರ್ಚೆಗೆ ತುರ್ತುಸಭೆ ಕರೆಯಿರಿ

ರಾಜ್ಯದಲ್ಲಿ ಮಳೆಗಾಲ ಆರಂಭವಾಗಿ ಒಂದು ತಿಂಗಳಾಗಿದ್ದರೂ ಮುಮಗಾರು ಮಳೆಯಾಗಿಲ್ಲ. ರಾಜ್ಯದ ಬಹುತೇಕ ಎಲ್ಲ ಜಲಾಶಯಗಳೂ ಖಾಲಿ ಇವೆ. ಮುಂಗಾರು ಬಿತ್ತನೆ ಇನ್ನೂ ಆರಂಭವಾಗಿಲ್ಲ. ಶೇ. 37 ರಷ್ಟು ಮಾತ್ರ ಮಳೆಯಾಗಿದೆ ಎಂದು ಸರ್ಕಾರವೇ ಹೇಳಿಕೊಳ್ಳುತ್ತಿದೆ. ಈಗಾಗಲೇ ಕುಡಿಯುವ ನೀರಿಗೂ ತೊಂದರೆಯುಂಟಗಿದೆ. ಜಾನುವಾರುಜಗಳಿಗೆ ಮೇವಿಲ್ಲ. ಗ್ರಾಮೀಣ ರೈತರಿಗೆ ಮತ್ತು ಕೃಷಿ ಕೂಲಿಕಾರರಿಗೆ ಉದ್ಯೋಗವಿಲ್ಲ. ಆದ್ದರಿಂದ ಕೂಡಲೇ ಸರ್ವಪಕ್ಷದ ಸಭೆ ಕರೆದು ಬರಗಾಲ ಸಂಬಂಧ ಕೈಕೊಳ್ಳಬೇಕಾದ ಪರಿಹಾರ ಕಾಮಗಾರಿಗಳ ಕುರಿತು ಚರ್ಚಿಸಿ ಕ್ರಮ ಕೈಕೊಳ್ಳಬೇಕು ಎಂದು ಆಗ್ರಹಿಸಿದರು.



ಬೆಂಗಳೂರಿನ ಸಾರ್ವಜನಿಕ ಪಾದಚಾರಿ ಮಾರ್ಗಗಳನ್ನು ಮರಳಿ ಪಡೆಯಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ 10 ದಿನಗಳ ಬೃಹತ್ "ಸುರಕ್ಷಿತ ಪಾದಚಾರಿ ಅಭಿಯಾನ"ವನ್ನು ಪ್ರಾರಂಭಿಸಿದೆ. ಶನಿವಾರ ಬೆಂಗಳೂರಿನ ರಾಮಮೂರ್ತಿ ನಗರದಲ್ಲಿ ಕಂಡುಬಂದ ಕ್ರಿಯೆ.

### ರಾಯಚೂರು ಕೃಷಿ ವಿವಿಗೆ 19 ಪೇಟೆಂಟ್‌ಗಳ ಗರಿ

# ರಾಜ್ಯದ ಇತರೆಲ್ಲಾ ಕೃಷಿ ವಿವಿ ಮೀರಿಸಿ ಅತಿಹೆಚ್ಚು ಬೌದ್ಧಿಕ ಹಕ್ಕು ಸ್ವಾಮ್ಯ ಪಡೆದ ಸಾಧನೆ

**ರಾಯಚೂರು, ಜು. 4:** ವಿವಿಧ ಅವಿಷ್ಕಾರಗಳ ಮೂಲಕ ಇಲ್ಲಿನ ಕೃಷಿ ತಾಂತ್ರಿಕ ಮಹಾವಿದ್ಯಾಲಯ ಮತ್ತಷ್ಟು ಪೇಟೆಂಟ್ ಪಡೆಯುವಲ್ಲಿ ಮಹತ್ತರ ಸಾಧನೆ ಮಾಡಿದೆ. ಕೇವಲ ಮೂರಾಲ್ಕು ತಿಂಗಳ ಅವಧಿಯಲ್ಲಿ ಹೊಸ ಅವಿಷ್ಕಾರಗಳಿಗಾಗಿ ಪೇಟೆಂಟ್ ಗಿಟ್ಟಿಸಿಕೊಂಡು ಶಹಬ್ಬಾಸ್ ಎನಿಸಿಕೊಂಡಿದೆ. ರಾಜ್ಯದಲ್ಲಿರುವ ತೋಟಗಾರಿಕೆ ಮತ್ತು ಕೃಷಿ ಸಂಬಂಧಿತ ಐದು ವಿವಿಗಳ ಪೈಕಿ ರಾಯಚೂರು ಕೃಷಿ ವಿವಿಯ ಎಂಜಿನಿಯರಿಂಗ್ ವಿಭಾಗ ಅತಿ ಹೆಚ್ಚು ಪೇಟೆಂಟ್ ಗಿಟ್ಟಕೊಂಡಿರುವುದು ವಿಶೇಷವಾಗಿದೆ.

ಈ ಮೊದಲು ರಾಯಚೂರು ಕೃಷಿ ವಿಶ್ವವಿದ್ಯಾಲಯ, ಧಾರವಾಡ ಕೃಷಿ ವಿಶ್ವವಿದ್ಯಾಲಯ ವ್ಯಾಪ್ತಿಗೊಳಪಟ್ಟಿತ್ತು. ಹಲವಾರು ವರ್ಷಗಳ ಬಳಿಕ ಪ್ರತ್ಯೇಕಗೊಂಡು ಧಾರವಾಡ ಮಾತ್ರವಲ್ಲದೇ ರಾಜ್ಯದ ಇತರೆ ನಾಲ್ಕು ವಿಶ್ವವಿದ್ಯಾಲಯಗಳನ್ನೂ ಮೀರಿ ಪೇಟೆಂಟ್ ಪಡೆಯುವ ಹಾದಿಯಲ್ಲಿ ದಿಟ್ಟ ಹೆಜ್ಜೆ ಇಟ್ಟಿದೆ. ಅದರಲ್ಲೂ ಎಂಜಿನಿಯರಿಂಗ್ ವಿಭಾಗ ಹೆಚ್ಚು ಪೇಟೆಂಟ್‌ಗಳನ್ನು ತನ್ನ ಮುಡಿಗೇರಿಸಿಕೊಂಡಿರುವುದು ವಿಶೇಷವಾಗಿದೆ. ಹೀಗೆ ರಾಯಚೂರು ಕೃಷಿ ವಿವಿ 19 ಪೇಟೆಂಟ್‌ಗಳನ್ನು ಪಡೆದುಕೊಂಡಿದೆ.

ವರ್ಷದ ಮೊದಲ ಪೇಟೆಂಟ್: ಇದುವರೆಗೆ ಡೋಸ್ ಮೂಲಕ ಕೀಟನಾಶಕ ಸಿಂಪಡಣೆ ಕಾರ್ಯ ಮಾತ್ರ ನಡೆಯುತ್ತಿತ್ತು. ಕೃಷಿ ಮಹಾವಿದ್ಯಾಲಯದವರು ಭತ್ತ ಬಿತ್ತನೆಗಾಗಿ ಪ್ರತ್ಯೇಕ ಡೋಸ್ ಅಧರಿತ ಯಂತ್ರ ಉಪಯೋಗಿಸಿ ಬೀಜ ಬಿತ್ತನೆ ಸಾಧ್ಯ ಎಂಬುದನ್ನು ಸಾಬೀತು ಮಾಡಿ ತೋರಿಸಿದೆ. ಭತ್ತ ಬಿತ್ತನೆ ಗಾಗಿಯೇ ಅವಿಷ್ಕರಿಸಿದ ಡ್ರೋಣ್ ಇದು ಎಂಬುದು ವಿಶೇಷ. ಒಂದು ಹೆಕ್ಟೇರ್‌ಗೆ 29 ಕೆಜಿ ಸರಾಸರಿ ಭತ್ತ ಬಿತ್ತನೆ ಮಾಡುಬಹುದಾಗಿದೆ. ಈ ಡ್ರೋಣ್ ಆವಿಷ್ಕಾರಕ್ಕಾಗಿ ಫೆ.9, 2026ರಂದು ಪೇಜೆಂಟ್ ದೊರೆತಿದೆ.




ಬೆಳೆಗಳ ಸಾಲು ಮತ್ತು ಗಿಡಗಳ ಮಧ್ಯೆ ಕಳೆ ತೆಗೆಯಲು ವಿಶೇಷ ಯಂತ್ರವನ್ನು ಆವಿಷ್ಕರಿಸಿದ್ದಕ್ಕೆ ಪೇಟೆಂಟ್ ದೊರೆತಿದೆ. ಈ ಯಂತ್ರದ ಸಹಾಯದಿಂದ ಒಂದು ಗಂಟೆಯಲ್ಲಿ ಅಂದಾಜು ಒಂದೂ ಕಾಲು ಎಕರೆ ವ್ಯಾಪ್ತಿಯಲ್ಲಿ ಕಳೆ ತೆಗೆಯಬಹುದು. ಸೆನ್ಸಾರ್ ಆಧರಿತ ಯಂತ್ರ ಇದಾಗಿದ್ದು ಬೆಳಗ ಹಾನಿ ಮಾಡದಂತೆ ಕಳೆ ತೆಗೆಯುವ ಸಾಮರ್ಥ ಹೊಂದಿದೆ. ಪ್ರತಿ ಬೆಳೆಗೆ ಪ್ರಾಯೋಗಿಕವಾಗಿ ಇದನ್ನು ಬಳಸಬಹುದು ಎಂಬುದನ್ನು ಕೃಷಿ ತಾಂತ್ರಿಕ ಮಹಾವಿದ್ಯಾಲಯ ಸಾಬೀತು ಪಡಿಸಿದ್ದು, ಇದಕ್ಕೆ ಮಾ.3, 2026ರಂದು ಪೇಟೆಂಟ್ ಲಭ್ಯವಾಗಿದೆ. ಮೂರನೇ ಪೇಟೆಂಟ್: ತೊಗರಿ ಗಿಡಗಳ ಬೆಳವಣಿಗೆ ಚೆನ್ನಾಗಿರಲು ಕುಡಿ ಚಿವುಟುವುದಕ್ಕಾಗಿ ಸಾಮಾನ್ಯ ಕಾರ್ಮಿಕರನ್ನು ಬಳಸಲಾಗುತ್ತದೆ. ಸದ್ಯ ಈ ಕೆಲಸಕ್ಕೆ ಕೃಷಿ ವಿವಿಯ ತಾಂತ್ರಿಕ ಮಹಾವಿದ್ಯಾಲಯ ಹೊಸ ಅವಿಷ್ಕಾರ ಮಾಡಿ ಕುಡಿ ಚಿವುಟುವ ಯಂತ್ರ ಆವಿಷ್ಕರಿಸಿ ಗಮನ ಸೆಳೆದಿದೆ. ಇದು ಒಂದು ದಿನದಲ್ಲಿ 5 ಎಕರೆ ವ್ಯಾಪ್ತಿಯಲ್ಲಿಯ ಗಿಡಗಳ ಕುಡಿ ಚಿವುಟಬಲ್ಲದು. ಕಾರ್ಮಿಕರನ್ನು ಬಳಕೆ ಮಾಡಿಕೊಂಡು ಒಂದು ದಿನಕ್ಕೆ ಸರಾಸರಿ ಮೂರೂವರೆ ಎಕರೆಯಷ್ಟು ಮಾತ್ರ ಕುಡಿ ಚಿವುಟಬಹುದು. ಆದರೆ, ಈ ಯಂತ್ರದ ಸಹಾಯದಿಂದ ಅಂದಾಜು 5 ಹೆಕ್ಟೇರ್ ವರೆಗೆ ಒಂದು ದಿನದಲ್ಲಿ ತೊಗರಿ ಗಿಡದ ಕುಡಿ ಚಿವುಟಬಹುದು. ಈ ಯಂತ್ರದ ಆವಿಷ್ಕಾರಕ್ಕೆ ಹೊಸದಿಲ್ಲಿಯ ಬೌದ್ಧಿಹಕ್ಕುಸ್ವಾಮ್ಯ ಕಾರ್ಯಾಲಯ ಏ.1, 2026 ರಂದು ಪೇಟೆಂಟ್ ಕೊಟ್ಟಿದೆ.

# ಶರಣರ ಜ್ಞಾನಭಂಡಾರ ಜಗತ್ತಿಗೆ ಪರಿಚಯಿಸಿದ ವಚನ ಪಿತಾಮಹ ಡಾ.ಫ.ಗು.ಹಳಕಟ್ಟಿ



ಕಲಬುರಗಿಯ ಡಾ.ಎಸ್.ಎಮ್.ಪಂಡಿತ ಜಿಲ್ಲಾ ರಂಗಮಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಡಾ. ಫ.ಗು. ಹಳಕಟ್ಟಿಯವರ ಜನ್ಮದಿನದ ಕಾರ್ಯಕ್ರಮವನ್ನು ಅಕ್ಕಲಕೋಟದ ಡಾ.ಅಭಿನವ ರಾಮಲಿಂಗ ಪಟ್ಟದ್ದೇವರು ಉದ್ಘಾಟಿಸಿದರು.

**ಕಲಬುರಗಿ, ಜು. 4:** ಪ್ರಸಿದ್ಧ ಸಾಹಿತಿ ಬಿ. ಎಂ. ಶ್ರೀಕಂಠಯ್ಯನವರು ವಿಜಯಪುರಕ್ಕೆ ಬಂದಾಗ, ಶರಣರ ಜ್ಞಾನದ ರಾಶಿಯನ್ನು ಕಷ್ಟಪಟ್ಟು ಸಂಗ್ರಹಿಸಿ, ನಾಡಿಗೆ ಉಣಬಡಿಸಿದ 'ವಚನ ಪಿತಾಮಹ' ಡಾ. ಫ.ಗು. ಹಳಕಟ್ಟಿ ಅವರೆಂದು ಎಂದು ಮಹಾರಾಷ್ಟ್ರದ ಸೋಲಾಪುರ ಜಿಲ್ಲೆಯ ಡಾ. ಅಭಿನವ ರಾಮಲಿಂಗ ಪಟ್ಟದೇವರು (ಡಾ. ಈಶ್ವರಾನಂದ ಮಹಾಸ್ವಾಮಿಗಳು) ಹೇಳಿದರು.

ನಗರದ ಡಾ.ಎಸ್.ಎಮ್.ಪಂಡಿತ ಜಿಲ್ಲಾ ರಂಗಮಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಹಳಕಟ್ಟಿಯವರು ಧಾರವಾಡದಲ್ಲಿ ಜನಿಸಿ, ವಕೀಲಿ ವೃತ್ತಿ ಆರಂಭಿಸಿದ ಇವರು ಬಿಜಾಪುರಕ್ಕೆ ಸ್ಥಳಾಂತರ ಗೊಂಡಾಗ, ಮನೆಯೊಂದರ ಜಗಲಿಯಲ್ಲಿದ್ದ ಅಲ್ಲಮಪ್ರಭುಗಳ ತಾಡೋಲೆಗಳನ್ನು ಕಂಡು ಪ್ರೇರಿತರಾದರು. ಅಂದಿನ ಕಾಲದಲ್ಲಿ ಕೇವಲ ಪೂಜಾ ವಸ್ತುವಾಗಿದ್ದ ವಚನ ಕಟ್ಟುಗಳನ್ನು ಕಷ್ಟಪಟ್ಟು ಸಂಗ್ರಹಿಸಿ, ಪರಿಷ್ಕರಿಸಿ ಮುದ್ರಿಸುವ ಮೂಲಕ ಬಸವಣ್ಣ ಹಾಗೂ ಶರಣರ ವಿಚಾರಧಾರೆಗಳನ್ನು ಜಗತ್ತಿಗೆ ಪರಿಚಯಿಸಿದರು.

ಮಂಗಳೂರಿನ ಮುದ್ರಣಾಲಯ ವಚನ ಮುದ್ರಣಕ್ಕೆ ನಿರಾಕರಿಸಿದಾಗ ಧೃತಿಗೆಡದ ಅವರು, 1923 ರಿಂದ 1953 ರವರೆಗೆ 'ವಚನಶಾಸ್ತ್ರ ಸಾರ', 'ಮಹಾದೇವಿಯಕ್ಕಗಳ ಗ್ರಂಥ' ಸೇ–ರಿದಂತೆ ಅನೇಕ ಕೃತಿಗಳನ್ನು ಹೊರತಂದರು. ನಂತರ ವಿಜಯಪುರದಲ್ಲಿ ತಾವೇ ಸ್ವತಃ "ಹಿತ ಚಿಂತಕ" ಮುದ್ರಣಾಲಯ ಸ್ಥಾಪಿಸಿ ವಚನ ಸಂಗ್ರಹಗಳನ್ನು ಪ್ರಕಟಿಸಿದರು ಎಂದು ಸ್ಮರಿಸಿದರು.

ತಮ್ಮ ಜೀವನದ 17 ವರ್ಷಗಳ ನಿರಂತರ ಹೋರಾಟದ ಮೂಲಕ 200ಕ್ಕೂ ಹೆಚ್ಚು ಅಪ್ರಸಿದ್ಧ ವಚನಕಾರರನ್ನು, 22 ಸಾವಿರಕ್ಕೂ ಅಧಿಕ ವಚನಗಳನ್ನು ಪರಿಷ್ಕರಿಸಿ ನಾಡಿಗೆ ಪರಿಚಯಿಸಿದ ಕೀರ್ತಿ ಹಳಕಟ್ಟಿ ಅವರಿಗೆ ಸಲ್ಲುತ್ತದೆ ಎಂದು ಶ್ಲಾಘಿಸಿದರು.

ಹಿರಿಯ ಸಾಹಿತಿ ಅಪ್ಪಾರಾವ್ ಅಕ್ಕೋಣೆ ಅವರು ಮಾತನಾಡಿ, 12ನೇ ಶತಮಾನದ ಶರಣರ ವಚನ ಸಾಹಿತ್ಯಕ್ಕೆ ಮರುಜೀವ ನೀಡಿದ ಮಹಾಚೇತನ, ಸಾಮಾಜಿಕ ಮತ್ತು ರಾಜಯಿಕೀಯ ಕ್ಷೇತ್ರದಲ್ಲೂ ಸಕ್ರಿಯರಾಗಿದ್ದ ಇವರು, ಬಾಂಬೇ ವಿಧಾನ ಪರಿಷತ್ ಸದಸ್ಯರಾಗಿ ಹಾಗೂ ಬಿಜಾಪುರ ನಗರಸಭೆ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಇವರ ಜನಪರ ಕಾರ್ಯಗಳನ್ನು ಗೌರವಿಸಿ ಬ್ರಿಟಿಷ್ ಸರ್ಕಾರ ಇವರಿಗೆ "ರಾವ್ ಬಹದ್ದೂರ್" ಪ್ರಶಸ್ತಿ ನೀಡಿ ಗೌರವಿಸಿತ್ತು. ಕನ್ನಡ ಸಾಂಸ್ಕೃತಿಕ ಪರಂಪರೆಗೆ ಇವರ ಕೊಡುಗೆ ಅಪೂರ್ವವಾಗಿದೆ ಎಂದು ಹೇಳಿದರು.

# ಪಿ.ಎಂ. ವಿಶ್ವಕರ್ಮ ಯೋಜನೆಯ ಫಲಾನುಭವಿಗಳಿಗೆ ವಿಶೇಷ ಸಾಲ ಪರಿಹಾರ ಶಿಬಿರ: ಮೋಹನ್

**ಕರ್ನೂಲ್, ಜು.04:** ಪ್ರಧಾನ ಮಂತ್ರಿ ವಿಶ್ವಕರ್ಮ ಯೋಜನೆಯಡಿ ಅರ್ಜಿ ಸಲ್ಲಿಸಿ ಪ್ರಧಾನಮಂತ್ರಿ ವಿಶ್ವಕರ್ಮ ಗುರುತಿನ ಚೀಟಿ ಪಡೆದು ಬ್ಯಾಂಕ್ ಸಾಲ ಮಂಜೂರು ಮಾಡದವರ ಹಾಗೂ ತರಬೇತಿ ಪೂರ್ಣಗೊಳಿಸಿ ಸಾಲ ಪಡೆಯದವರ ಸಮಸ್ಯೆ ಗಳನ್ನು ಪರಿಹರಿಸಲು, ಕರ್ನೂಲ್‌ನ ಲೀಡ್ ಡಿಸ್ಟ್ರಿಕ್ಟ್ ಮ್ಯಾನೇಜರ್ ಕಚೇರಿಯ ಆಶ್ರಯದಲ್ಲಿ ವಿಶೇಷ ಸಾಲ ಪರಿಹಾರ ಶಿಬಿರಗಳನ್ನು ಆಯೋಜಿಸಲಾಗುತ್ತದೆ ಎಂದು ಪಿ.ಮೋಹನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಈ ಶಿಬಿರಗಳನ್ನು ಬೆಳಿಗ್ಗೆ 11.00 ರಿಂದ ಮಧ್ಯಾಹ್ನ 2.00 ರವರೆಗೆ ಆಯಾ ಕ್ಷೇತ್ರಗಳ ಎಂಪಿಡಿಓ ಕಚೇರಿಗಳಲ್ಲಿ ಆಯೋಜಿಸಲಾಗುವುದು. ಬ್ಯಾಂಕ್ ಶಾಖಾ ವ್ಯವಸ್ಥಾಪಕರು ಶಿಬಿರಗಳಿಗೆ ಹಾಜರಾಗುತ್ತಾರೆ, ಫಲಾನುಭವಿಗಳ ಅರ್ಜಿಗಳನ್ನು ಪರಿಶೀಲಿಸುತ್ತಾರೆ ಮತ್ತು ಸಾಲ ಮಂಜೂರಾತಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಹರಿಸಲು ಕ್ರಮ ಕೈಗೊಳ್ಳುತ್ತಾರೆ.

ಕ್ಯಾಂಪಿಂಗ್ ವೇಳಾಪಟ್ಟಿ:–ಕ್ಷೇತ್ರ ಮಂಡಲಗಳ ದಿನಾಂಕಗಳು:– ಆಲೂರು– ದೇವನಕೊಂಡ, ಹೊಳಗುಂದ, ಹಾಲಹರ್ವಿ, ಆಲೂರು, ಆಸ್ಪರಿ, ಚಿಪ್ಪಗಿರಿ 07–07–2026, ಪತ್ತಿಕೊಂಡ – ಕೃಷ್ಣಗಿರಿ, ವೆಲ್ದುರ್ತಿ, ಪಟ್ಟಿಕೊಂಡ, ಮಡ್ಡಿಕೇರಾ, ತುಗ್ಗಲಿ 07–07–2026,ಆದೋನಿ– ಅದೋನಿ–I, ಅದೋನಿ–ಖಖ 09–07–2026,ಎಮ್ಮಿಗನೂರು– ನಂದಾವರಂ, ಎಮ್ಮಿಗನೂರು, ಗೋಣೆಗಂಡ್ಲ 09–07–2026, ಮಂತ್ರಾಲಯ– ಪೆದ್ದ ಕಡುಬೂರು, ಮಂತ್ರಾಲಯ, ಕೋಸಿಗಿ, ಕೌತಾಳಂ 14–07–2026, ಕೊಡುಮೂರು–ಸಿ.ಬೆಳಗಲ್, ಗುಡೂರು, ಕೊಡುಮೂರು, ಕರ್ನೂಲ್ ಗ್ರಾಮಾಂತರ 14–07–2026, ಕರ್ನೂಲ್– ಕರ್ನೂಲ್ ನಗರ, ಕಲ್ಲೂರು, ಓರ್ವಕಲ್ಲು, ಪಣ್ಯಂ, ಗಡಿವೇಮುಲ 16–07–2026, ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಗೆ ಅರ್ಜಿ ಸಲ್ಲಿಸಿದ ಪ್ರತಿಯೊಬ್ಬ ಫಲಾನುಭವಿಯೂ ಈ ಅವಕಾಶವನ್ನು ಬಳಸಿಕೊಳ್ಳಲು ವಿನಂತಿಸಲಾಗಿದೆ. ಪ್ರಧಾನಮಂತ್ರಿ ವಿಶ್ವಕರ್ಮ ಗುರುತಿನ ಚೀಟಿ, ಆಧಾರ್ ಕಾರ್ಡ್ ಮತ್ತು ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಪ್ರತಿಗಳನ್ನು ಶಿಬಿರಗಳಿಗೆ ತರುವುದು ಕಡ್ಡಾಯವಾಗಿದೆ.



ಎಲ್ಲಾ ಬ್ಯಾಂಕ್‌ಗಳ ಶಾಖಾ ವ್ಯವಸ್ಥಾಪಕರು ಈ ಶಿಬಿರಗಳಲ್ಲಿ ನೇರವಾಗಿ ಭಾಗವಹಿಸುತ್ತಾರೆ, ಫಲಾನುಭವಿಗಳ ಅರ್ಜಿಗಳನ್ನು ಪರಿಶೀಲಿಸುತ್ತಾರೆ, ಅಗತ್ಯ ಮಾರ್ಗಸೂಚಿಗಳನ್ನು ಒದಗಿಸುತ್ತಾರೆ ಮತ್ತು ಸಾಲ ಮಂಜೂರಾತಿ ಪ್ರಕ್ರಿಯೆಯನ್ನು ತ್ವರಿತಗೊಳಿಸಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುತ್ತಾರೆ.

ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯಡಿ ಅರ್ಹರಾಗಿರುವ ಪ್ರತಿಯೊಬ್ಬ ಫಲಾನುಭವಿಯೂ ಈ ವಿಶೇಷ ಶಿಬಿರಗಳಲ್ಲಿ ಭಾಗವಹಿಸಲು, ತಮ್ಮ ಸಮಸ್ಯೆಗಳನ್ನು ಪರಿಹರಿಸಲು ಮತ್ತು ಸರ್ಕಾರವು ಒದಗಿಸಿದ ಸ್ವ–ಉದ್ಯೋಗ ಅವಕಾಶಗಳನ್ನು ಬಳಸಿಕೊಳ್ಳಲು ಕರ್ನೂಲ್‌ನ ಲೀಡ್ ಜಿಲ್ಲಾ ವ್ಯವಸ್ಥಾಪಕರು ಪಿ.ಮೋಹನ್ ಅವರು ಮನವಿ ಮಾಡಿದ್ದಾರೆ.




ಹಿರಿಯ ಪತ್ರಕರ್ತ ಸಿ. ರುದ್ರಪ್ಪ ಅವರ ' ಇಫ್ ಗಾಂಧಿ ರಿಟರ್ನ್ಡ್ ' ಕೃತಿಯನ್ನು ಹೆಸರಾಂತ ಉದ್ಯಮಿ, ಚಿಂತಕ ಕ್ಯಾ.ಗೋಪಿನಾಥ್ ಅವರು ಮೈಸೂರು ಸಾಹಿತ್ಯೋತ್ಸವದಲ್ಲಿ ಬಿಡುಗಡೆ ಮಾಡಿದರು. ಸಾಹಿತ್ಯೋತ್ಸವದ ನಿರ್ದೇಶಕಿ ಶುಭಾ ಅರಸ್, ಖ್ಯಾತ ಲೇಖಕ ಶಂಕರ್ ಬೆಳ್ಳೂರು ಹಾಜರಿದ್ದರು.

# 34ನೇ ವಾರ್ಡಿನಲ್ಲಿ ವಿಶೇಷ ಪರಿಷ್ಕರಣೆಯಲ್ಲಿ ಕಾಂಗ್ರೆಸ್ ಮುಖಂಡ ವಿಷ್ಣುವರ್ಧನ್ ಭಾಗಿ

**ಬಳ್ಳಾರಿ, ಜು.04.** ಬಳ್ಳಾರಿ ನಗರದ 34ನೇ ವಾರ್ಡಿನ ಶಾಂತಿ ನಗರದ ಬೂತ್ ನಂ. 1ರಲ್ಲಿ SIR – ವಿಶೇಷ ತೀವ್ರ ಪರಿಷ್ಕರಣೆ ಅಂಗವಾಗಿ ಬಿ.ಎಲ್.ಒ. ಜೊತೆ ಮನೆ ಮನೆಗೆ ತೆರಳಿ ಇನ್ನುಮೇರೇಷನ್ ಫಾರ್ಮ್ ಅನ್ನು ಹಂಚಲಾಯಿತು.



### ಬಳ್ಳಾರಿಯಲ್ಲಿ ವನಮಹೋತ್ಸವ ಅಂಗವಾಗಿ ಗ್ರೀನ್ ಮಾರ್ಚ್

# ಪರಿಸರ ಕಾಳಜಿ ಕೇವಲ ಒಂದು ದಿನಕ್ಕೆ ಸೀಮಿತ ಬೇಡ: ಎಸ್ಪಿ ಡಾ.ಸುಮನ್ ಡಿ.ಪೆನ್ನೇಕರ್

**ಬಳ್ಳಾರಿ,ಜು.04:** ಪರಿಸರ ಸಂರಕ್ಷಣೆ, ಮರಗಳನ್ನು ಬೆಳೆಸುವುದು ಕೇವಲ ವರ್ಷಕ್ಕೊಮ್ಮೆ ಮಾಡುವ ಸಾಂಕೇತಿಕ ಆಚರಣೆಯಾಗಬಾರದು. ಬದಲಿಗೆ ಅದು ನಮ್ಮ ದೈನಂದಿನ ಜೀವನಶೈಲಿ ಯಾಗಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್ ಅವರು ಕರೆ ನೀಡಿದರು.

ವನಮಹೋತ್ಸವ 2026 ರ ಅಂಗವಾಗಿ ಬಳ್ಳಾರಿ ಪ್ರಾದೇಶಿಕ ಅರಣ್ಯ ವಿಭಾಗದ ವತಿಯಿಂದ ಪರಿಸರ ಜಾಗೃತಿ ಮೂಡಿಸುವ ಉದ್ದೇಶದಿಂದ ನಗರದ ರೇಡಿಯೋ ಪಾರ್ಕ್ ಬಳಿಯ ಪ್ರಾದೇಶಿಕ ಅರಣ್ಯ ವಿಭಾಗ ಕಚೇರಿ ಆವರಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಗ್ರೀನ್ ಮಾರ್ಚ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬಳ್ಳಾರಿಯಲ್ಲಿ ದಿನದಿಂದ ದಿನಕ್ಕೆ ತಾಪಮಾನವು ಗಣನೀಯವಾಗಿ ಹೆಚ್ಚಾಗುತ್ತಿದೆ. ಇದಕ್ಕೆ ಹಸಿರು ಕ್ರಾಂತಿಯೊಂದೇ ಸೂಕ್ತ ಪರಿಹಾರ. ನಾವು ಎಷ್ಟು ಹೆಚ್ಚು ಮರಗಿಡಗಳನ್ನು ನೆಟ್ಟು ಪೋಷಿಸುತ್ತೇವೆಯೋ, ಅಷ್ಟು ಹಿತಕರವಾದ ವಾತಾವರಣವನ್ನು ನಮ್ಮ ಮುಂದಿನ ಪೀಳಿಗೆಗೆ ನೀಡಬಹುದು ಎಂದು ತಿಳಿಸಿದರು.



ಗಿಡಗಳನ್ನು ನೆಡುವ ಪ್ರಕ್ರಿಯೆಯಲ್ಲಿ ಮಕ್ಕಳ ಪಾತ್ರ ದೊಡ್ಡದಿದೆ. ಮಕ್ಕಳ ಬೆಳವಣಿಗೆಯ ಜೊತೆ ಜೊತೆಗೆ ಅವರು ನೆಟ್ಟ ಸಸಿಗಳು ಬೆಳೆಯುವುದನ್ನು ನೋಡುವುದೇ ಒಂದು ಸಂಭ್ರಮ. ನಮ್ಮ ಶಾಲಾ ದಿನಗಳಲ್ಲಿ ಸಸಿಗಳನ್ನು ನೆಟ್ಟು, ಅವುಗಳ ಬೆಳವಣಿಗೆಯನ್ನು ಪ್ರಾಯೋಗಿಕ ವಾಗಿ ದಾಖಲಿಸುವ ಚಟುವಟಿಕೆಗಳಿದ್ದವು. ಇಂತಹ ಹವ್ಯಾಸಗಳು ಇಂದಿನ ಮಕ್ಕಳಿಗೂ ಅತ್ಯಗತ್ಯ ಎಂದರು.

ಪ್ರತಿವರ್ಷ ಅರಣ್ಯ ಇಲಾಖೆಯು ಸಸಿಗಳನ್ನು ನೆಡುವ ಇಂತಹ ಹತ್ತಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ. ಪ್ರತಿಯೊಬ್ಬ ನಾಗರಿಕನೂ ಕೇವಲ ಸಸಿ ನೆಡುವುದಷ್ಟೇ ಅಲ್ಲದೆ, ಅದನ್ನು ಹೆಮ್ಮರವಾಗಿಸುವವರೆಗೆ ಪೋಷಿಸುವ ಜವಾಬ್ದಾರಿ ಹೊರಬೇಕು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಪರಿಸರ ಇದ್ದರೆ ನಾವು ಇರುತ್ತೇವೆ, ಪರಿಸರ ಇಲ್ಲದಿದ್ದರೆ ನಮ್ಮ ಅಸ್ತಿತ್ವವೇ ಇರಲ್ಲ, ಸುಸ್ಥಿರ ಅಭಿವೃದ್ಧಿಯ ಹಾದಿಯಲ್ಲಿ ಸಾಗಿದರೆ ಮಾತ್ರ ನಮ್ಮ ಭವಿಷ್ಯ ಚೆನ್ನಾಗಿರಲು ಸಾಧ್ಯ. ಇದಕ್ಕಾಗಿ ಯುವ ಪೀಳಿಗೆಯು ಅರಣ್ಯೀಕರಣ, ಸಾಮಾಜಿಕ ಅರಣ್ಯೀ ಕರಣ ಹಾಗೂ ಸಸಿ ನೆಡುವ ಕಾರ್ಯ ಕ್ರಮಗಳಿಗೆ ನಿರಂತರ ಬೆಂಬಲ ನೀಡಬೇಕು ಎಂದು ಆಶಿಸಿದರು.

*ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಜಾಗೃತಿ:*

ವಿದ್ಯಾರ್ಥಿಗಳು ನೀವಿನ್ನೂ ವೋಟ್ ಮಾಡದೇ ಇರಬಹುದು, ಆದರೆ ಎಸ್‌ಐಆರ್ ಬಗ್ಗೆ ಜಾಗೃತಿ ಇರಬೇಕು. ನಿಮ್ಮ ಕುಟುಂಬದ ಸದಸ್ಯರ ಹೆಸರು ಹಳೆಯ ಮತದಾರರ ಪಟ್ಟಿಯಲ್ಲಿ ಎಲ್ಲಿದೆ ಎಂಬುದನ್ನು ಪರಿಶೀಲಿಸಿ, ಎನ್ಯೂಮರೇಷನ್ ಫಾರ್ಮ್ಸ್ ಹಾಗೂ ಪ್ರೊಜನಿ ಮ್ಯಾಪಿಂಗ್ ಪ್ರಕ್ರಿಯೆಗಳನ್ನು ಸರಿಯಾಗಿ ಭರ್ತಿ ಮಾಡಲು ಸಹಾಯ ಮಾಡಬೇಕು. ಒಂದು ವೇಳೆ ಈ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ತಪ್ಪುಗಳಾದರೆ ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟು ಹೋಗುವ ಸಾಧ್ಯತೆ ಇರುತ್ತದೆ. ಇದರಿಂದಾಗಿ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳಿಂದಲೂ ವಂಚಿತರಾಗಬೇಕಾಗಬಹುದು ಎಂದು ಎಸ್‌ಐಆರ್ ಕುರಿತು ಯುವಕರಲ್ಲಿ ಜಾಗೃತಿ ಮೂಡಿಸಿದರು.

ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಕೆ.ಎನ್ ಬಸವರಾಜ ಅವರು ಮಾತನಾಡಿ, ದೇಶಾದ್ಯಂತ ಜುಲೈ 1 ರಿಂದ 7 ನೇ ತಾರೀಖಿನವರೆಗೆ ವನಮಹೋತ್ಸವ ಸಪ್ತಾಹವನ್ನು ಆಚರಿಸಲಾಗುತ್ತಿದ್ದು, ಸಾರ್ವಜನಿಕ'ರಲ್ಲಿ ಪರಿಸರ ಸಂರಕ್ಷಣೆ ಮತ್ತು ಹಸಿರನ್ನು ಹೆಚ್ಚಿಸುವ ಕುರಿತು ಜಾಗೃತಿ ಮೂಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಸಾಮಾನ್ಯವಾಗಿ ಜೂನ್ ಮೊದಲ ವಾರದಲ್ಲಿ ಕರ್ನಾಟಕಕ್ಕೆ ಮುಂಗಾರು ಪ್ರವೇಶಿಸಿದರೂ, ದೇಶಾದ್ಯಂತ ಸಂಪೂರ್ಣವಾಗಿ ಮಳೆಗಾಲ ಆರಂಭವಾಗುವುದು ಜೂನ್ ಅಂತ್ಯಕ್ಕೆ. ಈ ಹಿನ್ನೆಲೆಯಲ್ಲಿ, ಗಿಡಗಳನ್ನು ನೆಟ್ಟು ಪೋಷಿಸಲು ಜುಲೈ ಮೊದಲ ವಾರ ಅತ್ಯಂತ ಸೂಕ್ತವಾದ ಸಮಯವೆಂದು ಪರಿಗಣಿಸಿ ಈ ಸಪ್ತಾಹವನ್ನು ಆಚರಿಸಲಾಗುತ್ತದೆ. ಪ್ರಕೃತಿಯನ್ನು ಇಂದಿನ ಸ್ಥಿತಿಗಿಂತಲೂ ಉತ್ತಮ ರೀತಿಯಲ್ಲಿ ಮುಂದಿನ ಪೀಳಿಗೆಗೆ ಹಸ್ತಾಂತರಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಅವರು ಪ್ರತಿಪಾದಿಸಿದರು.

# ಬೀದರ್ ಸೌಹಾರ್ದ ಸಹಕಾರಿಗಳಿಗೆ ಸಂಪರ್ಕ ಸಭೆ



**ಬೀದರ್, ಜು. 4:** ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಕಲಬುರಗಿ ಪ್ರಾಂತದ ವತಿಯಿಂದ ಜಿಲ್ಲೆಯ ಸೌಹಾರ್ದ ಸಹಕಾರಿಗಳಿಗೆ ನಗರದ ಕಲ್ಯಾಣ ಪತ್ತಿನ ಸೌಹಾರ್ದ ಸಹಕಾರಿಯ ಸಾಮರ್ಥ್ಯ ತರಬೇತಿ ಕೇಂದ್ರದಲ್ಲಿ ಸಂಪರ್ಕ ಸಭೆ ಏರ್ಪಡಿಸಲಾಗಿತ್ತು.

ಸಂಯುಕ್ತ ಸಹಕಾರಿ ಅಧ್ಯಕ್ಷ ಜಿ.ನಂಜನಗೌಡ,ಸಹಕಾರಿಯ ಚಳವಳಿ, ಸೌಹಾರ್ದ ಸಹಕಾರಿಗಳಿಗಿರುವ ಸ್ವಾತಂತ್ರ್ಯವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಸಂಯುಕ್ತ ಸಹಕಾರಿ ನಿರ್ದೇಶಕ ಗುರುನಾಥ ಜ್ಯಾಂತಿಕರ್, ಪ್ರತಿನಿತ್ಯ ಸಹಕಾರಿ ಸಂಸ್ಥೆಯಲ್ಲಿ ಸದಸ್ಯರು ತೊಡಗಿಸಿಕೊಂಡಾಗ ಮಾತ್ರ, ಸಹಕಾರಿಗಳ ಸಮಸ್ಯೆಗಳು ಪರಿಹಾರವಾಗುತ್ತವೆ. ಆಡಳಿತ ಮಂಡಳಿಯ ಸದಸ್ಯರು ತಮ್ಮ ಸಂಸ್ಥೆಯಲ್ಲಿರುವ ಸದಸ್ಯರ ಠೇವಣಿ ಹಣವನ್ನು ಸ್ವಂತಕ್ಕೆ ಅಥವಾ ದುರುಪಯೋಗ ಪಡಿಸಿಕೊಳ್ಳಬಾರದು ಎಂದು ತಿಳಿಸಿದರು.

# ಭಾರತ-ಅಮೆರಿಕ ಸ್ನೇಹ ಶಾಶ್ವತ: ಪ್ರಧಾನಿ ಮೋದಿ ಶ್ಲಾಘನೆ

**ನವದೆಹಲಿ, ಜು.4:** ಅಮೆರಿಕದ 250ನೇ ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಶನಿವಾರ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಅಮೆರಿಕದ ಜನರಿಗೆ ಅಭಿನಂದನೆ ಸಲ್ಲಿಸಿದರು, ಭಾರತ-ಅಮೆರಿಕಾ ಸಂಬಂಧವು ಹಂಚಿಕೆಯ ಪ್ರಜಾಪ್ರಭುತ್ವ ಮೌಲ್ಯಗಳ ಮೇಲೆ ಸ್ಥಾಪಿತವಾಗಿದೆ ಮತ್ತು ಜಾಗತಿಕ ಒಳಿತಿಗಾಗಿ ಒಂದು ಶಕ್ತಿಯಾಗಿ ಕಾರ್ಯನಿರ್ವಹಿಸುವ ಪಾಲುದಾರಿಕೆಯಾಗಿದೆ ಎಂದು ಬಣ್ಣಿಸಿದರು. ಸಾಮಾಜಿಕ ಮಾಧ್ಯಮ ವೇದಿಕೆ ಫಿ ನಲ್ಲಿ ಪೋಸ್ಟ್ ಮಾಡಿದ ಸಂದೇಶದಲ್ಲಿ, "1.4 ಬಿಲಿಯನ್ ಭಾರತೀಯರ ಪರವಾಗಿ, ನಿಮ್ಮ ಸ್ವಾತಂತ್ರ್ಯದ ಐತಿಹಾಸಿಕ 250ನೇ ವಾರ್ಷಿಕೋತ್ಸವದಂದು ಅಧ್ಯಕ್ಷ ಟ್ರಂಪ್ ಮತ್ತು ಅಮೆರಿಕದ ಜನರಿಗೆ ನನ್ನ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇನೆ" ಎಂದು ಮೋದಿ ಹೇಳಿದರು. ದ್ವಿಪಕ್ಷೀಯ ಸಂಬಂಧಗಳ ಬಲವನ್ನು ಒತ್ತಿ ಹೇಳಿದ ಪ್ರಧಾನಿ, ಭಾರತ ಮತ್ತು ಅಮೆರಿಕ ನಡುವಿನ ಸಂಬಂಧವು ಕಾರ್ಯತಂತ್ರದ ಸಹಕಾರವನ್ನು ಮೀರಿ ವಿಸ್ತರಿಸುತ್ತದೆ ಎಂದು ಹೇಳಿದರು. "ಭಾರತ ಮತ್ತು ಅಮೆರಿಕ ಕಾರ್ಯತಂತ್ರದ ಪಾಲುದಾರಿಕೆಗಿಂತ ಹೆಚ್ಚಿನದನ್ನು ಹಂಚಿಕೊಳ್ಳುತ್ತವೆ. ಪ್ರಜಾಪ್ರಭುತ್ವ, ಕಾನೂನಿನ ನಿಯಮ ಮತ್ತು ನಮ್ಮ ಜನರ ಅಪರಿಮಿತ ಸಾಮರ್ಥ್ಯದಲ್ಲಿನ ನಮ್ಮ ಹಂಚಿಕೆಯ ನಂಬಿಕೆ ನಮ್ಮ ಸ್ನೇಹವನ್ನು ಜಾಗತಿಕ ಒಳಿತಿಗಾಗಿ ಒಂದು ಶಕ್ತಿಯನ್ನಾಗಿ ಮಾಡುತ್ತದೆ" ಎಂದು ಅವರು ಹೇಳಿದರು. "ಮುಂದಿನ 250 ವರ್ಷಗಳು ಅಮೆರಿಕಕ್ಕೆ ಇನ್ನೂ ಹೆಚ್ಚಿನ ಸಮೃದ್ಧಿ, ಶಾಂತಿ ಮತ್ತು ಪ್ರಗತಿಯನ್ನು ತರಲಿ ಮತ್ತು ಭಾರತ-ಯುಎಸ್ ಪಾಲುದಾರಿಕೆಯನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲಿ" ಎಂದು ಹೇಳುತ್ತಾ, ಈ ಪಾಲುದಾರಿಕೆ ಇನ್ನಷ್ಟು ಬಲಗೊಳ್ಳುತ್ತದೆ ಎಂಬ ವಿಶ್ವಾಸವನ್ನು ಮೋದಿ ವ್ಯಕ್ತಪಡಿಸಿದರು. ನವದೆಹಲಿ ಮತ್ತು ವಾಷಿಂಗ್ಟನ್ ರಕ್ಷಣೆ, ವ್ಯಾಪಾರ, ನಿರ್ಣಾಯಕ ಮತ್ತು ಉದಯೋನ್ಮುಖ ತಂತ್ರಜ್ಞಾನಗಳು, ಶುದ್ಧ ಇಂಧನ, ಬಾಹ್ಯಾಕಾಶ, ಶಿಕ್ಷಣ ಮತ್ತು ಜನರಿಂದ ಜನರಿಗೆ ವಿನಿಮಯ ಸೇರಿದಂತೆ ವ್ಯಾಪಕ ಶ್ರೇಣಿಯ ಕ್ಷೇತ್ರಗಳಲ್ಲಿ ಸಹಕಾರವನ್ನು ವಿಸ್ತರಿಸುತ್ತಿರುವ ಸಮಯದಲ್ಲಿ ಪ್ರಧಾನಿಯವರ ಸಂದೇಶ ಬಂದಿದೆ. ಕ್ವಾಡ್ ಮತ್ತು ಇನಿಶಿಯೇಟಿವ್ ಆನ್ ಕ್ರಿಟಿಕಲ್ ಅಂಡ್



ಎಮರ್ಜಿಂಗ್ ಟೆಕ್ನಾಲಜಿ (ಐಸಿಇಟಿ)ನಂತಹ ಉಪಕ್ರಮಗಳ ಮೂಲಕ ಎರಡೂ ದೇಶಗಳು ಸಹಯೋಗವನ್ನು ತೀವ್ರಗೊಳಿಸಿವೆ, ಇದು ಅವರ ಬೆಳೆಯುತ್ತಿರುವ ಕಾರ್ಯತಂತ್ರದ ಜೋಡಣೆಯನ್ನು ಒತ್ತಿಹೇಳುತ್ತದೆ. 1776 ರಲ್ಲಿ ಸ್ವಾತಂತ್ರ್ಯ ಘೋಷಣೆಯನ್ನು ಅಂಗೀಕರಿಸಿದ 250 ವರ್ಷಗಳನ್ನು ಸ್ಮರಿಸುವ ಮೂಲಕ ಅಮೆರಿಕ ದೇಶಾದ್ಯಂತ ಆಚರಣೆಗಳೊಂದಿಗೆ ಮೈಲಿಗಲ್ಲು ವಾರ್ಷಿಕೋತ್ಸವವನ್ನು ಆಚರಿಸಿತು.

# ಕಾಂಗೋದಲ್ಲಿ ಎಬೋಲಾ ಸಾವಿನ ಸಂಖ್ಯೆ 473ಕ್ಕೆ ಏರಿಕೆ, ಪ್ರಕರಣ ಸಂಖ್ಯೆ 1,500ಕ್ಕೆ



**ಕಿನ್ಶಾಸಾ ಜುಲೈ 4 :** ಕಾಂಗೋ ಪ್ರಜಾಸತ್ತಾತ್ಮಕ ಗಣರಾಜ್ಯದಲ್ಲಿ ಎಬೋಲಾ ಏಕಾಏಕಿ ಸಾವನ್ನಪ್ಪಿದವರ ಸಂಖ್ಯೆ 473 ಕ್ಕೆ ಏರಿದೆ, ದೃಢಪಡಿಸಿದ ಸೋಂಕುಗಳು 1,500 ಮೀರಿದೆ ಎಂದು ಆರೋಗ್ಯ ಸಚಿವಾಲಯ ಶನಿವಾರ ತಿಳಿಸಿದೆ, ಅಧಿಕಾರಿಗಳು ದೇಶದ ಪೂರ್ವ ಪ್ರಾಂತ್ಯಗಳಲ್ಲಿ ಕಣ್ಗಾವಲು ಮತ್ತು ಚಿಕಿತ್ಸಾ ಪ್ರಯತ್ನಗಳನ್ನು ಮುಂದುವರೆಸಿದ್ದಾರೆ. ಇಟುರಿ ಮತ್ತು ಉತ್ತರ ಕಿವು ಪ್ರಾಂತ್ಯಗಳಲ್ಲಿ ಸಚಿವಾಲಯವು 42 ಹೊಸ ದೃಢಪಡಿಸಿದ ಪ್ರಕರಣಗಳನ್ನು ವರದಿ ಮಾಡಿದೆ, ಮೇ 15 ರಂದು ಏಕಾಏಕಿ ಘೋಷಿಸಿದಾಗಿನಿಂದ ಒಟ್ಟು ಸೋಂಕುಗಳ ಸಂಖ್ಯೆ 1,500 ಕ್ಕಿಂತ ಹೆಚ್ಚಾಗಿದೆ. ಇತ್ತೀಚಿನ ಪರಿಸ್ಥಿತಿ ನವೀಕರಣದ ಪ್ರಕಾರ, 213 ರೋಗಿಗಳು ಚೇತರಿಸಿಕೊಂಡಿದ್ದಾರೆ, ಆದರೆ 628 ಜನರು ಆರೈಕೆಯಲ್ಲಿದ್ದಾರೆ. ಇಟುರಿ, ಉತ್ತರ ಕಿವು ಮತ್ತು ದಕ್ಷಿಣ ಕಿವು ಪ್ರಾಂತ್ಯಗಳಲ್ಲಿನ 34 ಪೀಡಿತ ಆರೋಗ್ಯ ವಲಯಗಳಲ್ಲಿ 11,000 ಕ್ಕೂ ಹೆಚ್ಚು ಸಂಪರ್ಕಗಳನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ. ಸಮುದಾಯದ ನಿಶ್ಚಿತಾರ್ಥವನ್ನು ಬಲಪಡಿಸುವ ಪ್ರಯತ್ನಗಳು ಮುಂದುವರೆದಿವೆ ಎಂದು ಸಚಿವಾಲಯ ಹೇಳಿದೆ, ವಿಶೇಷವಾಗಿ ಇಟುರಿಯಲ್ಲಿ, ಅಲ್ಲಿ ಪ್ರತಿಕ್ರಿಯೆ ಕ್ರಮಗಳಿಗೆ ಪ್ರತಿರೋಧವು ನಿಯಂತ್ರಣ ಕಾರ್ಯಾಚರಣೆಗಳಿಗೆ ಅಡ್ಡಿಯಾಗಿದೆ.

ಮೇ ತಿಂಗಳಲ್ಲಿ, ವಿಶ್ವ ಆರೋಗ್ಯ ಸಂಸ್ಥೆಯು ಕಾಂಗೋ ಪ್ರಜಾಸತ್ತಾತ್ಮಕ ಗಣರಾಜ್ಯ ಮತ್ತು ನೆರೆಯ ಉಗಾಂಡಾದಲ್ಲಿ ಎಬೋಲಾ ಏಕಾಏಕಿ ಸಂಭವಿಸಿದ ಸಾಂಕ್ರಾಮಿಕ ರೋಗವನ್ನು ಅಂತರರಾಷ್ಟ್ರೀಯ ಕಾಳಜಿಯ ಸಾರ್ವಜನಿಕ ಆರೋಗ್ಯ ತುರ್ತುಸ್ಥಿತಿ ಎಂದು ಘೋಷಿಸಿತು, ಪ್ರಾದೇಶಿಕ ಹರಡುವಿಕೆಯ ಹೆಚ್ಚಿನ ಅಪಾಯವನ್ನು ಉಲ್ಲೇಖಿಸಿತು. ಈ ವಾರ ಆಫ್ರಿಕಾ ರೋಗ ನಿಯಂತ್ರಣ ಮತ್ತು ತಡೆಗಟ್ಟುವಿಕೆ ಕೇಂದ್ರಗಳು (ಆಫ್ರಿಕಾ ಸಿಡಿಸಿ) ಕಿನ್ಶಾಸಾದಲ್ಲಿ ಉನ್ನತ ಮಟ್ಟದ ಸಭೆಯನ್ನು ಕರೆದಿದ್ದು, ಪ್ರತಿಕ್ರಿಯೆಯನ್ನು ಬೆಂಬಲಿಸಲು ರಾಜಕೀಯ ನಾಯಕತ್ವ, ಅಂತರರಾಷ್ಟ್ರೀಯ ಪಾಲುದಾರರು ಮತ್ತು ಸಂಪನ್ಮೂಲಗಳನ್ನು ಸಂಘಟಿಸಲು. ಗುರುವಾರ ನಡೆದ ಸಭೆಯಲ್ಲಿ ಮಾತನಾಡಿದ ಅಧ್ಯಕ್ಷ ಫೆಲಿಕ್ಸ್ ತ್ಶಿಸೆಕೆಡಿ, ರೋಗ ಏಕಾಏಕಿ ಪ್ರತಿಕ್ರಿಯಿಸುವ ಆಫ್ರಿಕಾದ ಸಾಮರ್ಥ್ಯವನ್ನು ಸುಧಾರಿಸಲು ಹೆಚ್ಚಿನ ಪ್ರಾದೇಶಿಕ ಒಗ್ಗಟ್ಟು ಮತ್ತು ಬಲವಾದ ಸಾರ್ವಜನಿಕ ಆರೋಗ್ಯ ವ್ಯವಸ್ಥೆಗಳಿಗೆ ಕರೆ ನೀಡಿದರು. ಆಫ್ರಿಕಾ ಸಿಡಿಸಿ ಪ್ರಕಾರ, ದಾನಿಗಳು ಮತ್ತು ಅಭಿವೃದ್ಧಿ ಪಾಲುದಾರರು ಕಾಂಗೋ ಮತ್ತು ಉಗಾಂಡಾದಲ್ಲಿ ಎಬೋಲಾ ಪ್ರತಿಕ್ರಿಯೆಯನ್ನು ಬೆಂಬಲಿಸಲು 910 ದಶಲಕ್ಷ ಡಾಲರ್ ನೀಡುವುದಾಗಿ ವಾಗ್ದಾನ ಮಾಡಿದ್ದಾರೆ, ಅಲ್ಲಿ 20 ಪ್ರಕರಣಗಳು ವರದಿಯಾಗಿವೆ. ಪ್ರಸ್ತುತ ಸಾಂಕ್ರಾಮಿಕ ರೋಗವು ಎಬೋಲಾ ವೈರಸ್ನ ಬುಂಡಿಬುಗ್ಯೊ ತಳಿಯಿಂದ ಉಂಟಾಗಿದೆ, ಇದನ್ನು ಮೇ 17 ರಂದು ಕಾಂಗೋದಿಂದ ಉಗಾಂಡಾಗೆ ಪ್ರಕರಣಗಳು ಹರಡಿದ ನಂತರ ಡಬ್ಲ್ಯುಎಚ್‌ಒ ಸಾರ್ವಜನಿಕ ಆರೋಗ್ಯ ತುರ್ತುಸ್ಥಿತಿ ಅಂತರರಾಷ್ಟ್ರೀಯ ಕಾಳಜಿ ಎಂದು ವರ್ಗೀಕರಿಸಿದೆ.

# ಹಾರ್ಮುಜ್ ಜಲಸಂಧಿಯ ಮೂಲಕ ಸುರಕ್ಷಿತ ಸಂಚಾರವನ್ನು ಖಚಿತಪಡಿಸಿಕೊಳ್ಳಲು ಫ್ರಾನ್ಸ್, ಯುಕೆ ಒಮಾನ್ ಜೊತೆ ಕೆಲಸ

**ಪ್ಯಾರಿಸ್/ಲಂಡನ್, ಜುಲೈ 4:** ಹಾರ್ಮುಜ್ ಜಲಸಂಧಿಯ ಮೂಲಕ ಸುರಕ್ಷಿತ ಸಂಚಾರವನ್ನು ಖಚಿತಪಡಿಸಿಕೊಳ್ಳಲು ಫ್ರಾನ್ಸ್ ಮತ್ತು ಯುಕೆ ಒಮಾನ್ ಜೊತೆ ಜಂಟಿಯಾಗಿ ಕೆಲಸ ಮಾಡುವ ಯೋಜನೆಗಳನ್ನು ಘೋಷಿಸಿವೆ, ಇದು ಇರಾನ್‌ನ ಕೋಪಕ್ಕೆ ಕಾರಣವಾಗಿದೆ. ಜಂಟಿ ಹೇಳಿಕೆಯಲ್ಲಿ, ಲಂಡನ್ ಮತ್ತು ಪ್ಯಾರಿಸ್ ಜಲಸಂಧಿಯನ್ನು ಜಾಗತಿಕ ವ್ಯಾಪಾರ ಮತ್ತು ಇಂಧನ ಪೂರೈಕೆಗೆ ನಿರ್ಣಾಯಕ ಮಾರ್ಗವೆಂದು ಕರೆದವು ಮತ್ತು ಎಲ್ಲಾ ರಾಷ್ಟ್ರಗಳ ಹಡಗುಗಳಿಗೆ ಸಂಚರಣೆಯ ಸ್ವಾತಂತ್ರ್ಯವನ್ನು ಖಾತರಿಪಡಿಸುವ ಅಗತ್ಯವನ್ನು ಒತ್ತಿಹೇಳಿದವು. "ಹಾರ್ಮುಜ್ ಜಲಸಂಧಿಯು ಜಾಗತಿಕ ಆರ್ಥಿಕತೆಗೆ ಪ್ರಮುಖ ಅಪಧಮನಿಯಾಗಿದೆ. ಜಲಸಂಧಿಯ ಮೂಲಕ ಎಲ್ಲಾ ರಾಷ್ಟ್ರಗಳ ಹಡಗುಗಳಿಗೆ ಸುರಕ್ಷಿತ ಸಾಗಣೆಯನ್ನು ಪುನಃಸ್ಥಾಪಿಸುವುದು ಜಾಗತಿಕ ಕಾಳಜಿಯ ವಿಷಯವಾಗಿದೆ" ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ತನ್ನ ಪ್ರಾದೇಶಿಕ ನೀರಿನೊಳಗೆ ಸಂಚರಣೆಯ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿರುವ ಪ್ರಯತ್ನಗಳಲ್ಲಿ



ಸಹಕರಿಸಲು ಒಮಾನ್ ಒಪ್ಪಿಕೊಂಡಿದೆ ಎಂದು ಎರಡೂ ದೇಶಗಳು ತಿಳಿಸಿವೆ. "ಒಮಾನ್ ಸುಲ್ತಾನರು ತನ್ನ ಸಾರ್ವಭೌಮ ಪ್ರಾದೇಶಿಕ ನೀರು ಸಂಚರಣೆಗೆ ಸುರಕ್ಷಿತವಾಗಿದೆ ಎಂದು ಖಚಿತಪಡಿಸಿಕೊಳ್ಳಲು ಯುನೈಟೆಡ್ ಕಿಂಗ್ಡಮ್ ಮತ್ತು ಫ್ರಾನ್ಸ್‌ನೊಂದಿಗೆ ಕೆಲಸ ಮಾಡಲು ಒಪ್ಪಿಕೊಂಡಿದ್ದಾರೆ" ಎಂದು ಹೇಳಿಕೆಯಲ್ಲಿ ಸೇರಿಸಲಾಗಿದೆ. ಕಾರ್ಯತಂತ್ರದ ಜಲಮಾರ್ಗದ ಭವಿಷ್ಯದ ನಿರ್ವಹಣೆಯ ಕುರಿತು ನಡೆಯುತ್ತಿರುವ ವಿವಾದದ ಮಧ್ಯೆ ಈ ಪ್ರಕಟಣೆ ಬಂದಿದೆ. ಜಲಸಂಧಿಯ ಮೂಲಕ ಸಂಚಾರವನ್ನು ನಿಯಂತ್ರಿಸುವಲ್ಲಿ ಇರಾನ್ ಪ್ರಮುಖ ಪಾತ್ರ ವಹಿಸಬೇಕೆಂದು ಪದೇ ಪದೇ ವಾದಿಸುತ್ತಿದೆ ಮತ್ತು ಒಮಾನ್ ಜೊತೆ ಜಂಟಿ ನಿರ್ವಹಣಾ ವ್ಯವಸ್ಥೆಯನ್ನು ಪ್ರತಿಪಾದಿಸಿದೆ. ಟೆಹ್ರಾನ್ ಈ ಮಾರ್ಗವನ್ನು ಬಳಸುವ ಹಡಗುಗಳಿಗೆ ಸಾರಿಗೆ ಶುಲ್ಕವನ್ನು ವಿಧಿಸುವ ಪ್ರಸ್ತಾಪವನ್ನು ಸಹ ಮಾಡಿದೆ. ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವೆ ಸಹಿ ಹಾಕಲಾದ ಒಡಂಬಡಿಕೆ ಪ್ರಮುಖ ಜಲಮಾರ್ಗದಾದ್ಯಂತ ಸಮುದ್ರ ಸಂಚಾರವನ್ನು ಭಾಗಶಃ ಪುನರಾರಂಭಿಸಲು ಕಾರಣವಾಗಿದ್ದರೂ, ಹಡಗು ಪ್ರಮಾಣವು ಇನ್ನೂ ಯುದ್ಧಪೂರ್ವ ಮಟ್ಟಕ್ಕಿಂತ ಗಮನಾರ್ಹವಾಗಿ ಕೆಳಗಿದೆ, ಸಮುದ್ರ ಭದ್ರತೆಯ ಬಗ್ಗೆ ದೀರ್ಘಕಾಲದ ಕಳವಳಗಳಿವೆ. ತಮ್ಮ ಹೇಳಿಕೆಯಲ್ಲಿ, ಪ್ಯಾರಿಸ್ ಮತ್ತು ಲಂಡನ್ ಅಂತರರಾಷ್ಟ್ರೀಯ ಕಾನೂನು ಮತ್ತು ಸಂಚರಣೆ ಸ್ವಾತಂತ್ರ್ಯಕ್ಕೆ ತಮ್ಮ ಬೆಂಬಲವನ್ನು ಪುನರುಚ್ಚರಿಸಿವೆ. "ಯುನೈಟೆಡ್ ಕಿಂಗ್ಡಮ್ ಮತ್ತು ಫ್ರಾನ್ಸ್ ಪ್ರಾದೇಶಿಕ ಸ್ಥಿರತೆ, ಎಲ್ಲಾ ರಾಜ್ಯಗಳ ಸಾರ್ವಭೌಮತ್ವಕ್ಕೆ ಗೌರವ ಮತ್ತು ಜಾಗತಿಕ ಭದ್ರತೆ, ಸಂಚರಣೆ ಸ್ವಾತಂತ್ರ್ಯ ಮತ್ತು ಅಂತರರಾಷ್ಟ್ರೀಯ ಕಾನೂನನ್ನು ಎತ್ತಿಹಿಡಿಯಲು ತಮ್ಮ ಪಾಲುದಾರರೊಂದಿಗೆ ನಿಕಟ ಸಹಕಾರವನ್ನು ಕಾಪಾಡಿಕೊಳ್ಳುವ ಇಚ್ಛೆಗೆ ತಮ್ಮ ಹಂಚಿಕೆಯ ಬದ್ಧತೆಯನ್ನು ಪುನರುಚ್ಚರಿಸುತ್ತವೆ" ಎಂದು ಹೇಳಿಕೆ ಮುಕ್ತಾಯಗೊಳಿಸಿದೆ.

# ಹಾರ್ಮುಜ್ ಜಲಸಂಧಿಯನ್ನು ರಕ್ಷಿಸಲು ಒಮಾನ್ ಜೊತೆ ಕೆಲಸ ಮಾಡುವ ಯೋಜನೆಗೆ ಆಕ್ಷೇಪ: ಫ್ರಾನ್ಸ್-ಬ್ರಿಟನ್‌ಗೆ ಇರಾನ್ ಎಚ್ಚರಿಕೆ

**ಟೆಹ್ರಾನ್, ಜುಲೈ 4:** ಹಾರ್ಮುಜ್ ಜಲಸಂಧಿಯ ಮೂಲಕ ಸುರಕ್ಷಿತ ಸಂಚಾರವನ್ನು ಖಚಿತಪಡಿಸಿಕೊಳ್ಳಲು ಓಮನ್ ಜೊತೆ ಜಂಟಿಯಾಗಿ ಕೆಲಸ ಮಾಡುವ ಯೋಜನೆಯನ್ನು ಉಭಯ ದೇಶಗಳು ಘೋಷಿಸಿದ ನಂತರ ಇರಾನ್ ಫ್ರಾನ್ಸ್ ಮತ್ತು ಯುಕೆಗೆ ಎಚ್ಚರಿಕೆ ನೀಡಿದೆ. ಇರಾನ್ ಉಪ ವಿದೇಶಾಂಗ ಸಚಿವ ಕಜೆಮ್ ಘರಿಬಬಾದಿ ಅವರು ಟೆಹ್ರಾನ್ ಜಲಸಂಧಿಯಲ್ಲಿನ ಯಾವುದೇ ಮಿಲಿಟರಿ ಚಟುವಟಿಕೆಯನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಾರೆ ಮತ್ತು ಬಾಹ್ಯಶಕ್ತಿಗಳ ಹಸ್ತಕ್ಷೇಪ ಎಂದು ಅವರು ವಿವರಿಸುವುದರ ವಿರುದ್ಧ ಎಚ್ಚರಿಕೆ ನೀಡಿದರು. "ಹಾರ್ಮುಜ್ ಜಲಸಂಧಿಯು ಪ್ರಾದೇಶಿಕೇತರ ಶಕ್ತಿಗಳ ಮಿಲಿಟರಿ ಪ್ರದರ್ಶನಕ್ಕೆ ಒಂದು ರಂಗಮಂದಿರವಲ್ಲ" ಎಂದು ಘರಿಬಬಾದಿ ಪ್ರತಿಕ್ರಿಯಿಸಿದ್ದಾರೆ. "ಜವಾಬ್ದಾರಿಯುತ ಶಕ್ತಿ ಮತ್ತು ಜಲಸಂಧಿಯ ಭದ್ರತೆಯ ಖಾತರಿದಾರನಾಗಿ ಇರಾನ್, ಈ ಜಲಮಾರ್ಗದಲ್ಲಿ ಯಾವುದೇ ಮಿಲಿಟರಿ ಚಲನೆಗೆ ಸೂಕ್ಷ್ಮತೆಯಿಂದ ಎಚ್ಚರಿಕೆ ನೀಡುತ್ತದೆ." ಪ್ಯಾರಿಸ್ ಮತ್ತು ಲಂಡನ್ ಒಮಾನಿ ಪ್ರಾದೇಶಿಕ ನೀರಿನಲ್ಲಿ ಸಂಚರಣೆಯನ್ನು ರಕ್ಷಿಸಲು ಮಸ್ಕತ್‌ನೊಂದಿಗೆ ಸಹಕರಿಸುವುದಾಗಿ ಹೇಳಿದ ನಂತರ ಈ ಎಚ್ಚರಿಕೆ ಬಂದಿದೆ, ಜಲಸಂಧಿಯನ್ನು ಜಾಗತಿಕ ವಾಣಿಜ್ಯ ಮತ್ತು ಇಂಧನ ಪೂರೈಕೆಗಳ ಪ್ರಮುಖ ಅಪಧಮನಿ ಎಂದು ವಿವರಿಸುತ್ತದೆ. ವಿವಾದದ ಕೇಂದ್ರಬಿಂದುವೆಂದರೆ, ಜಲಸಂಧಿಯ ಮೂಲಕ ಸಂಚಾರವನ್ನು ನಿರ್ವಹಿಸುವಲ್ಲಿ ತಾನು ಪ್ರಮುಖ ಪಾತ್ರ ವಹಿಸಬೇಕು ಮತ್ತು ಅಂತಿಮವಾಗಿ 60 ದಿನಗಳ ತಾತ್ಕಾಲಿಕ ಅಮಾನತು ಅವಧಿ ಮುಗಿದ ನಂತರ ಹಡಗುಗಳಿಗೆ ಶುಲ್ಕ ವಿಧಿಸಬೇಕು ಎಂಬ ಇರಾನ್‌ನ ಒತ್ತಾಯ. ಪರ್ಷಿಯನ್ ಕೊಲ್ಲಿಯನ್ನು ಅಂತರರಾಷ್ಟ್ರೀಯ ಜಲಮಾರ್ಗಗಳೊಂದಿಗೆ ಸಂಪರ್ಕಿಸುವ ಹಾರ್ಮುಜ್ ಜಲಸಂಧಿಯು ಜಾಗತಿಕ ತೈಲ ಹರಿವಿನ ಐದನೇ ಒಂದು ಭಾಗವನ್ನು ನಿರ್ವಹಿಸುತ್ತದೆ ಮತ್ತು ವಿಶ್ವದ ಅತ್ಯಂತ ಕಾರ್ಯತಂತ್ರದ ಪ್ರಮುಖ ಕಡಲ ಚಾಕ್‌ಪಾಯಿಂಟ್‌ಗಳಲ್ಲಿ ಒಂದಾಗಿದೆ. ಉತ್ತರಕ್ಕೆ ಜಲಸಂಧಿಯನ್ನು ಗಡಿಯಾಗಿರುವ ಇರಾನ್ ಮತ್ತು ದಕ್ಷಿಣಕ್ಕೆ ಅದರ ಗಡಿಯಾಗಿರುವ ಓಮನ್, ತಾತ್ಕಾಲಿಕ ಒಪ್ಪಂದದ ಅವಧಿ ಮುಗಿದ ನಂತರ ಜಲಮಾರ್ಗದ ಭವಿಷ್ಯದ ಆಡಳಿತದ ಕುರಿತು ಈ ವಾರ ಚರ್ಚೆಗಳನ್ನು ಪ್ರಾರಂಭಿಸಿದವು. ಆದಾಗ್ಯೂ, ಓಮನ್ ಪ್ರಸ್ತುತ ಅಮೆರಿಕದ ನಿಲುವಿಗೆ ಹೊಂದಿಕೊಂಡಿದೆ ಮತ್ತು ಯಾವುದೇ ಸಾರಿಗೆ ಶುಲ್ಕಗಳನ್ನು ವಿಧಿಸದೆ ಜಲಸಂಧಿಯ ಮೂಲಕ ಅನಿಯಂತ್ರಿತ ಮಾರ್ಗವನ್ನು ಬೆಂಬಲಿಸುತ್ತದೆ. ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವಿನ ವ್ಯಾಪಕ ಮಾತುಕತೆಗಳಲ್ಲಿ ಈ ಭಿನ್ನಾಭಿಪ್ರಾಯವು ಪ್ರಮುಖ ಅಡೆತಡೆಗಳಲ್ಲಿ ಒಂದಾಗಿದೆ. ಭವಿಷ್ಯದ ಸಾರಿಗೆ ಶುಲ್ಕಗಳು ಮತ್ತು ಹಡಗು ಮಾರ್ಗಗಳ ಮೇಲೆ ಹೆಚ್ಚಿನ ನಿಯಂತ್ರಣಕ್ಕಾಗಿ ಇರಾನ್‌ನ ಬೇಡಿಕೆಯು ಈಗಾಗಲೇ ಚರ್ಚೆಗಳನ್ನು ಸಂಕೀರ್ಣಗೊಳಿಸಿದೆ, ಮಾತುಕತೆಗಳು ಟೆಹ್ರಾನ್‌ನ ಪರಮಾಣು ಕಾರ್ಯಕ್ರಮದಂತಹ ಹೆಚ್ಚು ವಿವಾದಾತ್ಮಕ



ವಿಷಯಗಳಿಗೆ ತೆರಳುವ ಮೊದಲೇ. ಪ್ರಾದೇಶಿಕ ರಾಜ್ಯಗಳು ಜಲಮಾರ್ಗದ ಭದ್ರತೆಗೆ ಜವಾಬ್ದಾರರಾಗಿರಬೇಕು ಎಂದು ಘರಿಬಬಾದಿ ಪುನರುಚ್ಚರಿಸಿದರು ಮತ್ತು ಹೊರಗಿನ ಒಳಗೊಳ್ಳುವಿಕೆಯ ವಿರುದ್ಧ ಎಚ್ಚರಿಕೆ ನೀಡಿದರು. "ಹಾರ್ಮುಜ್‌ನ ಭದ್ರತೆ ಕರಾವಳಿ ರಾಜ್ಯಗಳ ಮೇಲಿದೆ; ಬಿಕ್ಕಟ್ಟು ಸೃಷ್ಟಿಸುವವರನ್ನು ಅವರ ಸಾಹಸದ ಪರಿಣಾಮಗಳಿಗೆ ಹೊಣೆಗಾರರನ್ನಾಗಿ ಮಾಡಲಾಗುತ್ತದೆ" ಎಂದು ಹೇಳಿದರು.


## ವಿಶ್ವಕಪ್ ಫುಟ್‌ಬಾಲ್: ಕೆನಡಾ ವಿರುದ್ಧ ಮೊರಾಕ್ಕೊಗೆ 3-0 ಅಂತರದ ಗೆಲುವು ಕ್ವಾರ್ಟರ್‌ಫೈನಲ್‌ಗೆ ಮುನ್ನಡೆ

**ಹೂಸ್ಟನ್, ಜುಲೈ 5:** ಅಜ್ಜೆದಿನ್ ಔನಾಹಿ ಎರಡು ಗೋಲುಗಳನ್ನು ಗಳಿಸುವ ಮೂಲಕ ಮೊರಾಕೊ ತಂಡವು ವಿಶ್ವಕಪ್ 16 ರ 16 ರ ಶನಿವಾರದಂದು ಕೆನಡಾ ವಿರುದ್ಧ 3-0 ಅಂತರದ ಗೆಲುವು ಸಾಧಿಸಿತು, ಇದರಿಂದಾಗಿ ದೇಶವು ಒಂದಕ್ಕಿಂತ ಹೆಚ್ಚು ಬಾರಿ ಕ್ವಾರ್ಟರ್‌ಫೈನಲ್ ತಲುಪಿದ ಮೊದಲ ಆಫ್ರಿಕನ್ ರಾಷ್ಟ್ರವಾಯಿತು. 2022 ರಲ್ಲಿ ಸೆಮಿಫೈನಲ್ ತಲುಪಿದ ಮೊದಲ ಆಫ್ರಿಕನ್ ತಂಡವಾದ ನಂತರ ಮೊರಾಕೊ ಕ್ವಾರ್ಟರ್‌ಫೈನಲ್‌ಗೆ ಸತತ ಎರಡನೇ ಪ್ರವೇಶವಾಗಿದೆ. ಔನಾಹಿ ಅಚ್ರಾಫ್ ಹಕಿಮಿಯಿಂದ ಫ್ರೀ ಕಿಕ್ ತೆಗೆದುಕೊಂಡು ಬಾಕ್ಸ್‌ನ ಹೊರಗಿನಿಂದ ಕೆಳಗಿನ ಬಲ ಮೂಲೆಯಲ್ಲಿರುವ ಟ್ರಾಫಿಕ್ ಮೂಲಕ ಬಲಗಾಲಿನಿಂದ ಶಾಟ್ ಮಾಡುವ ಮೂಲಕ 50 ನೇ ನಿಮಿಷದಲ್ಲಿ ಮೊರಾಕೊವನ್ನು 1-0 ಮುನ್ನಡೆಸುವವರೆಗೆ ಯಾವುದೇ ತಂಡವು ಮುನ್ನಡೆಯಲು ಸಾಧ್ಯವಾಗಲಿಲ್ಲ. ನಂತರ ಔನಾಹಿ ತನ್ನ ಎರಡನೇ ಗೋಲು ಗಳಿಸಿ ಅಂತಿಮವಾಗಿ ಜೆಸ್ಸಿ ಮಾರ್ಷ್ ತಂಡದ ಪ್ರತಿರೋಧವನ್ನು ಹಿಮ್ಮೆಟ್ಟಿಸಿದರು. 82 ನೇ ನಿಮಿಷದಲ್ಲಿ ಬ್ರಾಹಿಂ ಡಿಯಾಜ್ ನೀಡಿದ ಪಾಸ್‌ನಲ್ಲಿ ಬಾಕ್ಸ್‌ನ ಮಧ್ಯದಿಂದ ಬಲಗಾಲಿನಿಂದ ಹೊಡೆದ ಹೊಡೆತದಿಂದ ಔನಾಹಿ 2-0 ಅಂತರದ ಮುನ್ನಡೆ ಸಾಧಿಸಿದರು. ಬದಲಿ ಆಟಗಾರ್ತಿ ಸೌಫಿಯಾನ್ ರಹೀಮಿ ಎಂಟನೇ ನಿಮಿಷದಲ್ಲಿ ಮೂರನೇ ಗೋಲು ಗಳಿಸಿದರು. ಮೊರೊಕನ್ ಗೋಲ್‌ಕೀಪರ್ ಹಲವಾರು ಗೋಲಿನ ಪ್ರಯತ್ನಗಳನ್ನು ತಡೆದರು. ಅದರಲ್ಲಿ ಟಜೋನ್ ಬುಕಾನನ್ ಅವರನ್ನು ದೂರದಿಂದಲೇ ತಡೆಯಲು ತೀಕ್ಷ್ಣವಾದ ಸ್ವಾಪ್ ಕೂಡ ಸೇರಿತ್ತು, ಆದರೆ ಉತ್ತರ ಅಮೆರಿಕನ್ನರು ಮೊರಾಕೊದ ಸಾಂದ್ರೀಕೃತ ರಕ್ಷಣೆಯನ್ನು ಭೇದಿಸುವುದು ಕಷ್ಟಕರವೆಂದು ಪದೇ ಪದೇ ಕಂಡುಕೊಂಡರು. ಬೋಸ್ಟನ್ ಕ್ರೀಡಾಂಗಣದಲ್ಲಿ ಗುರುವಾರ ನಡೆಯಲಿರುವ ಶನಿವಾರದ ಪರಾಗ್ವೆ-ಫ್ರಾನ್ಸ್ ಪಂದ್ಯದ ವಿಜೇತರನ್ನು ಎದುರಿಸಲು ಮೊರಾಕೊ ಮುನ್ನಡೆಯಿತು.



# ಖಮೇನಿ ಅಂತ್ಯಕ್ರಿಯೆಗೆ ಅಮೆರಿಕ ಇರಾನ್‌ಗೆ ಒಂದು ವಾರ ರಜೆ

**ವಾಷಿಂಗ್ಟನ್, ಜುಲೈ 4:** ಹತ್ಯೆಗೀಡಾದ ಇರಾನಿನ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಅವರ ಅಂತ್ಯಕ್ರಿಯೆ ಸಮಾರಂಭಗಳಿಗೆ ಇರಾನ್‌ಗೆ"ಒಂದು ವಾರ ರಜೆ" ನೀಡಿರುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ, ಆದರೆ ಇತ್ತೀಚಿನ ಯುದ್ಧಗಳ ನಂತರ ಟೆಹ್ರಾನ್ ಅಮೆರಿಕದೊಂದಿಗೆ ಒಪ್ಪಂದಕ್ಕೆ ಬರಲು ಉತ್ಸುಕವಾಗಿದೆ ಎಂದು ಹೇಳಿಕೊಂಡರು. ಅಮೆರಿಕದ 250 ನೇ ವಾರ್ಷಿಕೋತ್ಸವವನ್ನು ಗುರುತಿಸುವ ಆಚರಣೆಯ ಸಂದರ್ಭದಲ್ಲಿ ದಕ್ಷಿಣ ಡಕೋಟಾದ ಮೌಂಟ್ ರಶ್ಮೋರ್‌ನಲ್ಲಿ ಮಾತನಾಡಿದ ಟ್ರಂಪ್, ಅಮೆರಿಕದ ಮಿಲಿಟರಿ ಬಲವನ್ನು ಶ್ಲಾಘಿಸಿದರು ಮತ್ತು ಇರಾನ್ ಬಗ್ಗೆ ತಮ್ಮ ಆಡಳಿತದ ಕಠಿಣ ನಿಲುವನ್ನು ಪುನರುಚ್ಚರಿಸಿದರು, ಅಮೆರಿಕದ ಒತ್ತಡವು ಇರಾನ್ ನಾಯಕತ್ವದ "ಚೈತನ್ಯವನ್ನು ಮುರಿದಿದೆ" ಎಂದು ಹೇಳಿದರು, ಇದರಿಂದಾಗಿ ಅವರು "ಇತ್ಯರ್ಥಗೊಳ್ಳಲು ಸಾಯುತ್ತಿದ್ದಾರೆ" ಎಂದು ಹೇಳಿದರು. "ನಾವು ಇರಾನ್ ಅನ್ನು ಹೊಡೆದುರುಳಿಸಿದೆ. ಅವರು ನೆಲೆಗೊಳ್ಳಲು ಸಾಯುತ್ತಿದ್ದಾರೆ. ಅವರು ನೆಲೆಗೊಳ್ಳಲು ತುಂಬಾ ಕೆಟ್ಟದಾಗಿ ಬಯಸುತ್ತಾರೆ. ನಾವು ಒಳ್ಳೆಯ ಜನರು ಎಂಬ ಕಾರಣಕ್ಕೆ ಅಂತ್ಯಕ್ರಿಯೆಗೆ ನಾವು ಅವರಿಗೆ ಒಂದು ವಾರ ರಜೆ ನೀಡಿದ್ದೇವೆ" ಎಂದು ಟ್ರಂಪ್ ಬೆಂಬಲಿಗರಿಗೆ ಹೇಳಿದರು, ವಿರಾಮದ ಸ್ವರೂಪವನ್ನು ವಿವರಿಸದೆ. ಅಮೆರಿಕದ ಸ್ವಾತಂತ್ರ್ಯದ 250 ನೇ ವಾರ್ಷಿಕೋತ್ಸವವನ್ನು ಗುರುತಿಸುವ ಆಚರಣೆಯ ಸಂದರ್ಭದಲ್ಲಿ ದಕ್ಷಿಣ ಡಕೋಟಾದಲ್ಲಿ ಮಾತನಾಡಿದ ಟ್ರಂಪ್, ದೇಶದ ಆರ್ಥಿಕ ಕಾರ್ಯಕ್ಷಮತೆಯನ್ನು ಸಹ ಹೊಗಳಿದರು. "ನಾವು ಅತಿದೊಡ್ಡ ಮತ್ತು ಅತ್ಯಂತ ಕ್ರಿಯಾತ್ಮಕ ಆರ್ಥಿಕತೆಯನ್ನು ನಿರ್ಮಿಸಿದ್ದೇವೆ, ಮತ್ತು ಅಂದಹಾಗೆ, ನಮ್ಮ ದೇಶವು ಇಂದು ಹಿಂದೆಂದಿಗಿಂತಲೂ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ. ಅಂತಹದ್ದನ್ನು ಎಂದಿಗೂ ಮಾಡಿಲ್ಲ. ಕಳೆದ ವಾರದ ಹೊತ್ತಿಗೆ, ಪ್ರಪಂಚದಾದ್ಯಂತ ಅಮೆರಿಕಕ್ಕೆ $19.2 ಟ್ರಿಲಿಯನ್ ಹೂಡಿಕೆಗಳು ಹರಿದು ಬರುತ್ತಿವೆ. ಅಷ್ಟೆ ಹೂಡಿಕೆ ಮಾಡಲಾಗುತ್ತಿದೆ, ಮತ್ತು ದಾಖಲೆ ಮೂರು. ನಾಲ್ಕು ವರ್ಷಗಳಲ್ಲಿ, ಕೊನೆಯ ಆಡಳಿತವು ಒಂದಕ್ಕಿಂತ ಕಡಿಮೆ ಮಾಡಿದೆ, ಮತ್ತು ನಾವು 12 ತಿಂಗಳಲ್ಲಿ 19.2 ಮಾಡಿದೆವು" ಎಂದು ಅವರು ಹೇಳಿದರು. ಟ್ರಂಪ್ ವೆನೆಜುವೆಲಾವನ್ನು ಉಲ್ಲೇಖಿಸುತ್ತಾ, "ನಾವು ಒಂದೇ ದಿನದಲ್ಲಿ ವೆನೆಜುವೆಲಾವನ್ನು ಸೋಲಿಸಿದ್ದೇವೆ" ಎಂದು ಹೇಳಿದರು, ಅಮೆರಿಕದ ಮಿಲಿಟರಿ ಸಾಧನೆಗಳು ಎಂದು ಅವರು ವಿವರಿಸಿದ್ದನ್ನು ಎತ್ತಿ ತೋರಿಸಿದರು. "ನಾವು ಅತ್ಯಂತ ಬಲಿಷ್ಠ ಮತ್ತು ಅತ್ಯಂತ ಶಕ್ತಿಶಾಲಿ ಸೈನ್ಯವನ್ನು ರಚಿಸಿದ್ದೇವೆ. ನಾವು ಎರಡು ವಿಶ್ವ ಯುದ್ಧಗಳನ್ನು ಗೆದ್ದಿದ್ದೇವೆ" ಎಂದು ಅವರು ಹೇಳಿದರು, ಶೀತಲ ಸಮರವು ಅಮೆರಿಕದ ಶತ್ರುಗಳನ್ನು "ಇತಿಹಾಸದ ಆಳಕ್ಕೆ" ತಳ್ಳಿದೆ ಎಂದು ಹೇಳಿದರು. ಆರ್ಥಿಕತೆಯ ಕಡೆಗೆ ತಿರುಗಿ, ಟ್ರಂಪ್ ಯುನೈಟೆಡ್ ಸ್ಟೇಟ್ಸ್ ದಾಖಲೆಯ ಮಟ್ಟದ ವಿದೇಶಿ ಹೂಡಿಕೆಯನ್ನು ಅನುಭವಿಸುತ್ತಿದೆ ಎಂದು ಹೇಳಿದರು, ಕಳೆದ 12 ತಿಂಗಳುಗಳಲ್ಲಿ $19.2 ಟ್ರಿಲಿಯನ್ ಹೂಡಿಕೆ ಮಾಡಲಾಗಿದೆ ಎಂದು ಹೇಳಿಕೊಂಡರು. "ಇಂದು ನಾವು ಹಿಂದೆಂದೂ ನೋಡಿರದ ಸಂಖ್ಯೆಯಲ್ಲಿ ಅಮೆರಿಕ ಸಂಯುಕ್ತ ಸಂಸ್ಥಾನದಾದ್ಯಂತ ಸ್ಥಾವರಗಳು ಮತ್ತು ಕಾರ್ಖಾನೆಗಳನ್ನು ನಿರ್ಮಿಸಲಾಗುತ್ತಿದೆ" ಎಂದು ಅವರು ಹೇಳಿದರು, ಈ ಹೆಚ್ಚಳಕ್ಕೆ ಅವರ ಆಡಳಿತದ ಸುಂಕಗಳು ಮತ್ತು ಆರ್ಥಿಕ ನೀತಿಗಳೇ ಕಾರಣ ಎಂದು ಹೇಳಿದರು. ಟ್ರಂಪ್ ಅವರು ಮಾಜಿ ಅಧ್ಯಕ್ಷ ಜೋ ಬಿಡೆನ್ ಅವರ ಅವಧಿಯಲ್ಲಿನ ಪರಿಸ್ಥಿತಿಯೊಂದಿಗೆ ಪ್ರಸ್ತುತ ಪರಿಸ್ಥಿತಿಯನ್ನು ಹೋಲಿಸಿದರು, ಅಮೆರಿಕವು "ನಗುವ" ಮತ್ತು "ಅವನತಿಯಲ್ಲಿರುವ ರಾಷ್ಟ್ರ" ದಿಂದ "ಜಗತ್ತಿನಲ್ಲೇ ಅತ್ಯಂತ ಬಿಸಿಯಾದ ದೇಶ" ವಾಗಿ ಮಾರ್ಪಟ್ಟಿದೆ ಎಂದು ಹೇಳಿದರು. ಕಮ್ಯುನಿಸಂ ಮೇಲಿನ ದಾಳಿಗಳನ್ನು ನವೀಕರಿಸಲು ಅಧ್ಯಕ್ಷರು ಭಾಷಣವನ್ನು ಬಳಸಿಕೊಂಡರು, ಇದನ್ನು "ಅಮೆರಿಕದ ಸ್ವಾತಂತ್ರ್ಯಕ್ಕೆ ಮಾರಕ ಬೆದರಿಕೆ" ಎಂದು ಕರೆದರು ಮತ್ತು ಅಮೆರಿಕದಲ್ಲಿ ಕಮ್ಯುನಿಸ್ಟ್ ಸಿದ್ಧಾಂತದ ಪುನರುತ್ಥಾನ ಎಂದು ಅವರು ವಿವರಿಸಿದ್ದರ ವಿರುದ್ಧ ಎಚ್ಚರಿಕೆ ನೀಡಿದರು. "ಅಮೆರಿಕಾ ಎಂದಿಗೂ ಕಮ್ಯುನಿಸ್ಟ್ ದೇಶವಾಗುವುದಿಲ್ಲ" ಎಂದು ಅವರು ಹೇಳಿದರು. ಇರಾನ್ ಖಮೇನಿ ಅವರ ಅಂತ್ಯಕ್ರಿಯೆ ಸಮಾರಂಭಗಳನ್ನು ನಡೆಸುತ್ತಿರುವಾಗ ಟ್ರಂಪ್ ಅವರ ಹೇಳಿಕೆ ಬಂದಿದ್ದು, ಮುಂಬರುವ ದಿನಗಳಲ್ಲಿ ಮುಂದಿನ ಮೆರವಣಿಗೆಗಳು ಮತ್ತು ಅಂತ್ಯಕ್ರಿಯೆ ಸಮಾರಂಭಗಳನ್ನು ನಿಗದಿಪಡಿಸುವ ಮೊದಲು ಟೆಹ್ರಾನ್ನಲ್ಲಿ ಹೆಚ್ಚಿನ ಜನಸಮೂಹ ಭಾಗವಹಿಸುವ ನಿರೀಕ್ಷೆಯಿದೆ. ಬಹು ದಿನಗಳ ಸಮಾರಂಭಗಳಲ್ಲಿ ಲಕ್ಷಾಂತರ ಶೋಕತಪ್ತರು ಭಾಗವಹಿಸುವ ನಿರೀಕ್ಷೆಯಿದೆ ಎಂದು ಇರಾನ್ ಹೇಳಿದೆ.



## 2ನೇ ಟಿ20: ಬೆಥೆಲ್, ಬ್ರೂಕ್ ಆಕ್ರಮಣಕಾರಿ ಆಟ ಭಾರತದ ವಿರುದ್ಧ ಇಂಗ್ಲೆಂಡ್‌ಗೆ ಜಯ

**ಮ್ಯಾಂಚೆಸ್ಟರ್, ಜುಲೈ 4:** ಹ್ಯಾರಿ ಬ್ರೂಕ್ ಅವರ ಬಿರುಸಿನ ಪ್ರತಿದಾಳಿಯ ನಂತರ ಜಾಕೋಬ್ ಬೆಥೆಲ್ ಪಂದ್ಯ ಗೆಲ್ಲುವತ್ತ ಮುನ್ನಡೆದರು. ಶನಿವಾರ ಇಲ್ಲಿ ಎಮಿರೇಟ್ಸ್ ಓಲ್ಡ್ ಟ್ರಾಫರ್ಡ್‌ನಲ್ಲಿ ನಡೆದ ಎರಡನೇ ಟಿ20 ಅಂತಾರಾಷ್ಟ್ರೀಯ ಪಂದ್ಯದಲ್ಲಿ ಇಂಗ್ಲೆಂಡ್ ತಂಡವು ಎರಡು ವಿಕೆಟ್‌ಗೆ 1 ವಿಕೆಟ್‌ನಿಂದ ಚೇತರಿಸಿಕೊಂಡು ಭಾರತವನ್ನು ನಾಲ್ಕು ವಿಕೆಟ್‌ಗಳಿಂದ ಸೋಲಿಸಿತು. ಸ್ಫೋಟಕ ಆರಂಭದ ನಂತರ 191 ರನ್‌ಗಳನ್ನು ಬೆನ್ನಟ್ಟಿದ ಭಾರತ ತಂಡವು ಇನ್ನೂ ಒಂದು ಓವರ್ ಬಾಕಿ ಇರುವಾಗ ಏಳು ವಿಕೆಟ್‌ಗೆ 190 ರನ್ ಗಳಿಸುವ ಮೂಲಕ ಉತ್ಸಾಹಭರಿತ ಇಂಗ್ಲೆಂಡ್ ಹೋರಾಟದಿಂದ ಬದುಕುಳಿದಿತ್ತು. ಆದಾಗ್ಯೂ, ತಿಲಕ್ ವರ್ಮಾ ಕೇವಲ 11 ಎಸೆತಗಳಲ್ಲಿ ಅಜೇಯ 24 ರನ್ ಗಳಿಸುವ ಮೂಲಕ ಅಂತಿಮ ಸ್ಪರ್ಶವನ್ನು ನೀಡಿದರು, ಜೋಫ್ರಾ ಆರ್ಚರ್ ಎಸೆದ ಕೊನೆಯ ಓವರ್‌ನಲ್ಲಿ ಎರಡು ಸಿಕ್ಸರ್ ಮತ್ತು ಒಂದು ಬೌಂಡರಿ ಬಾರಿಸಿ ಭಾರತವನ್ನು ಏಳು ವಿಕೆಟ್‌ಗೆ 190 ರನ್‌ಗಳಿಸಿ ಮುನ್ನಡೆಸಿದರು. ಆದಾಗ್ಯೂ, ಜೋಫ್ರಾ ಆರ್ಚರ್ ಅರ್ಶ್‌ದೀಪ್ ಎಸೆತದಲ್ಲಿ ಬೌಂಡರಿ ಬಾರಿಸುವ ಮೂಲಕ ಪಂದ್ಯವನ್ನು ಕೊನೆಗೊಳಿಸಿದರು. ಇಂಗ್ಲೆಂಡ್ 19 ಓವರ್‌ಗಳಲ್ಲಿ ಆರು ವಿಕೆಟ್‌ಗೆ 191 ರನ್ ಗಳಿಸಿತು. ಬೆಥೆಲ್ 46 ಎಸೆತಗಳಲ್ಲಿ ಐದು ಬೌಂಡರಿ ಮತ್ತು ಐದು ಸಿಕ್ಸರ್‌ಗಳೊಂದಿಗೆ ಅಜೇಯ 76 ರನ್ ಗಳಿಸಿ ಅಜೇಯರಾಗಿ ಉಳಿದರು.